ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮೇ 21 ಬುಧವಾರ 2025

₹4

ಸಂಪುಟ: 46 | ಸಂಚಿಕೆ: 35 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, *website: www.mysurumithra.com*

ಹಾಸನ ಮಿತ್ರ

ಚಿಣ್ಣರ ಪ್ರತಿಭಾ ಕಲರವ ಕಾರ್ಯಕ್ರಮ



ಹಾಸನ: ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ ಹೊಸ ಹೊಸ ಪ್ರತಿಭೆಗಳ ಮೇಲೆ ಬೆಳಕು ಚೆಲ್ಲುತ್ತಾ ಅಂತಹವರನ್ನು ಸಮಾಜದ ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ಕಳೆದ ಏಳೆಂಟು ವರ್ಷಗಳಿಂದ ಕಾರ್ಯೋನ್ಮುಖವಾಗಿದೆ ಎಂದು ಹಾಸನ ತಾಲೂಕು ಅಧ್ಯಕ್ಷೆ ಕೆ.ಸಿ.ಗೀತಾ ಅಭಿಪ್ರಾಯಪಟ್ಟರು.

ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ ಬೆಂಗಳೂರು ಹಾಗೂ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಸಂಸ್ಥೆ ಹಾಸನ ವತಿಯಿಂದ ಜನನಿ ಫೌಂಡೇಶನ್ ಚಿಕ್ಕಕೊಂಡಗೊಳ ಹಾಗೂ ಹಾಸನಾಂಬ ಮಹಿಳಾ ಸಂಘ ಹೇಮಾವತಿ ನಗರ ಸಹಯೋಗದಲ್ಲಿ ಜಿಲ್ಲಾ ಸ್ಕೌಟ್ಸ್ ಮತ್ತು ಗೈಡ್ಸ್ ಸಮುದಾಯ ಭವನದಲ್ಲಿ ಹಮ್ಮಿಕೊಂಡಿದ್ದ ಚಿಣ್ಣರ ಪ್ರತಿಭಾ ಕಲರವ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ ಸಂಸ್ಥಾಪಕ ಅಧ್ಯಕ್ಷ ಕೊಟ್ರೇಶ್ ಎಸ್.ಉಪ್ಪಾರ್ ಮಾತನಾಡಿ, ಮಾರ್ಗದರ್ಶನದಲ್ಲಿ ಜಾತ್ಯಾತೀತವಾಗಿ, ಧರ್ಮಾತೀತವಾಗಿ ಸಾಹಿತ್ಯಿಕ, ಸಾಂಸ್ಕೃತಿಕವಾಗಿ ಸಮ ಸಮಾಜದ ಕನಸನ್ನು ಹೊತ್ತು ರಾಜ್ಯ ಹಾಗೂ ಹೊರ ರಾಜ್ಯಗಳಲ್ಲಿ ನಿರಂತರವಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಾ ಎಲೆಮರೆ ಕಾಯಿಯಂತಹ ಸಾಧಕರನ್ನು ಗುರುತಿಸುತ್ತಾ, ವೈಚಾರಿಕ ಹಾಗೂ ವೈಜ್ಞಾನಿಕ ಮನೋವೃತ್ತಿ ವೃದ್ಧಿಸುವ ಮತ್ತು ಬಸವಾದಿ ಶಿವಶರಣರ ತತ್ವ ಸಿದ್ಧಾಂತಗಳನ್ನು ಪಸರಿಸುತ್ತಾ ವೇದಿಕೆ ಮುನ್ನುಗ್ಗುತ್ತಿದೆ ಎಂದರು.

ಶಿಬಿರದಲ್ಲಿ ವಿಸ್ತಾರ ಅಕಾಡೆಮಿಯ ವೇದಶ್ರೀ ನಿಶಿತ್, ಚಿತ್ರ ಕಲಾವಿದೆ ಬಿಂದು ಎಚ್.ಎಸ್., ಕವಯಿತ್ರಿ ಲತಾಮಣಿ ಎಂ.ಕೆ.ತುರುವೇಕೆರೆ, ರಾಜ್ಯ ಕೋಶಾಧ್ಯಕ್ಷ ಎಚ್.ಎಸ್.ಬಸವರಾಜ್, ರಾಜ್ಯ ಜಂಟಿ ಕಾರ್ಯದರ್ಶಿ ನಾಗರಾಜ ದೊಡ್ಡಮನಿ, ತಾಲೂಕು ಕಾರ್ಯದರ್ಶಿ ನೀಲಾವತಿ, ಜಿಲ್ಲಾ ಮುಖ್ಯ ಆಯುಕ್ತ ಡಾ.ವೀರಭದ್ರಪ್ಪ, ಜಿಲ್ಲಾ ಕಾರ್ಯದರ್ಶಿ ಸುರೇಶ್ ಗುರೂಜಿ, ರಾಜ್ಯ ಸಹಾಯಕ ಸಂಘಟನಾ ಆಯುಕ್ತೆ ಪ್ರಿಯಾಂಕ, ಜಿಲ್ಲಾ ಖಜಾಂಚಿ ಆರ್.ಎಸ್.ರಮೇಶ್, ಗಿರೀಶ್, ಜನನಿ ಫೌಂಡೇಷನ್ ಅಧ್ಯಕ್ಷೆ ಭಾನುಮತಿ, ಹಾಸನಾಂಬ ಮಹಿಳಾ ಸಂಘದ ಅಧ್ಯಕ್ಷೆ ಪದ್ಮಾವತಿ ವೆಂಕಟೇಶ್ ಇನ್ನಿತರರು ಉಪಸ್ಥಿತರಿದ್ದರು.

ಗುರಿ ಸಾಧಿಸುವ ಛಲ ಇರಬೇಕು

ವಿದ್ಯಾರ್ಥಿಗಳಿಗೆ ಬೆಸ್ಕಾಂ ಅಧಿಕಾರಿ ಧರಣೇಶ್ ಸಲಹೆ



ಹಾಸನ, ಮೇ20– ಬಿಬಿಎ ಕೋರ್ಸ್ ಯಾವ ಕೋರ್ಸ್‌ಗಳಿಗಿಂತಲೂ ಕಡಿಮೆ ಇಲ್ಲ. ಎಲ್ಲಾ ಕ್ಷೇತ್ರಗಳಲ್ಲಿಯೂ ಉದ್ಯೋಗಾವಕಾಶಗಳನ್ನು ತಮ್ಮದಾಗಿಸಿಕೊಳ್ಳಬಹುದು. ದೃಢ ಮನಸ್ಸಿನಿಂದ ಗುರಿ ಸಾಧಿಸುವ ಛಲ ಇರಬೇಕು ಎಂದು ಬೆಸ್ಕಾಂನ ಅಧಿಕಾರಿ ಕೆ.ಎಲ್.ಧರಣೇಶ್ ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿದರು.

ನಗರದ ಎಂ.ಜಿ ರಸ್ತೆಯಲ್ಲಿನ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆದ ವಿಶೇಷ ಉಪನ್ಯಾಸ ಮತ್ತು ಬೀಳ್ಕೊಡುಗೆ ಸಮಾರಂಭದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿ ಮಾತನಾಡಿದ ಅವರು, ಮುಂದೆ ಗುರಿ ಹಿಂದೆ ಗುರು ಮತ್ತು ದೃಢಸಂಕಲ್ಪ ಇದ್ದರೆ ಏನನ್ನಾದರೂ ಸಾಧಿಸಬಹುದು. ತಿದ್ದಿ ಬುದ್ಧಿ ಹೇಳಿ ಭವಿಷ್ಯದ ಸರಿ ಮಾರ್ಗ ತೋರುವ ಗುರು ಮತ್ತು ಛಲದಿಂದ ಗುರಿಯನ್ನು ಸಾಧಿಸುವ ಮನೋಭಾವವನ್ನು ವಿದ್ಯಾರ್ಥಿನಿಯರು ರೂಢಿಸಿಕೊಳ್ಳಬೇಕು ಆಗ ಮಾತ್ರ ಯಶಸ್ಸು ಲಭಿಸುತ್ತದೆ ಎಂದರು. ತಾವು ನಡೆದು ಬಂದ ಹಾದಿ, ಕಠಿಣ ಶ್ರಮ, ಮಾರ್ಗದರ್ಶಕರಾಗಿ ನಿಂತ ಗುರುಗಳು ಮತ್ತು ಶ್ರಮದ ಫಲ ಅದರ ಮಹತ್ವದ ಬಗ್ಗೆ ಅರ್ಥಪೂರ್ಣವಾಗಿ ವಿವರಿಸಿದ ಅವರು, ಭವಿಷ್ಯತ್ತಿನಲ್ಲಿ ಇರುವ ಉದ್ಯೋಗಾವಕಾಶದ ಬಗ್ಗೆ ಮತ್ತು ಪೂರ್ವ ತಯಾರಿ ಬಗ್ಗೆ ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲರಾದ ಡಾ.ಕೆ.ಜಿ. ಕವಿತ ವಿದ್ಯಾರ್ಥಿಗಳಿಗೆ ಲಭ್ಯವಿರುವ ಸವಲತ್ತುಗಳು ಮತ್ತು ಸಂಪನ್ಮೂಲಗಳನ್ನು ಹೇಗೆ ಬಳಸಿಕೊಳ್ಳಬೇಕು ಮತ್ತು ಹೇಗೆ ಉಜ್ವಲ ಭವಿಷ್ಯವನ್ನು ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ನಿರ್ವಹಣಾ ಶಾಸ್ತ್ರ ವಿಭಾಗದ ಮುಖ್ಯಸ್ಥರಾದ ವಿ.ಪಿ. ಜಗದೀಶ್, ಅಧ್ಯಾಪಕರಾದ ಡೇವಿಡ್ ಕುಮಾರ್, ರೀಶ್, ಪದ್ಮಿನಿ, ಸುಮಾ, ಮೋಹನಕುಮಾರಿ ಸೇರಿದಂತೆ ಇನ್ನಿತರರು ಭಾಗವಹಿಸಿದ್ದರು.

ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ



ಮೈಸೂರು ಜಿಲ್ಲಾ ಗಾಣಿಗರ ಸಂಘದ ಜಿಲ್ಲಾಧ್ಯಕ್ಷ ಉಮೇಶ್ ಮಾತನಾಡಿದರು.

ಮೈಸೂರು, ಮೇ 20(ಎಂಟಿವೈ)– ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಶೇ.80ಕ್ಕಿಂತ ಹೆಚ್ಚಿನ ಅಂಕಗಳಿಸಿರುವ ಗಾಣಿಗರ ಸಮುದಾಯದ 100 ಮಂದಿ ಪ್ರತಿಭಾನ್ವಿತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲು ಉದ್ದೇಶಿಸಲಾಗಿದೆ ಎಂದು ಮೈಸೂರು ಜಿಲ್ಲಾ ಗಾಣಿಗರ ಸಂಘದ ಜಿಲ್ಲಾಧ್ಯಕ್ಷ ಎನ್.ಸಿ.ಉಮೇಶ್ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರು ಜಿಲ್ಲಾ ಗಾಣಿಗರ ಸಂಘದ ವತಿಯಿಂದ ಪ್ರತಿಭಾ ಪುರಸ್ಕಾರ ನೀಡಲು ನಿರ್ಧರಿಸಲಾಗಿದ್ದು, ಸಮಾಜದ ಅರ್ಹ ವಿದ್ಯಾರ್ಥಿಗಳು ಅಂಕಪಟ್ಟಿ, ಆಧಾರ್ ಕಾರ್ಡ್ ಹಾಗೂ ಜಾತಿ ಪ್ರಮಾಣ ಪತ್ರ ಲಗತ್ತಿಸಿ ಜಿಲ್ಲಾ ಸಂಘದ ಪದಾಧಿಕಾರಿಗಳಿಗೆ ಅಥವಾ ವಿಘ್ನೇಶ್ವರ ವುಡ್‌ವರ್ಕ್ಸ್, # 1957, ವಿವಿ ಮಾರ್ಕೆಟ್ ಹಿಂಭಾಗ, ಕೆ.ಆರ್.ಮೊಹಲ್ಲಾ ವಿಳಾಸಕ್ಕೆ ಅರ್ಜಿ ಸಲ್ಲಿಸಬೇಕು. ಎಲ್ಲಾ ಅರ್ಜಿಗಳನ್ನು ಪರಿಶೀಲಿಸಿದ ಬಳಿಕ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದ ದಿನಾಂಕ ಪ್ರಕಟಿಸಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಮೊ. ಸಂಖ್ಯೆ 9886028262, 9886040733 ಸಂಪರ್ಕಿಸುವಂತೆ ಕೋರಿದರು.

ಗೋಷ್ಠಿಯಲ್ಲಿ ಮೈಸೂರು ಜಿಲ್ಲಾ ಗಾಣಿಗರ ಸಂಘದ ಕಾರ್ಯದರ್ಶಿ ಎನ್.ಟಿ. ಶ್ರೀನಿವಾಸ್, ಸದಸ್ಯರಾದ ಜಿ.ವಿಜಯಕುಮಾರ್, ರಾಜು, ವೆಂಕಟೇಶ್, ನಗು ಮಹದೇವ್, ರಮೇಶ್ ಉಪಸ್ಥಿತರಿದ್ದರು.

ಬಾಲ್ಕನಿಯಿಂದ ಬಿದ್ದು ವಿದ್ಯಾರ್ಥಿನಿ ಸಾವು

ಮೈಸೂರು, ಮೇ 20(ಆರ್‌ಕೆ)– ಅಪಾರ್ಟ್‌ಮೆಂಟ್‌ವೊಂದರ ಬಾಲ್ಕನಿಯಿಂದ ಕಾಲು ಜಾರಿ ಬಿದ್ದು ವಿದ್ಯಾರ್ಥಿನಿ ಸಾವನ್ನಪ್ಪಿರುವ ಘಟನೆ ಮೈಸೂರಿನ ಹೈವೇ ಸರ್ಕಲ್ ಬಳಿ ಸಯ್ಯಾಜಿರಾವ್ ರಸ್ತೆಯಲ್ಲಿ ಭಾನುವಾರ ತಡರಾತ್ರಿ ಸಂಭವಿಸಿದೆ.

ಅನ್ವಿಕಾ ಇಲಾನಿ(20) ಸಾವನ್ನಪ್ಪಿದವರು. ಮೈಸೂರಿನ ಕಾಲೇಜೊಂದರಲ್ಲಿ 3ನೇ ವರ್ಷದ ಬಿಕಾಂ ಓದುತ್ತಿದ್ದ ಆಕೆ, ಅಂದು ರಾತ್ರಿ 12.30 ಗಂಟೆವರೆಗೂ ಕೊಠಡಿಯಲ್ಲಿ ಓದಿಕೊಳ್ಳುತ್ತಿದ್ದುದನ್ನು ತಂದೆ–ತಾಯಿ ನೋಡಿದ್ದಾರೆ ಎನ್ನಲಾಗಿದ್ದು, ಅವರು ಮಲಗಿದ ಮೇಲೆ ಅಪಾರ್ಟ್‌ಮೆಂಟ್‌ನ 2ನೇ ಮಹಡಿ ಬಾಲ್ಕನಿಯಿಂದ ಆಕೆ ಆಕಸ್ಮಿಕವಾಗಿ ಕೆಳಗೆ ಬಿದ್ದಿರಬಹುದೆಂದು ಶಂಕಿಸಲಾಗಿದೆ. ಮಂಡಿ ಠಾಣೆ ಇನ್ಸ್‌ಪೆಕ್ಟರ್ ದಿವಾಕರ್ ಹಾಗೂ ಸಿಬ್ಬಂದಿ ಸ್ಥಳ ಮಹಜರು ನಡೆಸಿ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ. ಸೋಮವಾರ ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಶವಾಗಾರದಲ್ಲಿ ಮರಣೋತ್ತರ ಪರೀಕ್ಷೆ ನಡೆಸಿದ ಬಳಿಕ ವಾರಸುದಾರರಿಗೆ ದೇಹ ಒಪ್ಪಿಸಲಾಯಿತು.

ಕೇಂದ್ರ ಸರ್ಕಾರದ ಕಾರ್ಮಿಕ, ರೈತ ವಿರೋಧಿ ನೀತಿ ಖಂಡಿಸಿ

ಮೈಸೂರಲ್ಲಿ ಕಾರ್ಮಿಕ ಸಂಘಟನೆಗಳಿಂದ ಪ್ರತಿಭಟನೆ



ಕೇಂದ್ರ ಸರ್ಕಾರದ ಕಾರ್ಮಿಕ ಮತ್ತು ರೈತ ವಿರೋಧಿ ನೀತಿಗಳನ್ನು ಖಂಡಿಸಿ ಮಂಗಳವಾರ ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿ ವತಿಯಿಂದ ರಾಮಸ್ವಾಮಿ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಮೇ20(ಜಿಎ)–ಕೇಂದ್ರ ಸರ್ಕಾರದ ಕಾರ್ಮಿಕ ಮತ್ತು ರೈತ ವಿರೋಧಿ ನೀತಿಗಳನ್ನು ಖಂಡಿಸಿ ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿ ವತಿಯಿಂದ ರಾಮಸ್ವಾಮಿ ವೃತ್ತದಲ್ಲಿ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಕೇಂದ್ರ ಸರ್ಕಾರವು ದುಡಿಯುವ ಜನರ ಜೀವನ ಮತ್ತು ಜೀವನೋಪಾಯದ ಮೇಲೆ ನಿರಂತರ ಫ್ಯಾಸಿಸ್ಟ್ ದಾಳಿಗಳನ್ನು ಎಸಗುತ್ತಿದೆ ಎಂದು ಆರೋಪಿಸಿ ಮಂಗಳವಾರ ದೇಶವ್ಯಾಪಿ ಮುಷ್ಕರಕ್ಕೆ ಕರೆ ನೀಡಲಾಗಿತ್ತು. ಕಾರ್ಪೋರೇಟ್‌ಗಳ ಹಿತಾಸಕ್ತಿಗಾಗಿ ದುಡಿಯುವ ಜನರ ಮೇಲೆ ವಾಸ್ತವವಾಗಿ ಗುಲಾಮಗಿರಿಯ ಷರತ್ತುಗಳನ್ನು ಹೇರುವ ಸಮಗ್ರ ನೀಲನಕ್ಷೆಗೆ ಅನುಗುಣವಾಗಿ ಸರ್ಕಾರ ಮುಂದಾಗಿದೆ. 29 ಕಾರ್ಮಿಕ ಪರವಾದ ಕಾನೂನುಗಳನ್ನು ಹರಣಗೊಳಿಸಿ ಕಾರ್ಮಿಕ ವಿರೋಧಿ ನಾಲ್ಕು ಕಾಯಿದೆಗಳನ್ನು ಜಾರಿಗೆ ತರಲು ಮುಂದಾಗಿದೆ. ಇದರಿಂದ ಕಾರ್ಮಿಕರು ತಮ್ಮ ಬಹುತೇಕ ಹಕ್ಕುಗಳನ್ನು ಕಳೆದುಕೊಳ್ಳಲಿದ್ದಾರೆ ಎಂದು ಪ್ರತಿಭಟನಾಕಾರರು ಕಳವಳ ವ್ಯಕ್ತಪಡಿಸಿದರು.

ಅಸ್ತಿತ್ವದಲ್ಲಿರುವ ಉದ್ಯೋಗಗಳನ್ನು ಕಡಿತಗೊಳಿಸಿ, ಕಾಯಂ ಉದ್ಯೋಗಗಳನ್ನು ಶಾಶ್ವತವಾಗಿ ರದ್ದುಗೊಳಿಸಲಾಗುತ್ತದೆ. ಗುತ್ತಿಗೆ, ಹೊರಗುತ್ತಿಗೆ, ಹೊಸದಾಗಿ ಜಾರಿಗೊಳಿಸಲಾಗುವ ನಿಗದಿತ ಉದ್ಯೋಗ ಇತ್ಯಾದಿಗಳು ಆಳುವ ಬಂಡವಾಳಶಾಹಿ ವರ್ಗ ಮತ್ತು ಅದರ ಅಧೀನ ಸರ್ಕಾರಗಳು ತಮ್ಮ ಇಚ್ಛೆಯಂತೆ ಕಾರ್ಮಿಕರನ್ನು ನೇಮಿಸಿಕೊಳ್ಳಲು ಮತ್ತು ವಜಾ ಮಾಡಲು ಕೈಗೊಂಡ ಕರಾಳ ವಿನ್ಯಾಸವಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು.

ರಾಜ್ಯದಲ್ಲಿಯೂ ಕೃಷಿ ಮಾರುಕಟ್ಟೆಗಳನ್ನು ಬಹುರಾಷ್ಟ್ರೀಯ ಕಂಪನಿಗಳ ಪರವಾಗಿ ದುರ್ಬಲಗೊಳಿಸಿ ಖಾಸಗಿ ಮಾರುಕಟ್ಟೆಗಳನ್ನು ಪ್ರೋತ್ಸಾಹಿಸಲಾಗುತ್ತಿದೆ. ಸ್ಮಾರ್ಟ್ ಮೀಟರ್ ಅಳವಡಿಕೆ ಮೂಲಕ ವಿದ್ಯುತ್ ಖಾಸಗೀಕರಣಕ್ಕೆ ಬೆಂಬಲ ನೀಡಲಾಗುತ್ತಿದ್ದು, ಕೃಷಿ ಪಂಪ್ ಸೆಟ್‌ಗಳಿಗೂ ಪ್ರಿಪೇಯ್ಡ್ ಮೀಟರ್ ಅಳವಡಿಕೆ ಮಾಡಲಾಗುತ್ತಿದೆ. ಕಾರ್ಮಿಕ ವಿರೋಧಿ ಲೇಬರ್ ಕೋಡ್‌ಗಳ ಜಾರಿಗೆ ಕ್ರಮ ವಹಿಸುತ್ತಿದೆ. ಯಾವುದೇ ಓಟಿ ಸೌಲಭ್ಯ ಇಲ್ಲದೇ ದಿನಕ್ಕೆ 12 ಗಂಟೆ ದುಡಿಸಿಕೊಳ್ಳಲು ಕಾರ್ಖಾನೆಗಳಿಗೆ ಅನುಮತಿ ನೀಡಲಾಗುತ್ತಿದೆ. ಶಿಕ್ಷಣ, ಆರೋಗ್ಯ, ಆರೋಗ್ಯ ಸೇರಿದಂತೆ ಪ್ರತಿಯೊಂದು ನಾಗರಿಕ ಸೌಲಭ್ಯಗಳನ್ನು ಖಾಸಗೀಕರಣ ಮಾಡುತ್ತಿರುವುದು ಜನವಿರೋಧಿಯಾಗಿದ್ದು, ಖಂಡನೀಯ ಎಂದರು.

ಎಐಟಿಯುಸಿ ನಾಯಕ ಎಚ್.ಆರ್. ಶೇಷಾದ್ರಿ, ಬಿ.ರಾಮಕೃಷ್ಣ, ದೇವದಾಸ್, ಎಐಯುಟಿಯುಸಿ ಜಿಲ್ಲಾ ಕಾರ್ಯದರ್ಶಿ ಚಂದ್ರಶೇಖರ ಮೇಟಿ, ಮುಖಂಡರಾದ ಸಂಧ್ಯಾ ಪಿ.ಎಸ್, ಹರೀಶ್, ಮುದ್ದುಕೃಷ್ಣ, ಸಿಐಟಿಯು ಮುಖಂಡರಾದ ಜಯರಾಂ, ಬಾಲಾಜಿ ರಾವ್, ಕರ್ನಾಟಕ ರಾಜ್ಯ ರೈತ ಸಂಘದ ವಿಭಾಗೀಯ ಕಾರ್ಯದರ್ಶಿ ಹೊಸಕೋಟೆ ಬಸವರಾಜ್, ಜಿಲ್ಲಾ ಕಾರ್ಯದರ್ಶಿ ಪಿ.ಮರಂಕಯ್ಯ, ಮಂಡಕಳ್ಳಿ ಮಹೇಶ್, ಅಖಿಲ ಭಾರತ ರೈತ ಕೃಷಿ ಕಾರ್ಮಿಕ ಸಂಘಟನೆಯ ಜಿಲ್ಲಾ ಅಧ್ಯಕ್ಷ ಹೆಚ್.ಎಂ.ಬಸವರಾಜು, ಕರ್ನಾಟಕ ರೈತ ಸಂಘದ ಕಂದೇಗಾಲ ಶ್ರೀನಿವಾಸ್, ಪ್ರಾಂತ ರೈತ ಸಂಘದ ಜಗದೀಶ್ ಸೂರ್ಯ ಇನ್ನಿತರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ನಾಳೆ ಮೈಸೂರಲ್ಲಿ ಸುವರ್ಣ ಕರ್ನಾಟಕ ಸಂಭ್ರಮ–50

ಕನ್ನಡ ಸೇವಾ ರತ್ನ ಪ್ರಶಸ್ತಿ ಪ್ರದಾನ, ರಾಜಶೇಖರ ಕೋಟಿ, ಮಾಜಿ ಸಚಿವ ಹೆಚ್.ಎಸ್.ಮಹದೇವಪ್ರಸಾದ್ ಪ್ರಶಸ್ತಿ ಪ್ರದಾನ ಸಮಾರಂಭ



ಮೈಸೂರು, ಮೇ20(ಜಿಎ)– ಮೈಸೂರು ಜಿಲ್ಲಾ ಕನ್ನಡ ಚಳುವಳಿಗಾರರ ಸಂಘದ ವತಿಯಿಂದ ಮೇ 22ರಂದು ಸುವರ್ಣ ಕರ್ನಾಟಕ ಸಂಭ್ರಮ–50, ಕನ್ನಡ ಸೇವಾರತ್ನ ಪ್ರಶಸ್ತಿ ಪ್ರದಾನ ಸಮಾರಂಭ, ಹಿರಿಯ ಪತ್ರಕರ್ತ ದಿವಂಗತ ರಾಜಶೇಖರ ಕೋಟಿ ಪ್ರಶಸ್ತಿ, ಮಾಜಿ ಸಚಿವ ದಿವಂಗತ ಎಚ್.ಎಸ್. ಮಹದೇವ ಪ್ರಸಾದ್ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಅಧ್ಯಕ್ಷ ಬಿ.ಎ.ಶಿವಶಂಕರ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜೆಎಲ್‌ಬಿ ರಸ್ತೆಯಲ್ಲಿರುವ ಆರಾಧ್ಯ ಮಹಾಸಭಾ ಸಭಾಂಗಣದಲ್ಲಿ ಅಂದು ಸಂಜೆ 6 ಗಂಟೆಗೆ ಕಾರ್ಯಕ್ರಮ ನಡೆಯಲಿದ್ದು, ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಕಾರ್ಯಕ್ರಮ ಉದ್ಘಾಟಿಸುವರು. ಹಿರಿಯ ಸಾಹಿತಿ ಡಾ.ಸಿ.ಪಿ.ಕೃಷ್ಣಕುಮಾರ್ ಅಧ್ಯಕ್ಷತೆ ವಹಿಸುವರು ಎಂದರು.

ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಪ್ರಶಸ್ತಿ ಪ್ರದಾನ ಮಾಡುವರು. ಎಂಎಲ್‌ಸಿ ಹೆಚ್.ವಿಶ್ವನಾಥ್ ಸಾಧಕರನ್ನು ಸನ್ಮಾನಿಸುವರು. ಶಾಸಕ ಎ.ಆರ್.ಕೃಷ್ಣಮೂರ್ತಿ ನೆನಪಿನ ಕಾಣಿಕೆ ನೀಡುವರು. ಎಂಎಲ್‌ಸಿ ಸಿ.ಎನ್. ಮಂಜೇಗೌಡ ಪುಷ್ಪಾರ್ಚನೆ ಮಾಡುವರು. ಎಂಎಲ್‌ಸಿ ಕೆ.ವಿವೇಕಾನಂದ ಪೌರ ಕಾರ್ಮಿಕ ಮಹಿಳೆಯರಿಗೆ ಸೀರೆ ವಿತರಣೆ ಮಾಡುವರು. ರಾಜಶೇಖರ ಕೋಟಿ ಹಾಗೂ ಎಚ್.ಎಸ್.ಮಹದೇವಪ್ರಸಾದ್ ಭಾವಚಿತ್ರಗಳಿಗೆ ಶಾಸಕ ಹೆಚ್.ಎಂ. ಗಣೇಶ್ ಪ್ರಸಾದ್ ಮಾಲಾರ್ಪಣೆ ಮಾಡುವರು. ಮುಖ್ಯ ಅತಿಥಿಗಳಾಗಿ ಎಂಎಲ್‌ಸಿ ಡಾ.ಡಿ.ತಿಮ್ಮಯ್ಯ, ಮಾಜಿ ಸಚಿವ ಕೋಟೆ ಶಿವಣ್ಣ, ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಭಾಗವಹಿಸುವರು.

ವಿಶೇಷ ಆಹ್ವಾನಿತರಾಗಿ ಡಾ.ಎಸ್.ಪಿ. ಯೋಗಣ್ಣ, ಮೈಸೂರು ಜಿಲ್ಲಾ ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣಗೌಡ ಆಗಮಿಸುವರು. ಡಾ.ಸುಶ್ರುತ್ ಗೌಡ, ಉದ್ಯಮಿ ನಾಗೇಶ್ ಎಲ್.ಕಾಡಯ್ಯ ಆಗಮಿಸಲಿದ್ದಾರೆ. ಸಾಹಿತಿ ಡಾ.ಸಿ.ನಾಗಣ್ಣ ಮುಖ್ಯ ಭಾಷಣ ಮಾಡುವರು. ವಿವಿಧ ಕ್ಷೇತ್ರದ ಸಾಧಕರಿಗೆ ಕನ್ನಡ ಸೇವಾ ರತ್ನ ಪ್ರಶಸ್ತಿ ನೀಡಿ ಅಭಿನಂದಿಸಲಾಗುತ್ತದೆ ಎಂದರು. ಸುದ್ದಿಗೋಷ್ಠಿ ಪದಾಧಿಕಾರಿಗಳಾದ ಬನ್ನೂರು ರಾಜೇಗೌಡ, ಮಧುವನ ಚಂದ್ರು, ನಂಜನಗೂಡು ರವಿ,ಶ್ರೀಧರ್, ದೂರ ಶ್ರೇಯಸ್ ಮತ್ತಿತರರು ಉಪಸ್ಥಿತರಿದ್ದರು.



ಮೈಸೂರು ತಾಲೂಕು ಜಯಪುರ ಹೋಬಳಿಯ ಮಾವಿನಹಳ್ಳಿ ಗ್ರಾಮದಲ್ಲಿ ಸೋಮವಾರ ರಾತ್ರಿ ಕಾಲಾವಧಿ ಮೆರವಣಿಗೆ ಮಾಡಲಾಯಿತು. ಮಹದೇಶ್ವರ ಸ್ವಾಮಿ, ಹುಲಿವಾಹನ ಉತ್ಸವ ಮೂರ್ತಿ ಹಾಗೂ ಬಸವೇಶ್ವರ ಸ್ವಾಮಿ ಉತ್ಸವ ಮೂರ್ತಿಗಳನ್ನು ಗ್ರಾಮದಲ್ಲಿ ಭಕ್ತರು ಹೊತ್ತು ಮೆರವಣಿಗೆ ನಡೆಸಿದರು.

ನಾಳೆ ಶ್ರೀದೇವಿ ಮಹಾತ್ಮೆ ಯಕ್ಷಗಾನ

ಮೈಸೂರು, ಮೇ 20(ಆರ್‌ಕೆ)– ಮೈಸೂರಿನ ಹೆಬ್ಬಾಳು ಕೈಗಾರಿಕಾ ಪ್ರದೇಶದ ದಿ ರಿವ್ಯೂವ್ ಆಸ್ಪತ್ರೆ ಬಳಿಯ ಎಸ್‌ಎಲ್‌ವಿ ಬುಕ್ಸ್ ಇಂಡಿಯಾ ಫ್ಲಾಟ್‌ನಲ್ಲಿ ಮೇ 22ರ ಗುರುವಾರ ಸಂಜೆ 6 ಗಂಟೆಗೆ ಗಾನಗಂಧರ್ವ ಪಟ್ಲ ಸತೀಶ್ ಶೆಟ್ಟಿ ಸಾರಥ್ಯದಲ್ಲಿ ಪ್ರಥಮ ಬಾರಿ 'ಶ್ರೀದೇವಿ ಮಹಾತ್ಮೆ' ಯಕ್ಷಗಾನ ಪುಣ್ಯ ಕಥಾಭಾಗವನ್ನು ಆಯೋಜಿಸಲಾಗಿದೆ ಎಂದು ದಕ್ಷಿಣ ಕನ್ನಡ ಮತ್ತು ಕರಾವಳಿ ಜಿಲ್ಲಾ ಸಂಘಗಳ ಒಕ್ಕೂಟದ ಕಾರ್ಯದರ್ಶಿ ನಾರಾಯಣ ವಿ. ಹೆಗ್ಡೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೇ 25ರಂದು ನಾಡಿ ಪರೀಕ್ಷೆ ಶಿಬಿರ

ಮೈಸೂರು: ಮೈಸೂರಿನ ಆರ್ಟ್ ಆಫ್ ಲಿವಿಂಗ್ ಆಶ್ರಮದಲ್ಲಿ ಮೇ 25ರಂದು ನಾಡಿ ಪರೀಕ್ಷೆ ಶಿಬಿರ ಹಮ್ಮಿಕೊಳ್ಳಲಾಗಿದೆ. ಮಾಹಿತಿಗೆ ಮೊ. 9886186580 ಸಂಪರ್ಕಿಸಿ.

ಒಳ ಮೀಸಲಾತಿ ಸಮೀಕ್ಷೆ ದಿನಾಂಕ ವಿಸ್ತರಣೆಗೆ ಆಗ್ರಹ

ತಾಂತ್ರಿಕ ಸಮಸ್ಯೆ, ತರಬೇತಿ ಕೊರತೆಯಿಂದ ಮಂದಗತಿಯಲ್ಲಿ ನಡೆಯುತ್ತಿರುವ ಸಮೀಕ್ಷೆ: ಮಾಜಿ ಮೇಯರ್ ಪುರುಷೋತ್ತಮ್

ಮೈಸೂರು, ಮೇ20(ಜಿಎ)–ರಾಜ್ಯದಲ್ಲಿ ನಡೆಯುತ್ತಿರುವ ಒಳ ಮೀಸಲಾತಿ ಜಾತಿ ಸಮೀಕ್ಷೆಯ ದಿನಾಂಕವನ್ನು ವಿಸ್ತರಣೆ ಮಾಡುವಂತೆ ಮಾಜಿ ಮೇಯರ್ ಪುರುಷೋತ್ತಮ್ ಒತ್ತಾಯಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮೀಕ್ಷೆ ನಮ್ಮೆಲ್ಲರ ಭವಿಷ್ಯ ಮತ್ತು ಮಕ್ಕಳ ಹಿತಕ್ಕಾಗಿ ನಡೆಯುತ್ತಿದೆ. ಯಾವುದೇ ಲೋಪವಾಗದಂತೆ ಸಮೀಕ್ಷೆ ನಡೆಯಬೇಕು. ಆದರೆ, ನಾನಾ ಸಮಸ್ಯೆಗಳಿಂದ ಸಮೀಕ್ಷೆ ಮಂದಗತಿಯಲ್ಲಿ ಸಾಗುತ್ತಿದೆ ಎಂದರು.

ತಾಂತ್ರಿಕ ಸಮಸ್ಯೆಗಳಿವೆ. ಗಣತಿದಾರರಿಗೆ ಸೂಕ್ತ ತರಬೇತಿ ಕೊಟ್ಟಿಲ್ಲ. ದಿನವೊಂದಕ್ಕೆ ಮೂರ್ನಾಲ್ಕು ಮನೆ ಸಮೀಕ್ಷೆ ಮಾಡುವುದೇ ಕಷ್ಟವಾಗಿದೆ. ಜನರಿಗೆ ಅಧಿಕಾರಿಗಳು ಸರಿಯಾದ ಮಾಹಿತಿ ಕೊಡುತ್ತಿಲ್ಲ. ಹಾಗಾಗಿ ಮನೆ ಮನೆ ಸಮೀಕ್ಷೆ ಅವಕಾಶವನ್ನು ಇನ್ನೈದು ದಿನ ವಿಸ್ತರಿಸಬೇಕು ಎಂದು ಆಗ್ರಹಿಸಿದರು. ಸಮೀಕ್ಷೆ ವೇಳೆ ಲೋಪದೋಷವಾದರೆ ಅಧಿಕಾರಿಗಳ ತಲೆದಂಡವಾಗಬೇಕಾಗುತ್ತದೆ.



ರೇಷನ್ ಕಾರ್ಡ್ ಇಲ್ಲದವರ ಆಧಾರ್ ಕಾರ್ಡ್ ಬಳಸಬೇಕು. ಇವರೆಡು ಇಲ್ಲದವರ ಬಳಿ ಮತದಾರರ ಗುರುತಿನ ಚೀಟಿ ಪಡೆದು ಸಮೀಕ್ಷೆಗೆ ನೋಂದಾಯಿಸಿಕೊಳ್ಳಬೇಕು. ಆದರೆ, ಅಧಿಕಾರಿಗಳು ಈ ಕಾರ್ಯವನ್ನು ಮಾಡುತ್ತಿಲ್ಲ ಎಂದು ಆರೋಪಿಸಿದರು. ಬಲಗೈ ಸಮುದಾಯದ ಜನರು ಸಮೀಕ್ಷೆಯಲ್ಲಿ ಹೊಲಯ ಎಂದು ಬರೆಸಬೇಕು. ಅದಕ್ಕಾಗಿ ಯಾವುದೇ ಸಂಕೋಚಪಡಬಾರದು. ಯಾವುದೇ ಧರ್ಮಕ್ಕೆ ಪರಿವರ್ತನೆಯಾದವರು ತಮ್ಮ ಮೂಲ ಜಾತಿಯನ್ನು ಸಮೀಕ್ಷೆ ವೇಳೆ ನಮೂದಿಸಬೇಕು. ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಸೂಚನೆ ಮೇರೆಗೆ ಮೈಸೂರು ನಗರದ ನಾಲ್ಕು ವಿಧಾನಸಭಾ ಕ್ಷೇತ್ರಗಳಲ್ಲಿ ಜನರಿಗೆ ಅರಿವು ಮೂಡಿಸಲಾಗುತ್ತಿದೆ ಎಂದರು.

ಮುಖಂಡ ತುಂಬಲ ರಾಮಣ್ಣ ಮಾತನಾಡಿ, ಒಬ್ಬ ವ್ಯಕ್ತಿಯನ್ನು ಬಿಡದಂತೆ ಸಮೀಕ್ಷೆ ಮಾಡಲು ಹೆಚ್ಚಿನ ಕಾಲಾವಕಾಶದ ಅಗತ್ಯವಿದೆ ಎಂದರು.

ಇನ್ನೋರ್ವ ಮುಖಂಡ ಮಹೇಶ್ ಮಾತನಾಡಿ, ಜಾತಿ ಗಣತಿ ವೇಳೆ ಆರ್ಥಿಕ ಸಮೀಕ್ಷೆ ಮಾಡುತ್ತ ಗೊಂದಲ ಸೃಷ್ಟಿ ಮಾಡುತ್ತಿರುವುದನ್ನು ನಿಲ್ಲಿಸಬೇಕು. ಇದು ಅವೈಜ್ಞಾನಿಕ ಎಂದು ತಿಳಿಸಿದರು.


ನಿವೃತ್ತ ಪ್ರಾಧ್ಯಾಪಕ ಪ್ರೊ.ರುದ್ರಯ್ಯ ಮಾತನಾಡಿ, ಒಳ ಮೀಸಲು ಸಮೀಕ್ಷೆಗೆ ಗ್ರಾಮಾಂತರ ಪ್ರದೇಶದಲ್ಲಿ ತೊಂದರೆ ಇಲ್ಲ. ನಗರ ಪ್ರದೇಶದಲ್ಲಿ ಗೊಂದಲವಾಗುತ್ತಿದೆ. ದಲಿತರನ್ನು ಗುರುತಿಸುವುದು ಕಷ್ಟವಾಗಿದೆ. ಎಡ–ಬಲ ಜಾತಿಗಳಲ್ಲಿ ವ್ಯತ್ಯಾಸವೇನಿಲ್ಲ. ಇಬ್ಬರೂ ಅಸ್ಪೃಶ್ಯರು. ಗಣತಿ ಮಾಡುವಾಗ ಕ್ರಮ ಬದ್ಧವಾಗಿರಬೇಕು ಎಂದರು. ಗೋಷ್ಠಿಯಲ್ಲಿ ಮಹೇಶ್, ಮಂಜು ಉಪಸ್ಥಿತರಿದ್ದರು.

ಮೇ 27, ಹಜರತ್ ಟಿಪ್ಪು ಸುಲ್ತಾನ್ ಶಹೀದ್ ಗಂಧದ ಉರುಸ್

ಮೈಸೂರು: ಮೈಸೂರಿನ ಅಶೋಕ ರಸ್ತೆಯ ಮೀಲಾದ್ ಪಾರ್ಕ್‌ನಲ್ಲಿ ಹಜರತ್ ಟಿಪ್ಪು ಸುಲ್ತಾನ್ ಶಹೀದ್ ಅವರ 233ನೇ ವಾರ್ಷಿಕ ಗಂಧದ ಉರುಸ್ ಷರೀಫ್ ಆಚರಿಸಲಾಗುತ್ತಿದೆ.

ಕಳೆದ 41 ವರ್ಷಗಳಿಂದಲೂ ಉರುಸ್ ಆಚರಿಸಿಕೊಂಡು ಬರುತ್ತಿದ್ದು, ಈ ವರ್ಷವೂ ಹಜರತ್ ಟಿಪ್ಪು ಸುಲ್ತಾನ್ ಶಹೀದ್ ಅವರ 233ನೇ ವಾರ್ಷಿಕ ಗಂಧದ ಉರುಸ್ ಷರೀಫ್ ಅನ್ನು ಮೇ 27 ರಂದು ಬೆಳಗ್ಗೆ 11.30ಕ್ಕೆ ಮೀಲಾದ್‌ಬಾಗ್ ಸಂಯುಕ್ತ ಪೊಲೀಸ್ ಠಾಣೆ ಎದುರು ಸರ್ ಖಾಜಿ ಅವರ ಮಾರ್ಗದರ್ಶನದಲ್ಲಿ ಹಾಗೂ ಶಾಸಕ ತನ್ವೀರ್ ಸೇಠ್ ಅವರ ಅಧ್ಯಕ್ಷತೆಯಲ್ಲಿ ಆಚರಿಸಲಾಗುತ್ತಿದೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

21.05.2025 ಬುಧವಾರ, ಮಳೆ ನಕ್ಷತ್ರ: ಕೃತ್ತಿಕ 11.05.2025 ರಿಂದ 24.05.2025
ವಿಶ್ವವಸು ನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ವೈಶಾಖ ಮಾಸ, ಕೃಷ್ಣ ಪಕ್ಷ,
ತಿಥಿ: ನವಮಿ, ನಕ್ಷತ್ರ: ಶತಭಿಷ, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಶಾಲಾಕ್ಯ ತಂತ್ರ ಸ್ನಾತಕೋತ್ತರ ವಿಭಾಗದಿಂದ ಕಣ್ಣಿನ ದೃಷ್ಟಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ವಿಶೇಷ ಬೇಸಿಗೆ ಆರೋಗ್ಯ ಶಿಬಿರ, ಬೊಜ್ಜು ನಿವಾರಣಾ ಚಿಕಿತ್ಸಾ ಶಿಬಿರ, ಮೂತ್ರ ಪಿಂಡ (ಕಿಡ್ನಿ) ಕಾಯಿಲೆಗೆ ಚಿಕಿತ್ಸಾ ಶಿಬಿರ, ಆರೋಗ್ಯಾಯುಷ್ಯ ಆರೋಗ್ಯವರ್ಧಕ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿ ರಸ್ತೆ, ಆಲನಹಳ್ಳಿ, ಬೆಳಗ್ಗೆ 9 ರಿಂದ.

■ **ದಿ ನ್ಯಾಷನಲ್ ಇನ್ಸ್‌ಟಿಟ್ಯೂಟ್ ಆಫ್ ಇಂಜಿನಿಯರಿಂಗ್ :** ಎಐ ಆಧಾರಿತ ಆಲ್ಫಾ ಇನ್ನೋವೇಶನ್ ಅಂಡ್ ಟಿಂಕರರ್ಸ್ ಲ್ಯಾಬ್ ಉದ್ಘಾಟನಾ ಸಮಾರಂಭ, ಉದ್ಘಾಟನೆ : ಐಐಟಿ ಮಂಡಿ ಫೌಂಡಿಂಗ್ ಡೈರೆಕ್ಟರ್ ಪ್ರೊ. ತಿಮೋತಿ ಎ. ಗಾನ್‌ಸಾಲ್ವಸ್, ಲೆನೆವೋ ಇಂಡಿಯಾ ವ್ಯವಸ್ಥಾಪಕ ನಿರ್ದೇಶಕ ಶೈಲೇಂದ್ರ ಕಟ್ಯಾಲ್, ಉಪಸ್ಥಿತರು : ಎನ್‌ಐಇ ಪ್ರಿನ್ಸಿಪಾಲ್ ಡಾ. ರೋಹಿಣಿ ನಾಗಪದ್ಮ, ಕಾರ್ಯದರ್ಶಿ ಎಸ್.ಬಿ. ಉದಯಶಂಕರ್, ಆಲ್ಫಾ, ಎನ್‌ಐಇ ಪ್ರಾಜೆಕ್ಟ್ ಹೆಡ್ ವಿ. ಬಾಲಾಜಿ, ಸ್ಥಳ: ಎನ್‌ಐಇ ನಾರ್ತ್ ಕ್ಯಾಂಪಸ್, ಬೆಳಗ್ಗೆ 9.30ಕ್ಕೆ.

■ **ಕಾವೇರಿ ಆಯುರ್ವೇದ ಆಸ್ಪತ್ರೆ :** ಸಂಧಿವಾತ ವ್ಯಾದಿಗೆ ಉಚಿತ ತಪಾಸಣೆ ಮತ್ತು ಚಿಕಿತ್ಸಾ ಶಿಬಿರ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಬಳಿ, ಕೆಬಿಎಲ್ ಲೇಔಟ್, ಬೆಳಗ್ಗೆ 10ಕ್ಕೆ.

■ **ಮೈಸೂರು ವಿಶ್ವವಿದ್ಯಾನಿಲಯ ದೈಹಿಕ ಶಿಕ್ಷಣ ವಿಭಾಗ, ಬೌಲ್ ಔಟ್ ಕ್ರಿಕೆಟ್ ಅಕಾಡೆಮಿ :** ಮಹಿಳಾ ಕ್ರಿಕೆಟ್ ಟೂರ್ನಮೆಂಟ್, ಸ್ಥಳ: ಎಸ್‌ಡಿಎನ್‌ಆರ್‌ಡಬ್ಲ್ಯು ಕ್ರಿಕೆಟ್ ಸ್ಟೇಡಿಯಂ.

■ **ಸುಯೋಗ್ ಆಸ್ಪತ್ರೆ, ಸುಯೋಗ್ ವೈದ್ಯಕೀಯ ಶಿಕ್ಷಣ ಸಂಸ್ಥೆಗಳ ಸಮೂಹ :** ವಿಶ್ವ ಶುಶ್ರೂಷಕರ ದಿನಾಚರಣೆ, ಉದ್ಘಾಟನೆ : ರೋ. ಹೆಚ್.ಆರ್. ಕೇಶವ್, ಅಧ್ಯಕ್ಷತೆ : ಸುಯೋಗ್ ಆಸ್ಪತ್ರೆ ಅಧ್ಯಕ್ಷ ಡಾ. ಎಸ್.ಪಿ. ಯೋಗಣ್ಣ, ಮುಖ್ಯ ಅತಿಥಿಗಳು : ಡಿವಿಷನ್ ರೆವಿನ್ಯೂ ಆಫೀಸರ್ ರಮೇಶ್ ರಾವ್‌ಪುರ, ಕರಾಮುವಿವಿ ವಿಶ್ರಾಂತ ಕುಲಪತಿ ಡಾ.ಎನ್.ಎಸ್.ರಾಮೇಗೌಡ, ಸುಯೋಗ್ ಆಸ್ಪತ್ರೆ ಟ್ರಸ್ಟಿ ಶ್ರೀಮತಿ ಸುಧಾ ಯೋಗಣ್ಣ, ಸ್ಥಳ: ಸುಯೋಗ್ ಆಸ್ಪತ್ರೆ ಆವರಣ, ರಾಮಕೃಷ್ಣನಗರ, ಬೆಳಗ್ಗೆ 11ಕ್ಕೆ.

■ **ಜೆಎಸ್‌ಎಸ್ ರೇಡಿಯೋ 91.2ಎಫ್‌ಎಂ ಸಮುದಾಯ ಬಾನುಲಿ ಕೇಂದ್ರ :** ಐಟಿಐ ಕೋರ್ಸ್ ಮತ್ತು ಅದರ ಅನುಕೂಲತೆಗಳು ಕುರಿತು ತರಬೇತಿ ಅಧಿಕಾರಿಗಳು ಮತ್ತು ರಾಜ್ಯ ಪ್ರಶಸ್ತಿ ಪುರಸ್ಕೃತ ಎನ್‌ಎಸ್‌ಎಸ್ ಅಧಿಕಾರಿ ರವಿಶಂಕರ್ ಜೊತೆ ನೇರ ಸಂದರ್ಶನ ಫೋನ್–ಇನ್ ಕಾರ್ಯಕ್ರಮ, ಸ್ಥಳ: ಜೆಎಸ್‌ಎಸ್ ರೇಡಿಯೋ 91.2ಎಫ್‌ಎಂ ಸಮುದಾಯ ಬಾನುಲಿ ಕೇಂದ್ರ, ಬೆಳಗ್ಗೆ 11.30 ರಿಂದ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.40 ಅರಿವಿನ ಶಿಖರ: ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಸಿ. ವಿಶ್ವನಾಥ್, ಕೆ.ಬಿ.ಸುನೀತಾ ಆಚಾರ್ಯ, ವ್ಯಾಖ್ಯಾನ–ಡಾ. ಹೆಚ್.ಎನ್. ಮಂಜುರಾಜ್, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಯೋಗ ಕುರಿತ ವಿಶೇಷ ಸರಣಿ ಮಹಾಯೋಗ, 8.35 ಚಿತ್ರಗೀತೆಗಳು, 9.00 ವೃತ್ತಿ ಮಾರ್ಗದರ್ಶನ, 9.30 ಚಿತ್ರಗೀತೆಗಳು, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ, ಪ್ರಹ್ಲಾದ್ ದೇಶಪಾಂಡೆ – ಬಾನ್ಸುರಿ ವಾದನ, 10.30 ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ–ನಿತಿನ್ ರಾಜಾರಾಂ ಶಾಸ್ತ್ರೀ, 12.45 ಜನಪದ ಸಂಗೀತ: ಯಾಚೇನಹಳ್ಳಿಯ ಚೆನ್ನಾಜಮ್ಮ ಮತ್ತು ಸಂಗಡಿಗರಿಂದ ಮಾರಮ್ಮನ ಹಾಡು, 1.00 ಪ್ರಗತಿಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಕುರಿತು ಸರಣಿ, 1.20 ಭಾವಗೀತೆಗಳು–ಶಾಂತಲ ವಟ್ಟಂ, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ, ವಿ.ಕೆ. ರಮಣ್–ಕೊಳಲು ವಾದನ, 4.00 ಮಹಿಳಾ ರಂಗ ಬದುಕು ಜಟಕಾಬಂಡಿ ಸ್ವಯಂ ಉದ್ಯೋಗಿ ಉಮಾ ಹಾಗೂ ಮನೆಯ ಸದಸ್ಯರೊಂದಿಗೆ ಮಾತುಕತೆ, ಪ್ರಸ್ತುತಿ–ಜಾಂಪಣ್ಣ ಆಶೀಹಾಳ್, 4.30 ಹಿಂದಿ ಚಿತ್ರಗೀತೆಗಳು, 4.45 ಹಿಂದಿ ಪಾಠ, ಪ್ರಸ್ತುತಿ –ಶಾಂತಾ ಡಿ. ಕಿಣಿ, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ–ಮೇವು ಮೆಲುಕು–ಮೇವಿನ ಬೆಳೆಗಳ ಬೇಸಾಯ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿ ಮೇವಿನ ಬೆಳೆಗಳ ಬೇಸಾಯ ಕುರಿತ ಸಂವಾದ ಭಾಗವಹಿಸುತ್ತಾರೆ–ಮಂಡ್ಯದ ವಿ.ಸಿ. ಫಾರಂ ವಲಯ ಕೃಷಿ ಸಂಶೋಧನಾ ಕೇಂದ್ರದ ಪ್ರಾಧ್ಯಾಪಕರಾದ ಡಾ. ಪಿ. ಮಹದೇವು ಹಾಗೂ ಮಂಡ್ಯ ತಾಲೂಕು ಹುಲಿಕೆರೆ ಗ್ರಾಮದ ಎನ್. ನಿತ್ಯಾನಂದ. ಪ್ರಸ್ತುತಿ: ಎನ್. ಕೇಶವಮೂರ್ತಿ, 7.45 ನಕ್ಷತ್ರ ಲೋಕ–ಸಿನಿ ಸೆಲೆಬ್ರಿಟಿಗಳೊಂದಿಗೆ ಮಾತುಕತೆ, 8.00 ಕರ್ನಾಟಕ ಶಾಸ್ತ್ರೀಯ ಸಂಗೀತ, ಪದ್ಮಾಶಂಕರ್–ವೈಯೋಲಿನ್ ವಾದನ, 8.30 ಹಿಂದಿ ಚಿತ್ರಗೀತೆಗಳು, 9.30 ಕ್ರೀಡಾಲೋಕ, 10.00 ಹಳ್ಳಿಹಾಡು, ಭಾಗವಹಿಸುತ್ತಾರೆ–ಜಾನಪದ ವಿದ್ವಾಂಸರಾದ ಡಾ. ಪಿ.ಕೆ.ರಾಜಶೇಖರ್ ಮತ್ತು ಸಂಗಡಿಗರು ಪ್ರಸ್ತುತಿ: ಡಾ. ಮೈಸೂರು ಉಮೇಶ್, 10.30 ಸವಿನೆನಪು–ಹಳೆಯ ಕನ್ನಡ ಚಿತ್ರಗೀತೆಗಳು

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮೇ 21 ಬುಧವಾರ 2025

ಸಂಪುಟ: 46 | ಸಂಚಿಕೆ: 35 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಗ್ಯಾರಂಟಿ ಸರ್ಕಾರದ ಸಾಧನೆ ಸಮರ್ಪಣೆ

ಹೊಸಪೇಟೆ, ಮೇ 20–ರಾಜ್ಯದ ಗ್ಯಾರಂಟಿ ಸರ್ಕಾರ ಎರಡು ವರ್ಷಗಳನ್ನು ಪೂರೈಸಿದ ಹಿನ್ನೆಲೆಯಲ್ಲಿ ಇಂದು ಇಲ್ಲಿನ ಜಿಲ್ಲಾ ಕ್ರೀಡಾಂಗಣದಲ್ಲಿ 'ಸಮರ್ಪಣಾ ಸಂಕಲ್ಪ' ಬೃಹತ್ ಸಮಾವೇಶವನ್ನು ಏರ್ಪಡಿಸಲಾಗಿತ್ತು. ಈ ಸಮಾವೇಶದಲ್ಲಿ 1,11,111 ಕುಟುಂಬಗಳಿಗೆ ಆಸ್ತಿಯ ಹಕ್ಕುಪತ್ರವನ್ನು ವಿತರಿಸುವ ಮಹಾ ಯೋಜನೆಗೆ ಚಾಲನೆ ದೊರೆಯಿತು. ಇದನ್ನು ರಾಜ್ಯ ಕಾಂಗ್ರೆಸ್ ಸರ್ಕಾರ 6ನೇ ಗ್ಯಾರಂಟಿಯೆಂದು ಘೋಷಿಸಿದೆ. ಮುಂದೆ ಆಸ್ತಿಗಳ ದಾಖಲೆಗಳನ್ನ ಡಿಜಿಟಲೀಕರಣ ಮಾಡುವುದರೊಂದಿಗೆ 7ನೇ ಗ್ಯಾರಂಟಿಯನ್ನೂ ಕಲ್ಪಿಸುವುದಾಗಿ ಪ್ರಕಟಿಸಿದೆ. ಅಧಿಕಾರಕ್ಕೆ ಬರುವ ಮುನ್ನ ನೀಡಿದ್ದಂತಹ ಹಲವು ಯೋಜನೆಗಳನ್ನು ಈಗಾಗಲೇ ಕಾರ್ಯಗತಗೊಳಿಸಲಾಗಿದೆ. ಅದರಲ್ಲೂ ದೇಶವೇ ಅಚ್ಚರಿಯಿಂದ ನೋಡುತ್ತಿದ್ದ ಗ್ಯಾರಂಟಿಗಳನ್ನ ಯಶಸ್ವಿಯಾಗಿ ಜಾರಿಗೊಳಿಸಿದ್ದೇವೆ. ಈಗ ನಮ್ಮ ಗ್ಯಾರಂಟಿಗಳು ದೇಶಕ್ಕೇ ಮಾದರಿಯಾಗಿವೆ ಎಂದು ಸಮಾವೇಶದಲ್ಲಿ ಮಾತನಾಡಿದ ಕಾಂಗ್ರೆಸ್ ಅಧಿನಾಯಕ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಇನ್ನಿತರರು ಹೆಮ್ಮೆಯಿಂದ ಹೇಳಿಕೊಂಡಿದ್ದಾರೆ. ಇನ್ನೂ ಮುಂದಿನ 3 ವರ್ಷ ಸರ್ಕಾರವು ಜನರಿಗೆ ನೀಡಿರುವಂತಹ ಎಲ್ಲಾ ಭರವಸೆಗಳನ್ನ ಈಡೇರಿಸುವುದರ ಜೊತೆಗೆ ಕೆಲವೊಂದು ಹೊಸ ಯೋಜನೆಗಳನ್ನ ಕಾರ್ಯಗತಗೊಳಿಸುವ ಉದ್ದೇಶವನ್ನು ಹೊಂದಿದೆ ಎಂದು ಘೋಷಿಸಿದ್ದಾರೆ.



ಹೊಸಪೇಟೆಯಲ್ಲಿ ನಡೆದ ರಾಜ್ಯ ಕಾಂಗ್ರೆಸ್ ಸರ್ಕಾರದ 2 ವರ್ಷಗಳ ಸಾಧನಾ ಸಮಾವೇಶದಲ್ಲಿ ಪಾಲ್ಗೊಂಡಿದ್ದ ಭಾರಿ ಜನಸ್ತೋಮ.

ರಾಜ್ಯದ ಎಲ್ಲಾ ಜನವಸತಿ ಪ್ರದೇಶಗಳು ಇನ್ನಾರು ತಿಂಗಳಲ್ಲಿ ಕಂದಾಯ ಗ್ರಾಮಗಳಾಗಿ ಪರಿವರ್ತನೆ



ಹೊಸಪೇಟೆ, ಮೇ 20(ಕೆಎಂಶಿ)– ಕರ್ನಾಟಕದಲ್ಲಿನ ಎಲ್ಲಾ ಜನವಸತಿಗಳನ್ನು ಕಂದಾಯ ಗ್ರಾಮಗಳಾಗಿ ಇನ್ನಾರು ತಿಂಗಳಲ್ಲಿ ಪರಿವರ್ತಿಸುವ ಜೊತೆಗೆ ಭೂಮಿ ಮಾಲೀಕತ್ವದ ಹಕ್ಕುಪತ್ರವನ್ನೂ ನಮ್ಮ ಕಾಂಗ್ರೆಸ್ ಸರ್ಕಾರ ನೀಡಲಿದೆ ಎಂದು ಕಾಂಗ್ರೆಸ್ ಅಧಿನಾಯಕ ಹಾಗೂ ಲೋಕಸಭೆಯಲ್ಲಿನ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಘೋಷಿಸಿದ್ದಾರೆ.

ಕಾಂಗ್ರೆಸ್ ಸರ್ಕಾರ ಎರಡು ವರ್ಷಗಳ ಆಡಳಿತ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ 2,000 ಜನವಸತಿಗಳಲ್ಲಿ ವಾಸಿಸುತ್ತಿರುವ 1,11,111 ಕುಟುಂಬಗಳ ಆಸ್ತಿಗೆ ಭೂಮಾಲೀಕತ್ವದ ಹಕ್ಕುಪತ್ರವನ್ನು ಸಾಂಕೇತಿಕವಾಗಿ ವಿತರಿಸಿ ಮಾತನಾಡಿದ ಅವರು, ಕರ್ನಾಟಕದಲ್ಲಿನ ಇನ್ನೂ 500 ಜನವಸತಿಗಳ 50,000 ಕುಟುಂಬಗಳಿಗೆ ■ 6ನೇ ಪುಟಕ್ಕೆ

ಎರಡು ವರ್ಷದಲ್ಲಿ ಐದು ಗ್ಯಾರಂಟಿ ಜೊತೆಗೆ 142 ಆಶ್ವಾಸನೆ ಈಡೇರಿಕೆ



ಹೊಸಪೇಟೆ, ಮೇ 20(ಕೆಎಂಶಿ)– ಚುನಾವಣೆ ವೇಳೆ ನಾವು ಕೊಟ್ಟ ಐದು ಗ್ಯಾರಂಟಿಗಳ ಜೊತೆಗೆ 142 ಆಶ್ವಾಸನೆಗಳನ್ನು ಎರಡು ವರ್ಷಗಳ ಆಡಳಿತದಲ್ಲಿ ಈಡೇರಿಸಿದ್ದು, ಮುಂದಿನ ಮೂರು ವರ್ಷಗಳಲ್ಲಿ ಉಳಿದ ಭರವಸೆಗಳನ್ನು ಈಡೇರಿಸುತ್ತೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದಾರೆ.

ರಾಜ್ಯ ಕಾಂಗ್ರೆಸ್ ಸರ್ಕಾರ ಎರಡು ವರ್ಷ ಪೂರೈಸಿದ ಸಂಭ್ರಮಾಚರಣೆ ಸಮಾವೇಶದಲ್ಲಿ ಭೂ ಹಕ್ಕುಪತ್ರ ■ 6ನೇ ಪುಟಕ್ಕೆ

ಆರನೇ ಗ್ಯಾರಂಟಿ 'ಭೂ ಗ್ಯಾರಂಟಿ'

ಹೊಸಪೇಟೆ, ಮೇ 20(ಕೆಎಂಶಿ)– ನಮಗೆ ಅಧಿಕಾರ ನೀಡಿದ ಜನರ ಋಣ ತೀರಿಸಲು ಆರನೆಯದಾಗಿ ಭೂ ಗ್ಯಾರಂಟಿ ಯೋಜನೆ ನೀಡುತ್ತಿದ್ದು, ಕಾಂಗ್ರೆಸ್ ಅಧಿಕಾರದಲ್ಲಿ ಇರುವವರೆಗೂ ಗ್ಯಾರಂಟಿ ಯೋಜನೆಗಳು ನಿಲ್ಲುವುದಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಭರವಸೆ ನೀಡಿದ್ದಾರೆ.

ರಾಜ್ಯ ಸರ್ಕಾರಕ್ಕೆ ಎರಡು ವರ್ಷ ತುಂಬಿರುವ ಹಿನ್ನೆಲೆಯಲ್ಲಿ ಪ್ರಗತಿಯತ್ತ ಕರ್ನಾಟಕ ಸಮರ್ಪಣೆ ಸಂಕಲ್ಪ ಸಮಾವೇಶದಲ್ಲಿ ಮಾತನಾಡಿದ ಅವರು, ಮಲ್ಲಿ



ಕಾರ್ಜುನ ಖರ್ಗೆ ಅಧ್ಯಕ್ಷತೆಯಲ್ಲಿ, ರಾಹುಲ್ ಗಾಂಧಿ ನಾಯಕತ್ವದಲ್ಲಿ 136 ಶಾಸಕರನ್ನು ಆಯ್ಕೆ ಮಾಡಿ ■ 6ನೇ ಪುಟಕ್ಕೆ

ಬೇಡ ಜಂಗಮ ಸಮುದಾಯ ಪರಿಶಿಷ್ಟ ಸಮುದಾಯಕ್ಕೆ ಸೇರ್ಪಡೆಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಆಕ್ಷೇಪ



ಹೊಸಪೇಟೆ, ಮೇ 20(ಕೆಎಂಶಿ)– ಒಳಮೀಸಲಾತಿ ಸಮೀಕ್ಷೆ ವೇಳೆ ಬೇಡ ಜಂಗಮ ಸಮುದಾಯವನ್ನು ಪರಿಶಿಷ್ಟರ ಗುಂಪಿಗೆ ಸೇರಿಸುತ್ತಿರುವುದಕ್ಕೆ ರಾಜ್ಯ ಸಭೆಯಲ್ಲಿನ ಪ್ರತಿಪಕ್ಷ ನಾಯಕ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಕರ್ನಾಟಕ ಸರ್ಕಾರ ಒಳಮೀಸಲಾತಿ ಸಂಬಂಧ ಸರ್ವೆ ನಡೆಸುತ್ತಿದೆ. ಅದಕ್ಕೆ ನನ್ನ ಅಭ್ಯಂತರ ಇಲ್ಲ. ಆದರೆ, 500 ಮಂದಿಯಷ್ಟಿದ್ದ ಬೇಡ ಜಂಗಮ ಸಮುದಾಯ ಕಲ್ಯಾಣ ಕರ್ನಾಟಕದಲ್ಲಿ ನಾಲ್ಕೂವರೆ ಲಕ್ಷದಷ್ಟು ಆಗಿದ್ದು ಹೇಗೆ, ಇವರು ಎಲ್ಲಿಂದ ಬಂದರು ಎಂದು ಖಾರವಾಗಿ ಪ್ರಶ್ನಿಸಿದರು.

ಆಸ್ತಿ ಮಾಲೀಕತ್ವದ ಹಕ್ಕುಪತ್ರ ವಿತರಣಾ ಸಮಾವೇಶದಲ್ಲಿ ಮಾತನಾಡಿದ ಅವರು, ಅಸ್ಪೃಶ್ಯ ಸಮುದಾಯಕ್ಕೆ ಮೀಸಲಾಗಿರುವ ಸವಲತ್ತುಗಳನ್ನು ಬೇರೆಯವರು ಪಡೆಯದಂತೆ ■ 6ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಎಸ್‌ಎಸ್‌ಎಲ್‌ಸಿಯಲ್ಲಿ 90 ತಗೊಂಡೆ ಬೇಷ್ ಅಂದ್ರು,
ಪಿಯುಸಿಯಲ್ಲಿ 90 ತಗೊಂಡೆ ಶಹಬಾಸ್ ಅಂದ್ರು,
ಡಿಗ್ರಿಯಲ್ಲಿ 90 ತಗೊಂಡೆ ಗ್ರೇಟ್ ಅಂದ್ರು,
ಈಗ ಕೆಲಸ ಮಾಡಿ ಆಯಾಸ ಅಂತ 90 ತಗೊಂಡ್ರೆ ಎಲ್ಲರೂ ಬೈತಾರೆ!

ಮೈಸೂರು ಮಿತ್ರ

ಬುಧವಾರ, 21 ಮೇ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ..........

ಅನುಭವವು ಜಗತ್ತಿನ ಸರ್ವಶ್ರೇಷ್ಠ ಶಿಕ್ಷಕ. ಉಸಿರಾಡುವವರೆಗೂ ಕಲಿಕೆ ಮತ್ತು ಜ್ಞಾನಾರ್ಜನೆಯೇ ಜೀವನದ ಗುರಿಯಾಗಿರಲಿ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಎತ್ತಿಗೆ ಜ್ವರ ಬಂದರೆ ಎಮ್ಮೆಗೆ ಬರೆ ಹಾಕಿದರಂತೆ.

ನಿಮ್ಮ ಪತ್ರಗಳು

ಆಕ್ಸಿಸ್ ಬ್ಯಾಂಕ್ ಎಟಿಎಂ ಕಾರ್ಯ ಚಟುವಟಿಕೆ ಸ್ಥಗಿತ, ಗ್ರಾಹಕರ ಪರದಾಟ



ಮಾನ್ಯರೆ,

ಭಾರತೀಯ ಖಾಸಗಿ ಬ್ಯಾಂಕಿಂಗ್ ವಲಯದಲ್ಲಿ ಮುಂಚೂಣಿಯಲ್ಲಿರುವ ಗ್ರಾಹಕ ಸ್ನೇಹಿಯಾಗಿ ಕಾರ್ಯ ನಿರ್ವಹಿಸುತ್ತಿರುವ ಆಕ್ಸಿಸ್ ಬ್ಯಾಂಕ್ ಮೈಸೂರಿನಲ್ಲಿ ಹಲವಾರು ಶಾಖೆಗಳನ್ನು ಹೊಂದಿದೆ. ಇದರಲ್ಲಿ ಎಟಿಎಂ ಕೇಂದ್ರಗಳನ್ನು ಹೊಂದಿದ್ದು, ಉತ್ತಮ ರೀತಿಯಲ್ಲಿ ಕಾರ್ಯ ನಿರ್ವಹಿಸುತ್ತಿತ್ತು. ಆದರೆ ಕಳೆದ ಮೂರು ತಿಂಗಳಿಂದ ಎಟಿಎಂ ಕೇಂದ್ರಗಳು ಸ್ಥಗಿತಗೊಂಡು ಸದರಿ ಬ್ಯಾಂಕಿನ ಗ್ರಾಹಕರು ಹಣ ಡ್ರಾ ಮಾಡಿಕೊಳ್ಳಲು ತುಂಬಾ ಪರದಾಡುತ್ತಿದ್ದಾರೆ. ಬೇರೆ ಬ್ಯಾಂಕುಗಳ ಎಟಿಎಂಗಳಿಂದ ಹಣ ಡ್ರಾ ಮಾಡಿದರೆ ಇಂತಿಷ್ಟೆ ಮಿತಿ ಎಂದು ಸೀಮಿತಗೊಳಿಸಿರುವುದು ಹಾಗೂ ಇದು ಮುಂದುವರೆದರೆ ದಂಡ ಶುಲ್ಕ ರೀತಿಯಲ್ಲಿ ಗ್ರಾಹಕರ ಖಾತೆಗಳಿಂದ ವಸೂಲಿ ಮಾಡುತ್ತಾರೆ. ಇದರಿಂದ ಗ್ರಾಹಕರಿಗೆ ತುಂಬಾ ತೊಂದರೆ ಉಂಟಾಗಿದೆ. ಈ ಸಮಸ್ಯೆಯ ಬಗ್ಗೆ ಬ್ಯಾಂಕಿನ ಸಿಬ್ಬಂದಿಯನ್ನು ವಿಚಾರಿಸಿದರೆ ತಮ್ಮ ಅಸಹಾಯಕತೆ ವ್ಯಕ್ತಪಡಿಸುತ್ತಾರೆ.

ಈ ಕೂಡಲೇ ಆಕ್ಸಿಸ್ ಬ್ಯಾಂಕಿನ ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮ ವಹಿಸಿ ಸ್ಥಗಿತಗೊಂಡಿರುವ ಎಟಿಎಂ ಕಾರ್ಯ ಚಟುವಟಿಕೆ ಪುನರ್ ಸ್ಥಾಪಿಸಿ ಗ್ರಾಹಕರಿಗೆ ಅನುಕೂಲ ಮಾಡಿಕೊಡಬೇಕಾಗಿ ಮನವಿ.

–ಎಸ್. ರಾಜಗೋಪಾಲ್, ಗಾಂಧಿನಗರ, ಮೈಸೂರು.

ಮಾನವೀಯತೆ ದೃಷ್ಟಿಯಿಂದ ಎಲ್ಲರ ಜೀವ ಅಮೂಲ್ಯ



ಮಾನ್ಯರೆ,

ಮಳೆಗಾಲ ಆರಂಭವಾಗುತ್ತಿದೆ, ಮಳೆಯೂ ಬರುತ್ತಿದೆ. ಮಳೆಗಾಲದ ಸಮಯದಲ್ಲಿ ಮನುಷ್ಯರು ಸಂಚರಿಸುವಾಗ ಸುರಕ್ಷಿತ ಸ್ಥಳಕ್ಕೆ ಹೋಗಿ ಆಶ್ರಯ ಪಡೆಯುತ್ತಾರೆ. ಆದರೆ ನಾಯಿ, ಬೆಕ್ಕು ಸೇರಿದಂತೆ ಇನ್ನಿತರ ಪ್ರಾಣಿಗಳ ಗತಿ! ಮಳೆಗಾಲ ಸಮಯದಲ್ಲಿ ನಿಲ್ಲಿಸಿರುವ ಕಾರು, ಬಸ್, ಆಟೋ ಇತ್ಯಾದಿ ವಾಹನಗಳ ಕೆಳಗೆ ಮಳೆಯಿಂದ ರಕ್ಷಣೆ ಪಡೆಯುತ್ತವೆ. ಅವುಗಳಿಗೆ ಗಾಯವಾಗದಂತೆ ನೋಡಿಕೊಳ್ಳಬೇಕಾಗಿದೆ. ವಾಹನ ಚಲಾಯಿಸುವ ಮುನ್ನ ಪ್ರಾಣಿಗಳು ಅಲ್ಲಿವೆಯೇ ಎನ್ನುವುದನ್ನು ಪರಿಶೀಲಿಸುವುದು ಒಳಿತು.

ವಾಹನ ಚಾಲನೆ ಮಾಡುವ ಮುನ್ನ ಇದನ್ನು ವಾಹನ ಸವಾರರು ಗಮನಿಸಿ ವಾಹನ ಚಾಲನೆ ಮಾಡುವುದು ಒಳಿತು. ನೀವು ನೋಡದೆ ವಾಹನ ಚಾಲನೆ ಮಾಡಿದರೆ ವಾಹನದ ಕೆಳಗೆ ಆಶ್ರಯ ಪಡೆಯುತ್ತಿರುವ ಪ್ರಾಣಿಗಳು ಸ್ಥಳದಲ್ಲೇ ಸಾವನ್ನಪ್ಪಬಹುದು. ಮಾನವೀಯತೆ ದೃಷ್ಟಿಯಿಂದ ಎಲ್ಲರ ಜೀವ ಅಮೂಲ್ಯ. ಈ ಮಳೆ ಋತುವಿನಲ್ಲಿ ನಾವೆಲ್ಲರೂ ಅವುಗಳಿಗೆ ತಾತ್ಕಾಲಿಕ ಆಶ್ರಯ ನೀಡೋಣ. ಅದು ಹೃದಯಸ್ಪರ್ಶಿಯಾದ ಮಾನವೀಯತೆಯ ನಿಲುವಾಗಿರುತ್ತದೆ.

–ಗೋವಿತ್ ಕಿರಣ್, ರಾಜೇಂದ್ರ ನಗರ, ಮೈಸೂರು.

ದ್ವಿಚಕ್ರ ವಾಹನ ಪಾರ್ಕಿಂಗ್ ಜಾಗದಲ್ಲಿ ಕಾರು, ಬಸ್ ನಿಲುಗಡೆ ನಿಷೇಧಿಸಿ

ಮಾನ್ಯರೆ,

ಮೈಸೂರಿನ ಸಯ್ಯಾಜಿರಾವ್ ರಸ್ತೆಯಲ್ಲಿರುವ ಪಂಚಮುಖಿ ಗಣಪತಿ (ಹಳೇ ಆರ್.ಎಂ.ಸಿ ಮತ್ತು ಖಾಸಗಿ ಬಸ್ ನಿಲ್ದಾಣ ಹತ್ತಿರ) ದೇವಸ್ಥಾನದ ರಸ್ತೆಯಿಂದ ಸದರಿ ರಸ್ತೆಯಲ್ಲಿರುವ ಬಸವಣ್ಣ ವೃತ್ತದವರೆಗೆ (ಹೋಟೆಲ್ ವೆಂಕಟೇಶ ಭವನ) ದ್ವಿಚಕ್ರ ವಾಹನಗಳ ಪಾರ್ಕಿಂಗ್‌ಗೆ ಸ್ಥಳ ನಿಗದಿಪಡಿಸಲಾಗಿದೆ. ಎದುರುಗಡೆ ರಸ್ತೆಯ ಒಂದು ಬದಿಯಲ್ಲಿ ಕಾರುಗಳಿಗೆ ಮಾತ್ರ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ. ಆದರೆ ಇತ್ತೀಚಿನ ದಿನಗಳಲ್ಲಿ ಕೆಲವು ತಿಂಗಳುಗಳಿಂದ ಕಾರುಗಳು ಮತ್ತು ಬಸ್ಸುಗಳು ದ್ವಿ–ಚಕ್ರ ವಾಹನಗಳಿಗೆ ನಿಗದಿಯಾಗಿರುವ ಸ್ಥಳದಲ್ಲಿ ಸರತಿ ಸಾಲಿನಲ್ಲಿ ವಾಹನಗಳನ್ನು ನಿಲ್ಲಿಸು ತ್ತಿರುವುದರಿಂದ ಮತ್ತು ಇದೇ ಸ್ಥಳದಲ್ಲಿ ಖಾಸಗಿ ಟೂರ್ ಅಂಡ್ ಟ್ರಾವೆಲ್ಸ್‌ರವರು ತಮ್ಮ 1–2 ಬಸ್ಸುಗಳನ್ನು ದಿನ ಪೂರ್ತಾ ನಿಲ್ಲಿಸುತ್ತಾರೆ. ಇದರಿಂದ ದ್ವಿ–ಚಕ್ರ ವಾಹನಗಳನ್ನು ನಿಲ್ಲಿಸಲು ಪರದಾಡುವ ಸ್ಥಿತಿ ಉಂಟಾಗಿದೆ. ಖಾಸಗಿ ಟೂರ್ & ಟ್ರಾವೆಲ್ಸ್‌ರವರು ತಮ್ಮ ಬಸ್ಸುಗಳನ್ನು ಪಂಚಮುಖಿ ದೇವಸ್ಥಾನದ ಮುಂದಿನ ರಸ್ತೆಯಲ್ಲಿ ದಿನ ಪೂರ್ತಿ ನಿಲ್ಲಿಸುತ್ತಿರುವುದರಿಂದ ಪಾದಚಾರಿಗಳಿಗೆ ಓಡಾಡಲು ಸಹ ಕಷ್ಟವಾಗಿದೆ. ಮತ್ತು ಇದೇ ರಸ್ತೆಯಲ್ಲಿ ಸಂಜೆ ವೇಳೆ ಫಾಸ್ಟ್‌ಫುಡ್‌ನವರು ಫುಟ್‌ಪಾತ್‌ನಲ್ಲಿ ಅವರ ಜೀವನ ಆಧಾರಕ್ಕೆ ವ್ಯಾಪಾರ ಮಾಡುವವರು ತಮ್ಮ ಅಂಗಡಿಯ ನಾಮಫಲಕವನ್ನು (ಬೋರ್ಡ್) ರಸ್ತೆಯಲ್ಲಿ ನಿಲ್ಲಿಸುತ್ತಿರುವುದರಿಂದ ಸಾರ್ವಜನಿಕರು ಓಡಾಡಲು ಪ್ರಯಾಸವಾಗುತ್ತಿದೆ. ಕಾರಣ ಪಾದಚಾರಿಗಳು ರಸ್ತೆ ಮಧ್ಯೆ ಬಂದಾಗ ಹಿಂದಿನಿಂದ ಬರುವ ವಾಹನ ಸವಾರರು ವೇಗವಾದ ಚಾಲನೆಯಲ್ಲಿರುತ್ತಾರೆ. ಒಂದು ಕಡೆ ಹಿಂಬದಿಯಿಂದ ವಾಹನಗಳು ಚಲಿಸಿದರೆ, ಮತ್ತೊಂದು ಕಡೆ ದ್ವಿಚಕ್ರ ವಾಹನಗಳ ಪಾರ್ಕಿಂಗ್ ಸ್ಥಳದಲ್ಲಿ ಕಾರು, ಬಸ್ಸುಗಳ ನಿಲುಗಡೆ ರಸ್ತೆಯಲ್ಲಿಯೇ ನಾಮಫಲಕಗಳು (ಬೋರ್ಡ್) ಈ ರೀತಿ ಆದಾಗ ದ್ವಿಚಕ್ರ ವಾಹನಗಳನ್ನು ಪಾರ್ಕಿಂಗ್ ಎಲ್ಲಿ ಮಾಡಬೇಕು. ಸಾರ್ವಜನಿಕರು ಯಾವ ರಸ್ತೆಯಲ್ಲಿ ಓಡಾಡಬೇಕು ಎಂದು ಗೊಂದಲವಾಗಿ ಅಪಘಾತಗಳಾಗುವ ಸಾಧ್ಯತೆ ಹೆಚ್ಚು. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ದ್ವಿಚಕ್ರ ವಾಹನಗಳ ಪಾರ್ಕಿಂಗ್ ಸ್ಥಳದಲ್ಲಿ ನಿಲ್ಲಿಸುವ ಕಾರು, ಬಸ್ಸುಗಳನ್ನು ಮತ್ತು ರಸ್ತೆಯಲ್ಲಿರುವ ನಾಮಫಲಕಗಳನ್ನು (ಬೋರ್ಡ್) ತೆರವುಗೊಳಿಸುವಂತೆ ತಮ್ಮಲ್ಲಿ ಈ ಮೂಲಕ ಮನವಿ.

–ಎಂ.ಎನ್.ಧರಣಿ ವೆಂಕಟೇಶ, ಸಾಮಾಜಿಕ ಕಾರ್ಯಕರ್ತ, ಮೈಸೂರು.



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ರಾಮಾಯಣದಲ್ಲಿ ಹನುಮಂತ

ನಾಳೆ ಗುರುವಾರ (22.5.2025) ಹನುಮಜ್ಜಯಂತಿ. ವಾನರ ಕುಲದಲ್ಲಿ ಹುಟ್ಟಿದವನು ನರರಿಗೆಲ್ಲ ಪೂಜ್ಯನಾಗಿದ್ದಾನೆ. ಅವನ ಜಯಂತಿಯನ್ನು ಸಹಸ್ರಾರು ಜನರು ಭಕ್ತಿಯಿಂದ ಆಚರಿಸುತ್ತಾರೆ ಎಂಬುದೇ ಅವನ ಹಿರಿಮೆಯನ್ನೂ ಗರಿಮೆಯನ್ನೂ ಸೂಚಿಸುತ್ತದೆ. ಅವನು ನಮ್ಮ ರಾಜ್ಯದಲ್ಲೇ ಹುಟ್ಟಿದವನು ಎಂದು ಅಭಿಮಾನದಿಂದ ಜನರು ಕಲಹ ಮಾಡುವುದೂ ಅವನ ಜನಪ್ರಿಯತೆಗೆ ದ್ಯೋತಕವಾಗಿದೆ. ಯಾವ ಹಳ್ಳಿಗೆ ಹೋದರೂ ಅಲ್ಲಿ ಆಂಜನೇಯನ ಗುಡಿಯನ್ನು ಕಾಣುತ್ತೇವೆ. ರಾಮನ ಪೂಜೆಯಾಗುವಾಗ ಸೀತೆ ಮತ್ತು ಲಕ್ಷ್ಮಣರು ಇದ್ದೇ ಇರುವಂತೆ ಹನುಮಂತನೂ ಇರುತ್ತಾನೆ. ಅವನಿಗೂ ಪೂಜೆ ಸಲ್ಲುತ್ತದೆ. ಪೈಲ್ವಾನರಿಗೆ ಅವನು ಭಜರಂಗಬಲಿ–ವಜ್ರಾಂಗಬಲಿ.

ಹನುಮಂತನ ತಂದೆ ಕೇಸರಿ ಎಂಬ ವಾನರ. ತಾಯಿ ಅಂಜನಾ ದೇವಿ. ಅವರಿಗೆ ಪುತ್ರ ಸಂತಾನವಾಗುವಂತೆ ಅನುಗ್ರಹಿಸಿದವನು ವಾಯು. ಆ ಕಾರಣದಿಂದಲೇ ಹನುಮಂತನನ್ನು ವಾಯುಸುತ, ವಾತಾತ್ಮಜ, ಪವಮಾನ ಸುತ ಮುಂತಾದ ಹೆಸರುಗಳಿಂದಲೂ ಕರೆಯುತ್ತೇವೆ. ವಾನರರ ರಾಜರಾಗಿದ್ದವರು ವಾಲಿ ಮತ್ತು ಸುಗ್ರೀವ. ಆದರೆ ಅವರನ್ನೂ ಯಾರೂ ಪೂಜಿಸುವುದಿಲ್ಲ. ಎಲ್ಲೂ ಅವರ ದೇವಾಲಯಗಳಿಲ್ಲ. ವಾಲಿ ಜಯಂತಿ, ಸುಗ್ರೀವ ಜಯಂತಿ ಎಂದು ಯಾರೂ ಆಚರಿಸುವುದಿಲ್ಲ. ಗೌರವವನ್ನೂ ಪೂಜ್ಯತೆಯನ್ನೂ ತರುವುದು ತಾನು ಮಾಡಿದ ಉತ್ತಮ ಕಾರ್ಯ, ಹುಟ್ಟು ಅಲ್ಲ ಎಂಬುದಕ್ಕೆ ಹನುಮಂತನೇ ಸಾಕ್ಷಿ.

ರಾಮಾಯಣದ ಮೊದಲನೆಯ ಅರ್ಧದಲ್ಲಿ, ಎಂದರೆ ಬಾಲಕಾಂಡ, ಅಯೋಧ್ಯಾ ಕಾಂಡಗಳಲ್ಲಿ ಹನುಮಂತನ ಪ್ರವೇಶವೇ ಇಲ್ಲ. ಶ್ರೀರಾಮನು ಹನುಮಂತನ ಹೆಸರನ್ನೇ ಕೇಳಿರುವುದಿಲ್ಲ. ಕಿಷ್ಕಿಂಧಾ ಕಾಂಡದಲ್ಲೇ ಅವನ ಪ್ರವೇಶ. ರಾಮ ಲಕ್ಷ್ಮಣರ ಪೂರ್ವಾಪರಗಳನ್ನು ಶಕ್ತಿಯನ್ನೂ ತಿಳಿದುಕೊಂಡು ಬಾ ಎಂದು ಸುಗ್ರೀವನು ಹನುಮಂತನನ್ನು ಕಳುಹಿಸುತ್ತಾನೆ. ಮೊದಲನೆಯ ಭೇಟಿಯಲ್ಲೇ ಶ್ರೀರಾಮನಿಗೆ ಹನುಮಂತನ ಜ್ಞಾನ, ಪಾಂಡಿತ್ಯ, ಚಾತುರ್ಯ, ಶಕ್ತಿ–ಇವೆಲ್ಲ ಗೊತ್ತಾಗುತ್ತವೆ. ಸುಗ್ರೀವನಿಗೆ ರಾಮನ ಸಖ್ಯವನ್ನೇರ್ಪಡಿಸುವವನೂ ಹನುಮಂತನೇ. ಇಲ್ಲಿಂದ ಮುಂದೆ ರಾಮಾಯಣದ ಕಥೆಯಲ್ಲಿ ಅತ್ಯಂತ ಮುಖ್ಯ ಪಾತ್ರವನ್ನು ವಹಿಸುವ ಅವನು ಶ್ರೀರಾಮನ ದೂತನೂ ಆಪ್ತನೂ ಭಕ್ತನೂ ಆಗುತ್ತಾನೆ. ರಾಮನ ಭಂಟ ಎಂದರೆ ಆಂಜನೇಯನೇ. ಭಕ್ತಿಗೆ ಶ್ರೇಷ್ಠ ನಿದರ್ಶನ ಹನುಮಂತನೇ.

ಹನುಮಂತನ ವೈಶಿಷ್ಟ್ಯವೇನೆಂದರೆ ಅವನ ಬ್ರಹ್ಮಚರ್ಯ. ಯಾವ ಸಂದರ್ಭದಲ್ಲೂ ಅವನು ಹೆಣ್ಣಿಗೆ ಸೋಲಲಿಲ್ಲ. ವಾಲಿ, ಸುಗ್ರೀವ ಸ್ತ್ರೀಲೋಲುಪರು. ಆದರೆ ಹನುಮಂತ ಆದರ್ಶ ಬ್ರಹ್ಮಚಾರಿ. ಅವನು ಯಾರಿಂದಲೂ ಎಂದೂ ಏನನ್ನೂ ಬೇಡಲಿಲ್ಲ. ಅವನದು ಅಯಾಚಿತ ವ್ರತ. ಗೃಹಸ್ಥನಾಗಿದ್ದರೆ, ಮಕ್ಕಳನ್ನು ಪಡೆದಿದ್ದರೆ, ಇದು ಸಾಧ್ಯವಾಗುತ್ತಿರಲಿಲ್ಲವೇನೋ.

ಚಿಕ್ಕಂದಿನಿಂದಲೇ ಆಂಜನೇಯನ ಶಕ್ತಿ ಲೋಕಕ್ಕೆಲ್ಲಾ ತಿಳಿದಿತ್ತು. ಸೂರ್ಯನನ್ನು ಕಂಡು ಅದು ಕೆಂಪಾಗಿ ಮಾಗಿರುವ ಹಣ್ಣು ಎಂದು ತಿನ್ನಲು ಹೊರಟ ಮಗು ಯಾರಿಗೆ ವಿಸ್ಮಯವನ್ನುಂಟು ಮಾಡದು? ಅದಕ್ಕೇ ಶಾಪವನ್ನು ಕೊಟ್ಟರು. "ಬೇರೆಯವರು ಹೇಳುವ ತನಕ ನಿನಗೆ ನಿನ್ನ ಶಕ್ತಿಯ ಬಗೆಗೆ ಜಂಬ ಕೊಚ್ಚಿಕೊಳ್ಳುತ್ತಿದ್ದರೆ ಹನುಮಂತನು ಒಂದು ಮೂಲೆಯಲ್ಲಿ ಮೌನ ವಹಿಸಿ ನಿಂತಿರುತ್ತಿದ್ದ. ಸಮುದ್ರವನ್ನು ಲಂಘಿಸಬೇಕಾದರೆ ಜಾಂಬವಂತ ಮುಂತಾದವರು ಹೊಗಳಿ ಅವನ ಶಕ್ತಿಯನ್ನು ನೆನಪಿಸಬೇಕಾಯಿತು.



ಹನುಮಂತನ ಬುದ್ಧಿಶಕ್ತಿಯನ್ನು ದೇಹಬಲವನ್ನೂ ಚೆನ್ನಾಗಿ ಅರಿತಿದ್ದವನು ಶ್ರೀರಾಮ. ಸೀತಾನ್ವೇಷಣೆಗಾಗಿ ನೂರಾರು ಕಪಿಗಳು ಹೊರಟಿದ್ದರೂ ಹನುಮಂತನೊಬ್ಬನನ್ನು ಕರೆದು ಅವನ ಕೈಗೆ ತನ್ನ ಉಂಗುರವನ್ನು ಕೊಟ್ಟು 'ನನ್ನ ದೂತನೆಂದು ದೃಢಪಡಿಸಲು ಇದನ್ನು ಗುರುತೆಂದು ಸೀತೆಗೆ ಕೊಡು' ಎಂದು ಶ್ರೀರಾಮನು ಕೊಟ್ಟದ್ದು. ಆ ಕೆಲಸಕ್ಕಾಗಿ ಹೊರಟ ಹನುಮಂತ ಅಷ್ಟನ್ನೇ ಮಾಡಿ ಹಿಂದಿರುಗಿ ಬರಲಿಲ್ಲ. ರಾವಣನ ಆಸ್ಥಾನಕ್ಕೆ ಹೋಗಿ ಬುದ್ಧಿಯನ್ನು ಹೇಳಿದ, ಲಂಕೆಯ ರಹಸ್ಯಗಳನ್ನು ತಿಳಿದುಕೊಂಡ. ಸೀತೆಯು ಕೊಟ್ಟ ಚೂಡಾಮಣಿಯನ್ನು ರಾಮನಿಗೆ ತಲುಪಿಸಿ ಅವನ ದುಃಖ ಶಾಂತವಾಗುವಂತೆ ಮಾಡಿದ. ಅವನ ಕಾರ್ಯಗಳ ಸೌಂದರ್ಯವನ್ನು ಒತ್ತಿ ಹೇಳಿರುವುದರಿಂದ ವಾಲ್ಮೀಕಿ ಈ ಕಾಂಡವನ್ನು ಸುಂದರಕಾಂಡ ಎಂದು ಕರೆದರು. ಸುಂದರೇ ಕಿಂ ನ ಸುಂದರಮ್? ಎಂಬ ಮಾತು ಪ್ರಸಿದ್ಧ.

ಹಿಡಿದ ಕೆಲಸವನ್ನು ಮಾಡಿ ಮುಗಿಸುವವರೆಗೂ ಬೇರೆಯ ಆಕರ್ಷಣೆಗೆ, ಪ್ರಲೋಭನೆಗೆ ಈಡಾಗಬಾರದು ಎಂಬುದು ಆಂಜನೇಯನ ತತ್ತ್ವವಾಗಿತ್ತು. ಅವನು ಲಂಕೆಗೆ ಹಾರುತ್ತಿದ್ದಾಗ ಸಮುದ್ರದ ಮಧ್ಯದಲ್ಲಿ ಮೈನಾಕ ಎಂಬ ಬೆಟ್ಟವಿದ್ದು ನಿಂತು ಆತಿಥ್ಯವನ್ನು ನೀಡಲು ಬಯಸುತ್ತೇವೆ. ಅತ್ಯಂತ ವಿನಯದಿಂದ ಕೇಳಿಕೊಳ್ಳುತ್ತದೆ.

**ಅತಿಥಿಃ ಕಿಲ ಪೂಜಾರ್ಹಃ ಪ್ರಾಕೃತೋಽಪಿ ವಿಜಾನತಾ ।
ಧರ್ಮಂ ಜಿಜ್ಞಾಸಮಾನೇನ ಕಿಂ ಪುನರ್ಯಾದೃಶೋ ಭವಾನ್ ॥**

(ಏನನ್ನೂ ತಿಳಿಯದ ಪಾಮರನಾದರೂ ಅತಿಥಿಯು ಪೂಜ್ಯನೇ. ಧರ್ಮವನ್ನು ಅನುಸರಿಸಲು ಬಯಸುವವನು ಅತಿಥಿಯನ್ನು ಪೂಜಿಸಬೇಕು. ಹೀಗಿರುವಾಗಿ ನಿನ್ನಂತಹ ಜ್ಞಾನಿಯು ಬಂದಾಗ ಹೇಳುವುದೇನಿದೆ? ನೀನು ಆತಿಥ್ಯವನ್ನು ಸ್ವೀಕರಿಸಿ ಹೋಗು) ಎಂದು ಮೈನಾಕನ ಪ್ರಾರ್ಥನೆ. ಆದರೆ ಕಾರ್ಯತತ್ಪರತೆಯಿಂದ ಆಂಜನೇಯನು ಆ ಪ್ರಾರ್ಥನೆಯನ್ನು ಮೃದುವಾಗಿ ತಿರಸ್ಕರಿಸಿ ತನ್ನ ಪ್ರಯಾಣವನ್ನು ಮುಂದುವರಿಸುತ್ತಾನೆ. ಇದು ನಮಗೆ ಆಂಜನೇಯನು ಕಲಿಸುವ ಪಾಠ.

ರಾಮನಲ್ಲಿ ಆಂಜನೇಯನ ಭಕ್ತಿ ಅಕೃತಿಮವಾದದ್ದು. ಅವನು ರಾಮನಿಂದ ಏನನ್ನೂ ಬೇಡಲಿಲ್ಲ, ಬಯಸಲಿಲ್ಲ. ಎಲ್ಲಾ ಸಂದರ್ಭಗಳಲ್ಲೂ ರಾಮನಿಗಾಗಿ ಸರ್ವಸ್ವದಿಂದ ಸೇವೆಯನ್ನು ಮಾಡಿದವನು ಆಂಜನೇಯ. ಯುದ್ಧದಲ್ಲಿ ರಾವಣನ ಅಷ್ಟಘಂಟಾಶಕ್ತಿಯ ಪೆಟ್ಟಿನಿಂದ ಲಕ್ಷ್ಮಣನು ಉರುಳಿ ಬಿದ್ದಾಗ, ಲಕ್ಷ್ಮಣನನ್ನು ಕಳೆದುಕೊಂಡನೆಂದು ರಾಮನೂ ವಿಹ್ವಲನಾದಾಗ, ಸುಷೇಣನ ಸಲಹೆಯಂತೆ ಚಂದ್ರದ್ರೋಣ ಪರ್ವತಕ್ಕೆ ಹೋಗಿ ಸಂಜೀವಿನೀ ಮುಂತಾದ ಮೂಲಿಕೆಗಳನ್ನು ತಂದು ಲಕ್ಷ್ಮಣನ ಪ್ರಾಣಗಳನ್ನು ಕಾಪಾಡಿದವನು ಆಂಜನೇಯನೇ. ಶ್ರೀರಾಮನಿಗೆ ಇದಕ್ಕಿಂತ ದೊಡ್ಡ ಉಪಕಾರವನ್ನು ಬೇರೆ ಯಾರು ಮಾಡಲು ಸಾಧ್ಯ? ಆದ್ದರಿಂದಲೇ ಶ್ರೀರಾಮನು ಆಂಜನೇಯನಿಗೆ ಹೇಳುವ ಮಾತು–

**ಏಕೈಕಸ್ಯೋಪಕಾರಸ್ಯ ಸರ್ವಂ ದಾಸ್ಯಾಮಿ ತೇ ಹರೇ।
ಶೇಷಾಣಾಮುಪಕಾರಾಣಾಂ ಭವಾಮ ಋಣಿನೋ ವಯಮ್ ।**

ಆಂಜನೇಯ, ನೀನು ಮಾಡಿದ ಒಂದೊಂದು ಉಪಕಾರದ ಋಣವನ್ನು ತೀರಿಸಲು ನನ್ನ ಸರ್ವಸ್ವವನ್ನೂ ಕೊಡಬೇಕು. ಅಷ್ಟು ಕೊಟ್ಟರೂ ಮಿಕ್ಕ ನಿನ್ನ ಉಪಕಾರಗಳಿಗೆ ನಾನು ನಿನಗೆ ಋಣಿಯಾಗಿಯೇ ಇರುವೆನು.

ಇಂತಹ ಪರಮಭಕ್ತ ಹನುಮಂತನಿಗೆ ರಾಮನು ಕೊಟ್ಟ ಸ್ಥಾನ ಯಾವುದು?

'ಚತುರ್ಣಾಂ ಪುನರಸ್ಮಾಕಂ ಭ್ರಾತೃಣಾಂ ಪಂಚಮೋ ಭವಾನ್'

"ಹನುಮಂತ, ನಾವು (ರಾಮ, ಲಕ್ಷ್ಮಣ, ಭರತ, ಶತ್ರುಘ್ನ ಎಂಬ) ನಾಲ್ವರು ಸೋದರರಾಗಿದ್ದೆವು. ಈಗ ನೀನು ಐದನೆಯ ಸೋದರ".

ಶ್ರೀರಾಮನು ಹನುಮಂತನನ್ನು ತನ್ನ ಒಡಹುಟ್ಟಿದ ತಮ್ಮನೆಂದೇ ಭಾವಿಸಿದನು. ಭಗವಂತನಿಗೂ ಭಕ್ತನಿಗೂ ಇರುವ ಬಾಂಧವ್ಯ ಎಂತಹುದು ಎಂಬುದಕ್ಕೆ ಇದು ನಿದರ್ಶನ.

ಮಾಧ್ವಮತದಲ್ಲಿ ಹರಿ ಸರ್ವೋತ್ತಮ, ವಾಯು ಜೀವೋತ್ತಮ. ಹರಿಯು ಶ್ರೀರಾಮನಾಗಿ ಅವತರಿಸಿದಾಗ, ವಾಯು ಹನುಮಂತನಾಗಿ, ಹರಿಯು ಶ್ರೀಕೃಷ್ಣನಾಗಿ ಅವತರಿಸಿದಾಗ ವಾಯು ಭೀಮಸೇನನಾಗಿ, ಹರಿಯು ಬಾದರಾಯಣವ್ಯಾಸರಾಗಿ ಅವತರಿಸಿದಾಗ ವಾಯು ಮಧ್ವರಾಗಿ ಭೂಮಿಯಲ್ಲಿ ಜನಿಸಿ ಭಗವತ್ಕಾರ್ಯವನ್ನು ಸಾಧಿಸಿದರು ಎಂದು ಹೇಳಲಾಗಿದೆ.

**ಪ್ರಥಮೋ ಹನುಮಾನ್‌ನಾಮ ದ್ವಿತೀಯೋ ಭೀಮ ಏವ ಚ।
ಪೂರ್ಣಪ್ರಜ್ಞಸ್ತೃತೀಯಶ್ಚ ಭಗವತ್ಕಾರ್ಯಸಾಧಕಾ॥**

ಎಲ್ಲೆಲ್ಲಿ ರಾಮಾಯಣದ ಪಾರಾಯಣ ನಡೆಯುವುದೋ, ಎಲ್ಲೆಲ್ಲಿ ಶ್ರೀರಾಮನ ಗುಣಗಾನ ನಡೆಯುವುದೋ ಅಲ್ಲೆಲ್ಲ ಹನುಮಂತನು ತಲೆಯ ಮೇಲೆ ಅಂಜಲಿಬದ್ಧನಾಗಿ, ಕಣ್ಣುಗಳಲ್ಲಿ ಆನಂದಬಾಷ್ಪಗಳನ್ನು ಸುರಿಸುತ್ತಾ ನಿಂತಿರುವನಂತೆ.

**ಯತ್ರ ಯತ್ರ ರಘುನಾಥಕೀರ್ತನಂ
ತತ್ರತತ್ರ ಕೃತಮಸ್ತಕಾಂಜಲಿಮ್ ।
ಬಾಷ್ಪವಾರಿಪರಿಪೂರ್ಣಲೋಚನಂ
ಮಾರುತಿಂ ನಮತ ರಾಕ್ಷ ಸಾಂತಕಮ್॥
ಮನೋಜವಂ ಮಾರುತತುಲ್ಯವೇಗಂ
ಜಿತೇಂದ್ರಿಯಂ ಬುದ್ಧಿಮತಾಂ ವರಿಷ್ಠ
ಶ್ರೀರಾಮದೂತಂ ಶಿರಸಾ ನಮಾಮಿ॥**

ಕಳ್ಳತನ ಮಾಡಿ 20 ವಿದ್ಯಾರ್ಥಿಗಳ ಫೀಸ್ ಕಟ್ಟಿದ 'ಬ್ಯಾಡರಹಳ್ಳಿ ಭೂಪ'!

ಬೆಂಗಳೂರು, ಮೇ 20– ಬೆಂಗಳೂರು ಪೊಲೀಸರ ಪ್ರಮುಖ ಕಾರ್ಯಾಚರಣೆಯಲ್ಲಿ ಖತರ್ನಾಕ್ ಮನೆಗಳ್ಳರನ್ನು ಬಂಧಿಸಿದ್ದು, ಈ ಪೈಕಿ ಓರ್ವ ಕಳ್ಳ ತಾನು ಕದ್ದಿದ್ದ ಹಣದಲ್ಲಿ 20 ವಿದ್ಯಾರ್ಥಿಗಳ ಶಾಲಾ–ಕಾಲೇಜು ಫೀಸ್ ಕಟ್ಟಿದ್ದ ಅಚ್ಚರಿ ವಿಚಾರ ಬೆಳಕಿಗೆ ಬಂದಿದೆ.

ಕಳ್ಳತನ ಮಾಡಿದ್ದ ಹಣದಲ್ಲಿ 20 ಮಕ್ಕಳ ಶಾಲಾ, ಕಾಲೇಜು ಫೀಸ್ ಕಟ್ಟಿದ್ದ ಖತರ್ನಾಕ್ ಮನೆಗಳ್ಳರನ್ನು ಬ್ಯಾಡರಹಳ್ಳಿ ಪೊಲೀಸರು ಬಂಧಿಸಿದ್ದಾರೆ.



ಬಂಧಿತರನ್ನು ಬೇಗೂರು ನಿವಾಸಿ ಶಿವು ಅಲಿಯಾಸ್ ಶಿವರಪ್ಪನ್, ಆತನ ಸ್ನೇಹಿತರಾದ ಅನಿಲ್ ಅಲಿಯಾಸ್ ಜಗ್ಗ ಮತ್ತು ವಿವೇಕ್ ಎಂದು ಗುರುತಿಸಲಾಗಿದೆ.

ಈ ಮೂವರ ಪೈಕಿ ಶಿವು ಅಲಿಯಾಸ್ ಶಿವರಪ್ಪನ್ ಈ ಗ್ಯಾಂಗ್‌ನ ಮಾಸ್ಟರ್ ಮೈಂಡ್ ಆಗಿದ್ದು, ಹೆಂಡತಿ, ಮಕ್ಕಳಿಲ್ಲದ ಶಿವು ಆತ್ಮಹತ್ಯೆ ಮಾಡಿಕೊಳ್ಳಲು ಯೋಚಿಸುತ್ತಿದ್ದಾಗ ಏರಿಯಾದಲ್ಲಿ ಸ್ನೇಹಿತರು ಮಕ್ಕಳ ಸ್ಕೂಲ್ ಫೀಸ್ ಕಟ್ಟಲು ಪರದಾಡುತ್ತಿರುವುದನ್ನು ನೋಡಿದ್ದ. ಬಳಿಕ ಶಿವು ಬ್ಯಾಡರಹಳ್ಳಿ ಸೇರಿದಂತೆ ಹಲವೆಡೆ ಮನೆಗಳಿಗೆ ಕನ್ನ ಹಾಕಿದ್ದು, ಕದ್ದ ಚಿನ್ನಾಭರಣವನ್ನು ಸ್ನೇಹಿತರಾದ ಅನಿಲ್ @ ಜಗ್ಗ ಮತ್ತು ವಿವೇಕ್‌ನ ಸಹಾಯದಿಂದ ಮಾರಾಟ ಮಾಡುತ್ತಿದ್ದ. ಹೀಗೆ ಮಾರಾಟ ಮಾಡಿದ ಹಣವನ್ನು ತಂದು ವಿದ್ಯಾರ್ಥಿಗಳ ಶಾಲಾ–ಕಾಲೇಜು ಫೀಸ್ ಕಟ್ಟುತ್ತಿದ್ದ ಎನ್ನಲಾಗಿದೆ.

ಸ್ನೇಹಿತರಿಗೂ ನೆರವು: ಪೊಲೀಸ್ ಮೂಲಗಳ ಪ್ರಕಾರ ತಮಿಳುನಾಡಿನಲ್ಲಿ 22 ಲಕ್ಷಕ್ಕೆ ಚಿನ್ನ ಮಾರಾಟ ಮಾಡಿಸಿದ್ದ ಶಿವು ಬಂದ ಹಣದಲ್ಲಿ ವಿವೇಕ್‌ಗೆ 4 ಲಕ್ಷ, ಅನಿಲ್‌ಗೆ 4 ಲಕ್ಷ ರೂ. ಮೌಲ್ಯದ ಆಟೋ ಕೊಡಿಸಿದ್ದ. ಉಳಿದ 14 ಲಕ್ಷ ರೂ. ಹಣದಲ್ಲಿ ಏರಿಯಾದ 20 ಮಕ್ಕಳಿಗೆ ಶಾಲಾ ಹಾಗೂ ಕಾಲೇಜು ಫೀಸ್ ಕಟ್ಟಿದ್ದಾನೆ. ಮನೆಗಳ್ಳರ ಬೆನ್ನತ್ತಿದ್ದ ಬ್ಯಾಡರಹಳ್ಳಿ ಪೊಲೀಸರು ಮೂವರನ್ನು ಬಂಧಿಸಿದ್ದಾರೆ. ಶಿವು, ಅನಿಲ್ ಹಾಗೂ ವಿವೇಕ್‌ನನ್ನು ಬಂಧಿಸಿದ ಪೊಲೀಸರು 24 ಲಕ್ಷ ಮೌಲ್ಯದ 260 ಗ್ರಾಂ ಚಿನ್ನದ ಗಟ್ಟಿಯನ್ನು ಸೀಜ್ ಮಾಡಿದ್ದಾರೆ.

ಜೂನ್ 8ರಂದು ಶ್ರೀ ಸುತ್ತೂರು ಕ್ಷೇತ್ರದಲ್ಲಿ ಸಾಮೂಹಿಕ ವಿವಾಹ

ಸುತ್ತೂರು, ಮೇ 20– ಶ್ರೀ ಸುತ್ತೂರು ಕ್ಷೇತ್ರದಲ್ಲಿ ಆದಿಜಗದ್ಗುರುಗಳ ಜಾತ್ರಾ ಮಹೋತ್ಸವ ಸಂದರ್ಭದಲ್ಲಿ ಸಾಮೂಹಿಕ ವಿವಾಹಗಳನ್ನು ಏರ್ಪಡಿಸುತ್ತಿರುವುದರ ಜೊತೆಗೆ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ಕೃಪಾಶೀರ್ವಾದಗಳೊಂದಿಗೆ ಪ್ರತಿ ತಿಂಗಳು ಸಾಮೂಹಿಕ ವಿವಾಹಗಳನ್ನು ನಡೆಸುವ ಮೂಲಕ ಶ್ರೀಮಠವು ಜನಸಾಮಾನ್ಯರ ಕಲ್ಯಾಣ ಕಾರ್ಯಕ್ಕೆ ಮುಂದಾಗಿದೆ.

ಜೂನ್ 8ರಂದು ಮಾಸಿಕ ಸಾಮೂಹಿಕ ವಿವಾಹ ಕಾರ್ಯಕ್ರಮ ಏರ್ಪಡಿಸಲಾಗಿದೆ. ಈ ವಿವಾಹದಲ್ಲಿ ಭಾಗವಹಿಸುವ ವರನಿಗೆ 21 ವರ್ಷ, ವಧುವಿಗೆ 18 ವರ್ಷ ಪೂರ್ಣಗೊಂಡಿರಬೇಕು. ಅರ್ಜಿ ನಮೂನೆಯಲ್ಲಿ ವರ ಮತ್ತು ವಧುವಿನ ಭಾವಚಿತ್ರಗಳನ್ನು ಲಗತ್ತಿಸಿರಬೇಕು. ಜಾತಿ ದೃಢೀಕರಣ ಪತ್ರ ವಧುವರರ ವಯಸ್ಸಿನ ಬಗ್ಗೆ ಶಾಲೆಯಿಂದ ಪಡೆದ ದಾಖಲಾತಿ ಪತ್ರ ಪಡೆದ ದೃಢೀಕರಣ ಪತ್ರ ಲಗತ್ತಿಸಿರಬೇಕು. ಬಾಲ್ಯವಿವಾಹಕ್ಕೆ ಅವಕಾಶವಿರುವುದಿಲ್ಲ. ವಧುವಿಗೆ ಚಿನ್ನದ ಮಾಂಗಲ್ಯ, ಬೆಳ್ಳಿ ಕಾಲುಂಗುರ, ಸೀರೆ, ಕುಪ್ಪಸಗಳನ್ನು ಹಾಗೂ ವರನಿಗೆ ಪಂಚೆ, ವಲ್ಲಿ, ಷರ್ಟ್‌ಗಳನ್ನು ಉಚಿತವಾಗಿ ನೀಡಲಾಗುವುದು. ಆಸಕ್ತರು ಎಂಟು ದಿನಗಳ ಮುಂಚಿತವಾಗಿ ಆಡಳಿತಾಧಿಕಾರಿಗಳು, ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳು, ಸುತ್ತೂರು ಅವರನ್ನು ನೇರವಾಗಿ ಸಂಪರ್ಕಿಸಿ ಅಥವಾ ದೂರವಾಣಿ ಸಂಖ್ಯೆ 08221–232217, 232033, ಮೊ. 9741342222 ಸಂಪರ್ಕಿಸಿ, ಮಾಹಿತಿ ಪಡೆದು ನೋಂದಣಿ ಮಾಡಿಕೊಳ್ಳಬಹುದಾಗಿದೆ.

ಸಫಿಯಾ ತೌಕೀರ್‌ಗೆ 624 ಅಂಕ



ಮೈಸೂರು, ಮೇ 20– ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಮೈಸೂರಿನ ಹೋಲಿ ಮೌಂಟ್ ಪಬ್ಲಿಕ್ ಶಾಲೆಯ ವಿದ್ಯಾರ್ಥಿನಿ ಸಫಿಯಾ ತೌಕೀರ್ 624 ಅಂಕ ಗಳಿಸುವ ಮೂಲಕ ಅತ್ಯುತ್ತಮ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. ಈಕೆ ತೌಕೀರ್ ಅಹಮದ್ ಮತ್ತು ಸದಿಯಾ ಫಿರ್ದೋಸ್ ದಂಪತಿ ಪುತ್ರಿ.

ಮಳೆಯಿಂದ ಯಾವುದೇ ಹಾನಿ ಆಗದಂತೆ ಮುನ್ನೆಚ್ಚರಿಕೆ ವಹಿಸಿ

ಎಲ್ಲಾ ಇಲಾಖೆ ಅಧಿಕಾರಿಗಳಿಗೆ ಮೈಸೂರು ಜಿಲ್ಲಾಧಿಕಾರಿ ಸೂಚನೆ

ಮೈಸೂರು,ಮೇ20(ಆರ್‌ಕೆ)–ಮಾನ್ಸೂನ್ ಆರಂಭವಾಗಿದ್ದು, ಭಾರಿ ಮಳೆಯಾಗುವ ಮುನ್ಸೂಚನೆ ಇರುವುದರಿಂದ ಜಿಲ್ಲೆಯಲ್ಲಿ ಯಾವುದೇ ಹಾನಿಯಾಗದಂತೆ ಮುನ್ನೆಚ್ಚರಿಕಾ ಕ್ರಮ ವಹಿಸಿ ಎಂದು ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ಎಲ್ಲಾ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಮೈಸೂರಿನ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮಳೆ ಆರಂಭವಾಗಿರುವುದರಿಂದ ಸಾರ್ವಜನಿಕರ ಸುರಕ್ಷತೆಗೆ ಅಗತ್ಯ ಕ್ರಮ ವಹಿಸಿ, ಜನ–ಜಾನುವಾರು, ರೈತರ ಮನೆ, ಬೆಳೆಗೆ ಹಾನಿಯಾಗದಂತೆ ಎಚ್ಚರ ವಹಿಸಿ ಎಂದರು.

ವಾರದಲ್ಲಿ ವರದಿ ನೀಡಿ: ಭಾನುವಾರ ರಾತ್ರಿಯಿಂದ ಸೋಮವಾರ ಮುಂಜಾನೆವರೆಗೂ ಸುರಿದ ಧಾರಾಕಾರ ಮಳೆಯಿಂದಾಗಿ ಮೈಸೂರು ನಗರ ಹಾಗೂ ಜಿಲ್ಲೆಯಾದ್ಯಂತ ಅಲ್ಲಲ್ಲಿ ಮರ, ವಿದ್ಯುತ್ ಕಂಬಗಳು ಬಿದ್ದು ವಾಹನ, ಮನೆಗಳು ಜಖಂಗೊಂಡಿದ್ದು, ತಗ್ಗು ಪ್ರದೇಶಗಳ ಮನೆಗಳಿಗೆ ನೀರು ನುಗ್ಗಿರುವ ಬಗ್ಗೆ ವರದಿಯಾಗಿದೆ. ತಹಸೀಲ್ದಾರ್‌ಗಳು ತಮ್ಮ ಹಂತದಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಬೆಳೆ ಹಾನಿಯಾದರೆ, ಪರಿಶೀಲಿಸಿ ಒಂದು ವಾರದೊಳಗಾಗಿ ವರದಿ ನೀಡುವಂತೆಯೂ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.



ಮೈಸೂರು ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ಮಂಗಳವಾರ ತಮ್ಮ ಕಚೇರಿ ಸಭಾಂಗಣದಲ್ಲಿ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ ನಡೆಸಿದರು.

ವಿಪತ್ತು ನಿರ್ವಹಣಾ ನಿಧಿಯಿಂದ ಪರಿಹಾರ ನೀಡಲು ಅವಕಾಶವಿರುವುದರಿಂದ ಕೃಷಿ ಮತ್ತು ತೋಟಗಾರಿಕಾ ಅಧಿಕಾರಿಗಳು ಹಾನಿ ಬಗ್ಗೆ ಪರಿಶೀಲಿಸಿ ವರದಿ ನೀಡಿದಲ್ಲಿ ತಡಮಾಡದೇ ಪರಿಹಾರದ ಹಣ ಬಿಡುಗಡೆಗೆ ಅನುಕೂಲವಾಗಲಿದೆ. ಕಬಿನಿ ವ್ಯಾಪ್ತಿಯಲ್ಲಿ ಪ್ರವಾಹ ಸಾಧ್ಯತೆ ಇದೆ. ಕಳೆದ ವರ್ಷ ಎಲ್ಲೆಲ್ಲಿ ಪ್ರವಾಹ ಪೀಡಿತ ಪ್ರದೇಶ ಎಂದು ಗುರ್ತಿಸಲಾಗಿತ್ತೋ ಅಲ್ಲಿ ಹೆಚ್ಚು ಗಮನಹರಿಸಿ ಎಂದು ಸಲಹೆ ನೀಡಿದರು.

ನೀರು ನುಗ್ಗುವ ಸಾಧ್ಯತೆ: ತಿ.ನರಸೀಪುರ ತಾಲೂಕಿನ ಕೆಲ ಗ್ರಾಮಗಳಿಗೆ ನೀರು ನುಗ್ಗುವ ಸಾಧ್ಯತೆ ಇರುವುದರಿಂದ ಈ ಬಾರಿ ಪ್ರವಾಹ ಬಂದರೆ, ಜನರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಿ ಅಲ್ಲಿ ಗಂಜಿ ಕೇಂದ್ರ ತೆರೆದು ಅಗತ್ಯ ಸೌಲಭ್ಯ ನೀಡಬೇಕು. ಮಳೆ, ಗಾಳಿ, ಸಿಡಿಲಿನಿಂದ ವಿದ್ಯುತ್ ಕಂಬಗಳು ಉರುಳಿ ಬಿದ್ದು, ಟ್ರಾನ್ಸ್‌ಫಾರ್ಮರ್‌ಗಳು ಸುಟ್ಟು ಹೋಗುವ ಸಂಭವವಿದ್ದು, ವಿದ್ಯುತ್ ಪೂರೈಕೆಗೆ ಅಡಚಣೆಯಾಗುತ್ತದೆ. ತಕ್ಷಣ ರಿಪೇರಿ ಕಾರ್ಯ ಕೈಗೊಂಡು ಸಮಸ್ಯೆ ತಲೆದೋರದಂತೆ ನೋಡಿಕೊಳ್ಳಿ ಎಂದು ಲಕ್ಷ್ಮೀಕಾಂತ ರೆಡ್ಡಿ ಸೆಸ್ಕ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮುಳುಗಡೆ ಎಚ್ಚರಿಕೆ: ಹೆಚ್.ಡಿ.ಕೋಟೆ, ಸರಗೂರು ತಾಲೂಕಿನಲ್ಲಿ ನೆರೆ ಬಂದಾಗ ಕೆಲ ಸೇತುವೆಗಳು ಮುಳುಗಡೆಯಾಗುವ ಸಂಭವವಿದೆಯಾದ್ದರಿಂದ ತೆರವು ಕಾರ್ಯಾಚರಣೆಗೆ ಮೂಲ ಸೌಲಭ್ಯದೊಂದಿಗೆ ಸಜ್ಜಾಗಬೇಕು, ಹಾನಿಯಾದ ಕುಟುಂಬಗಳಿಗೆ 24 ಗಂಟೆಯೊಳಗಾಗಿ ಪರಿಹಾರದ ಹಣ ತಲುಪಿಸಿ ಎಂದು ತಹಸೀಲ್ದಾರ್‌ಗಳಿಗೆ ಜಿಲ್ಲಾಧಿಕಾರಿ ತಾಕೀತು ಮಾಡಿದ್ದಾರೆ.

ಒಣ ಮರಗಳ ತೆರವು: ಬೀಳುವಂತಿರುವ ಒಣಗಿದ ಮರಗಳ ರೆಂಬೆಗಳನ್ನು ತೆರವುಗೊಳಿಸಬೇಕು. ಮಳೆಗಾಲದಲ್ಲಿ ಸಾಂಕ್ರಾಮಿಕ ರೋಗಗಳು ಹರಡದಂತೆ ಆರೋಗ್ಯ ಇಲಾಖೆ ಅಧಿಕಾರಿಗಳು ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು. ಎಡಿಸಿ ಡಾ.ಪಿ.ಶಿವರಾಜ್, ಜಿಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್.ಯುಕೇಶ್‌ಕುಮಾರ್, ಮೈಸೂರು ಮಹಾನಗರಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸಿಫ್, ಡಿಸಿಪಿ ಎಂ.ಮುತ್ತುರಾಜ್, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಹೆಚ್.ಕೆ. ಕುಮಾರಸ್ವಾಮಿ ಸೇರಿದಂತೆ ಇತರ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No.114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರು ಮಿತ್ರ ಬುಧವಾರ 21 ಮೇ 2025

ಮದುವೆ ಶುಭ ಸಮಾರಂಭಗಳಿಗೆ
Upto 50% ರಿಯಾಯಿತಿ
ಕಾಂಚೀಪುರಂ ರೇಷ್ಮೆ ಸೀರೆಗಳು
ಮಾರಾಟ ಮತ್ತು
ಹಳೆ ಸೀರೆಗಳ ಎಕ್ಸ್‌ಚೇಂಜ್ ಆಫರ್
ಈ ಅವಕಾಶ 7 ದಿನಗಳು ಮಾತ್ರ
ಹೋಟೆಲ್ ಮಯೂರ ಹೊಯ್ಸಳ
ಜೆಎಲ್‌ಬಿ ರಸ್ತೆ, ಮೈಸೂರು
ಮೊ. : 9481820079

ರತ್ನ ಪ್ಯಾರ ಮೆಡಿಕಲ್ ಕಾಲೇಜು
ಕುವೆಂಪುನಗರ, ಮೈಸೂರು

ADMISSION OPEN

- Bachelor's in Medical Lab technology
- Bachelor's in cardiac care Technology, OT, Dialysis & X-Ray
- Diploma in Medical Lab Technology
- B.Com (Digital Marketing)
- Direct PUC (Science, Commerce & Arts)


SSLC/PUC Pass/Fail
9886654463

ಐವತ್ತನೇ ವರ್ಷದ ವಿವಾಹ — 50ನೇ ವರ್ಷದ ವಿವಾಹ ವಾರ್ಷಿಕೋತ್ಸವದ ಶುಭಾಶಯಗಳು



ಶ್ರೀಮತಿ ಶಾಂತಮ್ಮ ಮತ್ತು
ಶ್ರೀ ವಿ.ನಾಗರಾಜ್ (ಎಸ್.ಡಬ್ಲ್ಯೂ.ಆರ್)
ಶುಭಕೋರುವವರು: ಶ್ರೀಮತಿ ಶೋಭಾ, ಹರೀಶ್.ಎನ್ ಮತ್ತು ಸುನೀತಾ ರವಿದಾಸ್, ಮೊಮ್ಮಕ್ಕಳು ಹಾಗೂ ಕುಟುಂಬವರ್ಗದವರು.

Neminath Steels
Near Taluk Office, Nazarbad
+91 97420 06656
RIGHT WEIGHT, RIGHT CHOICE!



30ನೇ ವರ್ಷದ ಮದುವೆ ವಾರ್ಷಿಕೋತ್ಸವದ ಶುಭಾಶಯಗಳು




ಮಾದನಾಯಕ ಎಸ್ & ರತ್ನಮ್ಮ
ಜೆಸ್ಕಾಂ
ಶುಭಕೋರುವವರು: ಪ್ರವೀಣ್ ಎಚ್.ಎಂ.
ಅನಿತ ಎಚ್.ಎಂ & ಪ್ರಸನ್ನ, ಜೆಸ್ಕಾಂ
ಬಿ.ಎಂ. ವೆಂಕಟೇಶ್, ಜೆಸ್ಕಾಂ

ANNEXURE (E) | AFFIDAVIT

I, Fayaz Ahmed Khan S/o Chamarajaahmedalikhan Basheer Ahmed Khan (My father new name) and previously called Basheer Ahmed Khan (My father old name) Residing at # 12/227, K.P.Mohalla, Chamrajanagar Town/Dist 571313, Karntaka state have change my father name from Basheer Ahmed Khan to Chamarajaahmedalikhan Basheer Ahmed Khan before Roopashree, Advocate & Notary, Chamarajanagar, vide affidavit Dated : 09.05.2025

SD/- FAYAZ AHMED KHAN



ಮೈಸೂರು ಮಹಾನಗರ ಪಾಲಿಕೆ ಮಾಜಿ ಸದಸ್ಯರು,
ಅನಿಕೇತನ ಸೇವಾ ಟ್ರಸ್ಟ್‌ನ ಅಧ್ಯಕ್ಷರು
ಜನಸ್ನೇಹಿಗಳು, ಸರಳ ಸಜ್ಜನಿಕೆಯ
ವ್ಯಕ್ತಿತ್ವ ಉಳ್ಳವರು, ಆತ್ಮೀಯರಾದ

ಕೆ.ವಿ. ಮಲ್ಲೇಶ್

ಅವರಿಗೆ
ಹುಟ್ಟುಹಬ್ಬದ ಶುಭಾಶಯಗಳು



ಕೆ.ವಿ. ಶ್ರೀಧರ ಬಿ.ಕಾಂ.
ನಿರ್ದೇಶಕರು, ರಾಜ್ಯ ಒಕ್ಕಲಿಗರ ಸಂಘ
ಮಾಜಿ ಸದಸ್ಯರು, ಮೈಸೂರು ಮಹಾನಗರ ಪಾಲಿಕೆ

8105367007

13ನೇ ವರ್ಷದ ಚಿರಸ್ಮರಣೆ



ನನ್ನ ಪ್ರೀತಿಯ ಪತಿದೇವರಿಗೆ ನಿಮ್ಮ ಪ್ರೀತಿಯ ಅರ್ಧಾಂಗಿಯ ನೆನಪುಗಳ ಮೆಲುಕು ಹಾಕುವುದು ಸದಾ ನನ್ನ ಕರ್ತವ್ಯ. ನಿಮ್ಮ ನೆನಪು ಸೂರ್ಯ, ಚಂದ್ರ ಇರುವ ವರೆಗು ಚಿರಶಾಂತಿಯಾಗಿರ ಬೇಕೆಂದು ಪ್ರಾರ್ಥಿಸುವ ನಿಮ್ಮ ಧರ್ಮಪತ್ನಿ ಸರಸ್ವತಿ ಎಂ. ಮಕ್ಕಳು ಹಾಗೂ ಸ್ನೇಹಿತರು

ವಿ.ಮುನಿವೆಂಕಟಪ್ಪ
ಕೆ.ಆರ್.ಎಸ್. ನಿವೃತ್ತ ವಿಶೇಷ ಅಧ್ಯಾಪಕರು, ಮೈಸೂರು
ಜನನ: 03.02.1939 ಮರಣ: 21.05.2012

MSIL **ಮೈಸೂರ್ ಸೇಲ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್**
(ಯೋಜನಾ ವಿಭಾಗ)
ಎಂಎಸ್‌ಐಎಲ್ ಹೌಸ್, ನಂ. 36, ಕನ್ನಿಂಗ್‌ಹ್ಯಾಂ ರಸ್ತೆ,
ಬೆಂಗಳೂರು - 560 052. ದೂರವಾಣಿ: 080-22264021-25
ಸಂ. ಎಂಎಸ್‌ಐಎಲ್/ಪಿಆರ್‌ಜೆ/042/2025-26 ದಿನಾಂಕ: 19.05.2025

ಇ-ಟೆಂಡರ್ ಪ್ರಕಟಣೆ
(ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ)

ಮೈಸೂರ್ ಸೇಲ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್, ಕರ್ನಾಟಕ ಸರ್ಕಾರದ ಒಂದು ಅಧೀನ ಸಂಸ್ಥೆಯಾಗಿದ್ದು, ಹೆಬ್ಬಾಳ ಕೈಗಾರಿಕಾ ಪ್ರದೇಶ, ಮೈಸೂರು ಇಲ್ಲಿರುವ ಕಂಪನಿಯ ಸ್ವತ್ತು ಸುಮಾರು 17179 ಚ.ಅಡಿ ಅಳತೆಯುಳ್ಳ "ಪ್ಲಾಟ್ ಸಂ. 306, ಹೆಬ್ಬಾಳ ಕೈಗಾರಿಕ ಪ್ರದೇಶ, ಮೈಸೂರು" ಅನ್ನು ಗುತ್ತಿಗೆಗೆ/ಬಾಡಿಗೆಗೆ ನೀಡಲು ಬಾಡಿಗೆದಾರರನ್ನು ಆಯ್ಕೆ ಮಾಡಲು ಇ-ಪ್ರೊಕ್ಯೂರ್‌ಮೆಂಟ್ ವೇದಿಕೆ ಮೂಲಕ ಇ-ಟೆಂಡರ್‌ಗಳನ್ನು ಆಹ್ವಾನಿಸಿದೆ. ದಸ್ತಾವೇಜುಗಳು ವೆಬ್‌ಸೈಟ್ https://kppp.karnataka.gov.in ಇಲ್ಲಿ ದಿನಾಂಕ 21.05.2025 ರಿಂದ 06.06.2025 ರಂದು ಮಧ್ಯಾಹ್ನ 3.30 ಗಂಟೆಯವರೆಗೆ ದೊರೆಯುವುವು. ಬಿಡ್ ಪೂರ್ವ ಸಭೆ ದಿನಾಂಕ: 28.05.2025 ಮಧ್ಯಾಹ್ನ 3.30 ಗಂಟೆಗೆ.

ಸಹಿ/- ಪ್ರಧಾನ ವ್ಯವಸ್ಥಾಪಕರು(ಯೋಜನೆಗಳು), ಯೋಜನಾ ವಿಭಾಗ.

REQUIRED
> F & B MANAGER
> BARMAN
> NIGHT ADMIN
> ROOM SERVICE BOYS

for Tusk Restobar, J.P.Nagar
with experience in hotel industry
Salary based on Industry Standards.
Contact: 094483 97462
Mail ID: tusk.restobar@gmail.com

ಮೂರನೇ ವರ್ಷದ ಪುಣ್ಯಸ್ಮರಣೆ



ದಿ|| ಶ್ರೀ ಪಾಪೇಗೌಡ
ನೀವು ನಮ್ಮನ್ನಗಲಿ ಮೂರು ವರುಷ ಕಳೆದರು. ನಿಮ್ಮ ಸವಿನೆನಪು ನಮ್ಮ ಮನದಲ್ಲಿ ಇನ್ನೂ ಹಸಿರಾಗಿದೆ
ದುಃಖತಪ್ತರು: ಪತ್ನಿ ಲಕ್ಷ್ಮಮ್ಮ,
ಮಕ್ಕಳಾದ: ವಕೀಲ ಡಿ.ಪಿ.ಮಹದೇವ್, ಡಿ.ಪಿ.ಕುನ್ನೇಗೌಡ,
ಧರ್ಮಾಪುರ, ಹುಣಸೂರು ತಾಲ್ಲೂಕು.

WANTED
For a LUXURY RESORT
OM & Digital Mkt 01 (M/F)
Reservation & FO Associate 04 (M/F), F&B Captain 03,
South & North Indian Cooks,
Stewards 05, H/K Boys 04.
nijagunaresorts@gmail.com
Mob: 9902984674, 9902984872



NOT GETTING YOUR
STAR OF MYSORE & ಮೈಸೂರು ಮಿತ್ರ
Call: 98452-96447 / 99003-82840

46 ಮೈಸೂರು ಮಿತ್ರ
ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

NISARGA PARADISE
DEVELOPED PLOTS
FULLY DEVELOPED
READY FOR REGISTRATION
HURRY!! FEW LEFT



HYLAND PROPERTIES
Hunsur-Mysore Highway, Mysuru
BOOKING OPENS
30X40 I 30X50
40X60
BANK LOAN AVAILABLE
DTCP APPROVED
LIC HFL | HDFC BANK | ICICI Bank
95133 01854
88840 71010

4ನೇ ವರ್ಷದ ಪುಣ್ಯಸ್ಮರಣೆ



ಯ|| ಚಿಕ್ಕಹನುಮಯ್ಯನವರು
ನೀವು ನಮ್ಮನ್ನಗಲಿ ಇಂದಿಗೆ 4 ವರ್ಷಗಳಾದರೂ ನಿಮ್ಮ ನೆನಪು ಸದಾ ನಮ್ಮ ಮನದಲ್ಲಿದೆ
ದುಃಖತಪ್ತರು: ಭಾಗ್ಯಮ್ಮ ಮತ್ತು ಕುಟುಂಬವರ್ಗ,
ಬಂಬೂ ಬಜಾರ್, ಮೈಸೂರು

WANTED
Reputed Air conditioning and Engineering Company is looking to hire following candidates immediately.

1. HVAC Service Managers - 5+Year Experience
2. Site Engineer - BE Mec/ Ele. 5+Year Experience
3. AC Technician - 5+Year Experience
4. Helpers - ITI / Diploma / PUC
5. Goods Auto driver - 3+Year Experience
6. Business Development Executive - 5+Year Exp.
7. HVAC Sales Executive - BBM / MBA/ BE Mech 3+Year Experience

Apply or post your resume to :
hrbreezairindia@gmail.com
For more information contact : +91 84314 35008

ಉಚಿತ ತರಬೇತಿ ಕಾರ್ಯಕ್ರಮಗಳು

BRBNMPL
ಭಾರತೀಯ ರಿಸರ್ವ್ ಬ್ಯಾಂಕ್ ನೋಟ್ ಮುದ್ರಣ್ ಪ್ರೈವೇಟ್ ಲಿ., ಮೈಸೂರು
ಕೇಂದ್ರೀಯ ಪೆಟ್ರೋಕೆಮಿಕಲ್ಸ್ ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಸಂಸ್ಥೆ (CIPET), ಮೈಸೂರು
ಸಿಪೆಟ CIPET

ಭಾರತೀಯ ರಿಸರ್ವ್ ಬ್ಯಾಂಕ್ ನೋಟ್ ಮುದ್ರಣ್ ಪ್ರೈವೇಟ್ ಲಿಮಿಟೆಡ್, ಮೈಸೂರು 2024-25ನೇ ಸಾಲಿನಲ್ಲಿ ತನ್ನ ಕಾರ್ಪೋರೇಟ್ ಸಾಮಾಜಿಕ ಜವಾಬ್ದಾರಿಯಡಿ ಮೈಸೂರಿನಲ್ಲಿರುವ ಕೇಂದ್ರೀಯ ಪೆಟ್ರೋಕೆಮಿಕಲ್ಸ್ ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಸಂಸ್ಥೆ, (ಸಿಪೆಟ್) – ಸೆಂಟರ್ ಫಾರ್ ಸ್ಕಿಲ್ಲಿಂಗ್ ಅಂಡ್ ಟೆಕ್ನಿಕಲ್ ಸಪೋರ್ಟ್ ಮೂಲಕ 03 ತಿಂಗಳ ಉಚಿತ ಕೌಶಲ್ಯ ತರಬೇತಿ ಕಾರ್ಯಕ್ರಮವನ್ನು ಕರ್ನಾಟಕ ರಾಜ್ಯದ ಎಲ್ಲಾ ವರ್ಗದ 150 ನಿರುದ್ಯೋಗಿ ಯುವಕ ಯುವತಿಯರಿಗೆ ಉಚಿತ ಊಟ ಹಾಗೂ ವಸತಿಗಳೊಂದಿಗೆ ಆಯೋಜಿಸಿದೆ. ತರಬೇತಿ ಹಾಗೂ ಅರ್ಹತೆಗಳ ವಿವರ ಈ ಕೆಳಗಿನಂತಿದೆ

ತರಬೇತಿಯ ಹೆಸರು	ಮಂಜೂರಾದ ಸಂಖ್ಯೆ	ಅವಧಿ	ವಿದ್ಯಾರ್ಹತೆ
ಸಹಾಯಕ ಯಂತ್ರ ನಿರ್ವಾಹಕರು ಪ್ಲಾಸ್ಟಿಕ್ಸ್ ಪ್ರೋಸೆಸಿಂಗ್ ಮೆಷಿನ್ (MoA-PP)	75	03 ತಿಂಗಳು	8ನೇ ತರಗತಿ (ಪಾಸ್) ಮೇಲ್ಪಟ್ಟು
ಸಹಾಯಕ ಯಂತ್ರ ನಿರ್ವಾಹಕರು ಇಂಜೆಕ್ಷನ್ ಮೌಲ್ಡಿಂಗ್ ಮೆಷಿನ್ (MoA-IM)	31		

ವಯೋಮಿತಿ: General / EWS: 18-30, OBC: 18-33, SC/ST: 18-35 ವರ್ಷಗಳು

ಕಾರ್ಯಕ್ರಮದ ವಿಶೇಷತೆಗಳು:


- ತಿಂಗಳಿಗೆ 1000/- ರೂಪಾಯಿ ಶಿಷ್ಯವೇತನ ನೀಡಲಾಗುವುದು
- ಉದ್ಯೋಗಾವಕಾಶ ಕಲ್ಪಿಸಿ ಕೊಡಲಾಗುವುದು
- Uniform, Shoes, Course Materials ಮತ್ತು Training Kit ಗಳನ್ನೂ ಉಚಿತವಾಗಿ ನೀಡಲಾಗುವುದು
- ತರಬೇತಿಯನ್ನು, ರಾಷ್ಟ್ರೀಯ ಕೌಶಲ್ಯಾಭಿವೃದ್ಧಿ ಅನುಸಾರ ನೀಡಲಿದ್ದು NCVET-Skill India Training Certificate ನೀಡಲಾಗುವುದು

ಆಯ್ಕೆಯ ವಿಧಾನ: ಇಚ್ಛೆಯುಳ್ಳ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಗೆ ಸಂಬಂಧಿಸಿದ ದಾಖಲೆ, ಆಧಾರ್ ಪ್ರತಿ, ಜಾತಿ ಹಾಗೂ ಆದಾಯ ಪ್ರಮಾಣ ಪತ್ರ (ಮೂಲ ಮತ್ತು ಪ್ರತಿ) ಮತ್ತು 06 ಕಲರ್ ಫೋಟೊಗಳೊಂದಿಗೆ ನೇರ ದಾಖಲಾತಿಗೆ ದಿನಾಂಕ 19-05-2025 ರಿಂದ ಕೆಳಕಂಡ ವಿಳಾಸಕ್ಕೆ ಹಾಜರಾಗಲು ಸೂಚಿಸಿದೆ

ತರಬೇತಿ ಸಂಸ್ಥೆಯ ವಿಳಾಸ :
ಕೇಂದ್ರೀಯ ಪೆಟ್ರೋಕೆಮಿಕಲ್ಸ್ ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಸಂಸ್ಥೆ,
437/ಎ, ಹೆಬ್ಬಾಳು ಕೈಗಾರಿಕಾ ಪ್ರದೇಶ, ಮೈಸೂರು - 570 016

ಹೆಚ್ಚಿನ ವಿವರಗಳಿಗೆ ಸಂಪರ್ಕಿಸಿ:
93807 56024, 98865 18246, 97417 19645

ವೈಕುಂಠ ಸಮಾರಾಧನೆ ಆಹ್ವಾನ ಪತ್ರಿಕೆ



ಶ್ರೀಯುತ ಡಿ.ಈ. ರಾಮಲಿಂಗೇಗೌಡ
ನಿವೃತ್ತ ಶಾಲಾ ತನಿಖಾಧಿಕಾರಿಗಳು
ಸಂಸ್ಥಾಪಕ ಅಧ್ಯಕ್ಷರು, ಮೈಸೂರು ಚಾಮರಾಜನಗರ ಜಿಲ್ಲಾ ಶಿಕ್ಷಕರ ಗೃಹ ನಿರ್ಮಾಣ ಸಂಘ.
ಜನನ : 14-04-1939 ನಿಧನ : 10-05-2025

ಶ್ರೀಮತಿ ಸಾವಿತ್ರಮ್ಮ
ನಂ. 129, 2ನೇ ಮೇನ್, ಕುರುಬಗೇರಿ, ಲಷ್ಕರ್‌ಮೊಹಲ್ಲಾ, ಮೈಸೂರು.
ಹಾಲಿವಾಸ ನಂ. 01, ಬಸವೇಶ್ವರ ಬ್ಲಾಕ್, ಸಾ.ರಾ. ನಿಲಯ, ಟೀಚರ್ಸ್ ಲೇಔಟ್, ಯರಗನಹಳ್ಳಿ, ಮೈಸೂರು.
ಇವರು ಮಾಡುವ ವಿಜ್ಞಾಪನೆಗಳು

ದಿನಾಂಕ 10-05-2025 ಶನಿವಾರದಂದು ನನ್ನ ಪೂಜ್ಯ ಪತಿಯವರಾದ **ಶ್ರೀಯುತ ಡಿ.ಈ. ರಾಮಲಿಂಗೇಗೌಡ ರವರು** ದೈವಾಧೀನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ತತ್ಸಂಬಂಧವಾಗಿ ವೈಕುಂಠ ಸಮಾರಾಧನೆ ಕಾರ್ಯವನ್ನು ಏರ್ಪಡಿಸಿರುವುದರಿಂದ ತಾವುಗಳು ಸಕಾಲಕ್ಕೆ ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿ.

ದಿನಾಂಕ 21-05-2025 ಬುಧವಾರ
ಪೂಜೆ : ಬೆಳಗ್ಗೆ 11-30 ಗಂಟೆಗೆ ಭೋಜನ : ಮಧ್ಯಾಹ್ನ 1-00 ಗಂಟೆಗೆ
ಸ್ಥಳ : ಲೋಕಾಭಿರಾಮ ಶ್ರೀರಾಮ ಮಂದಿರ
ಡಿ. ದೇವರಾಜ ಅರಸು ರಸ್ತೆ, ಬಿಗ್‌ಬಾಸ್ ಹಿಂಭಾಗ, ಮೈಸೂರು.

ಇಂತಿ ದುಃಖತಪ್ತರು :
ಮೃತರ ಪತ್ನಿ **ಶ್ರೀಮತಿ ಸಾವಿತ್ರಮ್ಮ** ಮತ್ತು ಮಕ್ಕಳಾದ
ಶ್ರೀ ಆರ್. ಸೋಮಣ್ಣ
ನಿರ್ದೇಶಕರು, ದಿ. ಮೈಸೂರು ಕೋ-ಆಪರೇಟಿವ್ ಬ್ಯಾಂಕ್, ಗಾಂಧಿವೃತ್ತ, ಮೈಸೂರು.
ಶ್ರೀ ಡಿ.ಆರ್. ಸದಾಶಿವ, ಶ್ರೀ ಡಿ.ಆರ್. ಗಿರೀಶ್
ಸೊಸೆಯಂದಿರು, ಮೊಮ್ಮಕ್ಕಳು, ಕುಟುಂಬವರ್ಗದವರು ಹಾಗೂ ಬಂಧು-ಮಿತ್ರರು
ಮೊ : 9242857865


ರಾಜಗೋಪುರ ನಿರ್ಮಾಣಕ್ಕೆ ಗುದ್ದಲಿಪೂಜೆ



ಮೈಸೂರಿನ ಗೋಕುಲಂನಲ್ಲಿರುವ ಶ್ರೀಕೃಷ್ಣ ದೇವಸ್ಥಾನದ ರಾಜಗೋಪುರ ನಿರ್ಮಾಣಕ್ಕೆ ಮಂಗಳೂರು ಗಣೇಶ್ ಬೀಡಿ ವರ್ಕ್ಸ್ ಮ್ಯಾನೇಜಿಂಗ್ ಟ್ರಸ್ಟಿ ಡಾ.ಎಂ. ಜಗನ್ನಾಥ್ ಶೆಣೈ ಹಾಗೂ ಶ್ರೀಕೃಷ್ಣ ಸೇವಾ ಸಮಿತಿ ಟ್ರಸ್ಟ್ ಶ್ರೀ ಕೃಷ್ಣಗಾನ ಸಭಾಧ್ಯಕ್ಷ ಬಿ.ಎಸ್. ಶ್ರೀಧರ್‌ರಾಜೇ ಅರಸ್, ಪಾಲಿಕೆ ನಿಕಟಪೂರ್ವ ಸದಸ್ಯ ಎಸ್‌ಬಿಎಂ ಮಂಜು, ಆದಿತ್ಯ ಆಸ್ಪತ್ರೆ ಮುಖ್ಯಸ್ಥ ಡಾ. ಎನ್.ಚಂದ್ರಶೇಖರ್ ಗುದ್ದಲಿಪೂಜೆ ನೆರವೇರಿಸಿದರು. ಈ ವೇಳೆ ದೇವಸ್ಥಾನದ ಕಾರ್ಯದರ್ಶಿ ಭಾರತಿ ಅರಸ್, ಖಜಾಂಚಿ ರಜಿನಿ ಕೌಶಿಕ್, ಟ್ರಸ್ಟಿಗಳಾದ ಬಾಲಾಜಿ, ಅನಿತಾ, ಕಂಟ್ರಾಕ್ಟರ್ ಮಹೇಶ್ ಅಪ್ರಮೇಯ ಇನ್ನಿತರರು ಉಪಸ್ಥಿತರಿದ್ದರು

ನಾಳೆ ರಾಜ್ಯದ ಐದು ರೈಲು ನಿಲ್ದಾಣ ಸೇರಿ 103 'ಅಮೃತ್ ನಿಲ್ದಾಣ' ಉದ್ಘಾಟನೆ


ಬೆಂಗಳೂರು, ಮೇ 20– ಕರ್ನಾಟಕದ ಐದು ರೈಲು ನಿಲ್ದಾಣಗಳು ಸೇರಿದಂತೆ ದೇಶಾದ್ಯಂತ 103 'ಅಮೃತ್ ನಿಲ್ದಾಣ'ಗಳನ್ನು ಪ್ರಧಾನಿ ನರೇಂದ್ರ ಮೋದಿ ಅವರು ಮೇ 22 ರಂದು ರಾಜಸ್ಥಾನದ ಬಿಕಾನೇರ್ ನಿಂದ ವರ್ಚುವಲ್ ಮೂಲಕ ಉದ್ಘಾಟಿಸಲಿದ್ದಾರೆ.



ನರೇಂದ್ರ ಮೋದಿ

ಅಧಿಕೃತ ಹೇಳಿಕೆಯ ಪ್ರಕಾರ, ಕೊಪ್ಪಳ ಜಿಲ್ಲೆಯ ಮುನಿರಾಬಾದ್, ಬಾಗಲಕೋಟೆ, ಗದಗ, ಬೆಳಗಾವಿ ಜಿಲ್ಲೆಯ ಗೋಕಾಕ್ ರಸ್ತೆ ಮತ್ತು ಧಾರವಾಡ ರೈಲು ನಿಲ್ದಾಣಗಳನ್ನು ಅಮೃತ್ ಭಾರತ್ ನಿಲ್ದಾಣ ಯೋಜನೆ(ಎಬಿಎಸ್‌ಎಸ್) ಅಡಿಯಲ್ಲಿ ಅಭಿವೃದ್ಧಿ ಪಡಿಸಲಾಗಿದ್ದು, ಈ ಐದು ನಿಲ್ದಾಣಗಳನ್ನು ಪ್ರಧಾನಿ ಮೋದಿ ಗುರುವಾರ ಲೋಕಾರ್ಪಣೆಗೊಳಿಸಲಿದ್ದಾರೆ. 18 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶದ 86 ಜಿಲ್ಲೆಗಳಲ್ಲಿ 103 ಅಮೃತ್ ನಿಲ್ದಾಣಗಳನ್ನು 1,100 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ. 1,300ಕ್ಕೂ ಹೆಚ್ಚು ನಿಲ್ದಾಣಗಳನ್ನು ಆಧುನಿಕ ಸೌಲಭ್ಯಗಳೊಂದಿಗೆ ಪುನರಾಭಿವೃದ್ಧಿ ಮಾಡಲಾಗುತ್ತಿದೆ. ಪ್ರಾದೇಶಿಕ ವಾಸ್ತುಶಿಲ್ಪವನ್ನು ಪ್ರತಿಬಿಂಬಿಸಲು ಮತ್ತು ಎಬಿಎಸ್‌ಎಸ್ ಅಡಿಯಲ್ಲಿ ಪ್ರಯಾಣಿಕರ ಸೌಲಭ್ಯಗಳನ್ನು ಹೆಚ್ಚಿಸಲಾಗಿದ್ದು, ತಡರಾತ್ರಿ ರೈಲು ಪ್ರಯಾಣ ಇದ್ದರೆ ಪ್ರಯಾಣಿಕರು ನಿಲ್ದಾಣದಲ್ಲಿಯೇ ತಂಗಲು ವ್ಯವಸ್ಥೆ ಕಲ್ಪಿಸಲಾಗಿದೆ.

ಸರ್ಕಾರಕ್ಕೆ ಎರಡು ವರ್ಷದ ಸಂಭ್ರಮ



ರಾಜ್ಯ ಕಾಂಗ್ರೆಸ್ ಸರ್ಕಾರ ಯಶಸ್ವಿಯಾಗಿ 2 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಮೈಸೂರು ಅಗ್ರಹಾರದ 101 ಗಣಪತಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಲಾಯಿತು. ಈ ವೇಳೆ ಕೆಪಿಸಿಸಿ ಸದಸ್ಯ ನಜರ್‌ಬಾದ್ ನಟರಾಜ್, ಕೆ.ಆರ್.ಬ್ಯಾಂಕ್ ಅಧ್ಯಕ್ಷ ಬಸವರಾಜ ಬಸಪ್ಪ, ಜಿ.ರಾಘವೇಂದ್ರ, ರಾಜೇಶ್ ಪಳನಿ, ರಾಜೇಶ್, ರವಿಚಂದ್ರ, ಲೋಕೇಶ್, ಕೃಷ್ಣಪ್ಪ, ಮೋಹನ್‌ಕುಮಾರ್, ಪಾಂಡು, ಫ್ರಾನ್ಸಿಸ್, ನಿತಿನ್‌ಕುಮಾರ್ ಉಪಸ್ಥಿತರಿದ್ದರು.

ಮಳೆರಾಯನ ಆರ್ಭಟ; ಮೈಸೂರು ಪಾಲಿಕೆ ಮುನ್ನೆಚ್ಚರಿಕೆ

● ಮಳೆ ನೀರು ಚರಂಡಿಗಳಲ್ಲಿ ಹೂಳೆತ್ತುವ ಕಾರ್ಯ ಬಹುತೇಕ ಪೂರ್ಣ ● ಬಡಾವಣೆಗಳಲ್ಲಿರುವ ಚರಂಡಿಗಳ ಸ್ವಚ್ಛತೆಗೂ ಕ್ರಮ ● ಮೈಸೂರು ಮಹಾನಗರ ಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸಿಫ್ ಮಾಹಿತಿ

ಮೈಸೂರು,ಮೇ 20(ಪಿಎಂ)– ನಗರದಲ್ಲಿ ಮಳೆ ಅನಾಹುತಗಳ ತಡೆಗೆ ಹಾಗೂ ಮಳೆಯಿಂದ ಎದುರಾಗುವ ಸಮಸ್ಯೆಗಳ ನಿವಾರಣೆಗೆ ಮೈಸೂರು ಮಹಾನಗರ ಪಾಲಿಕೆಯು ಪೂರ್ವ ಸಿದ್ಧತೆ ಮಾಡಿಕೊಂಡಿದೆ ಮಳೆ ನೀರು ಚರಂಡಿಗಳಲ್ಲಿ ಹೂಳೆತ್ತುವ ಹಾಗೂ ಗಿಡಗಂಟಿ ತೆರವುಗೊಳಿಸುವ ಕಾರ್ಯಾಚರಣೆ ಬಹುತೇಕ ಪೂರ್ಣಗೊಳಿಸಿದೆ.

ಅಲ್ಲದೆ, ಬಡಾವಣೆಗಳಲ್ಲಿರುವ ಮಳೆ ನೀರು ಚರಂಡಿಗಳ ಸ್ವಚ್ಛತೆ, ಅಪಾಯಕಾರಿ ಸ್ಥಿತಿಯಲ್ಲಿರುವ ಮರಗಳ ಕೊಂಬೆ ತೆರವಿಗೂ ಪಾಲಿಕೆ ಯೋಜನೆ ರೂಪಿಸಿದೆ. ಮಳೆ ವೇಳೆ ಎಲೆಕ್ಟ್ರಿಕಲ್ ಲೈನ್‌ಗೆ ಹಾನಿಯಾದರೆ ಕ್ರಮ ವಹಿಸಲು ಹಾಗೂ ಮಳೆ ಗಾಳಿ ಹಿನ್ನೆಲೆಯಲ್ಲಿ ನೆಲಕ್ಕುರುಳುವ ಮರಗಳು ಹಾಗೂ ಕೊಂಬೆಗಳ ತೆರವು ಕಾರ್ಯಾಚರಣೆಗೂ ತಂಡಗಳನ್ನು ರಚಿಸಿ ಜವಾಬ್ದಾರಿ ನೀಡಲಾಗಿದೆ.



ಮಳೆ ಗಾಳಿಗೆ ಬಿದ್ದ ಮರ ತೆರವು ಕಾರ್ಯಾಚರಣೆಯಲ್ಲಿ ನಿರತರಾಗಿರುವ ಪಾಲಿಕೆ ಅಭಯ ಸಿಬ್ಬಂದಿ (ಸಂಗ್ರಹ ಚಿತ್ರ)

ಈ ಸಂಬಂಧ 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಮೈಸೂರು ಮಹಾನಗರ ಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸಿಫ್, ಮಳೆಯಿಂದ ಎದುರಾಗುವ ಸಮಸ್ಯೆಗಳ ನಿವಾರಣೆಗೆ ಪಾಲಿಕೆ ಪೂರ್ವ ಸಿದ್ಧತೆ ಮಾಡಿಕೊಂಡಿದೆ. ಫೆಬ್ರವರಿಯಿಂದಲೇ ಮಳೆ ನೀರು ಚರಂಡಿ (ರಾಜಕಾಲುವೆ)ಗಳಲ್ಲಿ ಹೂಳು ಹಾಗೂ ಗಿಡಗಂಟಿ ತೆರವಿಗೆ ಕ್ರಮ ಕೈಗೊಳ್ಳಲಾಗಿದೆ. ಈ ತೆರವು ಕಾರ್ಯಾಚರಣೆ ಶೇ.90ರಷ್ಟು ಪೂರ್ಣಗೊಂಡಿದ್ದು, ಕೇವಲ ಶೇ.10ರಷ್ಟು ಮಾತ್ರ ಬಾಕಿ ಉಳಿದಿದೆ ಅದನ್ನೂ ಮುಂದಿನ 10 ದಿನಗಳಲ್ಲಿ ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದರು.

ಇದರ ಹೊರತಾಗಿ ಬಡಾವಣೆಗಳ ಜನವಸತಿ ಪ್ರದೇಶದಲ್ಲಿರುವ ಮಳೆ ನೀರಿನ ಸಣ್ಣ ಚರಂಡಿಗಳ ಸ್ವಚ್ಛತೆಗೆ 15 ದಿನಗಳಲ್ಲಿ ಕ್ರಮ ವಹಿಸಲಾಗುವುದು. ಎಲ್ಲಾ ವಾರ್ಡ್‌ಗಳಲ್ಲಿ ಮನೆಗಳ ಮುಂದಿರುವ ಮಳೆ ನೀರು ಚರಂಡಿಗಳಲ್ಲಿ ಹೂಳು ಹಾಗೂ ಕಸಕಡ್ಡಿಗಳ ತೆರವು ಮಾಡಲಾಗುವುದು. ಆ ಮೂಲಕ ಜನವಸತಿ ಪ್ರದೇಶದ ಮಳೆ ನೀರು ಚರಂಡಿಗಳಲ್ಲೂ ಮಳೆ ನೀರು ಸರಾಗವಾಗಿ ಹರಿದು ಹೋಗುವಂತೆ ಮಾಡುವ ಮೂಲಕ ಮಳೆ ನೀರು ನಿಲ್ಲದಂತೆ ಕ್ರಮ ವಹಿಸಲಾಗುವುದು ಎಂದರು.

ಅರಣ್ಯ ಇಲಾಖೆ ಮತ್ತು ಪೊಲೀಸ್ ಇಲಾಖೆ ಸಹಯೋಗದಲ್ಲಿ ನಗರದ ರಸ್ತೆಬದಿಯ ಮರಗಳಲ್ಲಿ ಅಪಾಯಕಾರಿ ಸ್ಥಿತಿಯಲ್ಲಿರುವ ಕೊಂಬೆಗಳ ತೆರವಿಗೆ ಕ್ರಮ ವಹಿಸಲಾಗುವುದು. ಯಾವುದೇ ಮರವನ್ನು ಬುಡಸಮೇತ ತೆರವು ಮಾಡುವ ಅಗತ್ಯವಿಲ್ಲ. ಜೀವಹಾನಿಯಾಗುವಂತಹ ಅಪಾಯ ಇದ್ದಲ್ಲಿ ಮಾತ್ರವೇ ಬುಡ ಸಮೇತ ತೆರವಿಗೆ ಕ್ರಮ ವಹಿಸಲಾಗುತ್ತದೆ. ಪರಿಸರಕ್ಕೆ ಪೂರಕವಾಗಿ ಸೂಕ್ತ ಕ್ರಮಗಳನ್ನು ಕೈಗೊಳ್ಳಲಿದ್ದೇವೆ. ಈಗಾಗಲೇ ತಿಂಗಳಿಂದ ಮರಗಳ ರಂಬೆ ಕೊಂಬೆ ತೆರವು ಕಾರ್ಯ ನಡೆಯುತ್ತಿದೆ. ಈ ತಿಂಗಳಲ್ಲಿ ಇದು ಹೆಚ್ಚಿನ ಪ್ರಮಾಣದಲ್ಲಿ ನಡೆಯಲಿದೆ ಎಂದು ತಿಳಿಸಿದರು.

ಮಳೆ ಕಾರಣ ರಾತ್ರಿ ವೇಳೆ ಎಲೆಕ್ಟ್ರಿಕಲ್ ಲೈನ್‌ಗೆ ಹಾನಿಯಾದಲ್ಲಿ ಸರಿಪಡಿಸಲು ತಂಡ ಸಹ ರಚಿಸಲಾಗಿದೆ ಈ ಮಳೆಗಾಲದಲ್ಲಿ ಹೆಚ್ಚು ಮಳೆಯಾಗುವ ಮುನ್ಸೂಚನೆ ಇರುವ ಕಾರಣ ನೆಲಕ್ಕುರುಳುವ ಮರ ಹಾಗೂ ರಂಬೆ ಕೊಂಬೆಗಳ ತೆರವು ಕಾರ್ಯಾಚರಣೆಗೆ ಪಾಲಿಕೆಯ ಅಭಯ ಹಾಗೂ ತೋಟಗಾರಿಕೆ ವಿಭಾಗದ ಸಿಬ್ಬಂದಿ ಜೊತೆಗೆ ಸಿವಿಲ್ ಇಂಜಿನಿಯರ್‌ಗಳನ್ನು ನಿಯೋಜಿಸಲಾಗಿದೆ. ಇದರಿಂದ ತ್ವರಿತಗತಿಯಲ್ಲಿ ಕ್ರಮ ವಹಿಸಲು ಸಾಧ್ಯವಾಗಲಿದೆ ಮಳೆಗಾಲದಲ್ಲಿ ಒಳಚರಂಡಿ ಉಕ್ಕಿ ಹರಿಯುವ ಸಾಧ್ಯತೆಗಳು ಇರುವ ಹಿನ್ನೆಲೆಯಲ್ಲಿ ಅವುಗಳ ಸೂಕ್ತ ನಿರ್ವಹಣೆ ಹಾಗೂ ಸಚ್ಛತೆಗೂ ಕ್ರಮ ವಹಿಸಲಾಗಿದೆ ಎಂದರು.

ಪಾಲಿಕೆಯಿಂದ ಆರೋಗ್ಯ ಜಾಗೃತಿ...

ಆರೋಗ್ಯ ಇಲಾಖೆ ಸಹಯೋಗದಲ್ಲಿ ಮಲೇರಿಯಾ ಮತ್ತು ಡೆಂಗ್ಯೂ ತಡೆಗೆ ಮುನ್ನೆಚ್ಚರಿಕೆ ಕ್ರಮವಾಗಿ ರಸ್ತೆ ಹಾಗೂ ಮನೆ ಆವರಣದಲ್ಲಿ ನೀರು ನಿಲ್ಲದಂತೆ ಜಾಗೃತಿ ಮೂಡಿಸಲಾಗುವುದು. ಈ ಸಂಬಂಧ ಪೌರಕಾರ್ಮಿಕರು ಕಸ ಸಂಗ್ರಹಕ್ಕೆ ಮನೆ ಮನೆ ಭೇಟಿ ಮಾಡುವಾಗ ನಾಗರಿಕರಿಗೆ ಅರಿವು ಮೂಡಿಸಲಿದ್ದಾರೆ. ಸೊಳ್ಳೆಗಳ ನಿಯಂತ್ರಣಕ್ಕೆ ಫಾಗಿಂಗ್ ಮಾಡಿಸಲಾಗುವುದು. ಈ ಸಂಬಂಧ ಪೂರ್ವ ಸಿದ್ಧತೆ ಮಾಡಿಕೊಳ್ಳಲಾಗಿದೆ. ಕಸ ಸಂಗ್ರಹಿಸುವ ವಾಹನಗಳಲ್ಲಿ ಮೈಕ್ ಸೌಲಭ್ಯವಿದ್ದು, ಅದನ್ನು ಬಳಸಿಕೊಂಡು ಮಳೆಗಾಲದಲ್ಲಿ ರೋಗ ರುಜಿನ ತಡೆಗಟ್ಟಲು ನಾಗರಿಕರು ವಹಿಸಬೇಕಾದ ಎಚ್ಚರಿಕೆ ಕ್ರಮಗಳ ಬಗ್ಗೆ ಮಾಹಿತಿ ರವಾನಿಸಲಾಗುವುದು.

–ಡಾ.ಎನ್.ಪಿ.ವೆಂಕಟೇಶ್,
ಆರೋಗ್ಯಾಧಿಕಾರಿಗಳು, ಮೈಸೂರು ಮಹಾನಗರ ಪಾಲಿಕೆ.

ಮರಗಳಿಗೆ ಮಾರಕವಾಗಿರುವ ಕಾಂಕ್ರೀಟ್, ಇಂಟರ್‌ಲಾಕ್ ಟೈಲ್ಸ್ ತೆರವುಗೊಳಿಸಿ

ವೃಕ್ಷಗಳ ಬುಡದಲ್ಲಿ ನೀರು ಇಂಗಲು ಅವಕಾಶ ಕಲ್ಪಿಸಲು ಕ್ರಮ ವಹಿಸುವಂತೆ ಅರಣ್ಯ ಇಲಾಖೆಯಿಂದ ಪಾಲಿಕೆಗೆ ಮಾಹಿತಿ



ಮೈಸೂರು,ಮೇ 20(ಪಿಎಂ)– ರಸ್ತೆಬದಿ ಮರಗಳಿಗೆ ಮಾರಕವಾಗುವ ರೀತಿಯಲ್ಲಿ ಅವುಗಳ ಬುಡದ ಸುತ್ತಲು ನೀರು ಇಂಗಲು ಅವಕಾಶವಿಲ್ಲದಂತೆ ಕಾಂಕ್ರೀಟ್ ಇಲ್ಲವೇ ಇಂಟರ್‌ಲಾಕ್ ಟೈಲ್ಸ್‌ನಿಂದ ಭರ್ತಿ ಮಾಡಿರುವ ಹಲವು ರಸ್ತೆಗಳನ್ನು ಗುರುತಿಸಿರುವ ಅರಣ್ಯ ಇಲಾಖೆ, ಇಂತಹ ನ್ಯೂನತೆ ಸರಿಪಡಿಸಿ ಮರಗಳ ಸಂರಕ್ಷಣೆಗೆ ಕ್ರಮ ವಹಿಸುವಂತೆ ಮೈಸೂರು ಮಹಾನಗರ ಪಾಲಿಕೆಗೆ ಮಾಹಿತಿ ನೀಡಿದೆ.

ಮರಗಳ ಬುಡದಲ್ಲಿ ನೀರು ನಿಲ್ಲಲು ಅಥವಾ ಇಂಗಲು ಅವಕಾಶವಾಗದಂತೆ ಫುಟ್‌ಪಾತ್ ನಿರ್ಮಿಸಿರುವ ಕುರಿತು ಹಲವು ವರ್ಷಗಳಿಂದ ಪ್ರಜ್ಞಾವಂತ ನಾಗರಿಕರು ಆಕ್ಷೇಪ ವ್ಯಕ್ತಪಡಿಸುತ್ತಾ ಬಂದಿದ್ದು, ಅಂತೆಯೇ 'ಮೈಸೂರು ಮಿತ್ರ' ಸಹ ಅನೇಕ ವರದಿಗಳ ಮೂಲಕ ಈ ಅವೈಜ್ಞಾನಿಕ ಕ್ರಮದ ಮೇಲೆ ಬೆಳಕು ಚೆಲ್ಲಿದೆ. ಇದೀಗ ಅರಣ್ಯ ಇಲಾಖೆ ಪರಿಶೀಲಿಸಿ ಮರಗಳ ಬುಡದಲ್ಲಿರುವ ಕಾಂಕ್ರೀಟ್ ಇಲ್ಲವೇ ಇಂಟರ್‌ಲಾಕ್ ಟೈಲ್ಸ್ ತೆರವು ಮಾಡಲು ಪಾಲಿಕೆಗೆ ಮಾಹಿತಿ ಒದಗಿಸಿದೆ.

ಈ ಸಂಬಂಧ ಪ್ರಕಟಣೆ ಮೂಲಕ ಮಾಹಿತಿ ನೀಡಿರುವ ಅರಣ್ಯ ಇಲಾಖೆಯ ಮೈಸೂರು ಪ್ರಾದೇಶಿಕ ವಿಭಾಗ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು, ಪಾಲಿಕೆ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗ, ಒಳಚರಂಡಿ ಹಾಗೂ ಇನ್ನಿತರೆ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿ ನಿರ್ವಹಣೆ ಸಂದರ್ಭದಲ್ಲಿ ಕೆಲವು ಕಡೆ ಮರಗಳ ಬೆಳವಣಿಗೆಗೆ ತೊಂದರೆಯಾಗುವಂತೆ ಕಾರ್ಯ ನಿರ್ವಹಿಸಿರುವುದು ಕಂಡುಬಂದಿದೆ.

ರಾಷ್ಟ್ರೀಯ ಹಸಿರು ನ್ಯಾಯಾಧೀಕರಣವು ಕೆಲ ಪ್ರಕರಣಗಳಲ್ಲಿ (Sahil Garg v/s State of Punjab & others) ಇಂತಹ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿ ವೇಳೆ ಮರಗಳ ಸಂರಕ್ಷಣೆ ಸಂಬಂಧ ನಿರ್ದೇಶನಗಳನ್ನು ನೀಡಿದೆ. ಅದರಂತೆ ಪಾಲಿಕೆ ವ್ಯಾಪ್ತಿಯಲ್ಲಿ ಈಗಾಗಲೇ ಕೈಗೊಂಡಿರುವ ಕಾಮಗಾರಿಗಳಿಂದ ಮರಗಳಿಗೆ ತೊಂದರೆಯಾಗಿರುವುದು ಅರಣ್ಯ ಇಲಾಖೆಯ ಪರಿಶೀಲನೆ ವೇಳೆ ಕಂಡುಬಂದಿದೆ. 8 ಕಡೆ ಮರಗಳ ಸುತ್ತ ಮಳೆ ನೀರು ಇಂಗಲು ಕನಿಷ್ಠ ಒಂದು ಮೀಟರ್ ಸ್ಥಳಾವಕಾಶ ನೀಡದೇ ಇರುವ ರಸ್ತೆಗಳನ್ನು ಗುರುತಿಸಲಾಗಿದೆ. ಈ ಬಗ್ಗೆ ಪಾಲಿಕೆ ಆಯುಕ್ತರಿಗೆ ಮಾಹಿತಿ ನೀಡಲಾಗಿದ್ದು, ಶೀಘ್ರದಲ್ಲಿಯೇ ಸದರಿ ನ್ಯೂನತೆಗಳನ್ನು ಸರಿಪಡಿಸಿ ಮರಗಳ ಸಂರಕ್ಷಣೆಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಪ್ರತಿಕ್ರಿಯಿಸಿದ್ದಾರೆ ಎಂದು ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೆಂಗಳೂರು–ನೀಲಗಿರಿ ಮುಖ್ಯ ರಸ್ತೆಯಲ್ಲಿ ಫೈವ್ ಲೈಟ್ ವೃತ್ತದಿಂದ ಫೌಂಟೇನ್ ವೃತ್ತದವರೆಗಿನ 1.60 ಕಿ.ಮೀ. ವ್ಯಾಪ್ತಿಯಲ್ಲಿರುವ ಮರಗಳ ಬುಡದಲ್ಲಿ ಕಾಂಕ್ರೀಟ್ ಇಲ್ಲವೇ ಇಂಟರ್‌ಲಾಕ್ ಹಾಕಿ ಮುಚ್ಚಿರುವುದನ್ನು ಅರಣ್ಯ ಇಲಾಖೆ ಗುರುತಿಸಿದೆ. ಅದೇ ರೀತಿಯಲ್ಲಿ ಸಯ್ಯಾಜಿ ರಾವ್ ರಸ್ತೆಯಲ್ಲಿ ಹೈವೇ ವೃತ್ತದಿಂದ ಕೆಆರ್ ಆಸ್ಪತ್ರೆ ವರೆಗೆ 3.09 ಕಿ.ಮೀ ವ್ಯಾಪ್ತಿಯಲ್ಲಿ (ಸರ್ಕಾರಿ ಆಯುರ್ವೇದ ಕಾಲೇಜು ವೃತ್ತ) ಸಹ ಇದೇ ರೀತಿ ಆಗಿರುವುದನ್ನು ಗುರುತಿಸಲಾಗಿದೆ. ಅಂತೆಯೇ ದಿವಾನ್ಸ್ ರಸ್ತೆಯಲ್ಲಿ 630 ಮೀ., ವಿನೋಬಾ ರಸ್ತೆಯಲ್ಲಿ 4.01 ಕಿ.ಮೀ., ಇರ್ವಿನ್ ರಸ್ತೆಯಲ್ಲಿ 600 ಮೀ., ಬೋಗಾದಿ ರಸ್ತೆಯಲ್ಲಿ 170 ಮೀ., ವಿಶ್ವಮಾನವ ಜೋಡಿ ರಸ್ತೆಯಲ್ಲಿ ಶ್ರೀರಾಮಕೃಷ್ಣ ಪರಮಹಂಸ ವೃತ್ತದಿಂದ ಅನಿಕೇತನ ರಸ್ತೆಯವರೆಗಿನ 840 ಮೀ. ಹಾಗೂ ಕುವೆಂಪುನಗರ ವ್ಯಾಪ್ತಿಯ ವಿಶ್ವಮಾನವ ಜೋಡಿ ರಸ್ತೆಯ 50 ಮೀ. ವ್ಯಾಪ್ತಿಯಲ್ಲಿ ಮರಗಳ ಬುಡಕ್ಕೆ ಕಾಂಕ್ರೀಟ್ ಇಲ್ಲವೇ ಇಂಟರ್‌ಲಾಕ್ ಹಾಕಿರುವುದನ್ನು ಗುರುತಿಸಲಾಗಿದೆ.

ಮೂರನೇ ಪುಟದಿಂದ

ಕಂದಾಯ ಗ್ರಾಮಗಳಾಗಿ ಪರಿವರ್ತನೆ

ಆರು ತಿಂಗಳಲ್ಲಿ ಭೂ ಮಾಲೀಕತ್ವ ಹಕ್ಕುಪತ್ರ ನೀಡಲಾಗು ವುದು ಎಂದರು. ಮಾಜಿ ಪ್ರಧಾನಿ ದಿವಂಗತ ಇಂದಿರಾ ಗಾಂಧಿ ಕನಸನ್ನು ಕರ್ನಾಟಕದ ಕಾಂಗ್ರೆಸ್ ಸರ್ಕಾರ ಈಡೇರಿಸಿದೆ, ಇಡೀ ರಾಷ್ಟ್ರದಲ್ಲಿ ಗುಡ್ಡಗಾಡು ಪ್ರದೇಶಗಳಲ್ಲಿ ವಾಸ ಮಾಡುವ ಜನವಸತಿಗಳ ಕುಟುಂಬಗಳ ಸ್ವಾಧೀನದಲ್ಲಿರುವ ಭೂಮಿಗೆ ಮಾಲೀಕತ್ವದ ಹಕ್ಕುಪತ್ರ ನೀಡಿದ್ದು, ದೇಶದಲ್ಲೇ ಮೊದಲ ಸರ್ಕಾರವಾಗಿದೆ. ವಿಧಾನಸಭಾ ಚುನಾವಣೆಗೆ ಮುನ್ನ ಕಾಂಗ್ರೆಸ್ ನೀಡಿದ್ದ ಐದು ಗ್ಯಾರಂಟಿಗಳನ್ನು ನಮ್ಮ ಸರ್ಕಾರ ಈಡೇರಿಸಿ, ಇದೀಗ ಆರನೇ ಗ್ಯಾರಂಟಿಯಾಗಿ ಭೂಮಾಲೀಕತ್ವದ ಹಕ್ಕುಪತ್ರ ನೀಡಿದ್ದೇವೆ. ಗ್ಯಾರಂಟಿಗಳ ಭರವಸೆ ನೀಡಿದಾಗ ಬಿಜೆಪಿ ಮತ್ತು ಪ್ರಧಾನಿ ನರೇಂದ್ರ ಮೋದಿ ಗ್ಯಾರಂಟಿಗಳ ಈಡೇರಿಕೆ ಸಾಧ್ಯವಿಲ್ಲ ಎಂಬುದಾಗಿ ದೇಶದ ತುಂಬೆಲ್ಲಾ ಹೇಳಿಕೊಂಡರು. ಮೋದಿ ಅವರು ಬೆರಳೆಣಿಕೆಯಷ್ಟು ಮಂದಿಗೆ ಮಾತ್ರ ಎಲ್ಲಾ ಸವಲತ್ತುಗಳನ್ನು ನೀಡುತ್ತಾರೆ. ಈ ಜನರು ನಮ್ಮ ಬಡಜನರ ತೆರಿಗೆ ಹಣದಲ್ಲಿ ವಿದೇಶಗಳಲ್ಲಿ ಸಂಪತ್ತು ಮಾಡುತ್ತಾರೆ. ಕರ್ನಾಟಕದಲ್ಲಿ ಗ್ಯಾರಂಟಿಗಳಿಂದ ನೀಡಿದ ಹಣ ಬಡವರ ಜೇಬಿಗೆ ಹೋಗುತ್ತದೆ. ಈ ಹಣ ಮಾರುಕಟ್ಟೆಯಲ್ಲಿ ಮತ್ತೆ ಚಲಾವಣೆ ಆಗುತ್ತದೆ. ಇದರಿಂದ ಉತ್ಪಾದನೆ ಹೆಚ್ಚುತ್ತದೆ ಮತ್ತು ಉದ್ಯೋಗ ಸೃಷ್ಟಿಯಾಗುತ್ತದೆ. ಆದರೆ ಮೋದಿ, ಬಡವರು ಮತ್ತು ಮಧ್ಯಮ ವರ್ಗವನ್ನು ಕಡೆಗಣಿಸಿ ಕೆಲವರಿಗೇ ಎಲ್ಲಾ ಸವಲತ್ತುಗಳನ್ನು ಅರ್ಪಿಸುತ್ತಿದ್ದಾರೆ ಎಂದರು.

ಆರನೇ ಗ್ಯಾರಂಟಿ 'ಭೂ ಗ್ಯಾರಂಟಿ'

ಆಶೀರ್ವಾದ ಮಾಡಿದ ಜನರ ಋಣ ತೀರಿಸಲು, ಕೊಟ್ಟ ಮಾತಿನಂತೆ ಐದು ಗ್ಯಾರಂಟಿ ಯೋಜನೆ ಜಾರಿ ಮಾಡಿ, ಆರನೇ ಗ್ಯಾರಂಟಿಯಾಗಿ ಭೂಗ್ಯಾರಂಟಿ ಯೋಜನೆ ನೀಡುವ ಮೂಲಕ ನಮ್ಮ ಸರ್ಕಾರ ಇತಿಹಾಸ ಬರೆಯುತ್ತಿದೆ ಎಂದರು.

ಕಳೆದ ಐವತ್ತು ವರ್ಷಗಳಿಂದ ಪಟ್ಟಾ ಖಾತೆ ಇಲ್ಲದ ಗ್ರಾಮೀಣ ಬಡ ಜನರಿಗೆ ಭೂಗ್ಯಾರಂಟಿ ನೀಡುವ ಐತಿಹಾಸಿಕ ತೀರ್ಮಾನ ಕೈಗೊಂಡ ಕಂದಾಯ ಸಚಿವ ಕೃಷ್ಣ ಭೈರೇಗೌಡ ಹಾಗೂ ಇಲಾಖಾ ಅಧಿಕಾರಿಗಳ ಕಾರ್ಯಕ್ಕೆ ಅಭಿನಂದನೆ ಸಲ್ಲಿಸುತ್ತೇನೆ. ನಗರ ಪ್ರದೇಶಗಳಲ್ಲಿ ಎಲ್ಲಾ ಆಸ್ತಿಗಳ ಡಿಜಿಟಲೀಕರಣಗೊಳಿಸಿ ಖಾತೆಗಳನ್ನು ಸರಿಪಡಿಸಿ ಜನರಿಗೆ ನೀಡುವ ಏಳನೇ ಗ್ಯಾರಂಟಿಯನ್ನು ಘೋಷಣೆ ಮಾಡುತ್ತಿದ್ದೇವೆ, ಕಾಂಗ್ರೆಸ್ ಶಕ್ತಿ, ದೇಶದ ಶಕ್ತಿ, ಕಾಂಗ್ರೆಸ್ ಇತಿಹಾಸ ದೇಶದ ಇತಿಹಾಸ, ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಎಲ್ಲಾ ವರ್ಗದವರು ಅಧಿಕಾರಕ್ಕೆ ಬಂದಂತೆ ಎಂದರು.

ನಮ್ಮ ಸರ್ಕಾರದ ಎರಡು ವರ್ಷಗಳ ಅವಧಿಯಲ್ಲಿ ಭ್ರಷ್ಟಾಚಾರಕ್ಕೆ ಬೇಡಿ ಹಾಕಿದೆ. ಇಂದಿರಾ ಗಾಂಧಿ ಈ ಜಿಲ್ಲೆಯಲ್ಲಿ ವಿಜಯನಗರ ಸ್ಟೀಲ್ ಆರಂಭಿಸಿದರು. ಸೋನಿಯಾ ಗಾಂಧಿ ಶಾಖೋತ್ಪನ್ನ ವಿದ್ಯುತ್‌ನ ಆರ್‌ಟಿಪಿಎಸ್ ಆರಂಭಿಸಿದರು, ರಾಹುಲ್ ಗಾಂಧಿ ರಾಜ್ಯದಲ್ಲಿ ನಡೆಸಿದ ಭಾರತ ಜೋಡೋ ಯಾತ್ರೆ ಸಾಗಿದ ಬಹುತೇಕ ಎಲ್ಲಾ ಕಡೆಗಳಲ್ಲಿ ಕಾಂಗ್ರೆಸ್ ಪಕ್ಷ ಗೆದ್ದಿದೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ 6 ಸಂಸದರನ್ನು ಆಯ್ಕೆ ಮಾಡಿದ್ದೀರಿ. ನಾವು ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗೆ ವರ್ಷಕ್ಕೆ5 ಸಾವಿರ ಕೋಟಿ ರೂ. ನೀಡುತ್ತಿದ್ದೇವೆ.

ವಿರೋಧ ಪಕ್ಷಗಳು ಬರೀ ಟೀಕೆ ಮಾಡುತ್ತಿವೆ. ಈ ಟೀಕೆಗಳು ಸಾಯುತ್ತವೆ, ಕೆಲಸಗಳು ಉಳಿಯುತ್ತವೆ. ಅದಕ್ಕೆ ನಮ್ಮ ಯೋಜನೆಗಳೇ ಸಾಕ್ಷಿ, ರೈತರ ಬವಣೆ ನೀಗಿಸಲು ರಾಜ್ಯದ ಕೆರೆಗಳನ್ನು ತುಂಬಿಸಲು ಕಾರ್ಯಕ್ರಮ ರೂಪಿಸಲಾಗಿದೆ, ನವಲಿ ಅಣೆಕಟ್ಟು ಯೋಜನೆ ಮಾಡಲು ಚರ್ಚೆ ಮಾಡುತ್ತಿರುವ ಹೊತ್ತಿನಲ್ಲಿಯೇ ನಮ್ಮ ಪಾಲಿನ 24 ಟಿಎಂಸಿ ನೀರನ್ನು ಏತ ನೀರಾವರಿ ಮೂಲಕ ಕೆರೆಗಳಿಗೆ ತುಂಬಿಸುವ ಕಾರ್ಯಕ್ರಮ ರೂಪಿಸಲಾಗಿದೆ.

ರಾಜ್ಯದಲ್ಲಿ 10 ಲಕ್ಷ ಕೋಟಿ ರೂ. ಬಂಡವಾಳ ಹೂಡಿಕೆಗೆ ಉದ್ಯಮಿಗಳು ಮುಂದಾಗಿದ್ದಾರೆ, ಉದ್ಯೋಗ ಸೃಷ್ಟಿಗೆ ಆದ್ಯತೆ ನೀಡಲಾಗಿದೆ, ಗ್ರಾಮೀಣಾಭಿವೃದ್ಧಿ ಇಲಾಖೆ ಮೂಲಕ ಗ್ರಾಮೀಣ ರಸ್ತೆಗಳ ಅಭಿವೃದ್ಧಿಗೆ ಕಲ್ಯಾಣ ಪಥ ಯೋಜನೆ ರೂಪಿಸಲಾಗಿದೆ.

ಡಿಕೆಶಿಯನ್ನ ಗದರಿದ ಖರ್ಗೆ!

ಬೆಂಗಳೂರು, ಮೇ 20(ಕೆಎಂಶಿ)– ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ತಮ್ಮ ಭಾಷಣದ ವೇಳೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಗದರಿದ ಪ್ರಸಂಗವೂ ನಡೆಯಿತು. ರಾಜ್ಯದಲ್ಲಿನ ಕಾಂಗ್ರೆಸ್ ಸರ್ಕಾರದ ಆಡಳಿತ ಎರಡು ವರ್ಷ ತುಂಬಿದ ಹಿನ್ನೆಲೆಯಲ್ಲಿ ನಡೆದ ಸಮಾವೇಶದಲ್ಲಿ ಖರ್ಗೆ ಮಾತನಾಡುವಾಗ, ರಾಹುಲ್ ಗಾಂಧಿ ಗಮನಕ್ಕೆ ಕೆಲವೊಂದು ವಿಷಯ ತರುವ ಯತ್ನದಲ್ಲಿದ್ದರು.

ಆಗ ರಾಹುಲ್ ಪಕ್ಕದ ಆಸನದಲ್ಲಿ ಕುಳಿತಿದ್ದ ಶಿವಕುಮಾರ್, ಪಕ್ಷದ ಅಧಿನಾಯಕರೊಂದಿಗೆ ಚರ್ಚೆಯಲ್ಲಿ ತೊಡಗಿದ್ದರು. ಮಲ್ಲಿಕಾರ್ಜುನ ಖರ್ಗೆ ಅವರ ಗಮನ ರಾಹುಲ್ ಕಡೆ ಹೋದಾಗ ಅವರೊಂದಿಗೆ ಮಾತನಾಡುತ್ತಿದ್ದ ಶಿವಕುಮಾರ್ ಅವರನ್ನು ನೋಡಿ ಸಹನೆ ಕಳೆದುಕೊಂಡು ರೇಗಿದರು. 'ರೀ ಅದೇನು ಮಾತು ನಿಲ್ಲಿಸ್ರಿ, ನಿಮಗೆ ಮಾತನಾಡಲು ಸಮಯ ನಿಗದಿ ಮಾಡೋಣ, ಈಗೇನು ಮಾತು' ಎಂದರು. ಖರ್ಗೆ ಅವರ ಮಾತಿನಿಂದ ಎಚ್ಚೆತ್ತುಕೊಂಡ ಶಿವಕುಮಾರ್, ಕಾಂಗ್ರೆಸ್ ಅಧಿನಾಯಕ ರಾಹುಲ್ ಗಾಂಧಿ ಜೊತೆಗಿನ ಮಾತು ನಿಲ್ಲಿಸಿ, ಮೌನವಾದರು. ಸ್ವಲ್ಪ ಸಮಯದ ನಂತರ ರಾಹುಲ್ ಗಾಂಧಿ ಅವರ ಜೊತೆ ಶಿವಕುಮಾರ್ ಬಹಳ ದುಗುಡದಿಂದ ಸಂಭಾಷಣೆ ನಡೆಸುತ್ತಿದ್ದಂತೆ ಕಂಡುಬಂದಿತು.



ಸಮಾವೇಶದ ಸಂದರ್ಭದಲ್ಲಿ ಸುರಿದ ಮಳೆಯಿಂದ ನೀರು ನುಗ್ಗಿದ್ದರಿಂದ ಊಟದ ವ್ಯವಸ್ಥೆ ಮಾಡಿದ್ದ ಪಾತ್ರೆಗಳೆಲ್ಲಾ ನೀರಿನಲ್ಲಿ ತೇಲಾಡಿದವು.

“ ಇಡೀ ಬೆಂಗಳೂರು ಮಳೆಯಿಂದಾಗಿ ಮುಳುಗುತ್ತಿದ್ದು, ಜನರು ಪರದಾಡುತ್ತಿದ್ದಾರೆ. ಮಳೆಯಿಂದಾಗಿ ಐದು ಜನರು ಸತ್ತಿದ್ದಾರೆ. ಇಂಥವರ ಸಾವಿನ ಮೇಲೆ ಕಾಂಗ್ರೆಸ್ ಸಾಧನೆಯ ಸಮಾವೇಶ ಮಾಡುತ್ತಿದೆ. ಸರ್ಕಾರಕ್ಕೆ ಮಾನ ಮರ್ಯಾದೆ ಇದ್ದರೆ ಸಮಾವೇಶವನ್ನು ರದ್ದು ಮಾಡಬೇಕಿತ್ತು. ಇಂತಹ ಸಮಾವೇಶ ಮಾಡುವ ನೈತಿಕ ಅರ್ಹತೆ ಸರ್ಕಾರಕ್ಕೆ ಇಲ್ಲ. ಮುಂಗಾರು ಪೂರ್ವದ ಒಂದೇ ಒಂದು ಮಳೆ ಕಾಂಗ್ರೆಸ್ ಸರ್ಕಾರದ 'ಬ್ರಾಂಡ್ ಬೆಂಗಳೂರು' ನಿಜ ಬಣ್ಣ ಬಯಲು ಮಾಡಿದೆ. ಇಂತಹ ಸನ್ನಿವೇಶದಲ್ಲಿ ಸಂತ್ರಸ್ತರ ನೆರವಿಗೆ ಧಾವಿಸಬೇಕಿದ್ದ ಸಿಎಂ, ಡಿಸಿಎಂ ಮತ್ತು ಸಚಿವರು ಸಾಧನಾ ಸಮಾವೇಶದಲ್ಲಿ ಮೆರೆದಾಡುತ್ತಿದ್ದಾರೆ.

–ಆರ್.ಅಶೋಕ್, ವಿಪಕ್ಷ ನಾಯಕ

“ ಜನ ಸತ್ತು ಬದುಕುತ್ತಿದ್ದರೆ ರಾಜ್ಯ ಕಾಂಗ್ರೆಸ್ ನಾಯಕರಿಗೆ ಸಾಧನಾ ಸಮಾವೇಶದ ಚಿಂತೆ! ವಾರದಿಂದ ಬಣ್ಣಬಣ್ಣದ ಸರಣಿ ಗ್ಯಾರಂಟಿ ಜಾಹೀರಾತು ಬೇರೆ! ಬೆಂಗಳೂರು ಜನ ಬ್ರ್ಯಾಂಡೆಡ್ ನರಕದಲ್ಲಿದ್ದಾರೆ! ನಗರ ನರಳುತ್ತಿದ್ದರೆ ಇವರಿಗೆ ಪ್ರಚಾರದ ಗೀಳು. ಕಾಂಗ್ರೆಸ್ ಸರಕಾರದ ಸಾಧನೆ ಬೆಂಗಳೂರು ರಸ್ತೆಗಳಲ್ಲಿ, ಚರಂಡಿಗಳಲ್ಲಿ ಕೊಚ್ಚೆಯಾಗಿ ಕೊಚ್ಚಿ ಹೋಗುತ್ತಿದೆ. ಇವರಿಗೆ ಆತ್ಮಸಾಕ್ಷಿ ಎನ್ನುವುದು ಇದೆಯಾ? ಸತ್ತ ಸರಕಾರಕ್ಕೆ ಸಾಧನೆ ಸಮಾವೇಶ ಬೇರೆ ಕೇಡು. ಸಾಧನಾ ಸಮಾವೇಶ ಮಾಡಿದ್ದು ಸಾಕು. ನಿಮ್ಮ ಗ್ಯಾರಂಟಿ ನಾಟಕವೂ ಸಾಕು. ಮೊದಲು ಬೆಂಗಳೂರು ಸೇರಿ ರಾಜ್ಯದ ಉದ್ದಗಲಕ್ಕೂ ಆಗಿರುವ ಮಳೆ ಅನಾಹುತದ ಕಡೆ ಗಮನ ಹರಿಸಿ.

–ಹೆಚ್.ಡಿ.ಕುಮಾರಸ್ವಾಮಿ, ಕೇಂದ್ರ ಸಚಿವ

“ ಯಾವ ಕಾರಣಕ್ಕಾಗಿ ಸಾಧನಾ ಸಮಾವೇಶ ಮಾಡಿದ್ದಾರೋ ಗೊತ್ತಿಲ್ಲ. ಪಂಚ ಗ್ಯಾರಂಟಿಗಳನ್ನು ನೀಡಿದ್ದೇ ದೊಡ್ಡ ಸಾಧನೆಯೇ? ಇದನ್ನು ಹೊರತುಪಡಿಸಿ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ರಾಜ್ಯದ ಅಭಿವೃದ್ಧಿಗಾಗಿ ಯಾವ ಕೆಲಸ ಮಾಡಿದ್ದಾರೆ?. ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಸಾವಿರಾರು ರೌಡಿಶೀಟರ್‌ಗಳು ಬಿಡುಗಡೆ ಆಗಿದ್ದಾರೆ. ಮೂಲಸೌಕರ್ಯ ಅಭಿವೃದ್ಧಿ ಕನಸಾಗಿದೆ. ಜನರಿಗೆ ಕಾಂಗ್ರೆಸ್ ಹಣೇ ಬರಹ ಗೊತ್ತಾಗಿದೆ. ಮುಂದೆ ತಕ್ಕ ಪಾಠ ಕಲಿಸುತ್ತಾರೆ.

–ಎಸ್.ವಿ.ಸಾತನೂರ, ವಿಧಾನಪರಿಷತ್ ಸದಸ್ಯ

“ ಕಾಂಗ್ರೆಸ್ ಸರ್ಕಾರದ್ದು ಎರಡನೇ ವರ್ಷದ ಸಾಧನೆಯಲ್ಲ, ಇದು ಎರಡನೇ ವರ್ಷದ ಪುಣ್ಯತಿಥಿ. ಸರ್ಕಾರದ ಹಣ ದುಂದುವೆಚ್ಚ ಮಾಡಿ, ಜಾಹೀರಾತಿಗೆ ಕೋಟ್ಯಾಂತರ ಹಣ ವೆಚ್ಚ ಮಾಡುತ್ತಿದ್ದಾರೆ. ಜಾಹೀರಾತಿಗೂ ಅಭಿವೃದ್ಧಿ ಕೆಲಸಗಳಿಗೂ ತಾಳೆ ಆಗುವುದಿಲ್ಲ. ಇದೊಂದು ಜಾಹೀರಾತಿನ ಸರ್ಕಾರ. ಪಹಲ್ಗಾಮ್ ಘಟನೆ ಸಂಬಂಧ ಕೇಂದ್ರ ಸರ್ಕಾರ ಕೈಗೊಂಡ ದಿಟ್ಟ ನಿರ್ಧಾರದ ಬಗ್ಗೆ ಎಲ್ಲರೂ ಪ್ರಶಂಸಿಸುವಾಗ ಕಾಂಗ್ರೆಸ್‌ನವರು ಮಾತ್ರ ಪಾಕಿಸ್ತಾನದ ವಕ್ತಾರರಂತೆ ಮಾತನಾಡುತ್ತಾರೆ.

–ಬಿ.ಸಿ.ಪಾಟೀಲ್, ಮಾಜಿ ಸಚಿವ

“ ಕಾಂಗ್ರೆಸ್ ಸರ್ಕಾರ ಭ್ರಷ್ಟಾಚಾರ, ಬೆಲೆ ಏರಿಕೆಯನ್ನೇ ಸಾಧನೆ ಎಂದು ಪರಿಗಣಿಸಿ ಸಮಾವೇಶ ನಡೆಸಿದೆ. ಜನನ ಪ್ರಮಾಣ ಪತ್ರ, ವಿದ್ಯುತ್ ಬಿಲ್, ಹಾಲಿನ ದರ, ಮುದ್ರಾಂಕ ಶುಲ್ಕ, ಪೆಟ್ರೋಲ್, ಡೀಸೆಲ್, ಮದ್ಯ ಸೇರಿದಂತೆ ಎಲ್ಲಾ ವಸ್ತುಗಳ ಬೆಲೆಯನ್ನೂ ಏರಿಕೆ ಮಾಡಲಾಗಿದೆ. ಇದು ಕಾಂಗ್ರೆಸ್ ಹೇಳಿಕೊಳ್ಳಲಾಗದ ಸಾಧನೆ. ಪಂಚ ಗ್ಯಾರಂಟಿ ಪಂಕ್ಚರ್ ಆಗಿದೆ. ಗುತ್ತಿಗೆ ಹಾಗೂ ಸರ್ಕಾರಿ ನೌಕರರಿಗೆ ಮೂರ್‍ನಾಲ್ಕು ತಿಂಗಳಿಂದ ವೇತನ ಇಲ್ಲ. ಕಿಸಾನ್ ಸಮ್ಮಾನ್ ಸದ್ದಿಲ್ಲದೆ ರದ್ದಾಗಿದೆ. ಪರಿಶಿಷ್ಟರಿಗೆ ಮೀಸಲಿದ್ದ ಹಣ ದುರುಪಯೋಗವಾಗಿದೆ.

–ಸಿ.ಟಿ.ರವಿ, ವಿಧಾನಪರಿಷತ್ ಸದಸ್ಯ

ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಆಕ್ಷೇಪ

ನೋಡಿಕೊಳ್ಳಬೇಕು. ಒಂದು ವೇಳೆ ಅನರ್ಹರಿಗೆ ಸವಲತ್ತು ದೊರೆತರೆ ರಾಜ್ಯ ಮತ್ತು ದೇಶಕ್ಕೆ ಕೆಟ್ಟ ಸಂದೇಶ ರವಾನೆ ಆಗುತ್ತದೆ ಎಂದು ಎಚ್ಚರಿಸಿದರು. ಖರ್ಗೆ ಅವರು ಎಚ್ಚರಿಕೆ ನೀಡುವ ಸಂದರ್ಭ ದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವೇದಿಕೆ ಮೇಲೆ ಇರಲಿಲ್ಲ. ಅವರ ಕುರ್ಚಿ ಕಡೆ ನೋಡಿ ಎಲ್ಲಿ ಹೋದರು ಎಂದು ಪ್ರಶ್ನಿಸಿದರು.

ಈ ವೇಳೆ ರಾಹುಲ್ ಗಾಂಧಿ ಜೊತೆ ಮಾತಿನಲ್ಲಿ ನಿರತರಾಗಿದ್ದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೂಡಲೇ ಖರ್ಗೆ ಅವರ ಬಳಿ ಧಾವಿಸಿ, ಅವರ ಸಲಹೆಯನ್ನು ಗಂಭೀರವಾಗಿ ಆಲಿಸಿದರು.

ಭಾಷಣ ಮುಂದುವರೆಸಿದ ಖರ್ಗೆ, ಬಡ ಲಿಂಗಾಯತರಿಗೆ ಸವಲತ್ತುಗಳನ್ನು ನೀಡಲು ವಿರೋಧವಿಲ್ಲ. ಆದರೆ, ಅಸ್ಪೃಶ್ಯರ ಹಕ್ಕನ್ನು ಬೇರೆಯವರು ಕಸಿಯಲು ಬಿಡಬೇಡಿ ಎಂದರು. ಇವರಿಗೆ ಸುಳ್ಳು ಜಾತಿ ಪ್ರಮಾಣ ಪತ್ರಗಳನ್ನು ನೀಡಿದವರು ಯಾರು ಎಂದು ವೇದಿಕೆ ಮೇಲಿದ್ದ ಸಚಿವ ಸಮುದಾಯವನ್ನು ಪ್ರಶ್ನಿಸಿದ ಖರ್ಗೆ, ಇನ್ನು ಮುಂದೆ ಜಾತಿ ಪ್ರಮಾಣಪತ್ರಗಳನ್ನು ನೀಡುವಾಗ ಎಚ್ಚರಿಕೆ ವಹಿಸಿ ಸುಳ್ಳು ಜಾತಿ ಪ್ರಮಾಣಪತ್ರಗಳನ್ನು ನೀಡಬೇಡಿ ಎಂದರು.

ನೀವು ಒಳಮೀಸಲಾತಿ ಸಮೀಕ್ಷೆ ಆರಂಭಿಸಿದ್ದೀರಿ, ಈ ಕಾರ್ಯವನ್ನು ತುಂಬ ಎಚ್ಚರಿಕೆಯಿಂದ ಮಾಡಿ. ಅರ್ಹರ ಹಕ್ಕನ್ನು ಕಸಿಯಲು ಅವಕಾಶ ನೀಡಬೇಡಿ. ಜಾತಿಗಣತಿ ಸಮೀಕ್ಷೆ ಸಮಯದಲ್ಲಿ ಜನತೆ ಎಚ್ಚರಿಕೆಯಿಂದ ದಾಖಲೆ ಕೊಡುವಂತೆ ನೋಡಿಕೊಳ್ಳಬೇಕು ಎಂದು ಮತ್ತೊಮ್ಮೆ ಎಚ್ಚರಿಸಿದರು. ಕಾಂಗ್ರೆಸ್ ಮತ್ತು ರಾಹುಲ್ ಗಾಂಧಿ ಹೋರಾಟಕ್ಕೆ ಮಣಿದು ಪ್ರಧಾನಿ ನರೇಂದ್ರ ಮೋದಿ ಜಾತಿ ಜನಗಣತಿ ಮಾಡುವ ನಿರ್ಧಾರಕ್ಕೆ ಬಂದಿದ್ದಾರೆ. ಕೇಂದ್ರದ ಈ ನಿರ್ಧಾರ ರಾಹುಲ್ ಗಾಂಧಿ ಹೋರಾಟಕ್ಕೆ ಸಿಕ್ಕ ಜಯವಾಗಿದೆ ಎಂದರು.

ಗ್ಯಾರಂಟಿ ಜೊತೆಗೆ 142 ಆಶ್ವಾಸನೆ ಈಡೇರಿಕೆ

ವಿತರಣೆ ಮಾಡಿ ಮಾತನಾಡಿದ ಅವರು, ಮೊದಲ ಬಾರಿ ಮುಖ್ಯಮಂತ್ರಿಯಾಗಿ ನೀಡಿದ್ದ 165 ಭರವಸೆಗಳಲ್ಲಿ 158 ಭರವಸೆಗಳನ್ನು ಈಡೇರಿಸಿದ್ದು, ಪ್ರಣಾಳಿಕೆಯಲ್ಲಿ ಘೋಷಿಸದ ಹೊಸದಾದ 30 ಕಾರ್ಯಕ್ರಮಗಳನ್ನು ರೂಪಿಸಿ, ಜಾರಿಗೊಳಿಸಿದ್ದೇವೆ. ಬಿಜೆಪಿ ಆಡಳಿತ ಸಂದರ್ಭದಲ್ಲಿ ತಾನು ಕೊಟ್ಟಿದ್ದ ಭರವಸೆಗಳನ್ನು ಈಡೇರಿಸದೆ, ಜನರ ಎದುರು ಸುಳ್ಳು ಹೇಳಿಕೊಂಡು ತಿರುಗುತ್ತಿದೆ.

ಕರ್ನಾಟಕ ಸರ್ವ ಜನಾಂಗದ ಶಾಂತಿಯ ತೋಟ, ಸರ್ವರನ್ನೂ ಸಮಾನವಾಗಿ ಗೌರವಿಸುವ ರಾಜ್ಯ, ಸಂವಿಧಾನದ ಅಡಿಯಲ್ಲಿ ಸರ್ವ ಧರ್ಮಗಳನ್ನೂ ಸಮಾನವಾಗಿ ಕಾಣಬೇಕು, ನಾವು ಇದೇ ಮೌಲ್ಯ ಪಾಲಿಸುತ್ತಿದ್ದೇವೆ.

ಕೇಂದ್ರ ಸರ್ಕಾರದಿಂದ ಪ್ರತೀ ವರ್ಷ ನಮಗೆ ನಷ್ಟ ಆಗುತ್ತಿದೆ. ನಾವು ಪ್ರತೀ ವರ್ಷ 4.5 ಲಕ್ಷ ಕೋಟಿ ರೂ. ತೆರಿಗೆ ರೂಪದಲ್ಲಿ ಕೇಂದ್ರಕ್ಕೆ ಕೊಟ್ಟರೆ ನಮಗೆ ವಾಪಸ್ ಬರುತ್ತಿರುವುದು ಒಂದು ರೂಪಾಯಿಗೆ 14 ಪೈಸೆ ಮಾತ್ರ. ಇದರಿಂದ ಒಕ್ಕೂಟ ವ್ಯವಸ್ಥೆಯ ಘನತೆ ಹಾಳು ಮಾಡುತ್ತಿದ್ದಾರೆ.

ಕೇಂದ್ರ ಪ್ರಾಯೋಜಿತ ಯೋಜನೆಗಳಿಗೂ ಕೇಂದ್ರದಿಂದ ಪೂರ್ತಿ ಅನುದಾನ ಬಂದಿಲ್ಲ. ಕೇಂದ್ರದ ಯೋಜನೆಗಳಿಗೆ ರಾಜ್ಯದ ಪಾಲನ್ನು ಪೂರ್ತಿ ಕೊಟ್ಟಿದ್ದೇವೆ. ಕೇಂದ್ರ ತನ್ನ ಪಾಲನ್ನು ಉಳಿಸಿಕೊಂಡು ಅನ್ಯಾಯ ಮಾಡುತ್ತಿದೆ. 15ನೇ ಹಣಕಾಸು ಯೋಜನೆಯಲ್ಲಿ ಭದ್ರಾ ಮೇಲ್ದಂಡೆ ಯೋಜನೆಗೆ ಘೋಷಿಸಿದ್ದ 5,300 ಕೋಟಿ ರೂ. ಬಿಡುಗಡೆ ಮಾಡಲಿಲ್ಲ.

ಜೆಡಿಎಸ್ ಮತ್ತು ಬಿಜೆಪಿ ಮೈತ್ರಿ ಮಾಡಿಕೊಂಡಿವೆ. ರಾಜ್ಯದಲ್ಲಿ ಬಿಜೆಪಿ ಇದುವರೆಗೂ ಸ್ವಂತ ಶಕ್ತಿಯಿಂದ ಅಧಿಕಾರಕ್ಕೆ ಬಂದಿಲ್ಲ. ಆಪರೇಷನ್ ಕಮಲ ಮಾಡಿ ಅಧಿಕಾರಕ್ಕೆ ಬಂದಿದೆ. ಹಿಂದಿನ ಬಿಜೆಪಿ ಸರ್ಕಾರದ ಮೇಲೆ 40% ಕಮಿಷನ್ ಆರೋಪ ಇತ್ತು. ನಾವು ಇದರ ವಿರುದ್ಧ ಹೋರಾಟ ಮಾಡಿ ಅಧಿಕಾರಕ್ಕೆ ಬಂದ ಬಳಿಕ ತನಿಖೆಗೆ ನಾಗಮೋಹನ್ ದಾಸ್ ಸಮಿತಿ ರಚಿಸಿದ್ದು, ವರದಿಯಲ್ಲಿ ಕಮಿಷನ್ ವ್ಯವಹಾರ ಸಾಬೀತಾಗಿದೆ.

ಒಂದು ಕೋಟಿ 22 ಲಕ್ಷ ಕುಟುಂಬಗಳ ಯಜಮಾನಿಗೆ ಗೃಹಲಕ್ಷ್ಮಿ ಯೋಜನೆಯಡಿ ಮಾಸಿಕ 2,000 ರೂ. ಕೊಡುತ್ತಿದ್ದೇವೆ, 1.30 ಕೋಟಿ ಕುಟುಂಬಗಳಿಗೆ ಗೃಹ ಜ್ಯೋತಿ ಯೋಜನೆಯಡಿ ಅನುಕೂಲ ಒದಗಿಸಿದ್ದೇವೆ, ರಾಜ್ಯದ ಮಹಿಳೆಯರಿಗೆ ಶಕ್ತಿ ಯೋಜನೆಯಡಿ ಸಾರಿಗೆ ಸಂಸ್ಥೆಯ ಬಸ್‌ಗಳಲ್ಲಿ ಉಚಿತ ಪ್ರಯಾಣದ ವ್ಯವಸ್ಥೆ ಮಾಡಿದ್ದೇವೆ. ಚಿನ್ನ, ಡೀಸೆಲ್, ಪೆಟ್ರೋಲ್, ಎಣ್ಣೆ ಕಾಳು, ಬೇಳೆ, ರಸಗೊಬ್ಬರ ಬೆಲೆಗಳನ್ನು ಕೇಂದ್ರದ ಮೋದಿ ಸರ್ಕಾರ ಏರಿಕೆ ಮಾಡಿದ್ದಕ್ಕೆ ಜನಾಕ್ರೋಶ ಇದೆ, ನಮ್ಮ ಸರ್ಕಾರದ ಪರವಾಗಿ ಜನಾಭಿಪ್ರಾಯ ಇದೆ, ಬಿಜೆಪಿಯ ಜನಾಕ್ರೋಶ ಕಾರ್ಯಕ್ರಮವೇ ನಕಲಿ. ರಾಜ್ಯದ ಜನತೆ ನಮ್ಮ ಮಾಲೀಕರು, ಮಾಲೀಕರಿಗೆ ನಾವು ಕೊಟ್ಟ ಮಾತಿನಂತೆ ನಡೆದುಕೊಂಡಿದ್ದೇವೆ, ನಿಮ್ಮ ಆಶೀರ್ವಾದ ಇರುವವರೆಗೂ ಬಿಜೆಪಿಯ ಸುಳ್ಳಿನ ರಾಶಿಗೆ ಹೆದರುವ, ಅಂಜುವ ಪ್ರಶ್ನೆಯೇ ಇಲ್ಲ ಎಂದರು.

ಮೇ 25 ರಂದು ಸಸ್ಯಾಹಾರ ಜನಜಾಗೃತಿ ಜಾಥ

ಮೈಸೂರ, ಮೇ 20 (ಬಿಎಲ್‌ಯು)– ಬ್ರಹ್ಮರ್ಷಿ ಪಿತಾಮಹ ಪತ್ರೀಜಿ ಅವರ ಮಾರ್ಗದರ್ಶನದಲ್ಲಿ ಬೃಹತ್ ಸಸ್ಯಾಹಾರ ಜನಜಾಗೃತಿ ಜಾಥ ಮೇ 25 ರಂದು ಮೈಸೂರಿನಲ್ಲಿ ನಡೆಯಲಿದೆ.

ವಿಶ್ವಾಮಿತ್ರ ಲೈಟ್ ಫೌಂಡೇಶನ್ ಸಹಯೋಗದಲ್ಲಿ ಒಂದೇ ದಿನ 108 ಸಸ್ಯಾಹಾರ ಜಾಥ ನಡೆಯಲಿದ್ದು, ಅಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆವರೆಗೆ ನಡೆಯಲಿದೆ. ನಗರದ ದಾಸಪ್ಪ ಸರ್ಕಲ್ ನಿಂದ ಆರಂಭವಾಗಿ ಹಾರ್ಡಿಂಜ್ ಸರ್ಕಲ್ ನಲ್ಲಿ ಮುಕ್ತಾಯವಾಗಲಿದೆ. ಪ್ರಾಣಿ ಹಿಂಸೆ, ಪ್ರಾಣಿ ವಧೆ, ಮಾಂಸಹಾರವನ್ನು ತಪ್ಪಿಸಬೇಕು ಎಂಬ ಘೋಷವಾಕ್ಯದೊಂದಿಗೆ ಈ ಜಾಥ ಆಯೋಜಿಸಲಾಗಿದೆ.

ಇಂದು ಊಟಿಯಲ್ಲಿ ಜೀವನೋತ್ಸಾಹ ಶಿಬಿರ ಸಮಾರೋಪ

ಮೈಸೂರು, ಮೇ 20– ಸುತ್ತೂರು ಶ್ರೀಮಠ, ಜೆಎಸ್‌ಎಸ್ ಮಹಾವಿದ್ಯಾಪೀಠ ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಗಳ ಸಂಯುಕ್ತಾಶ್ರಯದಲ್ಲಿ ಊಟಿಯಲ್ಲಿ ನಡೆಯುತ್ತಿರುವ ಜೀವನೋತ್ಸಾಹ ಶಿಬಿರದ ಸಮಾರೋಪ ಸಮಾರಂಭವನ್ನು ನಾಳೆ (ಮೇ 21) ಬೆಳಗ್ಗೆ 10.00 ಗಂಟೆಗೆ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ಏರ್ಪಡಿಸಲಾಗಿದೆ.

ಕರ್ನಾಟಕ ಉಚ್ಚನ್ಯಾಯಾಲಯದ ನ್ಯಾಯಾಧೀಶ ಇ.ಎಸ್. ಇಂದ್ರೇಶ್ ಸಮಾರೋಪ ಭಾಷಣ ಮಾಡಲಿದ್ದು, ಕರ್ನಾಟಕ ಲೋಕಸೇವಾ ಆಯೋಗದ ಅಧ್ಯಕ್ಷ ಶಿವಶಂಕರಪ್ಪ ಎಸ್. ಸಾಹುಕಾರ್ ಅಧ್ಯಕ್ಷತೆ ವಹಿಸಲಿದ್ದಾರೆ. ಕೊಡಗು ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಅಶೋಕ ಎಸ್. ಆಲೂರ, ಕರ್ನಾಟಕ ಲೋಕಸೇವಾ ಆಯೋಗದ ಸದಸ್ಯರಾದ ಡಾ. ಹೆಚ್.ಎಸ್. ನರೇಂದ್ರ ಹಾಗೂ ಶ್ರೀಮತಿ ಬಿ.ವಿ. ಗೀತಾ, ಸಿದ್ಧ ಇಂಡಸ್ಟ್ರಿಯಲ್ ಅಂಡ್ ಲಾಜಿಸ್ಟಿಕ್ಸ್ ಪಾರ್ಕ್ ಪ್ರೈ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕ ಹೆಚ್.ಎಸ್. ಮಹದೇವ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ

ಉಚಿತ ಸಂಧಿವಾತ; ಮೂಳೆ ರೋಗ ತಪಾಸಣಾ ಶಿಬಿರ

ಮೈಸೂರು, ಮೇ 20– ಮೈಸೂರಿನ ಹಾರ್ಟ್ ಸಂಸ್ಥೆ ಸಹಯೋಗದೊಂದಿಗೆ ಮೇ 25 ರಂದು ಬೆಳಗ್ಗೆ 9 ರಿಂದ ಮಧ್ಯಾಹ್ನ 1 ರವರೆಗೆ ಅಗ್ರಹಾರದ ಸಂಧಿವಾತ ಮತ್ತು ಕೀಲುರೋಗ ಚಿಕಿತ್ಸಾ ಕೇಂದ್ರದಲ್ಲಿ ಉಚಿತ ಸಂಧಿವಾತ, ಮೂಳೆ ರೋಗ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ ಹೆಚ್ಚಿನ ಮಾಹಿತಿಗೆ ಮೊ. 7338463486, 8867525114 ಸಂಪರ್ಕಿಸಬಹುದು.

ಮೈಸೂರು ಮಿತ್ರ

ಬುಧವಾರ 21 ಮೇ 2025

ಧರ್ಮಸ್ಥಳ ಧರ್ಮಾಧಿಕಾರಿ ಪರಮ ಪೂಜ್ಯ ಡಾ.ವೀರೇಂದ್ರ ಹೆಗಡೆಯವರ ಆಶೀರ್ವಾದ ಪಡೆದ ಶಾಸಕ ಜಿಟಿಡಿ ಕುಟುಂಬ





ಧರ್ಮಸ್ಥಳದಲ್ಲಿ ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ. ದೇವೇಗೌಡರ ಸಹೋದರ ಜಿ.ಟಿ.ಯದುವರ ಅವರ ಪುತ್ರ ಜಿ.ವೈ. ಮಧು ಹಾಗೂ ಚನ್ನಪಟ್ಟಣ ತಾಲೂಕಿನ ಹೊಂಗನೂರು ಗ್ರಾಮದ ಶ್ರೀನಿವಾಸ ಅವರ ಪುತ್ರಿ ಹೆಚ್.ಎಸ್. ನೇಸರ ಅವರ ವಿವಾಹ ಮಹೋತ್ಸವ ನೆರವೇರಿತು. ಇದರಲ್ಲಿ ಪಾಲ್ಗೊಂಡಿದ್ದ ಜಿ.ಟಿ.ದೇವೇಗೌಡ ಹಾಗೂ ಶ್ರೀಮತಿ ಲಲಿತಾ ದಂಪತಿ ಸೇರಿದಂತೆ ಇತರರು ವಧು-ವರರನ್ನು ಆಶೀರ್ವದಿಸಿ, ನಂತರ ಡಾ.ವೀರೇಂದ್ರ ಹೆಗಡೆಯವರ ಆಶೀರ್ವಾದ ಪಡೆದರು.

ಸಾಲೂರು ಮಠದ ಹಿರಿಯ ಶ್ರೀಗಳು ಲಿಂಗೈಕ್ಯ: ಗೋಷ್ಠಿ ಸಂತಾಪ



ಮೈಸೂರು, ಮೇ 20-ಮಲೆ ಮಹದೇಶ್ವರ ಬೆಟ್ಟದ ಶ್ರೀ ಸಾಲೂರು ಬೃಹನ್ಮಠದ ಹಿರಿಯ ಶ್ರೀಗಳಾದ ಶ್ರೀ ಪಟ್ಟದ ಗುರುಸ್ವಾಮಿಗಳು ಮಂಗಳವಾರ ಬೆಳಗ್ಗೆ ಲಿಂಗೈಕ್ಯರಾದರು. ಶ್ರೀಗಳಿಗೆ 69 ವರ್ಷ ವಯಸ್ಸಾಗಿತ್ತು. ಶ್ರೀಮಠಕ್ಕೆ 29.1.1995ರಲ್ಲಿ ಮಠಾಧಿಪತಿಗಳಾದರು. ಸರಳ ಸಜ್ಜನಿಕೆಯ ಮೃದುಸ್ವಭಾವ, ವಿನಯಶೀಲರಾಗಿದ್ದರು.

ಮಲೆ ಮಹದೇಶ್ವರ ಬೆಟ್ಟ, ಸುತ್ತಮುತ್ತಲಿನ ಗ್ರಾಮಗಳು ಸೇರಿದಂತೆ ಚಾಮರಾಜನಗರ, ಮೈಸೂರು ಜಿಲ್ಲೆಗಳಲ್ಲಿ ನಡೆಯುವ ಧಾರ್ಮಿಕ ಕಾರ್ಯಕ್ರಮಗಳು ಮತ್ತು ಪೂಜಾದಿಗಳಲ್ಲಿ ಭಾಗವಹಿಸುತ್ತಿದ್ದರು. ಮಠಗಳು, ಭಕ್ತಾದಿಗಳು ಹಾಗೂ ಸಾರ್ವಜನಿಕರೊಂದಿಗೆ ಅವಿನಾಭಾವ ಸಂಬಂಧ ಹೊಂದಿದ್ದರು. ಗೋಷ್ಠಿಯ ಕಾರ್ಯಕ್ರಮಗಳಲ್ಲಿ ತಪ್ಪದೇ ಪಾಲ್ಗೊಳ್ಳುತ್ತಿದ್ದರು.

ಶ್ರೀಗಳು ಅಧಿಕಾರವನ್ನು ವಹಿಸಿಕೊಂಡ ನಂತರ ಶ್ರೀಮಠವನ್ನು ಎಲ್ಲಾ ರೀತಿಯಿಂದಲೂ ವ್ಯವಸ್ಥಿತವಾಗಿ ಅಭಿವೃದ್ಧಿಗೊಳಿಸಿದ್ದರು. ಮಲೆ ಮಹದೇಶ್ವರ ಬೆಟ್ಟಕ್ಕೆ ಬರುವ ಭಕ್ತಾದಿಗಳು ಮತ್ತು ಯಾತ್ರಿಕರಿಗೆ ಊಟ, ವಸತಿಗಳಿಗೆ ಅನುವು ಮಾಡಿಕೊಡಲು ಶ್ರೀಗಳು ಶ್ರಮಿಸಿದ್ದರು. ಸುತ್ತಮುತ್ತಲಿನ ಹಳ್ಳಿಗಳಿಗೆ ಭಿಕ್ಷೆಗೆ ತೆರಳಿ ದವಸ-ಧಾನ್ಯಗಳನ್ನು ಸಂಗ್ರಹಿಸಿ ದಾಸೋಹಕ್ಕೆ ವಿನಿಯೋಗಿಸುತ್ತಿದ್ದರು. ಕೃಷಿ ಕಾರ್ಯದಲ್ಲಿ ಅಪಾರ ಆಸಕ್ತಿ ಹೊಂದಿದ್ದ ಶ್ರೀಗಳು ಶ್ರೀಮಠದ ಜಮೀನುಗಳಲ್ಲಿ ಸ್ವತಃ ವ್ಯವಸಾಯದಲ್ಲಿ ತೊಡಗಿಸಿಕೊಂಡಿದ್ದರು. ವಿದ್ಯಾರ್ಥಿನಿಲಯ ಮತ್ತು ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿ ಸುತ್ತಮುತ್ತಲಿನ ಅರಣ್ಯ ಪ್ರದೇಶದ ಹಳ್ಳಿಗಳ ಗಿರಿಜನರ ಮಕ್ಕಳಿಗೂ ಶಿಕ್ಷಣ ದೊರೆಯುವಂತೆ ಅವಕಾಶ ಮಾಡಿದ್ದರು.

ಶ್ರೀ ಮಲೆ ಮಹದೇಶ್ವರ ಬೆಟ್ಟ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರಾಗಿ ಶ್ರೀಕ್ಷೇತ್ರದ ಅಭಿವೃದ್ಧಿಗಾಗಿ ಮಾರ್ಗದರ್ಶನ ಮಾಡಿದ್ದರು. 2020ರಲ್ಲಿ ಶ್ರೀ ಶಾಂತಮಲ್ಲಿ ಕಾರ್ಜುನ ಸ್ವಾಮಿಗಳನ್ನು ಉತ್ತರಾಧಿಕಾರಿ ಗಳನ್ನಾಗಿ ಮಾಡಿ ಶ್ರೀಮಠದ ಸಂಪೂರ್ಣ ಜವಾಬ್ದಾರಿ ವಹಿಸಿಕೊಟ್ಟಿದ್ದರು. ವಯೋಸಹಜ ಕಾರಣದಿಂದಾಗಿ ಶ್ರೀಗಳು ಲಿಂಗೈಕ್ಯರಾಗಿದ್ದಾರೆ.

ಭಗವಂತನು ಶ್ರೀಗಳ ಆತ್ಮಕ್ಕೆ ಶಾಂತಿಯನ್ನು, ಅವರ ಅಪಾರ ಭಕ್ತವೃಂದಕ್ಕೆ ದುಃಖವನ್ನು ಭರಿಸುವ ಶಕ್ತಿಯನ್ನು ನೀಡಲೆಂದು ಹಾಗೂ ಕಿರಿಯ ಶ್ರೀಗಳಾದ ಶ್ರೀ ಶಾಂತಮಲ್ಲಿಕಾರ್ಜುನ ಸ್ವಾಮಿಗಳವರು ಶ್ರೀಮಠದ ಎಲ್ಲಾ ಧಾರ್ಮಿಕ, ಸಾಮಾಜಿಕ ಕಾರ್ಯಗಳನ್ನು ಎಂದಿನಂತೆ ನಿರಂತರವಾಗಿ ಮುಂದುವರಿಸಿಕೊಂಡು ಹೋಗಲೆಂದು ಗೋಷ್ಠಿಯ ವತಿಯಿಂದ ಹಾರೈಸಲಾಗಿದೆ.

ಜೈವಿಕ ಅನಿಲ ಶವಸಂಸ್ಕಾರ ಸ್ಥಾವರಕ್ಕೆ ಸ್ಥಳೀಯರ ತೀವ್ರ ವಿರೋಧ

- ಮಂಚೇಗೌಡನಕೊಪ್ಪಲಿನ ಚಿತಾಗಾರದಲ್ಲಿ ಸ್ಥಾಪಿಸಲುದ್ದೇಶಿಸಿರುವ ಜೈವಿಕ ಅನಿಲ ಸ್ಥಾವರ
- ವಿದ್ಯಾರಣ್ಯಪುರಂನ ಸಿವೇಜ್ ಫಾರಂಗೆ ಸ್ಥಳಾಂತರ
- ಒಂದೂವರೆ ತಿಂಗಳೊಳಗೆ ಚಾಮುಂಡಿಬೆಟ್ಟದ ತಪ್ಪಲಿನ ಹರಿಶ್ಚಂದ್ರ ಘಾಟ್‌ನಲ್ಲಿ ಜೈವಿಕ ಅನಿಲದ ಶವಸಂಸ್ಕಾರ ಸ್ಥಾವರ ಕಾರ್ಯಾರಂಭ

ಮೈಸೂರು, ಮೇ20(ಬಿಎಲ್‌ಯು)-ಮೈಸೂರಿನ ಮಂಚೇಗೌಡನಕೊಪ್ಪಲಿನ ರುದ್ರಭೂಮಿಯಲ್ಲಿ ಜೈವಿಕ ಅನಿಲ (ಬಯೋ ಗ್ಯಾಸ್) ಶವಸಂಸ್ಕಾರ ಸ್ಥಾವರ ಸ್ಥಾಪನೆಗೆ ಸ್ಥಳೀಯರಿಂದ ತೀವ್ರ ವಿರೋಧ ವ್ಯಕ್ತವಾದ ಹಿನ್ನೆಲೆಯಲ್ಲಿ ಉದ್ದೇಶಿತ ಸ್ಥಾವರವನ್ನು ತ್ಯಾಜ್ಯ ವಿಲೇವಾರಿ ಘಟಕ ವಿದ್ಯಾರಣ್ಯಪುರಂನ ಸಿವೇಜ್ ಫಾರಂಗೆ ಸ್ಥಳಾಂತರ ಮಾಡಲು ತೀರ್ಮಾನಿಸಲಾಗಿದೆ.

ಅನಾದಿ ಕಾಲದಿಂದಲೂ ಕಟ್ಟಿಗೆಯಿಂದ ಶವಸಂಸ್ಕಾರ ಮಾಡಲಾಗುತ್ತಿತ್ತು. ಆದರೆ ಗಿಡ-ಮರ ಕಡಿದು ಕಾಡು ನಾಶ ಮಾಡದಂತೆ ಸರ್ಕಾರ ಕಟ್ಟಾಜ್ಞೆ ಮಾಡಿದ ನಂತರ, ಬೆರಣಿಯಿಂದ ಶವಸಂಸ್ಕಾರ ಮಾಡಲಾಗುತ್ತಿತ್ತು. ಆದರೆ ನಗರ ಪ್ರದೇಶದಲ್ಲಿ ಹಸು ಸಾಕಾಣಿಕೆಗೆ ಸ್ಥಳಾವಕಾಶ ಇಲ್ಲದ ಕಾರಣ ಇದಕ್ಕೂ ತಿಲಾಂಜಲಿ ಆಡಲಾಯಿತು.

ತರುವಾಯ ವಿದ್ಯುತ್ ಚಿತಾಗಾರದ ಮೂಲಕ ಶವಸಂಸ್ಕಾರ ಮಾಡಲಾಗುತ್ತಿತ್ತು. ಆದರೆ ಇದರಿಂದಲೂ ದಟ್ಟ ಹೊಗೆ ಆವರಿಸಿ ಪರಿಸರ ಮಾಲಿನ್ಯ, ಜೊತೆಗೆ ವಾಸನೆ, ಅಧಿಕ ವೆಚ್ಚವಾಗುತ್ತಿತ್ತು. ಈ ಹಿನ್ನೆಲೆಯಲ್ಲಿ ಎಲ್‌ಪಿಜಿ (ದ್ರವೀಕೃತ ಪೆಟ್ರೋಲಿಯಂ ಅನಿಲ) ಬಳಸಿ ಶವಸಂಸ್ಕಾರ ಮಾಡಲಾಗುತ್ತಿತ್ತು. ಇದಕ್ಕೂ ಅಧಿಕ ವೆಚ್ಚವಾಗುತ್ತದೆ ಹಾಗೂ ಹೊಗೆಯಿಂದ ಪರಿಸರ ಮಾಲಿನ್ಯ ಉಂಟಾಗುತ್ತದೆ ಎಂಬ ಕಾರಣಕ್ಕೆ ಅಭಿವೃದ್ಧಿ ಹೊಂದಿದ ಮಹಾನಗರಗಳಂತೆ ಜೈವಿಕ ಅನಿಲದಿಂದ ಶವಸಂಸ್ಕಾರ ನಡೆಸಲು ಮೈಸೂರು ನಗರಪಾಲಿಕೆ ತೀರ್ಮಾನಿಸಿದೆ.

ಮೈಸೂರಿನ ಚಾಮುಂಡಿಬೆಟ್ಟದ ತಪ್ಪಲಿನ ಹರಿಶ್ಚಂದ್ರಘಾಟ್‌ನಲ್ಲಿ 98 ಲಕ್ಷ ವೆಚ್ಚದಲ್ಲಿ ಜೈವಿಕ ಅನಿಲ ಸ್ಥಾವರ ನಿರ್ಮಿಸಿದ್ದು, ಈಗ ಪ್ರಾಯೋಗಿಕವಾಗಿ ಕಸದಿಂದ ಜೈವಿಕ ಅನಿಲ ಉತ್ಪತ್ತಿ ಮಾಡಲಾಗುತ್ತಿದೆ. ಇದು ಪಕ್ಕಾ ಆದ ಮೇಲೆ ಮುಂದಿನ ಒಂದೂವರೆ ತಿಂಗಳಲ್ಲಿ ಜೈವಿಕ ಅನಿಲದಿಂದ ಶವಸಂಸ್ಕಾರ ಪ್ರಕ್ರಿಯೆ ಆರಂಭವಾಗುತ್ತದೆ. ಮೈಸೂರಿನ ಮಂಚೇಗೌಡನಕೊಪ್ಪಲ್‌ನಲ್ಲಿ ಕೂಡ 98 ಲಕ್ಷದಲ್ಲಿ ಜೈವಿಕ ಅನಿಲದಿಂದ ಶವಸಂಸ್ಕಾರ ಮಾಡುವ ಸ್ಥಾವರ ನಿರ್ಮಾಣ ಮಾಡಲಾಯಿತು. ಈ ಉದ್ದೇಶಕ್ಕೆ ಬೃಹತ್ ಟ್ಯಾಂಕರ್ ಹಾಗೂ ಪೈಪ್‌ಲೈನ್ ಅಳವಡಿಸಲಾಗುತ್ತಿತ್ತು. ಇದನ್ನು ನೋಡಿ ಭಯಭೀತರಾದ ಸ್ಥಳೀಯ ಜನರು ಜೈವಿಕ ಅನಿಲ ಸ್ಥಾವರ ನಿರ್ಮಾಣಕ್ಕೆ ಅಡ್ಡಿ ಉಂಟು ಮಾಡಿದರು.

ಯಾವುದೇ ಕಾರಣಕ್ಕೂ ಜೈವಿಕ ಅನಿಲ ಸ್ಥಾವರ ಸ್ಥಾಪನೆ ಮಾಡಬಾರದು ಎಂದು ಪಟ್ಟು ಹಿಡಿದರು. ಯಾವುದೇ ತೊಂದರೆ ಆಗುವುದಿಲ್ಲ ಎಂದು ಸ್ಥಳೀಯ ಶಾಸಕ ಕೆ.ಹರೀಶ್‌ಗೌಡ ಹಾಗೂ ನಗರಪಾಲಿಕೆ ಅಧಿಕಾರಿಗಳು ಮನವೊಲಿಸಲೆತ್ನಿಸಿದರೂ ಸ್ಥಳೀಯ ಜನರು ಕೇಳಲಿಲ್ಲ. ಯಾವುದೇ ಕಾರಣಕ್ಕೂ ಜೈವಿಕ ಅನಿಲ ಸ್ಥಾವರ ನಿರ್ಮಾಣ ಮಾಡಲು ನಾವು ಬಿಡುವುದಿಲ್ಲ ಎಂದು ಪಟ್ಟು ಹಿಡಿದರು. ಇದರಿಂದ ಜೈವಿಕ ಅನಿಲ ಸ್ಥಾವರ ನಿರ್ಮಾಣ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಲಾಗಿದೆ.

ಈಗ ಇಲ್ಲಿ ಸ್ಥಾಪಿಸಲು ಉದ್ದೇಶಿಸಿದ ಜೈವಿಕ ಅನಿಲ ಸ್ಥಾವರವನ್ನು ನಗರದ ವಿದ್ಯಾರಣ್ಯಪುರಂನ ಸಿವೇಜ್ ಫಾರಂಗೆ ಸ್ಥಳಾಂತರ ಮಾಡಲು ತೀರ್ಮಾನ ಮಾಡಲಾಗಿದೆ. ನಗರದ ದಕ್ಷಿಣ ಭಾಗದ ಕಸ ಸಿವೇಜ್ ಫಾರಂಗೆ ಬರುವ ಕಾರಣ ಆ ಕಸದಲ್ಲಿ ಜೈವಿಕ ಅನಿಲ ಉತ್ಪಾದನೆ ಮಾಡಲು ತೀರ್ಮಾನಿಸಲಾಗಿದೆ.

ಅಲ್ಲಿ ಉತ್ಪಾದನೆ ಆಗುವ ಜೈವಿಕ ಅನಿಲದಿಂದ ಇಂಧನ ಉತ್ಪತ್ತಿ ಮಾಡಿ ಸುತ್ತಮುತ್ತಲ ಬಡಾವಣೆಯ ಬೀದಿದೀಪಗಳಿಗೆ ಸಂಪರ್ಕ ನೀಡಲು ನಿರ್ಧರಿಸಲಾಗಿದೆ.



ಮಂಚೇಗೌಡನಕೊಪ್ಪಲಿನ ಸ್ಮಶಾನದಲ್ಲಿ ಸ್ಥಾಪಿಸಲಾದ ಜೈವಿಕ ಅನಿಲ ಸ್ಥಾವರವನ್ನು ಅಲ್ಲಿನ ನಿವಾಸಿಗಳ ವಿರೋಧದ ನಂತರ ವಿದ್ಯಾರಣ್ಯಪುರಂ ಸಿವೇಜ್ ಫಾರಂಗೆ ಸ್ಥಳಾಂತರಿಸಲು ತೀರ್ಮಾನಿಸಲಾಗಿದೆ.

ಸಹಕಾರ ಡಿಪ್ಲೊಮಾ ತರಬೇತಿಗೆ ಅರ್ಜಿ ಆಹ್ವಾನ

ಮೈಸೂರು, ಮೇ 20- ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್, ಮೈಸೂರು ಸಹಕಾರ ತರಬೇತಿ ಸಂಸ್ಥೆಯು ಜುಲೈ 1ರಿಂದ 6 ತಿಂಗಳ ಅವಧಿಯ ರೆಗ್ಯೂಲರ್ ಡಿಪ್ಲೊಮಾ ಇನ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್, ಸಹಕಾರ ಸಂಘ ಸಂಸ್ಥೆಗಳ ಸಿಬ್ಬಂದಿಗೆ ದೂರ ಶಿಕ್ಷಣ ಡಿಪ್ಲೊಮಾ ಇನ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್ ಕೋರ್ಸ್ ಸಹಕಾರ ತರಬೇತಿ ಪ್ರಾರಂಭಿಸುತ್ತಿದ್ದು, ಅರ್ಜಿಗಳನ್ನು ಆಹ್ವಾನಿಸಲಾಗಿದೆ. ವಿದ್ಯಾರ್ಹತೆ ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ತರಬೇತಿ ಅವಧಿಯಲ್ಲಿ ಪ್ರತಿ ತಿಂಗಳು ಪರಿಶಿಷ್ಟ ಜಾತಿ, ಪಂಗಡದ ಅಭ್ಯರ್ಥಿಗಳಿಗೆ ರೂ. 600 ಶಿಷ್ಯವೇತನ ಹಾಗೂ ಇತರೆ ಎಲ್ಲಾ ಅಭ್ಯರ್ಥಿಗಳಿಗೆ ರೂ. 500 ಶಿಷ್ಯ ವೇತನ ನೀಡಲಾಗುವುದು. ಆಸಕ್ತರು ಅರ್ಜಿಗಳನ್ನು ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್, ಸಹಕಾರ ಭವನ, ಚಾಮರಾಜ ಜೋಡಿ ರಸ್ತೆ, ಮೈಸೂರು-4 ಇಲ್ಲಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಕೊನೆಯ ಜೂ.10. ಮಾಹಿತಿಗೆ ದೂ. 0821-2520563, ಮೊ. 9902189872, 9845918519, 9535250704

ಉಚಿತ ತರಬೇತಿ ಶಿಬಿರ

ಮೈಸೂರು, ಮೇ 20- ವಿಶ್ವ ಯೋಗ ದಿನಾಚರಣೆ ಅಂಗವಾಗಿ ಕನಸು ಎಜುಕೇಷನಲ್ ಅಂಡ್ ಚಾರಿಟಬಲ್ ಟ್ರಸ್ಟ್ ಹಾಗೂ ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಮಾರ್ಷಿಯಲ್ ಆರ್ಟ್ಸ್ ಮತ್ತು ಯೋಗ ಸಂಸ್ಥೆ ಸಂಯುಕ್ತ ಆಶ್ರಯದಲ್ಲಿ ಕರಾಟೆ ಮತ್ತು ಯೋಗವನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಜೂನ್ ಮಾಹೆಯಲ್ಲಿ ಉಚಿತ ಕರಾಟೆ ಮತ್ತು ಯೋಗ ತರಬೇತಿಯನ್ನು ಜೇನುಮಲೆ ಗೋಲ್ಡ್ ಪಿಂಚ್ ಹೆರಿಟೇಜ್ ಲೇಔಟ್ ಮತ್ತು ಲೀಡ್ಸ್ ಕೇಂದ್ರೀಯ ವಿದ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದೆ. ಮಾಹಿತಿಗೆ ಮೊ. 9972125718

ಪ್ರತಿಭಟನೆ...



ಮೈಸೂರಿನ ಸೋಮನಾಥನಗರದಲ್ಲಿ ಕಬಿನಿ ನೀರು ಪೂರೈಕೆ, ಬೀದಿದೀಪ ಸೇರಿದಂತೆ ನಾನಾ ಸಮಸ್ಯೆ ನಿವಾರಣೆಗೆ ಆಗ್ರಹಿಸಿ ಬಡಾವಣೆಯ ನಿವಾಸಿಗಳು ಬೋಗಾದಿ ಪಟ್ಟಣ ಪಂಚಾಯತಿ ಕಚೇರಿ ಬಳಿ ಪ್ರತಿಭಟನೆ ನಡೆಸಿ, ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಸಾರ್ವಜನಿಕರು, ಪರಿಸರವಾದಿಗಳ ಸಭೆ ನಡೆಸದ ಆರೋಪ

ಮರ ಕಡಿಯಲು ಅನುಮತಿ ನೀಡುತ್ತಿರುವ ಎಸಿಎಫ್ ರವೀಂದ್ರ ಅವರ ವರ್ಗಾವಣೆಗೆ ಆಗ್ರಹಿಸಿ ಪ್ರತಿಭಟನೆ



ಎಸಿಎಫ್ ರವೀಂದ್ರ ಅವರ ವರ್ಗಾವಣೆಗೆ ಒತ್ತಾಯಿಸಿ ಪರಿಸರ ಸಂರಕ್ಷಣಾ ಸಮಿತಿಯಿಂದ ಅಶೋಕಪುರಂನಲ್ಲಿರುವ ಅರಣ್ಯ ಭವನದ ಮುಂದೆ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಮೇ20(ಜಿಎ)-ಸಾರ್ವಜನಿಕರು, ಪರಿಸರವಾದಿಗಳ ಸಭೆ ನಡೆಸದೆ ಮರಗಳನ್ನು ಕಡಿಯಲು ಅನುಮತಿ ನೀಡುತ್ತಿರುವ ಎಸಿಎಫ್ ರವೀಂದ್ರ ಅವರನ್ನು ವರ್ಗಾವಣೆ ಮಾಡಬೇಕೆಂದು ಒತ್ತಾಯಿಸಿ ಪರಿಸರ ಸಂರಕ್ಷಣಾ ಸಮಿತಿಯಿಂದ ಅಶೋಕಪುರಂನಲ್ಲಿರುವ ಅರಣ್ಯ ಭವನದ ಮುಂದೆ ಪ್ರತಿಭಟನೆ ನಡೆಸಲಾಯಿತು.

ಮೈಸೂರಿನ ಅರಣ್ಯ ಭವನದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಸಿಎಫ್ ರವೀಂದ್ರ ನೂರಾರು ವರ್ಷಗಳ ಸಾವಿರಾರು ಮರಗಳ ಹನನಕ್ಕೆ ಅನುಮತಿ ನೀಡಿ ಪರಿಸರ ಹಾಳು ಮಾಡಿದ್ದಾರೆ. 50 ಮರಗಳಿಗೆ ಸಂಬಂಧಿಸಿದ್ದರೆ ಸಾರ್ವಜನಿಕ ಸಭೆ ಕರೆಯಬೇಕು. ಸಭೆಯಲ್ಲಿ ಮರ ಕಡಿಯಲು ತೀರ್ಮಾನವಾಗಬೇಕು. ಇದೆಲ್ಲ ತೊಂದರೆ ಯಾಕೆ ಎಂದು ಎಲ್ಲ ಪ್ರದೇಶದಲ್ಲಿ ಮರಗಳ ಹನನ ಮಾಡಿಸುತ್ತ ಬಂದಿದ್ದಾರೆ ಎಂದು ದೂರಿದರು. ನಗರದಲ್ಲಿ ಇತ್ತೀಚೆಗೆ ಅಭಿವೃದ್ಧಿ ನೆಪದಲ್ಲಿ ನೂರಾರು ಮರಗಳ ಮಾರಣಹೋಮ ನಡೆಯುತ್ತಿದೆ ಮತ್ತೆ ಅದೇ ಜಾಗದಲ್ಲಿ ಸಸಿಗಳನ್ನು ನೆಡುತ್ತಿಲ್ಲ. ಈ ಕುರಿತು ವಿಚಾರಿಸಿದರೆ ನಮ್ಮ ಬಳಿ ಹಣವಿಲ್ಲ ಎಂದು ಬೇಜವಾಬ್ದಾರಿ ಉತ್ತರ ನೀಡುತ್ತಾರೆ. ಇತ್ತೀಚಿನ ದಿನಗಳಲ್ಲಿ ಪರಿಸರವನ್ನು ಹೆಚ್ಚಾಗಿ ಹಾಳು ಮಾಡುತ್ತಿದ್ದಾರೆ. ಮತ್ತೆ ಈಗಿನ ತಾಪಮಾನದ ಏರಿಳಿತ ಇದನೆಲ್ಲ ಪರಿ ಗಣಿಸಿ ಪರಿಸರ ಉಳಿಸುವ ನಿಟ್ಟಿನಲ್ಲಿ ಹೆಚ್ಚು ಹೆಚ್ಚು ಸಸಿಗಳನ್ನು ನೆಟ್ಟು ಪೋಷಿಸುವ ಕಾರ್ಯ ಮಾಡಬೇಕು. ಸಭೆ ನಡೆಸದೆ ಮರಗಳ ಹನನಕ್ಕೆ ಅನುಮತಿ ನೀಡುತ್ತಿರುವ ಎಸಿಎಫ್ ರವೀಂದ್ರ ಅವರನ್ನು ಈ ಕೂಡಲೇ ವರ್ಗಾವಣೆ ಮಾಡಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಸಮಿತಿ ಅಧ್ಯಕ್ಷೆ ಭಾನು ಮೋಹನ್, ಹೋರಾಟಗಾರರಾದ ಭಾಮಿ ಶೆಣೈ, ಅರವಿಂದ್ ಶರ್ಮಾ, ಕೆಆರ್‌ಎಸ್ ಪಕ್ಷದ ಕಾರ್ಯಕರ್ತರು ಪಾಲ್ಗೊಂಡಿದ್ದರು.

ಯುವರಾಜ ಕಾಲೇಜು ಪ್ರಾಧ್ಯಾಪಕಿ ಡಾ.ದೇವಕಿಯವರಿಗೆ ಆತ್ಮೀಯ ಬೀಳ್ಕೊಡುಗೆ



ಯುವರಾಜ ಕಾಲೇಜಿನ ನಿವೃತ್ತ ಪ್ರಾಧ್ಯಾಪಕಿ ಡಾ.ಎನ್.ಎಸ್.ದೇವಕಿ ಅವರನ್ನು ಆತ್ಮೀಯವಾಗಿ ಗೌರವಿಸಿ, ಬೀಳ್ಕೊಡಲಾಯಿತು.

ಮೈಸೂರು, ಮೇ 20- ಮೈಸೂರಿನ ಯುವರಾಜ ಕಾಲೇಜು ಅಣುಜೀವ ವಿಜ್ಞಾನ ವಿಭಾಗದ ಪ್ರಾಧ್ಯಾಪಕಿ ಹಾಗೂ ಮುಖ್ಯಸ್ಥೆ ಡಾ.ಎನ್.ಎಸ್.ದೇವಕಿ ಅವರು ನಿವೃತ್ತಿಯಾಗುತ್ತಿರುವ ಹಿನ್ನೆಲೆಯಲ್ಲಿ ಕನ್ನಡ ವಿಭಾಗದ ವತಿಯಿಂದ ಗೌರವಿಸಲಾಯಿತು.

ಡಾ.ದೇವಕಿ ಅವರು ಯುವರಾಜ ಕಾಲೇಜಿನಲ್ಲಿ ಮೂರು ದಶಕಗಳಿಂದ ಅಧ್ಯಾಪಕರಾಗಿ, ಸಹ ಪ್ರಾಧ್ಯಾಪಕಿಯಾಗಿ, ಪ್ರಾಧ್ಯಾಪಕಿಯಾಗಿ, ವಿಭಾಗದ ಮುಖ್ಯಸ್ಥೆಯಾಗಿ ವಿದ್ಯಾರ್ಥಿಗಳ ಅಚ್ಚುಮೆಚ್ಚಿನ ಗುರುವಾಗಿದ್ದಾರೆ. ಅಣುಜೀವ ವಿಜ್ಞಾನ ವಿಭಾಗದ ಅಧ್ಯಯನ ಮಂಡಳಿ ಹಾಗೂ ಪರೀಕ್ಷಾ ಮಂಡಳಿ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದಾರೆ. ಕಾಲೇಜಿನ ಐಕ್ಯೂಎಸಿ ಸಂಯೋಜಕರಾಗಿ, ವಿಜ್ಞಾನ ವೇದಿಕೆ ಸಂಯೋಜಕರಾಗಿ, ಪರಿಸರ ಸಂರಕ್ಷಣಾ ವೇದಿಕೆ ಸಂಯೋಜಕರಾಗಿಯೂ ಉತ್ತಮವಾಗಿ ಕಾರ್ಯನಿರ್ವಹಿಸಿ ಅಧ್ಯಾಪಕರ, ವಿದ್ಯಾರ್ಥಿಗಳ ಪ್ರಶಂಸೆಗೆ ಪಾತ್ರರಾಗಿದ್ದಾರೆ. ಯುಜಿಸಿ ಅನುದಾನದಿಂದ ಭತ್ತದ ಬೆಳೆಗೆ ತಗಲುವ ಬೆಂಕಿ ರೋಗದ ಬಗ್ಗೆ ಇವರು ಸಂಶೋಧನೆ ಮಾಡಿದ್ದಾರೆ.

ಡಾ.ಎನ್.ಎಸ್.ದೇವಕಿ ಅವರ ಅಧ್ಯಯನ, ಬೋಧನೆ, ಸಂಶೋಧನೆಗಾಗಿ 2016ರಲ್ಲಿ ನವದೆಹಲಿಯ ಇನ್ಸಾಟೀಚರ್ಸ್ ಅಕಾಡೆಮಿ ರಾಷ್ಟ್ರೀಯ ಪ್ರಶಸ್ತಿ ನೀಡಿ ಗೌರವಿಸಿದೆ. 2018ರಲ್ಲಿ ಕರ್ನಾಟಕ ರಾಜ್ಯ ಮಹಿಳಾ ಸಾಧಕಿ ಪ್ರಶಸ್ತಿ ಬಂದಿದೆ. ಇವರು ಬರೆದಿರುವ ಐವತ್ತೆರಡು ಸಂಶೋಧನಾ ಲೇಖನಗಳು ರಾಷ್ಟ್ರಮಟ್ಟದ ನಿಯತಕಾಲಿಕೆಗಳಲ್ಲಿ ಪ್ರಕಟವಾಗಿವೆ. ಇವರ ಮಾರ್ಗದರ್ಶನದಲ್ಲಿ ಹತ್ತು ಮಂದಿ ವಿದ್ಯಾರ್ಥಿಗಳು ಪಿಎಚ್.ಡಿ ಪದವಿ ಪಡೆದಿದ್ದಾರೆ.

ದಕ್ಷಿಣ ಕನ್ನಡಜಿಲ್ಲೆ, ಬಂಟ್ವಾಳ ತಾಲೂಕಿನ ನೀರ್ಕಜೆ ಗ್ರಾಮದವರಾದ ಡಾ.ಎನ್.ಎಸ್.ದೇವಕಿ ಅವರು ಪ್ರಸ್ತುತ ಮೈಸೂರಿನ ನಿವಾಸಿಯಾಗಿದ್ದಾರೆ. ಇವರ ಪತಿ ಗಣೇಶ್ ಅವರು ರಂಗರಾವ್ ಅಂಡ್ ಸನ್ಸ್ ಅಗರಬತ್ತಿ ಸಂಸ್ಥೆಯಲ್ಲಿ ಚಾರ್ಟರ್ಡ್ ಅಕೌಂಟೆಂಟ್ ಆಗಿದ್ದಾರೆ. ಇವರ ಇಬ್ಬರು ಪುತ್ರರು ಇಂಜಿನಿಯರಿಂಗ್ ಪದವೀಧರರಾಗಿದ್ದು, ಖಾಸಗಿ ಕಂಪನಿಯಲ್ಲಿ ಉದ್ಯೋಗಿಗಳಾಗಿದ್ದಾರೆ.

ಡಾ.ಎನ್.ಎಸ್.ದೇವಕಿ ಅವರನ್ನು ಕನ್ನಡ ವಿಭಾಗದ ಮುಖ್ಯಸ್ಥ ಡಾ.ಸಿ.ಡಿ. ಪರಶುರಾಮ, ಪ್ರಾಧ್ಯಾಪಕರಾದ ಡಾ.ಎಂ.ಎಸ್.ವಸಂತಮ್ಮ, ಡಾ.ಜಿ. ಶ್ರೀನಿವಾಸ್, ಡಾ.ಕೋಕಿಲ, ಡಾ.ಎಂ.ಪಿ. ರೇಖಾ ಅವರು ಸನ್ಮಾನಿಸಿ, ಅಭಿನಂದನಾ ನುಡಿಗಳನ್ನಾಡಿದರು. ಈ ಸಂದರ್ಭದಲ್ಲಿ ಕನ್ನಡ ವಿಭಾಗದ ಸಂಶೋಧನಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ದೇಶ - ವಿದೇಶ

ರಷ್ಯಾ-ಉಕ್ರೇನ್ ಕದನ ವಿರಾಮ ಮಾತುಕತೆ ಆರಂಭ: ಟ್ರಂಪ್




ವಾಷಿಂಗ್ಟನ್: ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗೆ ನಡೆದ ಮಾತುಕತೆ ಅತ್ಯಂತ ಫಲಪ್ರದವಾಗಿತ್ತು. ರಷ್ಯಾ ಮತ್ತು ಉಕ್ರೇನ್ ತಕ್ಷಣ ಕದನ ವಿರಾಮ ಮಾತುಕತೆಗಳನ್ನು ಪ್ರಾರಂಭಿಸುತ್ತವೆ ಎಂದು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಶಾವಾದ ವ್ಯಕ್ತಪಡಿಸಿದ್ದಾರೆ. ಟ್ರಂಪ್, ಉಕ್ರೇನ್ ಅಧ್ಯಕ್ಷ ಝೆಲೆನ್ಸ್ಕಿ ಮತ್ತು ರಷ್ಯಾ ಅಧ್ಯಕ್ಷ ಪುಟಿನ್ ಜೊತೆ ಮಾತುಕತೆ ನಡೆಸಿದ್ದಾರೆ. ಅದಕ್ಕಾಗಿ ಷರತ್ತುಗಳನ್ನು ಉಭಯ ನಾಯಕರ ನಡುವೆ ಮಾತುಕತೆ ಮಾಡಲಾಗುತ್ತದೆ. ಬೇರೆ ಯಾರಿಗೂ ತಿಳಿದಿರದ ಮಾತುಕತೆಯ ವಿವರಗಳನ್ನು ಅವರು ತಿಳಿದಿದ್ದಾರೆ ಎಂದು ಹೇಳಿಕೊಂಡಿದ್ದಾರೆ. ಉಕ್ರೇನ್‌ನಲ್ಲಿ ನಡೆಯುತ್ತಿರುವ ಯುದ್ಧದ ಬಗ್ಗೆ ಅಮರಿಕ ತೀವ್ರ ಹತಾಶೆಗೊಂಡಿದೆ ಎಂದು ಶ್ವೇತಭವನ ಹೇಳಿದ ನಂತರ ಈ ಮಾತುಕತೆಗಳು ನಡೆದಿವೆ. ಹೋರಾಟವನ್ನು ಕೊನೆಗೊಳಿಸುವ ಬಗ್ಗೆ ಚರ್ಚಿಸುವುದನ್ನು ಮುಂದುವರಿಸಲು ರಷ್ಯಾ ಸಿದ್ಧವಾಗಿದೆ ಎಂದು ಪುಟಿನ್ ಹೇಳಿದರು. ಆದರೆ ಟ್ರಂಪ್ ಅವರೊಂದಿಗೆ ಬಹಳ ಮಾಹಿತಿಯುಕ್ತ ಮತ್ತು ಅತ್ಯಂತ ಸ್ಪಷ್ಟವಾದ ಸಂಭಾಷಣೆ ಎಂದು ಅವರು ಕರೆದಿದ್ದರಲ್ಲಿ ಯಾವುದೇ ಪ್ರಮುಖ ಪ್ರಗತಿ ಕಂಡುಬಂದಿಲ್ಲ ಎಂದರು.

ಗಡಿಯಲ್ಲಿ 'ಬೀಟಿಂಗ್ ರಿಟ್ರೀಟ್' ಆರಂಭ: ನಾಳೆಯಿಂದ ಸಾರ್ವಜನಿಕರಿಗೆ ಮುಕ್ತ



ನವದೆಹಲಿ: ಭಾರತ-ಪಾಕಿಸ್ತಾನ ಗಡಿಯಲ್ಲಿರುವ ಪಂಜಾಬ್‌ನ 3 ಚೆಕ್ ಪೋಸ್ಟ್‌ಗಳಲ್ಲಿ ಸ್ಥಗಿತಗೊಂಡಿದ್ದ ಬೀಟಿಂಗ್ ರಿಟ್ರೀಟ್ ವೀಕ್ಷಿಸಲು ಸಾರ್ವಜನಿಕರಿಗೆ ಮೇ 21ರಿಂದ ಅವಕಾಶ ನೀಡುವುದಾಗಿ ಗಡಿ ಭದ್ರತಾ ಪಡೆ ತಿಳಿಸಿದೆ. ಬುಧವಾರದಿಂದ ಸಾರ್ವಜನಿಕರು ಭಾಗವಹಿಸಬಹುದು. ಪ್ರತಿದಿನ ಸಂಜೆ 6 ಗಂಟೆಗೆ ಕವಾಯತು ನಡೆಯುತ್ತದೆ ಎಂದು ಪಂಜಾಬ್ ಗಡಿಭಾಗದ ಜಲಂಧರ್‌ನ ಪ್ರಧಾನ ಕಚೇರಿ ತಿಳಿಸಿದೆ. ಕವಾಯತಿನ ಬಳಿಕ ಬಿಎಸ್‌ಎಫ್ ಪಡೆಗಳು ಪಾಕಿಸ್ತಾನ ರೇಂಜರ್‌ಗಳೊಂದಿಗೆ ಹಸ್ತಲಾಘವ ಮಾಡುವುದಿಲ್ಲ. ಜತೆಗೆ ಧ್ವಜ ಇಳಿಸುವ ಪ್ರಕ್ರಿಯೆಯಲ್ಲಿ ಗೇಟ್‌ಗಳನ್ನು ತೆರೆಯಲಾಗುವುದಿಲ್ಲ ಎಂದು ಸ್ಪಷ್ಟಪಡಿಸಿದೆ. ಕಳೆದ 12 ದಿನಗಳಿಂದ ಸಾರ್ವಜನಿಕರ ಉಪಸ್ಥಿತಿ ಇರದಿದ್ದರೂ ಬಿಎಸ್‌ಎಫ್ ಪಡೆಗಳು ಪ್ರತಿದಿನ ಧ್ವಜವನ್ನು ಕೆಳಗಿಳಿಸುವ ಪ್ರಕ್ರಿಯೆ ನಡೆಸುತ್ತಿತ್ತು ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಭಾರತ-ಪಾಕಿಸ್ತಾನದ ನಡುವಿನ ಪರಿಸ್ಥಿತಿ ವಿಷಮಗೊಂಡಿದ್ದ ಕಾರಣ ಸಾರ್ವಜನಿಕರ ಸುರಕ್ಷತಾ ಹಿತದೃಷ್ಟಿಯಿಂದ ಮೇ 8ರಂದು ಕವಾಯತನ್ನು ಸ್ಥಗಿತಗೊಳಿಸಲಾಗಿತ್ತು.

ಸಾಂಕ್ರಾಮಿಕ ಬಿಕ್ಕಟ್ಟು ನಿರ್ವಹಣೆ: ಡಬ್ಲ್ಯೂಎಚ್‌ಒ ರಾಷ್ಟ್ರಗಳ ಒಪ್ಪಂದ



ಬಲೂಚಿಸ್ತಾನ: ಜಿನೆವಾ: ಕೊರೊನಾ ಬಿಕ್ಕಟ್ಟಿನಂತೆ ಭವಿಷ್ಯದಲ್ಲಿ ಸಂಭವಿಸಬಹುದಾದ ಯಾವುದೇ ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟಲು ಹಾಗೂ ಒಗ್ಗಟ್ಟಾಗಿ ಬಿಕ್ಕಟ್ಟು ನಿಭಾಯಿಸುವ ನಿಟ್ಟಿನಲ್ಲಿ ವಿಶ್ವ ಆರೋಗ್ಯ ಸಂಸ್ಥೆಯ (ಡಬ್ಲ್ಯೂಎಚ್‌ಒ) ಸದಸ್ಯ ರಾಷ್ಟ್ರಗಳು ಮಂಗಳವಾರ ಒಪ್ಪಂದವೊಂದಕ್ಕೆ ಸಹಿ ಹಾಕಿವೆ. ಜಿನೆವಾ ಸಭಾಂಗಣದಲ್ಲಿ ನಡೆದ ವಿಶ್ವ ಆರೋಗ್ಯ ಸಂಸ್ಥೆಯ ವಾರ್ಷಿಕ ಸಭೆಯಲ್ಲಿ ಈ ಒಪ್ಪಂದಕ್ಕೆ ಅನುಮೋದನೆ ದೊರೆತಿದೆ.

ಯಾವ ರಾಷ್ಟ್ರವು ತನ್ನ ದೇಶದಲ್ಲಿ ಸಾಂಕ್ರಾಮಿಕ ರೋಗ ಹರಡಿರುವುದನ್ನು ದೃಢಪಡಿಸಿ, ವೈರಸ್‌ನ ಮಾದರಿಯನ್ನು ಸಲ್ಲಿಸುತ್ತದೆಯೋ ಆ ರಾಷ್ಟ್ರಕ್ಕೆ ರೋಗ ಪತ್ತೆ ಪರೀಕ್ಷೆ, ಔಷಧ ಹಾಗೂ ಲಸಿಕೆಗಳನ್ನು ಒದಗಿಸಿಕೊಡುವ ಖಾತರಿಯನ್ನು ಈ ಒಪ್ಪಂದವು ನೀಡುತ್ತದೆ. ಅಲ್ಲದೇ, ಸಾಂಕ್ರಾಮಿಕ ಬಿಕ್ಕಟ್ಟಿಗೆ ಸಿಲುಕಿದ ಬಡರಾಷ್ಟ್ರಗಳಿಗೂ ನೆರವು ನೀಡಲು ಶೇ.20ರಷ್ಟು ಉತ್ಪನ್ನಗಳನ್ನು ಡಬ್ಲ್ಯೂಎಚ್‌ಒಗೆ ನೀಡಲಾಗುತ್ತದೆ ಎಂದೂ ಒಪ್ಪಂದದಲ್ಲಿ ಉಲ್ಲೇಖಿಸಲಾಗಿದೆ. ಒಪ್ಪಂದಕ್ಕೆ ಸಂಬಂಧಿಸಿದಂತೆ ಡಬ್ಲ್ಯುಎಚ್‌ಒ ಪ್ರಧಾನ ನಿರ್ದೇಶಕ ಟೆಡ್ರೊಸ್ ಅಧನೊಮ್ ಘೆಬ್ರೆಯೆಸಸ್ ಮಾತನಾಡಿದ್ದಾರೆ.

ಮಾನನಷ್ಟ ಮೊಕದ್ದಮೆ: ಶಶಿ ತರೂರ್‌ಗೆ ದೆಹಲಿ ಹೈಕೋರ್ಟ್ ನೋಟಿಸ್



ನವದೆಹಲಿ: ಕಾಂಗ್ರೆಸ್ ಸಂಸದ ಶಶಿ ತರೂರ್ ವಿರುದ್ಧ ಮಾನನಷ್ಟ ಮೊಕದ್ದಮೆ ವಜಾಗೊಳಿಸಿದ್ದನ್ನು ಪ್ರಶ್ನಿಸಿ ಸಂಸದ ರಾಜೀವ್ ಚಂದ್ರಶೇಖರ್ ಸಲ್ಲಿಸಿರುವ ಅರ್ಜಿ ವಿಚಾರಣೆ ನಡೆಸುತ್ತಿರುವ ದೆಹಲಿ ಹೈಕೋರ್ಟ್, ಶಶಿ ತರೂರ್ ಅವರ ನಿಲುವನ್ನು ಕೋರಿ ನೋಟಿಸ್ ಜಾರಿ ಮಾಡಿದೆ. ಫೆ.4ರಂದು ಮ್ಯಾಜಿಸ್ಟ್ರೇಟ್ ನ್ಯಾಯಾಲಯದ ತೀರ್ಪನ್ನು ಪ್ರಶ್ನಿಸಿ ಚಂದ್ರಶೇಖರ್ ಸಲ್ಲಿಸಿದ ಪರಿಷ್ಕರಣಾ ಅರ್ಜಿಗೆ ಸಂಬಂಧಿಸಿದಂತೆ ಅರ್ಜಿಪರಿಗಣನೆ ಅಗತ್ಯವಿದೆ ಎಂದು ನ್ಯಾಯಮೂರ್ತಿ ರವೀಂದರ್ ದುಡೇಜಾ ಹೇಳಿದ್ದು, ತರೂರ್‌ಗೆ ನೋಟಿಸ್ ನೀಡಿದ್ದಾರೆ. 2024ರ ಲೋಕಸಭಾ ಚುನಾವಣೆ ಸಮಯದಲ್ಲಿ ಬಿಜೆಪಿ ನಾಯಕರು ತಿರುವನಂತಪುರಂ ಕ್ಷೇತ್ರದ ಮತದಾರರಿಗೆ ಲಂಚ ನೀಡಿದ್ದಾರೆ ಎಂದು ಆರೋಪಿಸಿ, ರಾಷ್ಟ್ರೀಯ ಸುದ್ದಿವಾಹಿನಿಯಲ್ಲಿ ಸುಳ್ಳು ಮತ್ತು ಅವಮಾನಕರ ಹೇಳಿಕೆಗಳನ್ನು ನೀಡುವ ಮೂಲಕ ತರೂರ್ ತಮ್ಮ ಮಾನಹಾನಿ ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ. ಚಂದ್ರಶೇಖರ್ ಪ್ರಕಾರ, ತರೂರ್ ತನ್ನ ಖ್ಯಾತಿಯನ್ನು ಕುಗ್ಗಿಸುವ ಮತ್ತು ಕಳೆದ ಸಾರ್ವತ್ರಿಕ ಚುನಾವಣೆಯ ಫಲಿತಾಂಶದ ಮೇಲೆ ಪರಿಣಾಮ ಬೀರುವ ಉದ್ದೇಶದಿಂದ ಸುಳ್ಳು ಹೇಳಿಕೆ ನೀಡಿದ್ದಾರೆ ಎಂದು ಚಂದ್ರಶೇಖರ್ ವಾದಿಸಿದ್ದಾರೆ.

ಭಾರತ ವಿರೋಧಿ ಚಟುವಟಿಕೆ: ಬ್ರಿಟಿಷ್ ಕಾಶ್ಮೀರಿ ಪ್ರೊಫೆಸರ್ ಪೌರತ್ವ ರದ್ದು



ಲಂಡನ್: ಭಾರತ ವಿರೋಧಿ ಚಟುವಟಿಕೆಗಳ ಆರೋಪದಲ್ಲಿ ಲಂಡನ್‌ನ ವೆಸ್ಟ್‌ಮಿನಿಸ್ಟರ್ ವಿಶ್ವವಿದ್ಯಾಲಯದ ರಾಜಕೀಯ ಮತ್ತು ಅಂತರರಾಷ್ಟ್ರೀಯ ಸಂಬಂಧಗಳ ಬ್ರಿಟಿಷ್ ಕಾಶ್ಮೀರಿ ಪ್ರಾಧ್ಯಾಪಕಿಯೊಬ್ಬರ ಸಾಗರೋತ್ತರ ಪೌರತ್ವ ರದ್ದುಗೊಳಿಸಲಾಗಿದೆ. ಭಾರತದ ಅಧಿಕಾರಿಗಳನ್ನು ನನ್ನ ಸಾಗರೋತ್ತರ ಪೌರತ್ವವನ್ನು ರದ್ದುಗೊಳಿಸಿದ್ದಾರೆಂದು ಪ್ರೊ.ನಿತಾಶಾ ಕೌಲ್ ಆರೋಪಿಸಿದ್ದಾರೆ. ಭಾರತ ಸರ್ಕಾರದಿಂದ ಬಂದಿರುವ ಮಾಹಿತಿಯ ವಿವರಗಳನ್ನು ನಿತಾಶಾ ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿದ್ದಾರೆ. ಭಾರತದಲ್ಲಿ ದ್ವೇಷದ ವಿರುದ್ಧ ಮಾತನಾಡಿದ ಶಿಕ್ಷಣ ತಜ್ಞರನ್ನು ಬಂಧಿಸುವುದು, ಭಾರತದ ಹೊರಗಿನ ಶಿಕ್ಷಣ ತಜ್ಞರಿಗೆ ದೇಶ ಮತ್ತು ಕುಟುಂಬದ ಬಾಂಧವ್ಯ ತಪ್ಪಿಸಲಾಗುತ್ತಿದೆ ಎಂದು ಎಕ್ಸ್‌ನಲ್ಲಿ ಪ್ರಾಧ್ಯಾಪಕಿ ಪೋಸ್ಟ್ ಹಾಕಿದ್ದಾರೆ. ಭಾರತ ಸರ್ಕಾರದಿಂದ ಸ್ವೀಕರಿಸಲಾಗಿದೆ ಎಂದು ಹೇಳಲಾದ ರದ್ದತಿ ದಾಖಲೆಯಲ್ಲಿ, ಕೌಲ್ ಅವರು ಭಾರತದ ಸಾರ್ವಭೌಮತ್ವದ ವಿಷಯಗಳಲ್ಲಿ ಭಾರತ ಮತ್ತು ಅದರ ಸಂಸ್ಥೆಗಳನ್ನು ಗುರಿಯಾಗಿಸಿಕೊಂಡು ವಿವಿಧ ಅಂತರರಾಷ್ಟ್ರೀಯ ಮತ್ತು ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ಪ್ರತಿಕೂಲ ಬರಹಗಳು, ಭಾಷಣಗಳು ಮತ್ತು ಪತ್ರಿಕೋದ್ಯಮ ಚಟುವಟಿಕೆಗಳನ್ನು ಮಾಡಿದ್ದಾರೆ ಎಂದು ಆರೋಪಿಸಲಾಗಿದೆ.

ನಾಯಕತ್ವ ಗುಣವನ್ನು ಬೆಳೆಸಿಕೊಳ್ಳಲು ಕುಲಸಚಿವರ ಕರೆ

ಮಡಿಕೇರಿ, ಮೇ 20– ವಿದ್ಯಾರ್ಥಿಗಳು ನಾಯಕತ್ವ ಗುಣವನ್ನು ಬೆಳೆಸಿಕೊಳ್ಳಲು ವ್ಯಕ್ತಿತ್ವ ವಿಕಸನಕ್ಕೆ ಒತ್ತು ನೀಡುವಂತೆ ಕುಲ ಸಚಿವ ಪ್ರೊ.ಸುರೇಶ ಕರೆ ನೀಡಿದ್ದಾರೆ.

ನಗರದ ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಕಾಲೇಜಿನ ವಾರ್ಷಿಕೋತ್ಸವ ವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇತ್ತೀಚೆಗೆ ಉದ್ಯೋಗದಲ್ಲಿ ಹಿನ್ನಡೆ ಉಂಟಾ ಗುತ್ತಿದ್ದು, ವಿದ್ಯಾರ್ಥಿಗಳು ಪಠ್ಯದ ಜೊತೆ ಪಠ್ಯೇತರ ಚಟುವಟಿಕೆಗಳಲ್ಲಿ ತಮ್ಮನ್ನು ತೊಡಗಿಸಿಕೊಂಡು ನಾಯಕತ್ವ ಗುಣವನ್ನು ಬೆಳೆಸಿಕೊಳ್ಳುವಂತೆ ಕಿವಿಮಾತು ಹೇಳಿದರು.

ಹಳೆ ವಿದ್ಯಾರ್ಥಿ ಸಂಘದ ಅಧ್ಯಕ್ಷ ಬೊಳ್ಳಜ್ಜಿರ ಬಿ.ಅಯ್ಯಪ್ಪ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಸ್ಪರ್ಧಾ ಮನೋಭಾವ ಕಡಿಮೆ ಯಾಗುತ್ತಿದ್ದು, ಅವಕಾಶಗಳನ್ನು ಬಳಸಿಕೊಳ್ಳುವಲ್ಲಿ ವಿಫಲರಾಗುತ್ತಿದ್ದಾರೆ ಎಂದರಲ್ಲದೆ, ಮನರಂಜನೆಗೆ ಪ್ರಾಮು



ಕೆ.ಎಂ.ಕಾರ್ಯಪ್ಪ ಕಾಲೇಜಿನ ವಾರ್ಷಿಕೋತ್ಸವವನ್ನು ಕುಲಸಚಿವ ಪ್ರೊ.ಸುರೇಶ ಉದ್ಘಾಟಿಸಿದರು.

ಖ್ಯತೆ ನೀಡದೆ ತಮ್ಮ ಭವಿಷ್ಯದ ಬಗ್ಗೆ ಹೆಚ್ಚಿನ ಗಮನಹರಿಸಬೇಕೆಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಪ್ರೊ. ಮೇಜರ್ ಬಿ.ರಾಘವ, ಯಶಸ್ಸನ್ನು ಸಾಧಿಸಲು ಶಿಕ್ಷಣ ಎಂಬುದು ವ್ಯಕ್ತಿ, ವ್ಯಕ್ತಿತ್ವ, ಸಮಾಜ ದೇಶವನ್ನು ಪರಿವರ್ತನೆ ಮಾಡುವ ಅಸ್ತ್ರವಾಗಿದೆ. ಆದ್ದರಿಂದ ಶಿಕ್ಷಣಕ್ಕೆ ಒತ್ತು ನೀಡಿ ದುಡಿದು ತಿನ್ನುವ ಅನ್ನ, ಭಕ್ತಿ ಪೂರ್ವಕ ಪ್ರಾರ್ಥನೆ ಮತ್ತು ಪ್ರಾಮಾ ಣಿಕವಾಗಿ ದುಡಿದ ಹಣ ಇವು ಒಂದಲ್ಲ ಒಂದು ದಿನ ಭವಿಷ್ಯಕ್ಕೆ ಆಧಾರ ಸ್ತಂಭಗಳಾಗುತ್ತವೆ ಎಂದು ಹೇಳಿದರು.

ಪೋಷಕ ಶಿಕ್ಷಕ ಸಂಘದ ಉಪಾಧ್ಯಕ್ಷ ಜಯಂತಿ ರೈ ಮಾತನಾಡಿದರು. ಸಮಾಜ ಸೇವಕ ಕ್ರಿಯೇಟಿವ್ ಖಲೀಲ್, ವಿಶ್ವವಿದ್ಯಾನಿಲಯ ಪ್ರತಿನಿಧಿಸಿದ ಕ್ರೀಡಾಪಟು, ಎನ್‌ಸಿಸಿ ಕೆಡೆಟ್, ಎನ್‌ಎಸ್‌ಎಸ್ ವಿದ್ಯಾರ್ಥಿಗಳು, ವಿಶ್ವವಿದ್ಯಾಲಯ ಮಟ್ಟದಲ್ಲಿ ರ‍್ಯಾಂಕ್ ಗಳಿಸಿದ ವಿದ್ಯಾರ್ಥಿಗಳನ್ನು ಇದೇ ಸಂದರ್ಭ ಗೌರವಿಸಲಾಯಿತು.

ವೇದಿಕೆಯಲ್ಲಿ ಐಕ್ಯೂಎಕ್ಯೂ ಸಂಚಾಲಕ ಪ್ರೊ.ನಾಗರಾಜ ಕೆ.ಪಿ, ವಿದ್ಯಾರ್ಥಿ ಸಂಘದ ಪದಾಧಿಕಾರಿಗಳಾದ ಮಹೇಂದ್ರ, ಅಲಿನ್ ಜೇಷ್ಮಾ, ಮೋನಿಶ್ ಎನ್‌ಸಿಸಿ ನಾಯಕ ಗುಣಶೇಖರ್, ಬಿ.ಬಿ.ಕೃತಿ, ಎನ್‌ಎಸ್‌ಎಸ್ ನಾಯಕರಾದ ಟಿ.ವಿ. ವರ್ಷ, ಎಂ.ಮನೋಜ್ ಉಪಸ್ಥಿತರಿದ್ದರು.

ಸಿಂಧೂರ ವಿಜಯೋತ್ಸವ ಪೂರ್ವಭಾವಿ ಸಂಪರ್ಕ ಸಭೆ

ನಾಪೋಕ್ಲು ಮೇ 20– (ದುಗ್ಗಲ) ಮಡಿಕೇರಿಯಲ್ಲಿ ಶುಕ್ರವಾರ ನಡೆಯುವ ಸಿಂಧೂರ ವಿಜಯೋತ್ಸವ ಕಾರ್ಯಕ್ರಮದ ಪೂರ್ವಭಾವಿ ಸಂಪರ್ಕ ಸಭೆ ಭಗವತಿ ದೇವಾಲಯದ ಸಮುದಾಯ ಭವನದಲ್ಲಿ ಜರುಗಿತು.

ನಾಪೋಕ್ಲು ಗ್ರಾಮ ಪಂಚಾಯತಿ ವ್ಯಾಪ್ತಿಯ ಪೂರ್ವಭಾವಿ ಸಂಪರ್ಕ ಸಭೆಯಲ್ಲಿ ಮಾಜಿ ಶಾಸಕ ಕೆ.ಜಿ ಬೋಪಯ್ಯ ಭಾಗವಹಿಸಿ, ಸಿಂಧೂರ ವಿಜಯೋತ್ಸವ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಜನರನ್ನು ಒಗ್ಗೂಡಿಸಿ ಕಾರ್ಯಕ್ರಮದ ಯಶಸ್ವಿಗೆ ಮಾರ್ಗದರ್ಶನ ನೀಡಲಾಯಿತು.

ಕಾರ್ಯಕ್ರಮದಲ್ಲಿ ಶೀವಚಾಳಿಯಂಡ ಅಂಬಿ ಕಾರ್ಯಪ್ಪ, ಜಗದೀಶ್, ಕಂಗಂಡ ಜಾಲಿ ಪೂವಪ್ಪ ಕನ್ನಂಬೀರ ಸುಧಿ ತಿಮ್ಮಯ್ಯ, ಪಾಡಿಯಮ್ಮಂಡ ಮನು ಮಹೇಶ್, ಚಂದ್ರ ಉಡೋತ್, ಪ್ರಕಾಶ್, ಪಟ್ರಪಂಡ ನಿರನ್, ಚೋಕಿರ ಸಜಿತ್ ಇನ್ನಿತರು ಭಾಗವಹಿಸಿದ್ದರು.

ಶುಕ್ರವಾರ ಮಡಿಕೇರಿಯಲ್ಲಿ ಸಿಂಧೂರ ವಿಜಯೋತ್ಸವ



ಸುದ್ದಿಗೋಷ್ಠಿಯಲ್ಲಿ ಸಿಂಧೂರ ವಿಜಯೋತ್ಸವ ಸಮಿತಿ ಸದಸ್ಯ ಕುಕ್ಕೇರ ಅಜಿತ್ ಉಪಸ್ಥಿತರಿದ್ದರು.

ಮಡಿಕೇರಿ,ಮೇ 20– ಆಪರೇಷನ್ ಸಿಂಧೂರ ಯಶಸ್ಸಿನ ಹಿನ್ನೆಲೆಯಲ್ಲಿ ನಗರದಲ್ಲಿ ಸಿಂಧೂರ ವಿಜಯೋತ್ಸವ ಮೇ23 ರಂದು ನಡೆಯಲಿದೆ.

ಬೆಳಗ್ಗೆ 10.30ರಿಂದ ನಗರದ ಎ.ವಿ ಶಾಲೆಯ ಬಳಿಯ ಬನ್ನಿ ಮಂಟಪದಿಂದ ಪಕ್ಷ, ಧರ್ಮ ಭೇದವಿಲ್ಲದೆ ಮೆರವಣಿಗೆ ಗಾಂಧಿ ಮೈದಾನದವರೆಗೆ ನಡೆಯಲಿದೆ ಯೆಂದು ಸಿಂಧೂರ ವಿಜಯೋತ್ಸವ ಸಮಿತಿ ಸಂಚಾಲಕ ಕೆ.ಕೆ.ದಿನೇಶ್ ಕುಮಾರ್ ಸುದ್ದಿ ಗೋಷ್ಠಿಯಲ್ಲಿ ತಿಳಿಸಿದರು.

ಜಿಲ್ಲಾ ವ್ಯಾಪ್ತಿಯ ಸಹಸ್ರಾರು ದೇಶ ಪ್ರೇಮಿಗಳು ಪಾಲ್ಗೊಳ್ಳಲಿದ್ದು, ಈ ಮೆರವಣಿಗೆಯಲ್ಲಿ 300 ಅಡಿ ಉದ್ದದ ಬೃಹತ್ ರಾಷ್ಟ್ರ ಧ್ವಜ ಕೊಂಡೊಯ್ಯಲಾಗುತ್ತದೆ ಎಂದು ಹೇಳಿದರು.

ಮುಂಚೂಣಿಯಲ್ಲಿ ಸೇನಾಧಿಕಾರಿಗಳು: ಜಿಲ್ಲೆಯ ಮಾಜಿ ಸೈನ್ಯಾಧಿಕಾರಿಗಳು ಹಾಗೂ ಸೈನಿಕರು ತಮ್ಮ ಸಮವಸ್ತ್ರಗಳೊಂದಿಗೆ ಮೆರವಣಿಗೆ ಮುಂಚೂಣಿಯಲ್ಲಿ ಪಾಲ್ಗೊಳ್ಳಲಿದ್ದಾರೆ. ನಂತರ ಮಹಿಳೆಯರು ಬೃಹತ್ ರಾಷ್ಟ್ರಧ್ವಜ, ಇದನ್ನು ಹಿಂಬಾಲಿಸಿಕೊಂಡು ಸಹಸ್ರಾರು ದೇಶಭಕ್ತ ಸಾರ್ವಜನಿಕರು, ಸಂಘ ಸಂಸ್ಥೆಗಳ ಪ್ರಮುಖರು, ಸದಸ್ಯರು ಗಳು ಪಾಲ್ಗೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದರು. 'ಸಿಂಧೂರ ವಿಜಯೋತ್ಸವ'ದಲ್ಲಿ ರಾಷ್ಟ್ರ ಭಕ್ತಿಯ ಘೋಷಣೆಗಳಿಗಷ್ಟೆ ಅವಕಾಶವಿದ್ದು, ಯಾವುದೇ ಪಕ್ಷದ ಧ್ವಜಗಳಿಗೂ ಅವಕಾಶ ವಿರುವುದಿಲ್ಲ. ಇದಕ್ಕೆ ಬದಲಾಗಿ ತಿರಂಗ ಧ್ವಜದೊಂದಿಗಿನ ಯಾತ್ರೆ ಇದಾಗಿರಲಿದೆ ಎಂದು ಅವರು ಸ್ಪಷ್ಟಪಡಿಸಿದರು.

ಸಿಂಧೂರ ವಿಜಯೋತ್ಸವದ ಬಳಿಕ ಮಧ್ಯಾಹ್ನ 12 ಗಂಟೆಗೆ ಗಾಂಧಿ ಮೈದಾನದಲ್ಲಿ ಕರ್ನಲ್ ಚೋಂದಮ್ಮ(ನಿವೃತ್ತ) ಅಧ್ಯಕ್ಷತೆಯಲ್ಲಿ ಜನಜಾಗೃತಿ ಸಭೆ ನಡೆಯಲಿದ್ದು, ನಿವೃತ್ತ ಸೇನಾಧಿಕಾರಿಗಳು ಪಾಲ್ಗೊಳ್ಳಲಿದ್ದಾರೆ. ರಾಷ್ಟ್ರೀಯವಾದಿ ಪ್ರಮುಖರೊಬ್ಬರು ದಿಕ್ಸೂಚಿ ಭಾಷಣ ಮಾಡಲಿದ್ದಾರೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಸಿಂಧೂರ ವಿಜಯೋತ್ಸವ ಸಮಿತಿ ಸದಸ್ಯ ಕುಕ್ಕೇರ ಅಜಿತ್ ಇದ್ದರು.

ಎಸ್ಪಿ ಸೇರಿ ಮೂವರಿಗೆ ಪ್ರತಿಷ್ಠಿತ ಪ್ರಶಸ್ತಿ



ಕೆ.ರಾಮರಾಜನ್ ಮಹದೇವ ಸುಮತಿ

ಮಡಿಕೇರಿ,ಮೇ 20– ಅತ್ಯುತ್ತಮ ಕರ್ತವ್ಯ ನಿರ್ವಹಣೆಗಾಗಿ ರಾಜ್ಯ ಪೊಲೀಸ್ ಇಲಾಖೆಯ ಉನ್ನತಾಧಿ ಕಾರಿಗಳಿಂದ ನೀಡಲ್ಪಡುವ ಪ್ರಶಸ್ತಿಗೆ ಎಸ್ಪಿ ಕೆ.ರಾಮರಾಜನ್, ಸೋಮವಾರಪೇಟೆ ಪಿಎಸ್‌ಐ ಮುದ್ದು ಮಹದೇವ, ವಿಶೇಷ ಮಕ್ಕಳ ಘಟಕ ಕಲ್ಯಾಣಾಧಿಕಾರಿ ಮತ್ತು ಹೆಡ್‌ಕಾನ್ಸ್ ಟೇಬಲ್ ಸುಮತಿ ಭಾಜನರಾಗಿದ್ದಾರೆ.

ಇದು ರಾಜ್ಯ ಪೊಲೀಸ್ ಡಿ.ಜಿ ಮತ್ತು ಐಜಿಪಿ ಮೊದಲ ಬಾರಿಗೆ ನೀಡುತ್ತಿರುವ ಪ್ರಶಸ್ತಿಯಾಗಿದ್ದು, ಪ್ರತಿಷ್ಠಿತ ಈ ಮೂವರು ಭಾಜನರಾಗಿದ್ದಾರೆ ರಾಜ್ಯದಲ್ಲಿ ಅತ್ಯುತ್ತಮ ಕಾರ್ಯನಿರ್ವಹಣೆ ಮಾಡುವ ಪೊಲೀಸರಿಗೆ ಪ್ರೋತ್ಸಾಹ ನೀಡಲು ಉನ್ನತಾಧಿಕಾರಿಗಳು ಸ್ಥಾಪಿಸಿರುವ ಪ್ರಶಸ್ತಿ ಇದಾಗಿದೆ. ನಾಳೆ ಬೆಂಗಳೂರಿನಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ.

ಸಂಹಿತೆ ರದ್ದುಪಡಿಸುವಂತೆ ಒತ್ತಾಯಿಸಿ ಸಿಐಟಿಯು ಪ್ರತಿಭಟನೆ

ಮಡಿಕೇರಿ: ಕೇಂದ್ರ ಸರ್ಕಾರ ರೂಪಿಸಿರುವ ಕಾರ್ಮಿಕ ವಿರೋಧಿ 4 ಸಂಹಿತೆಗಳನ್ನು ರದ್ದು ಪಡಿಸುವಂತೆ ಒತ್ತಾಯಿಸಿ ಜಿಲ್ಲಾಧಿಕಾರಿ ಕಚೇರಿ ಎದುರು ಸಿಐಟಿಯು ಸಂಘಟನೆ ಪ್ರತಿಭಟನೆ ನಡೆಯಿತು.

ದೇಶದಲ್ಲಿ ಸುಮಾರು 50 ಕೋಟಿಯಷ್ಟು ದುಡಿಯುವ ವರ್ಗವಿದೆ. ಕಾರ್ಮಿಕರ ಹೋರಾಟದ ಫಲವಾಗಿ ಕೆಲಸದ ಸಮಯ 8 ಗಂಟೆ ಎಂದು ನಿಗಧಿಯಾಗಿತ್ತು. ಆದರೆ ಕೇಂದ್ರ ಸರ್ಕಾರ ಕಾರ್ಪೋರೇಟ್ ಸಂಸ್ಥೆಗಳಿಗೆ ಲಾಭ ಮಾಡಿಕೊಡಲು 12 ಗಂಟೆ ದುಡಿಯಬೇಕು ಎಂದು ಹೇಳುತ್ತಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ವೇತನ ಸಂಹಿತೆಯಲ್ಲಿ 4 ಕಾನೂನು,



ಕಾರ್ಮಿಕ ವಿರೋಧಿ ಸಂಹಿತೆ ರದ್ದು ಪಡಿಸುವಂತೆ ಒತ್ತಾಯಿಸಿ ಸಿಐಟಿಯು ಪ್ರತಿಭಟನೆ ನಡೆಯಿತು.

ಕೈಗಾರಿಕಾ ಬಾಂಧವ್ಯ ಸಂಹಿತೆಯಲ್ಲಿ 3 ಕಾನೂನು, ಔದ್ಯೋಗಿಕ ಸುರಕ್ಷತೆ, ಆರೋಗ್ಯ ಮತ್ತು ಕೆಲಸದ ಪರಿಸ್ಥಿತಿಗಳ ಸಂಹಿತೆಯಲ್ಲಿ 13 ಕಾನೂನು ಮತ್ತು ಸಾಮಾಜಿಕ ಭದ್ರತಾ ಸಂಹಿತೆಯಲ್ಲಿ 9 ಕಾನೂನು ಸೇರಿದಂತೆ ಒಟ್ಟು 29 ಕಾನೂನುಗಳನ್ನು 4 ಸಂಹಿತೆಗಳಲ್ಲಿ ರೂಪಿಸಲಾಗಿದೆ. ಇವುಗಳು ಕಾರ್ಮಿಕ ವಿರೋಧಿ ನಿಯಮಗಳಾಗಿವೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು. ಸಿಐಟಿಯು ಜಿಲ್ಲಾಧ್ಯಕ್ಷ ಪಿ.ಆರ್.ಭರತ್ ಪದಾಧಿಕಾರಿಗಳು ಸದಸ್ಯರು ಪಾಲ್ಗೊಂಡಿದ್ದರು.

ಇಂದು ವಿದ್ಯುತ್ ವ್ಯತ್ಯಯ

ಮಡಿಕೇರಿ, ಮೇ 20–ಸೋಮವಾರಪೇಟೆ ಬೆಳಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ಯಡೂರು, ತಲ್ತಾರೆಶೆಟ್ಟಳ್ಳಿ, ಕಿರಗಂದೂರು, ತಾಕೇರಿ, ಗಿಜಗನಮನೆ, ತೊಳೂರುಶೆಟ್ಟಳ್ಳಿ, ಕೂತಿ, ಹೊಸಬೀಡು, ಕಲ್ಕಂದೂರು, ಬಸವನಕಟ್ಟೆ, ನಗರಳ್ಳಿ, ಹೆಮನಗದ್ದೆ, ಶಾಂತಳ್ಳಿ, ಬೆಟ್ಟದಳ್ಳಿ, ಬೀದಳ್ಳಿ, ಕುಂದಳ್ಳಿ, ಹೆಗ್ಗಡಮನೆ, ಹರಗ, ಕುಂಬಾರಗಡಿಗೆ ಹಾಗೂ ಸುತ್ತಮುತ್ತಲಿನ ಪ್ರದೇಶದಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಚಾವಿಸನಿನಿ ಕಾರ್ಯನಿರ್ವಾಹಕ ಎಂಜಿನಿಯರ್ ತಿಳಿಸಿದ್ದಾರೆ.

ಕೆ.ಆರ್.ಪೇಟೆ ತಾಪಂ ಕಚೇರಿಗೆ ಮುತ್ತಿಗೆ



ಉದ್ಯೋಗ ಖಾತ್ರಿ ಯೋಜನೆಯ ಅಡಿಯಲ್ಲಿ ಕೆಲಸ ಮಾಡುವ ಕೂಲಿ ಕಾರ್ಮಿಕರಿಗೆ ಬೆಳಿಗ್ಗೆ ಮತ್ತು ಸಂಜೆ ಎಂಎಸ್‌ಎಸ್ ಫೋಟೋ ತೆಗೆಯುವ ವ್ಯವಸ್ಥೆಯನ್ನು ರದ್ದು ಪಡಿಸಬೇಕು. ವರ್ಷಕ್ಕೆ 200 ಮಾನವ ದಿನ ಕೂಲಿ ಕೆಲಸ ನೀಡಬೇಕು. ದಿನಕ್ಕೆ ಕನಿಷ್ಠ 600ರೂ. ಕೂಲಿ ನಿಗಧಿ ಮಾಡಬೇಕು ಎಂದು ಒತ್ತಾಯಿಸಿ ಕರ್ನಾಟಕ ಪ್ರಾಂತ ಕೃಷಿ ಕೂಲಿಕಾರರ ಸಂಘದ ತಾಲೂಕು ಘಟಕದ ವತಿಯಿಂದ ಕೆ.ಆರ್.ಪೇಟೆಯ ತಾಲೂಕು ಪಂಚಾಯಿತಿ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಲಾಯಿತು.

ಕಾಂಗ್ರೆಸ್‌ನದ್ದು ವೇದನಾ ಸಮಾವೇಶ



ಮಂಡ್ಯ,ಮೇ20– ಕಾಂಗ್ರೆಸ್ ಸರ್ಕಾರ ರಾಜ್ಯವನ್ನು ಹಿಂದೆಂದೂ ಕಾರಣ ದುಸ್ಥಿತಿಗೆ ದ'ೂಡಿದ'್ದ, ಯಾವುದೇ ಅಭಿವೃದ್ಧಿ ಮಾಡದೇ ಜನತೆಗೆ ಬೆಲೆ ಏರಿಕೆಯ ಕಾಣಿಕೆ ನೀಡಿ ಮಾಡುತ್ತಿರುವ ಸಮಾವೇಶ ಸಾಧನಾ ಸಮಾವೇಶವಲ್ಲ ವೇದನಾ ಸಮಾವೇಶ ಎಂದು ಬಿಜೆಪಿ ರಾಜ್ಯ ವಕ್ತಾರ ಅಶ್ವತ್ ನಾರಾಯಣಗೌಡ ಆಕ್ರೋಶ ವ್ಯಕ್ತಪಡಿಸಿದರು.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಹಾಗೂ ಹಲವು ಸಚಿವರ ವಿರುದ್ಧ ಅಧಿಕಾರ ದುರ್ಬಳಕೆ ಸೇರಿದಂತೆ ಹಲವು ಆರೋಪಗಳಿದ್ದು ಯಾವ ಪುರುಷಾರ್ಥಕ್ಕಾಗಿ ಸಾಧನಾ ಸಮಾವೇಶ ಮಾಡುತ್ತಿದ್ದಾರೆ ಎಂದು ಗುಡುಗಿದರು.

ಸರ್ಕಾರದ ಆಡಳಿತ ಸಂಬಂಧ 20 ಶಾಸಕರು ಸಹಿಹಾಕಿದ ಪತ್ರದೊಂದಿಗೆ ಹೈಕಮಾಂಡ್ ಮೊರೆಯೋಗಿ ಕ್ಷೇತ್ರ ಅಭಿವೃದ್ಧಿಗೆ ಹಣ ನೀಡುತ್ತಿಲ್ಲವೆಂದು ದೂರಿದರು, ವಾಲ್ಮೀಕಿ ಹಗರಣ ಸಂಬಂಧ ಅಧಿಕಾರಿ ಆತ್ಮಹತ್ಯೆ, ಹಗರಣದಲ್ಲಿ 187 ಕೋಟಿಯಲ್ಲ 97 ಕೋಟಿ ಮಾತ್ರ ದುರ್ಬಳಕೆಯಾಗಿದೆ ಎಂದು ಸ್ವತಃ ಮುಖ್ಯಮಂತ್ರಿ ಸದನದಲ್ಲೇ ಒಪ್ಪಿಕೊಂಡರು ಎಂದರು.

ಸದರಿ ಹಣ ರಾಯಚೂರು ಲೋಕಸಭಾ ಸದಸ್ಯ ಕುಮಾರ ನಾಯಕನ ಚುನಾವಣೆಗೆ ಬಳಕೆಯಾಗಿದೆ ಈತ ಮೈಸೂರು ಜಿಲ್ಲಾಧಿಕಾರಿಯಾದ ಸಂದರ್ಭದಲ್ಲಿ ಮುಖ್ಯಮಂತ್ರಿ ಎದುರಿಸಿದ ಮೂಡ ಹಗರಣದ ಪಾಲುದಾರ, ಮುಡಾ ಹಗರಣ ಸಂಬಂಧ 11 ಸಾವಿರ ಪುಟಗಳ ಸಿಎಂ ಪರವಾಗಿ ಲೋಕಾಯುಕ್ತ ವರದಿ ತರಿಸಿಕೊಂಡರು ಎಂದು ಗಂಭೀರ ಆರೋಪ ಮಾಡಿದರು.

ತನ್ನ ಎರಡು ವರ್ಷದ ಅವಧಿಯಲ್ಲಿ ಯಾವುದೇ ಒಂದು ಜಿಲ್ಲೆಗೂ 500 ಕೋಟಿ ಅನುದಾನದ ಅಭಿವೃದ್ಧಿ ಕೆಲಸಗಳನ್ನು ಮಾಡಿದ ಉದಾಹರಣೆಯಿಲ್ಲ ಎಂದರು.

ಸಿಡಿಲು ಬಡಿದು ಜೋಡಿ ಕೋಣ ಸಾವು

ಕಿಕ್ಕೇರಿ: ಹೋಬಳಿಯ ಬೋಳಮಾರನಹಳ್ಳಿ ಕೊಪ್ಪಲು ಗ್ರಾಮದಲ್ಲಿ ಸೋಮವಾರ ಸಿಡಿಲ ಬಡಿತಕ್ಕೆ ಜೋಡಿ ಕೋಣಗಳು ಸಾವಿಗೀಡಾಗಿದೆ.

ಸಿಡಿಲಿಗೆ ಮಡಿದ ಜೋಡಿ ಕೋಣಗಳು ರೈತ ಮಹದೇವು ಅವರಿಗೆ ಸೇರಿದ್ದಾಗಿದೆ. ಸೋಮವಾರ ರಾತ್ರಿ ಗುಡುಗು ಸಿಡಿಲಿನೊಂದಿಗೆ ಬಿಡದೆ ಸುರಿದ ಮಳೆಯಲ್ಲಿ ಕೊಟ್ಟಿಗೆಯಲ್ಲಿ ಕಟ್ಟಿಹಾಕಲಾಗಿದ್ದ ಜೋಡಿ ಕೋಣಗಳಿಗೆ ಸಿಡಿಲು ಬಡಿದಿದೆ. ಪರಿಣಾಮ ಸ್ಥಳದಲ್ಲಿಯೇ ಕೋಣಗಳು ಪ್ರಾಣ ಬಿಟ್ಟಿವೆ. ಈ ಕೋಣಗಳನ್ನು ಬೂಕನಬೆಟ್ಟ ಜಾತ್ರೆಗೆ ತೆಗೆದುಕೊಂಡು ಹೋಗಿದ್ದಾಗ 2.5ಲಕ್ಷ ರೂ.ಗಳಿಗೆ ವ್ಯಾಪಾರಿಗಳು ಕೇಳಿದ್ದರು ಎನ್ನಲಾಗಿದೆ. ಕೋಣಗಳನ್ನು ನೋಡಿದಾಗ ಹಲವರು ತಮಗೆ ಖರೀದಿಗೆ ಕೊಡಿ ಎಂದು ಪೀಡಿಸುತ್ತಿದ್ದರು. ಆದರೆ ರೈತ ಮಹದೇವು ಖುಷಿಗಾಗಿ ಪ್ರೀತಿಯಿಂದ ತಮ್ಮ ಕುಟುಂಬ ಸದಸ್ಯರಂತೆ ಸಾಕಿಕೊಂಡಿದ್ದರು.

ಮನೆಯಲ್ಲಿದ್ದ ಕುಟುಂಬದವರು ಸಿಡಿಲಿನಿಂದ ಪಾರಾಗಿದ್ದಾರೆ. ಮೃತ ಕೋಣಗಳನ್ನು ಪಶು ಆಸ್ಪತ್ರೆಯವರು ಪಂಚನಾಮೆ ನಡೆಸಿ ವಾರಸುದಾರರಿಗೆ ಹಸ್ತಾಂತರಿಸಿದರು.

ಪಾಂಡವಪುರ ಎಸಿ ಶ್ರೀನಿವಾಸ್ ಆಗಮಿಸಿ ಸೂಕ್ತ ಪರಿಹಾರ ಸರ್ಕಾರದಿಂದ ಕೊಡಿಸುವುದಾಗಿ ಭರವಸೆ ನೀಡಿದರು.

ಮನ್‌ಮುಲ್ ಚುನಾವಣಾ ಫಲಿತಾಂಶ ಪ್ರಕಟಕ್ಕೆ ಹೈಕೋರ್ಟ್ ತಡೆಯಾಜ್ಞೆ

ಮಂಡ್ಯ,ಮೇ20– ಪ್ರತಿಷ್ಠಿತ ಮಂಡ್ಯ ಜಿಲ್ಲಾ ಹಾಲು ಒಕ್ಕೂಟದ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಮಂಗಳವಾರ ಚುನಾವಣೆ ನಡೆದಿದ್ದು, ಫಲಿತಾಂಶ ಪ್ರಕಟಕ್ಕೆ ಹೈಕೋರ್ಟ್ ತಡೆಯಾಜ್ಞೆ ನೀಡಿದೆ.

ಕಳೆದ ಫೆಬ್ರವರಿಯಲ್ಲಿ ಮನ್‌ಮುಲ್ ಆಡಳಿತ ಮಂಡಳಿಗೆ ಚುನಾವಣೆ ನಡೆದಿತ್ತು. ಈ ಹಿನ್ನೆಲೆಯಲ್ಲಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಇಂದು ಚುನಾವಣೆ ಪ್ರಕಟ ಮಾಡಲಾಗಿತ್ತು. ಆದರೆ ಮುಚ್ಚಿದ ಲಕೋಟೆಯಲ್ಲಿ ಫಲಿತಾಂಶವನ್ನು ನ್ಯಾಯಾಲಯಕ್ಕೆ ನೀಡುವಂತೆ ಆದೇಶ ನೀಡಿರುವ ಹಿನ್ನಲೆಯಲ್ಲಿ ಚುನಾವಣಾಧಿಕಾರಿಯೂ ಆಗಿರುವ ಅಪರ ಜಿಲ್ಲಾಧಿಕಾರಿ ಬಿ.ಸಿ.ಶಿವಾನಂದಮೂರ್ತಿ ಫಲಿತಾಂಶಕ್ಕೆ ತಡೆಯೊಡ್ಡಿದ್ದಾರೆ.

ಒಟ್ಟಾರೆ ನ್ಯಾಯಾಲಯದ ಮುಂದಿನ ಆದೇಶದ ಮೇರೆಗೆ ಫಲಿತಾಂಶ ಹೊರಗೆ ಬೀಳಲಿದೆ.

ಶ್ರೀರಂಗಪಟ್ಟಣದಲ್ಲಿ ಶಾಸಕ ರಮೇಶ್ ಬಂಡಿಸಿದ್ದೇಗೌಡ ಪಾದಯಾತ್ರೆ

ಮನೆ ಮನೆಗೆ ತೆರಳಿ ಸಾರ್ವಜನಿಕರ ಕುಂದು ಕೊರತೆ ವಿಚಾರಣೆ

ಶ್ರೀರಂಗಪಟ್ಟಣ, ಮೇ 20–ಶ್ರೀರಂಗಪಟ್ಟಣ ಪಟ್ಟಣದ ಹಲವು ವಾರ್ಡ್‌ಗಳಲ್ಲಿ ಶಾಸಕ ಎ.ಬಿ.ರಮೇಶ ಬಂಡಿಸಿದ್ದೇಗೌಡ ಪಾದಯಾತ್ರೆ ನಡೆಸಿ ಜನರ ಕುಂದು ಕೊರತೆ ಆಲಿಸಿದರು.

ತಹಸೀಲ್ದಾರ್ ಪರಶುರಾಮ್ ಸತ್ತಿಗೇರಿ, ತಾ.ಪಂ ಇಒ ಎ.ಬಿ ವೇಣು, ಪುರಸಭೆ ಮುಖ್ಯಾಧಿಕಾರಿ ಎಂ.ರಾಜಣ್ಣ, ಪುರಸಭೆ ಅಧ್ಯಕ್ಷ ಎಂ.ಎಲ್.ದಿನೇಶ್ ಸೇರಿದಂತೆ ಪುರಸಭೆ ಸದಸ್ಯರು, ತಾಲೂಕು ಮಟ್ಟದ ಅಧಿಕಾರಿಗಳ ತಂಡದೊಂದಿಗೆ ಮನೆ, ಮನೆಗೆ ತೆರಳಿ ಜನರ ಸಮಸ್ಯೆ ಆಲಿಸಿದರು.

ಪಟ್ಟಣದ ಬೋವಿ ಕಾಲೋನಿ, ಪೂರ್ಣಯ್ಯ ಬೀದಿ, ಅಂಚೆ ಶಿಪ್ಪಯ್ಯ ಬೀದಿ, ಹಳೇ ಅಂಚೆ ಕಚೇರಿ ರಸ್ತೆ, ಪೇಟೆ ಬೀದಿ ಮುಖ್ಯ ರಸ್ತೆ, ಕಾಳಮ್ಮನಗುಡಿ ಬೀದಿ, ಕುಂಬಾರ ಗೇರಿ ಬೀದಿ, ಗಂಗಾಮತಸ್ಥರ ಬೀದಿ, ಮಾರ್ಕೆಟ್ ಬೀದಿ, ಗೋಸೇಗೌಡ ಬೀದಿ, ರಾಂಪಾಲ್ ರಸ್ತೆ, ಅಂಚೆ ಕಚೇರಿ ಬೀದಿಯಲ್ಲಿ ಸಂಚಾರ



ಜನರ ಕುಂದುಕೊರತೆ ಆಲಿಸುತ್ತಿರುವ ಶಾಸಕ ರಮೇಶ್ ಬಂಡಿಸಿದ್ದೇಗೌಡ.

ನಡೆಸಿದರು. ಕುಡಿಯುವ ನೀರು, ಬೀದಿ ದೀಪ, ರಸ್ತೆ, ಮ್ಯಾನ್ ಹೋಲ್, ಚರಂಡಿ ಇತರ ಸಮಸ್ಯೆಗಳ ಕುರಿತು ಆಯಾಯ ವಾರ್ಡ್ ನಿವಾಸಿಗಳಿಂದ ಅಹವಾಲು ಸ್ವೀಕರಿಸಿದರು.

ಯವ್ಯಾವ ವಾರ್ಡ್‌ನಲ್ಲಿ ರಸ್ತೆ ಸರಿ ಇಲ್ಲ, ವಿದ್ಯುತ್ ದೀಪಗಳಿಲ್ಲ ಹೈಮಾಸ್ಟ್ ದೀಪಗಳು ಉರಿಯುತ್ತಿಲ್ಲ, ಚರಂಡಿ ಅವ್ಯವಸ್ಥೆಯಿಂದ ಕೂಡಿದೆ. ವಿದ್ಯುತ್ ಕಂಬಗಳು ದುಸ್ಥಿತಿಗೆ ತಲುಪಿವೆ, ಶುದ್ಧ ಕುಡಿಯುವ ನೀರು ಘಟಕ ಇದೆಯಾ ಇಲ್ಲವಾ ಕುರಿತು ಪಟ್ಟಿ ಮಾಡಬೇಕು ವಾರದೊಳಗೆ ಎಲ್ಲಾ ಕಾಮಗಾರಿಗಳನ್ನು ಆರಂಭಿಸಬೇಕು ಎಂದು ಪುಸರಭೆ ಮುಖ್ಯಾಧಿಕಾರಿ ಎಂ.ರಾಜಣ್ಣ ಹಾಗೂ ಸೆಸ್ಕ್ ಇಲಾಖೆ ಎಇಇ ಮಂಜುನಾಥ ಪ್ರಸಾದ್ ಅವರಿಗೆ ಶಾಸಕರು ತಾಕೀತು ಮಾಡಿದರು.

ಗಾಂಧಿನಗರ, ಬೋವಿ ಕಾಲೋನಿ, ಕುಷ್ಠ ರೋಗಿಗಳ ಕಾಲೋನಿ, ಗಂಜಾಂ ಕುರಾಡ್ ಟೀದಿ, ಆದಿ ಜಾಂಬವ ಬೀದಿಕಾಲೋನಿ ಹಂಗರಹಳ್ಳಿ ಕಾಲೋನಿ ಮಹಮದ್ ಶಾ ಲೇಔಟ್‌ಗಳಲ್ಲಿ ವಾಸ ಮಾಡುತ್ತಿರುವ ಬಡವರಿಗೆ ಕೆಲವರಿಗೆ ಹಕ್ಕುಪತ್ರ ನೀಡಲಾಗಿದೆ. ಇನ್ನೂ ಕೆಲವರಿಗೆ ಮನೆ ಹಕ್ಕುಪತ್ರ ಸಿಕ್ಕಿಲ್ಲ. ಅಂತಹವರನ್ನು ಗುರುತಿಸಬೇಕು. ಅವರ ದಾಖಲಾತಿ ಸಂಗ್ರಹಿಸಿ ಹಕ್ಕುಪತ್ರ ವಿತರಣೆ ಮಾಡಬೇಕು. ಇ ಖಾತೆ ನೀಡಬೇಕು ಎಂದು ಪುರಸಭೆ ಅಧಿಕಾರಿಗಳಿಗೆ ಸೂಚಿಸಿದರು.

ಟೌನ್ ಕುಡಿಯುವನೀರು ಸುರಬರಾಜು ಮಾಡುವ ಘಟಕಕ್ಕೂ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಮಳೆಯಿಂದ ಮನೆ ಕಳೆದುಕೊಂಡ ವೃದ್ಧೆಗೆ ಮನೆ

ಶ್ರೀರಂಗಪಟ್ಟಣ: ಮಳೆಯಿಂದ ವೃದ್ದೆಯೊಬ್ಬರು ಮನೆ ಕಳೆದುಕೊಂಡಿರುವ ವಿಚಾರ ತಿಳಿಸಿದ ಶಾಸಕ ರಮೇಶ್ ಬಂಡಿಸಿದ್ದೇಗೌಡ ಸ್ಥಳಕ್ಕೆ ಭೇಟಿ ನೀಡಿ ತಕ್ಷಣ ಮನೆ ನಿರ್ಮಿಸಿ ಕೊಡುವುದಾಗಿ ಭರವಸೆ ನೀಡಿದರು.

ಪಟ್ಟಣದ ಲಕ್ಷ್ಮಿ ಗುಡಿ ಸಮೀಪ ವೃದ್ಧ ಮಹಿಳೆ ವೆಂಕಟಮ್ಮ ನರಸಿಂಹಯ್ಯ ಅವರ ಮನೆ ಕಳೆದ ನಾಲ್ಕೈದು ದಿನಗಳ ಹಿಂದೆ ಬಿದ್ದ ಮಳೆಗೆ ನಾಮಾವಶೇಷವಾಗಿತ್ತು. ವಿಷಯ ತಿಳಿದ ಶಾಸಕರು ಸ್ಥಳಕ್ಕೆ ಭೇಟಿ ನೀಡಿ ಅಸಾಹಯಕ ವೃದ್ಧೆ ಮಹಿಳೆಗೆ ಸಾಂತ್ವನ ಹೇಳಿದರು.

ಪಟ್ಟಣದ ಮೂರನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಗೋಪಾಲಕೃಷ್ಣ ಪ್ರಧಾನ ಸಿವಿಲ್ ನ್ಯಾಯಾಧೀಶ ಎಂ.ಹರೀಶ್ ಕುಮಾರ್ ಅವರು ಕೂಡ ಸ್ಥಳಕ್ಕೆ ಭೇಟಿ ನೀಡಿ ಮನೆ ಕಳೆದುಕೊಂಡ ಮಹಿಳೆಗೆ ತಾಲೂಕು ಆಡಳಿತ ವತಿಯಿಂದ ನೆರವು ನೀಡುವಂತೆ ತಹಸೀಲ್ದಾರ್ ಪರಶುರಾಮ್ ಅವರಿಗೆ ಸಲಹೆ ನೀಡಿದರು.


ಈ ವೇಳೆ ಶಾಸಕರು ಮಾತನಾಡಿ ತಾಲೂಕು ಆಡಳಿತದ ವತಿಯಿಂದ 1.25 ಲಕ್ಷ ರೂ., ಪುರಸಭೆಯಿಂದ 1.25 ಲಕ್ಷ ರೂ. ನನ್ನ ವೈಯುಕ್ತಿಕ ಸಹಾಯ ಸೇರಿದಂತೆ 5 ಲಕ್ಷ ರೂ. ವೆಚ್ಚದಲ್ಲಿ ಶೀಘ್ರದಲ್ಲಿಯೇ ಮನೆ ನಿರ್ಮಿಸಿ ಕೊಡುವಂತೆ ಮುಖ್ಯಾಧಿಕಾರಿ ಎಂ.ರಾಜಣ್ಣಗೆ ಸೂಚಿಸಿದರು.

ಸಾಲೂರು ಮಠದ ಹಿರಿಯ ಶ್ರೀ ಗುರುಸ್ವಾಮೀಜಿ ಲಿಂಗೈಕ್ಯ

ಹನೂರು, ಮೇ 20–ತಾಲೂಕಿನ ಪ್ರಸಿದ್ಧ ಮಲೆ ಮಹದೇಶ್ವರ ಬೆಟ್ಟದ ಸಾಲೂರು ಮಠದ ಹಿರಿಯ ಶ್ರೀ ಗುರು ಸ್ವಾಮೀಜಿ (69) ಇಂದು ಲಿಂಗೈಕ್ಯರಾದರು. ವಯೋಸಹಜ ಅನಾರೋಗ್ಯದಿಂದ ಬಳಲುತ್ತಿದ್ದ ಅವರು ಮಠದಲ್ಲೇ ಇಹಲೋಕ ತ್ಯಜಿಸಿದರು. ಸಂಜೆ ಸಾಲೂರು ಮಠದ ಆವರಣದಲ್ಲಿ ಸುತ್ತೂರು ಶ್ರೀ, ತುಮಕೂರು ಸಿದ್ದಗಂಗಾ ಮಠದ ಶ್ರೀಗಳ ಸಮ್ಮುಖದಲ್ಲಿ ವಿಧಿ–ವಿಧಾನಗಳೊಂದಿಗೆ ಸ್ವಾಮೀಜಿ ಅಂತ್ಯಕ್ರಿಯೆ ನೆರವೇರಿಸಲಾಯಿತು. ಶಾಸಕರಾದ ಕೆ.ಎಂ.ಮಂಜುನಾಥ್, ಹೆಚ್.ಎಂ.ಗಣೇಶ್ ಪ್ರಸಾದ್, ಮಾಜಿ ಶಾಸಕ ನರೇಂದ್ರ ಮೊದಲಾದವರು ಮೃತರ ಅಂತಿಮ ದರ್ಶನ ಪಡೆದರು.

ತಾಲೂಕಿನ ಜಿ.ಕೆ. ಹೊಸೂರು ಗ್ರಾಮದಲ್ಲಿ 1956, ಆಗಸ್ಟ್ 2ರಂದು ಪೂರ್ವಾಶ್ರಮದ ರುದ್ರಪ್ಪ ಹಾಗೂ ಪುಟ್ಟಮಾದಮ್ಮ ದಂಪತಿಯ ಪುತ್ರರಾಗಿ ಜನಿಸಿದ ಗುರು ಸ್ವಾಮೀಜಿ 1995ರಲ್ಲಿ ಸಾಲೂರು ಮಠದ 17ನೇ ಪೀಠಾಧ್ಯಕ್ಷರಾದರು. ಮಠದಲ್ಲಿ ಭಕ್ತರಿಗೆ ದಾಸೋಹ, ಬಡ ಮಕ್ಕಳಿಗೆ ಉಚಿತ ಶಾಲೆ ಹಾಗೂ ವಸತಿ ನಿಲಯಗಳನ್ನು ಆರಂಭಿಸಿ ಶಿಕ್ಷಣ ಕ್ಷೇತ್ರಕ್ಕೆ ಕೊಡುಗೆ ನೀಡಿದರು. ಹನೂರು ತಾಲೂಕಿನಲ್ಲಿ ವೃದ್ಧಾಶ್ರಮ ಆರಂಭಿಸಿದ್ದರು.

ಸಾಲೂರು ಬೃಹನ್ ಮಠದ ಕಿರಿಯ ಶ್ರೀಗಳಾದ ಶಾಂತ ಮಲ್ಲಿಕಾರ್ಜುನ ಸ್ವಾಮಿ ಮಾತನಾಡಿ ಜಾತಿ ಮತ ಧರ್ಮ ಭೇದವಿಲ್ಲದೆ ಎಲ್ಲರನ್ನೂ ಪ್ರೀತಿಸುತ್ತಿದ್ದರು ಇಂದು ಅವರ



ಸಾಲೂರು ಮಠದ ಹಿರಿಯಶ್ರೀ ಗುರು ಸ್ವಾಮೀಜಿ

ಅಂತಿಮ ಕ್ರಿಯೆಗೆ ಬಂದಿದ್ದ ಭಕ್ತರನ್ನು ನೋಡಿದರೆ ಅವರು ಎಷ್ಟು ಪ್ರೀತಿ ಹೊಂದಿದ್ದರು ಎಂಬುದಕ್ಕೆ ಸಾಕ್ಷಿಯಾಗಿದೆ ಎಂದರು.

ಸಮೀಕ್ಷೆಯಲ್ಲಿ ಹೊಲೆಯ ಎಂದು ನಮೂದಿಸಿ: ಎ.ಆರ್.ಕೃಷ್ಣಮೂರ್ತಿ

ಚಾಮರಾಜನಗರ, ಮೇ 20– ಜಾತಿ ಗಣತಿ ಸಮೀಕ್ಷೆಯಲ್ಲಿ ಪರಿಶಿಷ್ಟ ಜಾತಿಯ ಬಲಗೈ ಸಮುದಾಯದವರು ಹೊಲೆಯ ಎಂದು ಹೆಮ್ಮೆಯಿಂದ ಬರೆಸಬೇಕು ಎಂದು ಶಾಸಕ ಎ.ಆರ್.ಕೃಷ್ಣಮೂರ್ತಿ ತಿಳಿಸಿದ್ದಾರೆ

ಸಮುದಾಯದ ಉಳಿವಿಗಾಗಿ, ಮೀಸಲಾತಿ ಸೌಲಭ್ಯಕ್ಕಾಗಿ ಹೊಲೆಯ ಎಂದರೆ ಅವಮಾನವಲ್ಲ ಬದಲಿಗೆ ಹೆಮ್ಮೆ ಪಡಬೇಕು. ಪರಿಶಿಷ್ಟ ಜಾತಿಯ ಬಲಗೈನವರ ಮುಂದಿನ ಪೀಳಿಗೆಯ ಉದ್ಧಾರಕ್ಕಾಗಿ ಉಪ ಜಾತಿ ಕಾಲಂನಲ್ಲಿ ಹೊಲೆಯ ಎಂದು ಬರೆಸಬೇಕು ಮೇ. 25 ರವರಗೆ ಕಾಲಾವಕಾಶ ವಿಸ್ತರಣೆ ಮಾಡಿರುವುದರಿಂದ ಅದರೊಳಗೆ ಸಮುದಾಯದ ಮುಖಂಡರು ತಂಡೋಪವಾಗಿ ತಾಲೂಕಿನ ಪ್ರತಿ ಗ್ರಾಮಕ್ಕೂ ಭೇಟಿ ನೀಡಿ ಜಾತಿ



ಅಂಬೇಡ್ಕರ್ ಭವನದಲ್ಲಿ ನಡೆದ ಬಲಗೈ ಜಾತಿಗೆ ಸೇರಿದ ಮುಖಂಡರ ಸಭೆಯಲ್ಲಿ ಶಾಸಕ ಎ.ಆರ್.ಕೃಷ್ಣಮೂರ್ತಿ ಮಾತನಾಡಿದರು

ಗಣತಿ ಸಮೀಕ್ಷೆಯಲ್ಲಿ ಹೊಲೆಯ ಎಂದು ಬರೆಸುವಂತೆ ಗ್ರಾಮದ ಬೀದಿ, ಬೀದಿಗಳಲ್ಲಿ ಜಾಗೃತಿ ಮೂಡಿಸಬೇಕು ಎಂದರು.

ಜಿಲ್ಲಾ ಪಂಚಾಯತ್ ಮಾಜಿ ಉಪಾಧ್ಯಕ್ಷ ಅಯ್ಯನಪುರ ಶಿವಕುಮಾರ್, ಛಲವಾದಿ ಮಹಾಸಭಾ ರಾಜ್ಯ ಉಪಾಧ್ಯಕ್ಷ ವೆಂಕಟರಮಣಸ್ವಾಮಿ ಪಾಪು ಮಾತನಾಡಿದರು. ಸಭೆಯಲ್ಲಿ ಚಾಮುಲ್ ನಿರ್ದೇಶಕ ರೇವಣ್ಣ ನಗರಸಭಾ ಸದಸ್ಯ ಆರ್.ಪಿ. ನಂಜುಂಡಸ್ವಾಮಿ, ಬಿಎಸ್‌ಪಿ ಜಿಲ್ಲಾಧ್ಯಕ್ಷ ಬ.ಮ.ಕೃಷ್ಣಮೂರ್ತಿ, ರಾಜ್ಯ ಕಾರ್ಯದರ್ಶಿ ನಾಗಯ್ಯ, ಸಮುದಾಯದ ಮುಖಂಡರಾದ ಆರ್.ಮಹದೇವು, ನಲ್ಲೂರುಸೋಮೇಶ್ವರ್, ಯಜಮಾನ ನಲ್ಲೂರು ಮಹದೇವಸ್ವಾಮಿ, ನಾಗಯ್ಯ, ಪಾಪಣ್ಣ, ಗಡಿಯಜಮಾನರಾದ ವೀರಣ್ಣ, ರವಿಕುಮಾರ್, ಸೋಮಣ್ಣ, ದಡದಹಳ್ಳಿ ಗೋವಿಂದರಾಜು, ಸಿದ್ದಯ್ಯನಪುರ ಚೆನ್ನಂಜಯ್ಯ, ಗೋವಿಂದರಾಜು ಸೋಮಣ್ಣ, ಚಂದಕ ವಾಡಿ ಸಿದ್ಧಪ್ಪಾಜಿ, ಮಹದೇವಸ್ವಾಮಿ, ಭೋಗಾಪುರ ಮಹಾಲಿಂಗು, ಸುತ್ತೂರು ಅಶೋಕ್. ಮಹದೇವು, ಸಿ.ಮಹದೇವ, ಕೊಂಗಳ್ಳಿ ಮಹದೇವ, ಡಿಎಸ್‌ಎಸ್ ಜಿಲ್ಲಾ ಸಂಚಾಲಕ ಸಿ.ಎಂ.ಶಿವಣ್ಣ, ಜ್ಯೋತಿಗೌಡ ನಪುರ ನಾಗರಾಜು ಸೇರಿದಂತೆ ನೂರುಕ್ಕೂ ಹೆಚ್ಚು ಮಂದಿ ಭಾಗವಹಿಸಿದ್ದರು.

ಅಂಗನವಾಡಿ ಕೇಂದ್ರ ಮಕ್ಕಳಿಗೆ ಸ್ವೆಟರ್ ವಿತರಣೆ

ಚಾಮರಾಜನಗರ,ಮೇ 20– ತಾಲೂಕಿನ ಬಸವಾಪುರ ಗ್ರಾಮದಲ್ಲಿನ ಅಂಗನವಾಡಿ ಕೇಂದ್ರಗಳ ಮಕ್ಕಳಿಗೆ ಸ್ವೆಟರ್‌ಗಳನ್ನು ವಿತರಿಸಲಾಯಿತು.

ಜಿಪಂ ಸದಸ್ಯ ರಮೇಶ್ ಮಾತನಾಡಿ ಎಂಎಸ್‌ಐಎಲ್ ನಿಗಮದ ಅಧ್ಯಕ್ಷರಾದ ಶಾಸಕ ಸಿ.ಪುಟ್ಟರಂಗಶೆಟ್ಟಿ ಶಾಲೆಗಳಿಗೆ ಬೇಕಾದ ಮೂಲಸೌಕರ್ಯ ಒದಗಿಸಲು ಸೇರಿದಂತೆ ಮಕ್ಕಳಿಗೆ ನೋಟ್ ಪುಸ್ತಕ ಶಾಲೆಗೆ ಕುಡಿಯುವ ನೀರು ಹಾಗೂ ಶಿಕ್ಷಣ ಕ್ಷೇತ್ರಕ್ಕೆ ಸಾಕಷ್ಟು ಅನುದಾನ ನೀಡಿದ್ದಾರೆ ಎಂದರು.

ಜಿಪಂ ಮಾಜಿಸದಸ್ಯ ರಮೇಶ್,



ಅಂಗನವಾಡಿ ಕೇಂದ್ರಗಳ ಮಕ್ಕಳಿಗೆ ಸ್ವೆಟರ್‌ಗಳನ್ನು ವಿತರಿಸಲಾಯಿತು.

ಗ್ರಾಪಂ ಸದಸ್ಯರಾದ ಉಮೇಶ್, ಶೇಖರ್, ಗ್ರಾಪಂ ಮಾಜಿ ಅಧ್ಯಕ್ಷ ನಾಗರಾಜು, ಮುಖಂಡರಾದ ಶಿವಣ್ಣ, ಮಹೇಶ್, ಮಹದೇವು, ಅನಂತಕುಮಾರ್ ಹಾಜರಿದ್ದರು.

ತೆರಕಣಾಂಬಿಯಲ್ಲಿ ನಡೆದ ಬೃಹತ್ ತಿರಂಗಾ ಮೆರವಣಿಗೆ

ಗುಂಡ್ಲುಪೇಟೆ, ಮೇ 20 (ಸೋಮ್.ಜಿ)– ಭಾರತದ ಸೈನಿಕರಿಗೆ ಗೌರವ ಸೂಚಿಸಿ ಹಾಗೂ ನೈತಿಕ ಬೆಂಬಲ ತಿಳಿಸುವ ಸಲುವಾಗಿ ತಾಲೂಕಿನ ತೆರಕಣಾಂಬಿ ಗ್ರಾಮದಲ್ಲಿ ಇಂದು ಬೃಹತ್ ತಿರಂಗಾ ಮೆರವಣಿಗೆ ನಡೆಸಲಾಯಿತು.

ಇಲ್ಲಿನ ಭಗತ್ ಸಿಂಗ್ ಸೇವಾ ಟ್ರಸ್ಟ್ ಸದಸ್ಯರು ಹಾಗೂ ಗ್ರಾಮಸ್ಥರು ಆಯೋಜಿಸಿದ್ದ ಕಾರ್ಯಕ್ರಮಕ್ಕೆ ಮಾಜಿ ಯೋಧ ನಂದೀಶ್ ಚಾಲನೆ ನೀಡಿದರು. ಗ್ರಾಮದ ಆಂಜನೇಯ ದೇವಾಲಯದಿಂದ ಲಕ್ಷ್ಮೀವರದರಾಜ ದೇವಾಲಯದವರೆಗೆ 150 ಅಡಿ ಉದ್ದದ ರಾಷ್ಟ್ರಧ್ವಜವನ್ನು ಹೊತ್ತು ಕೈನಲ್ಲಿ ಬಾವುಟ ಹಿಡಿದು ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವ



ತೆರಕಣಾಂಬಿ ಗ್ರಾಮದಲ್ಲಿ ಭಗತ್ ಸಿಂಗ್ ಟ್ರಸ್ಟ್‌ನಿಂದ ತಿರಂಗಾ ಮೆರವಣಿಗೆ ನಡೆಸಲಾಯಿತು.

ಣಿಗೆ ನಡೆಸಿದ ಯುವಕರು ಭಾರತೀಯ ಸೈನಿಕರ ಪರವಾಗಿ ಜಯಘೋಷ ಕೂಗಿದರು

ಟ್ರಸ್ಟ್ ಅಧ್ಯಕ್ಷ ಕೆ.ವೆಂಕಟೇಶ, ಸದಸ್ಯರಾದ ಆರ್.ಮಹೇಶ್, ರಾಜೇಂದ್ರ, ಗೋವಿಂದ, ಕಾಂತರಾಜು, ವಿನೋದ್ ಕುಮಾರ್, ಕಿರಣ್ ಕುಮಾರ್, ಟಿ.ಪಿ.ನಾಗರಾಜು, ನಾಗರಾಜು, ಯಜಮಾನ್ ಶ್ರೀನಿವಾಸ ನಾಯ್ಕ, ಹಿಂದೂ ಸಂಘಟನೆಯ ಮಂಜುನಾಥ್, ಲಕ್ಕೂರು ಮಲ್ಲಿಕಾ ರ್ಜುನ, ಕುಲಗಾಣ ಮಹದೇವಸ್ವಾಮಿ, ಕಬಿನಿರಾಜು, ಪುರಸಭೆ ಸದಸ್ಯ ನಾಗೇಶ್ ಸೇರಿದಂತೆ ಹಲವರು ಇದ್ದರು.

ಲಲಿತಮ್ಮ ನಿಧನ

ಕೊಳ್ಳೇಗಾಲ. ಮೇ 20– ನಿವೃತ್ತ ಶಿಕ್ಷಕ ಮುಡಿಗುಂಡದ ದಿವಂಗತ ಪರಶಿವಮೂರ್ತಿ ಧರ್ಮಪತ್ನಿ ಶ್ರೀಮತಿ ಲಲಿತಮ್ಮ (80) ಇಂದು ಬೆಳಗ್ಗೆ ಮೈಸೂರಿನಲ್ಲಿ ನಿಧನರಾದರು.



ಮೃತರು ಮೈಸೂರು ಮಹಾರಾಣಿ ಕಾಲೇಜಿನ ಸಹ ಪ್ರಾಧ್ಯಾಪಕ ಪಿ ಶ್ರೀನಿವಾಸ್, ಮೈಸೂರಿನ ಜೆ ಪಿ ಕಾಲೇಜಿನ ಮುಖ್ಯ ಪ್ರಾಧ್ಯಾಪಕ ನಾಗೇಶ್, ಸೇರಿದಂತೆ ಇಬ್ಬರು ಪುತ್ರರು, ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ.

ನಾಚನಹಳ್ಳಿಪಾಳ್ಯದಲ್ಲಿ ಶಾಸಕ ಟಿ.ಎಸ್.ಶ್ರೀವತ್ಸ ಪಾದಯಾತ್ರೆ



ನಾಚನಹಳ್ಳಿಪಾಳ್ಯದಲ್ಲಿ ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಮಂಗಳವಾರ ಪಾದಯಾತ್ರೆ ನಡೆಸಿದರು.

ಮೈಸೂರು,ಮೇ 20(ಪಿಎಂ)– ಕೃಷ್ಣರಾಜ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಾರ್ಡ್ 62ರ ನಾಚನಹಳ್ಳಿಪಾಳ್ಯದಲ್ಲಿ ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಮಂಗಳವಾರ ಪಾದಯಾತ್ರೆ ನಡೆಸಿ ನಾಗರಿಕರ ಅಹವಾಲು ಆಲಿಸಿದರು.


ಮಳೆ ನೀರು ನಿಲ್ಲದೇ ಹರಿದು ಹೋಗಲು ಅನುಕೂಲವಾಗುವಂತೆ ಡಕ್‌ಗಳನ್ನು ನಿರ್ಮಿಸಬೇಕೆಂದು ಹಾಗೂ ಯುಜಿಡಿಗಳನ್ನು ದುರಸ್ತಿಗೊಳಿಸಿ ಮನೆಗಳಿಗೆ ಮಳೆ ನೀರು ನುಗ್ಗದಂತೆ ಕ್ರಮ ವಹಿಸಬೇಕೆಂದು ಸ್ಥಳೀಯರು ಶಾಸಕರಲ್ಲಿ ಮನವಿ ಮಾಡಿದರು. ಈ ಸಂಬಂಧ ಕ್ರಮ ವಹಿಸುವುದಾಗಿ ಶಾಸಕರು ಭರವಸೆ ನೀಡಿದರು.

ಹೆಚ್‌ಡಿ ಕೋಟೆ ಮುಖ್ಯ ರಸ್ತೆಯಲ್ಲಿ ಲೋಕೋಪಯೋಗಿ ಇಲಾಖೆ ಮಾಡಿರುವ ಮೋರಿ ಒತ್ತುವರಿ ಆಗಿರುವ ಬಗ್ಗೆ ಸ್ಥಳೀಯರು ಗಮನಕ್ಕೆ ತಂದ ಹಿನ್ನೆಲೆಯಲ್ಲಿ ಸರ್ವೆ ಮಾಡಿಸಲು ಶಾಸಕರು ಅಧಿಕಾರಿಗಳಿಗೆ ಸೂಚಿಸಿದರು. ಈ ಭಾಗದಲ್ಲಿ ಕೆಆರ್‌ಐಡಿಎಲ್‌ನಿಂದ ಸುಮಾರು 1 ಕೋಟಿ ರೂ. ವೆಚ್ಚದಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳನ್ನು ಇದೇ ವೇಳೆ ಪರಿಶೀಲಿಸಿದರು.

ಸ್ಥಳೀಯರ ಕೋರಿಕೆ ಮೇರೆಗೆ ಮಾನಂದವಾಡಿ ರಸ್ತೆ ಹಾಗೂ ಪಾಳ್ಯ ಜಂಕ್ಷನ್‌ನಲ್ಲಿ ವಾಹನ ಪಾರ್ಕಿಂಗ್ ತಡೆಗೆ ಕ್ರಮ ಕೈಗೊಳ್ಳುವಂತೆ ಶಾಸಕರು, ಪೊಲೀಸರಿಗೆ ಸೂಚನೆ ನೀಡಿದರು. ನಗರಪಾಲಿಕೆ ಮಾಜಿ ಸದಸ್ಯರಾದ ಶಾಂತಮ್ಮ ವಡಿವೇಲು, ಬಿಜೆಪಿ ವಾರ್ಡ್ ಅಧ್ಯಕ್ಷ ರಾಘವೇಂದ್ರ, ಮುಖಂಡರಾದ ಬೇಕರಿಚಂದ್ರು, ದೇವರಾಜೇಗೌಡ, ಬಿಲ್ಲಯ್ಯ, ಮದು, ಮುರಳಿ, ಜೆ.ರವಿ, ಜಯರಾಮ್, ಆಶಾಲಕ್ಷ್ಮೀ ನಾರಾಯಣ, ರಾಧಮ್ಮ ಮತ್ತು ಪಾಲಿಕೆ ಅಧಿಕಾರಿಗಳು ಹಾಗೂ ಪೊಲೀಸ್ ಸಿಬ್ಬಂದಿ ಹಾಜರಿದ್ದರು.

ಗುಲ್‌ಮೊಹರ್ ವೃಕ್ಷದ ಹೂ ರಾಶಿ ಅರಳಿ ಕಂಗೊಳಿಸುವ ಕಾಲ...





ಹೂ ಅರಳೋ ಸಮಯ; ಒಂದು ಕಾಲದಲ್ಲಿ ಮೈಸೂರಿನಾದ್ಯಂತ ಬಹುತೇಕ ರಸ್ತೆಗಳು ಬೆರಗುಗೊಳಿಸುವ ಹೂವಿನಿಂದ ಕಂಗೊಳಿಸುವ ಗುಲ್‌ಮೊಹರ್ ಮರಗಳಿಂದ ಕಂಗೊಳಿಸುತ್ತಿದ್ದವು. ಕಣ್ಮನ ಸೆಳೆಯುವ ಆ ಕೆಂಪು ಹೂಗಳು ನಮ್ಮ ರಸ್ತೆಗಳನ್ನು ಅಲಂಕರಿಸಿ ನೋಡುಗರಿಗೆ ರೋಮಾಂಚನ ಉಂಟು ಮಾಡುತ್ತಿದ್ದವು. ಆದರೆ ಅಂತಹ ಸೊಗಸು ಈಗ ಅಪರೂಪವೇ ಸರಿ. ಏಕೆಂದರೆ ಇತ್ತೀಚೆಗಿನ ದಿನಗಳಲ್ಲಿ ನಗರದ ಕೆಲವೇ ರಸ್ತೆಗಳಲ್ಲಿ ಮಾತ್ರವೇ ಗುಲ್‌ಮೊಹರ್ ಕಂಡು ಬರುತ್ತವೆ. ಏಪ್ರಿಲ್–ಮೇ ತಿಂಗಳಲ್ಲಿ ಗುಲ್‌ಮೊಹರ್ ಮರಗಳು ಪೂರ್ಣವಾಗಿ ಹೂವಿನಿಂದ ಆಕರ್ಷಿಸುತ್ತವೆ. ಜ್ವಾಲೆಗಳನ್ನು ಹೋಲುವ ಕೆಂಪು ಬಣ್ಣ ಮಾತ್ರವಲ್ಲದೆ, ಕಿತ್ತಳೆ ಅಥವಾ ಕಡುಗೆಂಪು ದಳಗಳಿಂದ ಗೋಚರಿಸುವ ರೀತಿಯಲ್ಲಿ ಕಂಡು ಬರುವ ಕಾರಣ 'ಜ್ವಾಲೆಯ ಮರ' ಎಂಬ ಅಡ್ಡಹೆಸರನ್ನು ಸಹ ಈ ವೃಕ್ಷ ಹೊಂದಿದೆ. ಮೈಸೂರಿನ ಮಾನಸಗಂಗೋತ್ರಿ ಕ್ಯಾಂಪಸ್‌ನಲ್ಲಿರುವ ಗುಲ್‌ಮೊಹರ್ ಮರಗಳಲ್ಲಿ ಪೂರ್ಣವಾಗಿ ಹೂ ಅರಳಿರುವ ಮನಮೋಹಕ ದೃಶ್ಯವನ್ನು ಇಲ್ಲಿನ ವಾಯು ವಿಹಾರಿಗಳು ಕ್ಲಿಕ್ಕಿಸಿ 'ಮೈಸೂರು ಮಿತ್ರ'ನಿಗೆ ಕಳುಹಿಸಿ ತಮ್ಮ ಸಂಭ್ರಮವನ್ನು ಹಂಚಿಕೊಂಡಿದ್ದಾರೆ.

ಹೊಸದಾಗಿ ನೇಮಕಗೊಂಡ ಗೃಹರಕ್ಷಕರಿಗೆ ಮೂಲ ತರಬೇತಿ ಶಿಬಿರ



ಮೈಸೂರು ಜಿಲ್ಲಾ ಗೃಹ ರಕ್ಷಕ ದಳಕ್ಕೆ ಆಯ್ಕೆಯಾದ 204 ಮಂದಿ ಗೃಹರಕ್ಷಕರ ಮೂಲ ತರಬೇತಿ ಶಿಬಿರಕ್ಕೆ ಚಾಲನೆ ನೀಡಲಾಯಿತು.

> ಗೃಹರಕ್ಷಕ ದಳ ಹುದ್ದೆಗೆ ಅರ್ಜಿ ಸಲ್ಲಿಸಲು ಎಸ್‌ಎಸ್‌ಎಲ್‌ಸಿ ವಿದ್ಯಾರ್ಹತೆ ನಿಗದಿ. ಆದರೆ, ಸಂದರ್ಶನಕ್ಕೆ ಬಂದಿದ್ದ ಅಭ್ಯರ್ಥಿಗಳಲ್ಲಿ ಉನ್ನತ ಶಿಕ್ಷಣ ಪೂರೈಸಿದ ಅಭ್ಯರ್ಥಿಗಳೂ ಅರ್ಜಿ ಸಲ್ಲಿಸಿದ್ದರು. ಜೊತೆಗೆ ಈ ಹುದ್ದೆಗೆ ಆಯ್ಕೆ ಮಾಡುವಂತೆ ಪ್ರಭಾವಿಗಳಿಂದ ಒತ್ತಡವನ್ನು ತಂದರೂ ಯಾವುದಕ್ಕೂ ಕಿವಿಗೊಡದೆ ನಮ್ಮ ಆಯ್ಕೆ ಸಮಿತಿ ಅರ್ಹ 204 ಮಂದಿಯನ್ನು ಆಯ್ಕೆ ಮಾಡಿದ್ದೇವೆ.
> – ಡಾ.ಎಂ.ಕಾಂತರಾಜು,
> ಜಿಲ್ಲಾ ಕಮಾಂಡೆಂಟ್, ಗೃಹರಕ್ಷಕ ದಳ

ಮೈಸೂರು, ಮೇ20(ಎಸ್‌ಪಿಎನ್)– ಮೈಸೂರು ಜ್ಯೋತಿ ನಗರದ ಡಿಎಆರ್ ಮೈದಾನದ ಸಮುದಾಯ ಭವನದಲ್ಲಿ ಮಂಗಳವಾರ ಏರ್ಪಡಿಸಿದ್ದ ಮೈಸೂರು ಜಿಲ್ಲಾ ಗೃಹ ರಕ್ಷಕ ದಳಕ್ಕೆ ಆಯ್ಕೆಯಾದ 204 ನೂತನ ಸಿಬ್ಬಂದಿಗೆ 10 ದಿನದ ಗೃಹರಕ್ಷಕರ ಮೂಲ ತರಬೇತಿ ಶಿಬಿರಕ್ಕೆ ಚಾಲನೆ ನೀಡಲಾಯಿತು.

ಈ ವೇಳೆ ಮಾತನಾಡಿದ ಮೈಸೂರು ಜಿಲ್ಲೆಯ ಡಿಎಆರ್‌ನ ಇನ್ಸ್‌ಪೆಕ್ಟರ್ ಎಚ್.ವಿ.ದೇವಿಪ್ರಸಾದ್, ನಮ್ಮ ರಾಜ್ಯದ ಗೃಹ ರಕ್ಷಕ ದಳ ಸಾಮಾಜಿಕ ಸೇವೆಗೆ ಕಟಿಬದ್ಧವಾಗಿ ದುಡಿಯುತ್ತಿದೆ ಎಂದು ಹೇಳಿದರು.

ಪ್ರತಿಯೊಬ್ಬರು ಸಮರ್ಪಣಾ ಮನೋಭಾವದಿಂದ ಕಾರ್ಯನಿರ್ವಹಿಸಲು ಗೃಹರಕ್ಷಕ ದಳ ಉತ್ತಮ ವೇದಿಕೆಯಾಗಿದೆ. ಈ ಅವಕಾಶವನ್ನು ಶಿಬಿರಾರ್ಥಿಗಳು ಸದ್ಬಳಕೆ ಮಾಡಿಕೊಳ್ಳಬೇಕು. ಗೃಹರಕ್ಷಕರನ್ನು ಸುಮಾರು 60ಕ್ಕೂ ಹೆಚ್ಚು ಸರ್ಕಾರದ ವಿವಿಧ ಇಲಾಖೆಗಳಲ್ಲಿ ತಾತ್ಕಾಲಿಕ ಸೇವೆಗೆ ನಿಯೋಜಿಸಲಾಗುತ್ತದೆ. ಆ ವೇಳೆ ಆಯಾಯ ಇಲಾಖೆಗೆ ಕರ್ತವ್ಯಕ್ಕೆ ನಿಯೋಜನೆಗೊಂಡ ಮೇಲೆ ಗೌರವ ತರುವ ಕೆಲಸ ಮಾಡಬೇಕು ಎಂದು ಕಿವಿಮಾತು ಹೇಳಿದರು.

ಗೃಹರಕ್ಷಕರು ಸಮಾಜದಲ್ಲಿ ನಡೆಯುವ ವಿವಿಧ ಧರಣಿ, ಮುಷ್ಕರ ಹಾಗೂ ತುರ್ತು ಪರಿಸ್ಥಿತಿ ಸಂದರ್ಭದಲ್ಲಿ ಪೊಲೀಸ್ ಇಲಾಖೆಯೊಂದಿಗೆ ಕೆಲಸ ಮಾಡಬೇಕು. ಈ ವೇಳೆ ಗೃಹರಕ್ಷಕ ಸಿಬ್ಬಂದಿಗೆ ಸಾಕಷ್ಟು ತಾಳ್ಮೆ, ವಿನಯ ಹಾಗೂ ಕರ್ತವ್ಯ ನಿಷ್ಠೆ ಬಹಳ ಮುಖ್ಯವಾಗುತ್ತದೆ. ಮೂಲ ತರಬೇತಿ ಶಿಬಿರದಲ್ಲಿ ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಲು ಸೂಕ್ತ ತರಬೇತಿಯನ್ನು ಪೊಲೀಸ್ ಇಲಾಖೆಯಿಂದ ನೀಡಲಾಗುತ್ತದೆ ಎಂದು ಹೇಳಿದರು.

ಜಿಲ್ಲಾ ಗೃಹ ರಕ್ಷಕ ದಳದ ಕಮಾಂಡೆಂಟ್ ಡಾ.ಎಂ.ಕಾಂತರಾಜು ಮಾತನಾಡಿ, ಗೃಹರಕ್ಷಕ ದಳದ ಮೈಸೂರು ಘಟಕದಲ್ಲಿ 1,300 ಹುದ್ದೆಗಳು ಮಂಜೂರಾಗಿವೆ. ಇದರಲ್ಲಿ 1,100 ಮಂದಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿದ್ದಾರೆ. ಇದೀಗ 217 ಮಂದಿಯನ್ನು ನೇಮಕ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿತ್ತು. ಇದಕ್ಕೆ 630 ಕ್ಕೂ ಹೆಚ್ಚು ಮಂದಿ ಅರ್ಜಿ ಸಲ್ಲಿಸಿದ್ದರು. ಇದರಲ್ಲಿ 436 ಮಂದಿ ಸಂದರ್ಶನಕ್ಕೆ ಹಾಜರಾಗಿದ್ದರು. ಈ ಅರ್ಜಿಗಳಲ್ಲಿ 204 ಮಂದಿಯನ್ನು ಆಯ್ಕೆ ಸಮಿತಿ ಸದಸ್ಯರಾದ ಡಿಎಆರ್ ಪೊಲೀಸ್ ಉಪ ಅಧೀಕ್ಷಕ ಹೆಚ್.ವಿ.ವೀರಣ್ಣ, ಶಾಲಾ ಶಿಕ್ಷಣ ಇಲಾಖೆ ಡಿಡಿಪಿಐ ಎಸ್.ಟಿ.ಜವರೇಗೌಡ ಹಾಗೂ ನಾನಿದ್ದ ಸಮಿತಿಯಲ್ಲಿ ಅಂತಿಮವಾಗಿ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ದಳದ ಸಹಾಯಕ ಆಡಳಿತಾಧಿಕಾರಿ ಮಲ್ಲಿಕಾರ್ಜುನ್ ಎಂ.ನಾಲತ್‌ವಾಡ್, ಉಪ ಕಮಾಂಡೆಂಟ್ ಎಸ್.ಆರ್. ಗಾಯಕ್ವಾಡ್, ಬೋಧಕರಾದ ಎಂ.ಆರ್. ಚಂದನ್, ಎಸ್. ಮಂಜುನಾಥ್, ಎಂ. ಶಿಲ್ಪಾ, ಎಸ್. ವಿದ್ಯಾಶ್ರೀ, ಎ.ಎಸ್.ಶೃತಿ ಇದ್ದರು.

ಪುರಾತನ ಕಲ್ಯಾಣಿಗಳ ಪುನರುಜ್ಜೀವನ ಸೇರಿ ಚಂದ್ರವನದ ಅಭಿವೃದ್ಧಿಗೆ ವಿಧಾನಪರಿಷತ್ ಸದಸ್ಯ ಕೆ.ವಿವೇಕಾನಂದ ಆಗ್ರಹ

ಆರೋಗ್ಯ ಸಚಿವರಿಗೆ ಪತ್ರ



ಮೈಸೂರು, ಮೇ 20(ಎಸ್‌ಬಿಡಿ)– ಪುರಾತನ ಕಲ್ಯಾಣಿಗಳ ಪುನರುಜ್ಜೀವನ ಸೇರಿದಂತೆ ಚಂದ್ರವನದ ಕಾಯಕಲ್ಪಕ್ಕೆ ತುರ್ತು ಕ್ರಮ ವಹಿಸುವಂತೆ ವಿಧಾನ ಪರಿಷತ್ ಸದಸ್ಯ ಕೆ.ವಿವೇಕಾನಂದ, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರಿಗೆ ಪತ್ರದ ಬರೆದು ಒತ್ತಾಯಿಸಿದ್ದಾರೆ.

ಮೈಸೂರಿನ ಸರಸ್ವತಿಪುರಂ ಈಜುಕೊಳ ಸಮೀಪದ ಚಂದ್ರವನ ನರ್ಸರಿಯು, ರಾಜಮನೆತನದಿಂದ ಸ್ಥಾಪಿತವಾದ ಆಯುರ್ವೇದ ಸರ್ಕಾರಿ ವೈದ್ಯಕೀಯ ಮಹಾವಿದ್ಯಾಲಯದ ಅಧೀನದಲ್ಲಿದೆ. ಇಲ್ಲಿ ಪಾರಂಪರಿಕ ಔಷಧಿ ಗುಣವುಳ್ಳ ರಾಮ ತುಳಸಿ, ಕೃಷ್ಣ ತುಳಸಿ, ಆಡುಸೋಗೆ, ಚಂದ್ರಹಲಸು, ಅಮೃತಬಳ್ಳಿ, ನೀರ್ಗುಂಡಿಲಕ್ಕಿ, ರಣಫಲ, ಉತ್ತಾರಣೆ, ಜಲಬ್ರಾಮಿ, ಹಿಪ್ಲಿ, ಲಾವಂಚ, ಕಾಡುಕೊತ್ತಂಬರಿ ಸೇರಿದಂತೆ ಹಲವು ಪ್ರಬೇಧದ ಗಿಡ–ಮರಗಳಿವೆ. ಇಲ್ಲಿನ ಸಸ್ಯಗಳನ್ನು ಸರ್ಕಾರಿ ಶೈಕ್ಷಣಿಕ ಸಂಸ್ಥೆಗಳ ಆವರಣ ಹಾಗೂ ಇತರೆ ಸೂಕ್ತ ಜಾಗಗಳಲ್ಲಿ ಬೆಳೆಸಲು ಉಚಿತವಾಗಿ ನೀಡಲಾಗುತ್ತದೆ. ಆದರೆ ಸಸಿ, ಗಿಡ–ಮರಗಳಿಗೆ ನೀರುಣಿಸುವ ಎರಡು ಪುರಾತನ ಕಲ್ಯಾಣಿಗಳು ಶೋಚನೀಯ ಸ್ಥಿತಿ ತಲುಪಿವೆ. ಈ ಬಗ್ಗೆ ಸ್ಥಳೀಯ ಪತ್ರಿಕೆಗಳಲ್ಲಿ ವರದಿ ಪ್ರಕಟವಾಗಿದೆ.

ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದ ಸದ್ಯದ ಆರ್ಥಿಕ ಪರಿಸ್ಥಿತಿಯಲ್ಲಿ ಚಂದ್ರವನದ ಅಭಿವೃದ್ಧಿ ಕಾರ್ಯ ನಡೆಸಲು ಕಷ್ಟಸಾಧ್ಯ ಎನ್ನುವುದು ಗಮನಕ್ಕೆ ಬಂದಿದೆ. ಆದ್ದರಿಂದ ಆರೋಗ್ಯ ಇಲಾಖೆ ವತಿಯಿಂದಲೇ ಕಲ್ಯಾಣಿಗಳ ಪುನರುಜ್ಜೀವನ ಸೇರಿದಂತೆ ಚಂದ್ರವನದ ಸಮಗ್ರ ಅಭಿವೃದ್ಧಿಗೆ ಕ್ರಮ ವಹಿಸಬೇಕು. ಈ ನಿಟ್ಟಿನಲ್ಲಿ ತುರ್ತು ಕ್ರಮಕ್ಕೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಬೇಕು. ಚಂದ್ರವನಕ್ಕೆ ಕಾಯಕಲ್ಪ ನೀಡುವ ಮೂಲಕ ಆಯುರ್ವೇದ ಔಷಧಿ ಗುಣವುಳ್ಳ ಗಿಡ–ಮರಗಳ ಮಹತ್ವವನ್ನು ಮುಂದಿನ ಪೀಳಿಗೆಗೆ ಪರಿಚಯಿಸುವಲ್ಲಿ ಸಹಕರಿಸಬೇಕು ಎಂದು ಮನವಿ ಮಾಡಿದ್ದಾರೆ.

ಗಮನ ಸೆಳೆದ ವರದಿ: ಚಂದ್ರವನ ಆವರಣದಲ್ಲಿರುವ ಪುರಾತನ ಕಲ್ಯಾಣಿಗಳ ದುಸ್ಥಿತಿ ಬಗ್ಗೆ 'ಮೈಸೂರು ಮಿತ್ರ' ಮೇ 6ರ ಸಂಚಿಕೆಯಲ್ಲಿ 'ಮೈಸೂರಿನ ಪುರಾತನ ಕಲ್ಯಾಣಿಗಳ ಸ್ಥಿತಿ ಶೋಚನೀಯ' ಶೀರ್ಷಿಕೆಯಡಿ ಸಚಿತ್ರ ವರದಿ ಪ್ರಕಟಿಸಲಾಗಿತ್ತು ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ, ಮಾಜಿ ಕಾರ್ಪೊರೇಟರ್ ಕೆ.ವಿ.ಶ್ರೀಧರ, ಕಲ್ಯಾಣಿಗಳ ದುಸ್ಥಿತಿ ಕಂಡು ಆಡಳಿತ ವರ್ಗದ ನಿರ್ಲಕ್ಷ್ಯಕ್ಕೆ ಆಕ್ರೋಶ ವ್ಯಕ್ತಪಡಿಸಿದ್ದರು.

ಉಚಿತವಾಗಿ ಸಸಿ ನೀಡಿ

ಸರ್ಕಾರಿ ಶೈಕ್ಷಣಿಕ ಸಂಸ್ಥೆಗಳ ಆವರಣದಲ್ಲಿ ಅಲಂಕಾರಿಕ ಹೂ ಬಿಡುವ ಗಿಡಗಳು, ತರಕಾರಿ ಹಾಗೂ ಹಣ್ಣಿನ ಗಿಡಗಳು ಸೇರಿದಂತೆ ಬಗೆ ಬಗೆಯ ಗಿಡಗಳನ್ನು ಬೆಳೆಸಿ ಅತ್ಯುತ್ತಮ ವಾತಾವರಣ ಸೃಷ್ಟಿಸುವ ಇಂಗಿತವನ್ನು ಶಿಕ್ಷಕ ವರ್ಗ ವ್ಯಕ್ತಪಡಿಸಿದೆ. ಇದಕ್ಕೆ ಸಂಬಂಧ ತೋಟಗಾರಿಕೆ ಇಲಾಖೆಯ ಅಧಿಕಾರಿಗಳೊಂದಿಗೆ ಮಾತನಾಡಿದಾಗ ಸರ್ಕಾರಿ ಶೈಕ್ಷಣಿಕ ಸಂಸ್ಥೆಗಳಿಗೆ ಇಲಾಖೆಯ ವತಿಯಿಂದ ಸಸಿಗಳನ್ನು ಉಚಿತವಾಗಿ ವಿತರಿಸುವ ಯೋಜನೆಗಳಿಲ್ಲ ಎಂದು ತಿಳಿಸಿದ್ದಾರೆ. ಹಾಗಾಗಿ ಸರ್ಕಾರಿ ಶೈಕ್ಷಣಿಕ ಸಂಸ್ಥೆಗಳಿಗೆ ತೋಟಗಾರಿಕೆ ಇಲಾಖೆ ವತಿಯಿಂದ ಉಚಿತವಾಗಿ ಸಸಿಗಳನ್ನು ವಿತರಿಸುವ ಯೋಜನೆ ರೂಪಿಸುವ ಮೂಲಕ ಶಾಲಾ–ಕಾಲೇಜು ಆವರಣದಲ್ಲಿ ಪ್ರಾಯೋಗಿಕ ಪರಿಸರ ಜಾಗೃತಿಗೆ ಮುಂದಾಗಬೇಕು ಎಂದು ತೋಟಗಾರಿಕೆ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಅವರನ್ನು ವಿಧಾನಪರಿಷತ್ ಸದಸ್ಯ ಕೆ.ವಿವೇಕಾನಂದ ಪತ್ರದ ಮೂಲಕ ಒತ್ತಾಯಿಸಿದ್ದಾರೆ.

ಗಾಜಾ ಮೇಲೆ ಇಸ್ರೇಲ್ ದಾಳಿ: 60 ಮಂದಿ ಸಾವು

ದೀರ್ ಅಲ್–ಬಲಾಹ್, ಗಾಜಾಪಟ್ಟಿ, ಜೆರುಸಲೇಂ: ಸೋಮವಾರ ರಾತ್ರಿಯಿಡೀ ಗಾಜಾ ಪಟ್ಟಿ ಮೇಲೆ ಇಸ್ರೇಲ್ ಸೇನೆಯು ವಾಯುದಾಳಿ ಮುಂದುವರಿಸಿದೆ. ಮನೆ ಹಾಗೂ ನಿರಾಶ್ರಿತರ ನೆಲೆಯೂ ದಾಳಿಗೆ ಒಳಗಾಗಿದ್ದು, 60 ಮಂದಿ ಮೃತಪಟ್ಟಿದ್ದಾರೆ ಎಂದು ಪ್ಯಾಲೆಸ್ಟೀನ್‌ನ ಆರೋಗ್ಯ ಇಲಾಖೆಯ ಅಧಿಕಾರಿಗಳು ತಿಳಿಸಿದ್ದಾರೆ.

ಅಂತರರಾಷ್ಟ್ರೀಯ ಮಟ್ಟದಲ್ಲಿ ತೀವ್ರ ಟೀಕೆಯ ಹೊರತಾಗಿಯೂ, ಹಮಾಸ್ ವಿರುದ್ಧ ಯುದ್ಧವನ್ನು ತೀವ್ರಗೊಳಿಸಲು ಇಸ್ರೇಲ್ ಒತ್ತು ನೀಡಿದೆ. ಇತ್ತೀಚಿನ ದಿನಗಳಲ್ಲಿಯೇ ನಡೆಸಿದ ಅತೀ ದೊಡ್ಡ ಪ್ರಮಾಣದ ದಾಳಿಯಾಗಿದ್ದು, ಇಸ್ರೇಲ್‌ನ ಒತ್ತೆಯಾಳುಗಳನ್ನು ಬಿಡಿಸಿ, ಹಮಾಸ್ ಬಂಡುಕೋರರನ್ನು ಸಂಪೂರ್ಣವಾಗಿ ನಾಶಗೊಳಿಸುವುದಾಗಿ ಪಣ ತೊಟ್ಟಿದೆ ಕಳೆದೊಂದು ವಾರದ ಸೇನಾ ಕಾರ್ಯಾಚರಣೆಯಲ್ಲಿ 300ಕ್ಕೂ ಅಧಿಕ ಪ್ಯಾಲೆಸ್ಟೀನಿಯನ್ನರು ಮೃತಪಟ್ಟಿದ್ದಾರೆ.

ವಿರೋಧ ಪಕ್ಷಗಳಿಂದ ಟೀಕೆ: ಗಾಜಾಪಟ್ಟಿ ಮೇಲೆ ಇಸ್ರೇಲ್ ಕೈಗೆತ್ತಿಕೊಂಡಿರುವ ದಾಳಿಯನ್ನು, ಅಲ್ಲಿನ ವಿರೋಧ ಪಕ್ಷದ ಮುಖಂಡರು ಟೀಕಿಸಿದ್ದಾರೆ.

'ವಿವೇಕ ಹೊಂದಿದ ರಾಷ್ಟ್ರವು ನಾಗರಿಕರ ಮೇಲೆ ದಾಳಿ ನಡೆಸುವುದು, ಮಕ್ಕಳನ್ನು ಕೊಲ್ಲುವುದನ್ನೇ ಅಭ್ಯಾಸ ಮಾಡಿಕೊಳ್ಳುವುದಿಲ್ಲ' ಎಂದು ನಿವೃತ್ತ ಜನರಲ್ ಹಾಗೂ ವಿರೋಧ ಪಕ್ಷವಾದ ಡೆಮಾಕ್ರಟ್ಸ್ ಪಕ್ಷದ ನಾಯಕ ಯಾಯಿರ್ ಗೋಲನ್ ಟೀಕಿಸಿದ್ದಾರೆ.

ಚಿನ್ನ ಕಳ್ಳಸಾಗಣೆ ಪ್ರಕರಣ: ನಟಿ ರನ್ಯಾ ರಾವ್‌ಗೆ ಜಾಮೀನು

ಆದ್ರೂ ಬಿಡುಗಡೆ ಅನುಮಾನ



ಬೆಂಗಳೂರು, ಮೇ 20– ಸುಮಾರು 15 ಕೋಟಿ ರೂಪಾಯಿ ಮೌಲ್ಯದ ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ಬಂಧಿತರಾಗಿರುವ ಕನ್ನಡದ ನಟಿ ರನ್ಯಾ ರಾವ್ ಅವರಿಗೆ ಬೆಂಗಳೂರಿನ ವಿಶೇಷ ನ್ಯಾಯಾಲಯ ಮಂಗಳವಾರ ಷರತ್ತುಬದ್ಧ ಜಾಮೀನು ಮಂಜೂರು ಮಾಡಿದೆ.

ಹರ್ಷವರ್ಧಿನಿ ರನ್ಯಾ ಅಲಿಯಾಸ್ ರನ್ಯಾ ರಾವ್(33) ಸಲ್ಲಿಸಿದ್ದ ಜಾಮೀನು ಅರ್ಜಿಯ ವಿಚಾರಣೆ ನಡೆಸಿದ ಆರ್ಥಿಕ ವ್ಯವಹಾರಗಳ ವಿಶೇಷ ಕೋರ್ಟ್, 2 ಲಕ್ಷ ರೂ.ಗಳ ಎರಡು ಬಾಂಡ್ ಹಾಗೂ ಇಬ್ಬರ ಶ್ಯೂರಿಟಿ ಮೇಲೆ ಜಾಮೀನು ನೀಡಿದ್ದು, ಯಾವುದೇ ಕಾರಣಕ್ಕೂ ದೇಶ ಬಿಟ್ಟು ಹೋಗಬಾರದು ಮತ್ತು ಮುಂದೆ ಯಾವತ್ತೂ ಇಂಥ ಪ್ರಕರಣಗಳಲ್ಲಿ ತೊಡಗಿಸಿಕೊಳ್ಳಬಾರದು ಎಂಬ ಷರತ್ತುಬದ್ಧ ವಿಧಿಸಲಾಗಿದೆ.

ಕಳೆದ ಮಾರ್ಚ್ 3ರ ರಾತ್ರಿ ದುಬೈನಿಂದ ಎಮಿರೇಟ್ಸ್ ಏರ್‌ಲೈನ್ಸ್ ವಿಮಾನದಲ್ಲಿ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದಿಳಿದ ನಟಿಯನ್ನು ಕಂದಾಯ ಗುಪ್ತಚರ ನಿರ್ದೇಶನಾಲಯ (ಡಿಆರ್‌ಐ)ದ ಅಧಿಕಾರಿಗಳು ತಪಾಸಣೆಗೆ ಒಳಪಡಿಸಿದ್ದು, ಈ ವೇಳೆ ನಟಿ ಬಳಿ 14.80 ಕೆಜಿ ಚಿನ್ನ ಪತ್ತೆಯಾಗಿತ್ತು. ತಕ್ಷಣ ನಟಿಯನ್ನು ಬಂಧಿಸಲಾಗಿತ್ತು. ರನ್ಯಾ ರಾವ್ ಮತ್ತು ಅವರ ಸಹಚರರನ್ನು ಪರಪ್ಪನಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ಇರಿಸಲಾಗಿದೆ. ಜಾಮೀನು ನೀಡಲಾಗಿದ್ದರೂ, ರನ್ಯಾ ರಾವ್ ಮತ್ತು ಅವರ ಇಬ್ಬರು ಸಹಚರರಾದ ತರುಣ್ ಕೊಡೂರು ರಾಜು ಹಾಗೂ ಸಾಹಿಲ್ ಸಕರಿಯಾ ಜೈನ್ ಅವರನ್ನು ಕಠಿಣ ವಿದೇಶಿ ವಿನಿಮಯ ನಿಯಂತ್ರಣ ಮತ್ತು ಕಳ್ಳಸಾಗಣೆ ಚಟುವಟಿಕೆಗಳ ತಡೆ ಕಾಯ್ದೆ 1974(COFEPOSA ಕಾಯ್ದೆ, 1974) ಅಡಿಯಲ್ಲಿ ಬಂಧಿಸಿರುವುದರಿಂದ ನಟಿಯನ್ನು ಜೈಲಿನಿಂದ ಬಿಡುಗಡೆ ಮಾಡುವುದು ಅನುಮಾನ ಎನ್ನಲಾಗಿದೆ.

ಪ್ರಕರಣದ ತನಿಖೆ ನಡೆಸುತ್ತಿರುವ ಕಂದಾಯ ಗುಪ್ತಚರ ನಿರ್ದೇಶನಾಲಯದ ಶಿಫಾರಸಿನ ಮೇರೆಗೆ ನಟಿ ಮತ್ತು ಇತರ ಆರೋಪಿಗಳ ವಿರುದ್ಧ ಕೇಂದ್ರೀಯ ಆರ್ಥಿಕ ಗುಪ್ತಚರ ಬ್ಯೂರೋ COFEPOSA ಕಾಯ್ದೆಯನ್ನು ಜಾರಿಗೊಳಿಸಿದೆ. ಈ ಕಾಯ್ದೆ ಅನ್ವಯ ಆರೋಪಿ ರನ್ಯಾ ರಾವ್‌ಗೆ ಒಂದು ವರ್ಷ ಜಾಮೀನು ಪಡೆಯಲು ಅವಕಾಶವಿರುವುದಿಲ್ಲ.

ಸೌಲಭ್ಯ ವಂಚಿತ ಬಿ ಖಾತೆಯಿಂದ ಪ್ರಯೋಜನವೇನು?

ಗೊಂದಲದ ಗೂಡಾದ ಯೋಜನೆಯ ಸರಿಪಡಿಸಲು ಆಗ್ರಹ



ಕೆ.ವಿ.ಶ್ರೀಧರ

ಮೈಸೂರು, ಮೇ 20(ಎಸ್‌ಬಿಡಿ)– ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಬಿ ಖಾತಾ ಯೋಜನೆ ಗೊಂದಲದ ಗೂಡಾಗಿದೆ ಎಂದು ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ, ನಗರ ಪಾಲಿಕೆ ಮಾಜಿ ಸದಸ್ಯ ಕೆ.ವಿ.ಶ್ರೀಧರ ಬೇಸರ ವ್ಯಕ್ತಪಡಿಸಿದ್ದಾರೆ.

ಎಲ್ಲಾ ಆಸ್ತಿಗಳ ನೋಂದಣಿ ಮೂಲಕ ಕ್ರಮಬದ್ಧಗೊಳಿಸುವುದರ ಜೊತೆಗೆ ನೋಂದಾಯಿತ ಆಸ್ತಿಯನ್ನು ತೆರಿಗೆ ವ್ಯಾಪ್ತಿಗೆ ತರುವುದು ಬಿ ಖಾತೆಯ ವಿತರಣೆಯ ಉದ್ದೇಶ. ಆದರೆ ಇದು ಗೊಂದಲದ ಗೂಡಾಗಿದೆ. ಅಲ್ಲದೆ ಕ್ರಮಬದ್ಧಗೊಳಿಸಿ ತೆರಿಗೆ ವ್ಯಾಪ್ತಿಗೆ ತಂದ ನಂತರವೂ ಆಸ್ತಿ ಮಾಲೀಕರಿಗೆ ಯಾವುದೇ ಸೌಲಭ್ಯಗಳು ಸಿಗುತ್ತಿಲ್ಲ. ಖಾತೆ ಮಾಡಿಸುವುದರಿಂದ ಸಮಯ ಮತ್ತು ಹಣ ವ್ಯರ್ಥವಾಗುತ್ತಿರುವುದನ್ನು ಬಿಟ್ಟರೆ ಇದರಿಂದ ಸಾರ್ವಜನಿಕರಿಗೆ ಬೇರೇನೂ ಲಾಭವಿಲ್ಲ. ಜನರಿಗೆ ಅನುಕೂಲಕರವಾಗುವ ನಿಯಮ ರೂಪಿಸದಿರುವುದು ಸರಕಾರದ ವೈಫಲ್ಯವಾಗಿದೆ ಎಂದು ಆರೋಪಿಸಿದ್ದಾರೆ.

ಮೈಸೂರು ನಗರ ವ್ಯಾಪ್ತಿಯಲ್ಲಿ ಶೇ.30ರಷ್ಟು ನಿವೇಶನಗಳಿಗೆ ಬಿ ಖಾತೆ ನೀಡಲಾಗುತ್ತದೆ. ಆದರೆ ಕಟ್ಟಡ ನಕ್ಷೆಗೆ ಅನುಮೋದನೆ ಸಿಗುತ್ತಿಲ್ಲ. ನಕ್ಷೆ ಅನುಮೋದನೆ ಸಿಗದೆ ಸಿಆರ್ ಆಗುವುದಿಲ್ಲ. ಸಿಆರ್ ಆಗಲಿಲ್ಲ ಎಂದರೆ ಬ್ಯಾಂಕ್‌ಗಳಿಂದ ಸಾಲ, ವಿದ್ಯುತ್ ಸಂಪರ್ಕ ಯಾವ ಸೌಲಭ್ಯವೂ ಸಿಗುವುದಿಲ್ಲ. ಹೀಗಾದರೆ ಸಾರ್ವಜನಿಕರು ಹಣ ಹಾಗೂ ಸಮಯ ವ್ಯರ್ಥ ಮಾಡಿಕೊಂಡು ಪಡೆಯುವಂತಹ ಬಿ ಖಾತೆಯಿಂದ ಏನು ಪ್ರಯೋಜನ ಎಂದು ಪ್ರಶ್ನಿಸಿದ್ದಾರೆ.

ಸಾರ್ವಜನಿಕರ ಆತಂಕ: 1990–1995ರ ಅವಧಿಯಲ್ಲಿ 5 ರೂ., 10 ರೂ. 100 ರೂ. ನೋಂದಣಿ ಪತ್ರದಲ್ಲಿ ನೋಂದಣಿ ಮಾಡಿಸಲಾಗುತ್ತಿತ್ತು. ದಾನಪತ್ರಗಳ ಮೂಲಕ ಬಹುತೇಕ ಆಸ್ತಿಗಳು ಸೇರಿದಂತೆ ಶೇ.60ರಿಂದ 70ರಷ್ಟು ಆಸ್ತಿಗಳು ಅದೇ ರೀತಿ ಹಸ್ತಾಂತರವಾಗಿವೆ. ಆದರೆ, ಈಗ ಆ ಆಸ್ತಿಗಳ ನೋಂದಣಿಯಾಗುತ್ತಿಲ್ಲ. ಅಲ್ಲದೆ, ಮೈಸೂರು ನಗರದಲ್ಲಿ ಶೇ.30ರಿಂದ 40 ಯುಎಲ್‌ಸಿ ಸ್ವಾಧೀನ ಲ್ಯಾಂಡ್‌ಗಳಿವೆ. ಆದರೆ, ಆ ಯಾವ ಭೂಮಿಯನ್ನು ಸರಕಾರ ವಶಕ್ಕೆ ಪಡೆದಿಲ್ಲ. ಕಂದಾಯ ಭೂಮಿಯಾಗಿಯೇ ಉಳಿದಿರುವ ಜಾಗದಲ್ಲಿ ಸಾಕಷ್ಟು ಜನ ಮನೆ, ಕಟ್ಟಡ ನಿರ್ಮಿಸಿದ್ದಾರೆ. ಆದರೆ ಆ ಆಸ್ತಿಗಳು ಸರಕಾರದ್ದು ಎಂದು ದಿಶಾಂಕ್ ಆ್ಯಪ್‌ನಲ್ಲಿ ತೋರಿಸುತ್ತಿದೆ. ಆಸ್ತಿಗಳ ನಿಜ ಮಾಲೀಕರು ಬಿ ಖಾತೆ ಸಿಗದೆ ಆತಂಕಗೊಂಡಿದ್ದಾರೆ. ಈ ಬಗ್ಗೆ ಸರಕಾರವೂ ಯಾವುದೇ ಸ್ಪಷ್ಟನೆ ನೀಡದೆ, ಜಾಣ ಕುರುಡು ಪ್ರದರ್ಶಿಸುತ್ತಿರುವುದು ಖಂಡನೀಯ.

ತುರ್ತು ಸರಳೀಕರಣಗೊಳಿಸಿ: ಆಸ್ತಿಯ ನಿಖರ ಮೌಲ್ಯ ಮತ್ತು ವಿಸ್ತೀರ್ಣತೆ ಖಚಿತಪಡಿಸಿಕೊಳ್ಳಲು ಖಾತೆ ಮಾಡಿಸಲಾಗುತ್ತದೆ. ಆದರೆ, ಬಿ ಖಾತೆ ಪಡೆದರೂ ಬ್ಯಾಂಕ್‌ಗಳಲ್ಲಿ ಸಾಲ ಸೇರಿದಂತೆ ಯಾವುದೇ ನಾಗರಿಕ ಸೌಲಭ್ಯ ದೊರೆಯುತ್ತಿಲ್ಲ ಎಂದಾದರೆ ಈ ಯೋಜನೆಯೇ ನಿರುಪಯುಕ್ತವಾಗುತ್ತದೆ. ಸರ್ಕಾರಕ್ಕೆ ಸಾರ್ವಜನಿಕರ ಮೇಲೆ ನಿಜವಾದ ಕಾಳಜಿಯಿದ್ದರೆ ಬಿ ಖಾತೆಯನ್ನು ಸರಳೀಕರಣಗೊಳಿಸಬೇಕು. ಜೊತೆಗೆ ಬಿ ಖಾತೆ ಮಾಡಿಸಿದ ನಂತರ ಬಿಲ್ಡಿಂಗ್ ಪ್ಲ್ಯಾನ್, ಸಿಆರ್ ದೊರೆಯುವಂತೆ ನಿಯಮ ರೂಪಿಸಬೇಕು. ಹಾಗೂ ಸ್ವಂತ ಮನೆ ನಿರ್ಮಾಣದ ಕನಸು ಹೊತ್ತಿರುವ ಲಕ್ಷಾಂತರ ಕುಟುಂಬಗಳಿಗೆ ನೆರವಾಗಬೇಕು ಎಂದು ಕೆ.ವಿ.ಶ್ರೀಧರ ಮನವಿ ಮಾಡಿದ್ದಾರೆ.

ಮೈಸೂರು ಮಿತ್ರ

ಬುಧವಾರ 21 ಮೇ 2025

ಹೂ ಖರೀದಿಸದೆ ಖಾಸಗಿ ಕಂಪನಿಯಿಂದ ಅನ್ಯಾಯ ಖಂಡಿಸಿ

ರಸ್ತೆಗೆ ಸುಗಂಧರಾಜ ಹೂ ಸುರಿದು ರೈತರ ಪ್ರತಿಭಟನೆ



ತಿರುಮಕೂಡಲಿನ ಪಿಟೀಲು ಚೌಡಯ್ಯ ವೃತ್ತದಲ್ಲಿ ರಸ್ತೆಗೆ ಹೂ ಸುರಿದು ರೈತರು ಪ್ರತಿಭಟಿಸಿದರು.

ತಿ.ನರಸೀಪುರ, ಮೇ 20– ತಾಲೂಕಿನ ತುಂಬಲ ಗ್ರಾಮದಲ್ಲಿರುವ ನ್ಯಾಚುರಲ್ ಎಸೆನ್ಸಿಯಲ್ ಆಯಿಲ್ ಎಂಬ ಖಾಸಗಿ ಕಂಪನಿ ತಾಲೂಕಿನ ರೈತರಿಂದ ಸುಗಂಧ ರಾಜ ಹೂವು ಖರೀದಿಸದೇ ಅನಾವಶ್ಯಕ ಷರತ್ತು ವಿಧಿಸುವ ಮೂಲಕ ಬೆಳೆಗಾರರಿಗೆ ಅನ್ಯಾಯ ಮಾಡುತ್ತಿದೆ ಎಂದು ಆರೋಪಿಸಿ ಬೆಳೆಗಾರರು ಸುಗಂಧರಾಜ ಹೂ ಅನ್ನು ರಸ್ತೆಯಲ್ಲಿ ಸುರಿದು ಪ್ರತಿಭಟನೆ ನಡೆಸಿದರು.

ತಿರುಮಕೂಡಲಿನ ಪಿಟೀಲು ಚೌಡಯ್ಯ ವೃತ್ತದಲ್ಲಿ ಜಮಾವಣೆಗೊಂಡ ಸುಗಂಧರಾಜ ಹೂ ಬೆಳೆಗಾರರು ತಾಲೂಕಿನ ರೈತರಿಂದ ಹೂ ಖರೀದಿಸದೇ ತಮಿಳು ನಾಡಿನಿಂದ ಹೂ ತರಿಸಿ ತಾಲೂಕಿನ ರೈತರು ಸಂಕಷ್ಟಕ್ಕೆ ಸಿಲುಕುವಂತೆ ಮಾಡಿದ್ದಾರೆ ಎಂದು ಆರೋಪಿಸಿ ಮೂಟೆಗಟ್ಟಲೆ ಹೂ ಅನ್ನು ರಸ್ತೆಗೆ ಸುರಿದು ನೆಸ್ಲೋ ಕಂಪನಿ ನಡೆಗೆ ತೀವ್ರ ಖಂಡನೆ ವ್ಯಕ್ತಪಡಿಸಿದರು.

ರೈತ ಮುಖಂಡ ಕೆಬ್ಬೇಹುಂಡಿ ಶಿವಕುಮಾರ್ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯನವರ ತವರು ಕ್ಷೇತ್ರದಲ್ಲೇ ನೆಸ್ಲೋ ಕಂಪನಿಯವರು ತಾಲೂಕಿನ ರೈತರಿಗೆ ದ್ರೋಹ ಬಗೆದು ಹೊರ ರಾಜ್ಯದಿಂದ ಹೂ ಖರೀದಿಸುವ ಮೂಲಕ ತಾಲೂಕು ಮತ್ತು ಜಿಲ್ಲೆಯ ಹೂ ಬೆಳೆಗಾರರನ್ನು ಸಂಕಷ್ಟಕ್ಕೆ ಸಿಲುಕಿಸಿದ್ದು, ಕಂಪನಿಯ ಅವೈಜ್ಞಾನಿಕ ನಡೆಯಿಂದ ರೈತರು ತೀವ್ರ ನಷ್ಟ ಅನುಭವಿಸುವಂತಾಗಿದೆ. ಸಿಎಂ ಕ್ಷೇತ್ರದಲ್ಲಿ ರೈತರಿಗೆ ನ್ಯಾಯ ದೊರಕುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಫ್ಯಾಕ್ಟರಿಯವರ ನಡೆ ಖಂಡಿಸಿ ಸುಗಂಧ ರಾಜ ಹೂ ಬೆಳೆಗಾರರು ಕಳೆದ ಒಂದು ವರ್ಷದಿಂದಲೂ ಹೋರಾಟ ಮಾಡುತ್ತಾ ಬಂದಿದ್ದೇವೆ. ಕಳೆದ ಬಾರಿ ಪ್ರತಿಭಟನೆ ನಡೆಸಿದ ವೇಳೆ ಸಿಪಿಐ ಧನಂಜಯ, ಎಸ್ಐ ಜಗದೀಶ್ ಧೂಳ್ ಶೆಟ್ಟಿ ಅವರ ಮಧ್ಯ ಪ್ರವೇಶ ಹಾಗೂ ಫ್ಯಾಕ್ಟರಿಯವರು 2025ರ ಜನವರಿಯಲ್ಲಿ ಅಗ್ರಿಮೆಂಟ್ ಮಾಡಿಕೊಂಡು ಕೆಜಿಗೆ 47 ರೂ. ಕೊಡುತ್ತೇವೆ ಎಂದು ಭರವಸೆ ನೀಡಿದ್ದ ಹಿನ್ನೆಲೆಯಲ್ಲಿ ಪ್ರತಿಭಟನೆ ಹಿಂಪಡೆದಿದ್ದೆವು. ಆದರೆ ನಂತರದ ದಿನಗಳಲ್ಲಿ ಫ್ಯಾಕ್ಟರಿಯವರು ಇಲ್ಲ ಸಲ್ಲದ ಷರತ್ತು ಹಾಕಿ ಒಬ್ಬ ಏಜೆಂಟ್ 75 ರೈತರನ್ನು ಹೊಂದಿರ ಬೇಕು. ಜೊತೆಗೆ 30 ಗುಂಟೆ ವಿಸ್ತೀರ್ಣದಲ್ಲೇ ಹೂ ಬೆಳೆಯಬೇಕು ಎಂದು ಮಾತು ಬದಲಿಸುತ್ತಿದ್ದು, ನಮ್ಮ ಭಾಗದ ರೈತರು 5 ರಿಂದ 20 ಗುಂಟೆ ಜಮೀನಿನಲ್ಲಿ ವ್ಯವಸಾಯ ಮಾಡಿಕೊಂಡಿರುವ ಸಣ್ಣ ರೈತರು ನಾವು, ಇವರ ಷರತ್ತಿನಂತೆ ನಡೆದುಕೊಳ್ಳಲು ಸಾಧ್ಯವೇ ಎಂದರು.

ಹೂವಿಗೆ 50 ರೂ. ಮೇಲೆ ಬೆಲೆ ಸಿಕ್ಕರೆ ಸ್ಥಳೀಯ ಮಾರ್ಕೆಟ್‌ನಲ್ಲಿ ಲಾಭಕ್ಕೆ ಮಾರಾಟ ಮಾಡಿಕೊಳ್ಳಿ, 50ಕ್ಕಿಂತ ಕಡಿಮೆ ಬೆಲೆಯಾದರೆ 47 ರೂ.ಗೆ ನಮಗೆ ಕೊಡಿ ಎನ್ನುತ್ತಿದ್ದ ಫ್ಯಾಕ್ಟರಿಯವರು ಈಗ ಮಾರುಕಟ್ಟೆಯಲ್ಲಿ 100 ರೂ. ಬೆಲೆ ಸಿಕ್ಕಿದರೂ ನೀವು ಮಾರ್ಕೆಟ್‌ನಲ್ಲಿ ಮಾರಾಟ ಮಾಡುವಂತಿಲ್ಲ. 47 ರೂ.ಗೆ ನಮಗೆ ಕೊಡಬೇಕು. ಇದನ್ನು ಅಗ್ರಿಮೆಂಟ್ ಮಾಡಿಕೊಡಿ. ಇಲ್ಲದಿದ್ದಲ್ಲಿ ನಾನ್ ಅಗ್ರಿಮೆಂಟ್‌ಗೆ 20 ರೂ. ಕೊಡಿ ಎನ್ನುವ ಮೂಲಕ ರೈತರನ್ನು ಸಂಕಷ್ಟಕ್ಕೆ ಸಿಲುಕಿಸುತ್ತಿದ್ದಾರೆ. ಇಂದು ರೈತ ಬೆಳೆ ಬೆಳೆಯಬೇಕಾದರೆ ಎಷ್ಟು ಕಷ್ಟ ಪಡುತ್ತಾನೆ ಎಂಬ ಅರಿವು ಫ್ಯಾಕ್ಟರಿ ಅವರಿಗೆ ಇಲ್ಲವೆನಿಸುತ್ತಿದೆ. ರಸಗೊಬ್ಬರದ ಬೆಲೆ 1500 ರಿಂದ 2000 ರೂ. ಇದೆ. ರಾಸಾಯನಿಕ ಸಿಂಪಡಿಸಲು ಸಾವಿರಾರು ರೂ. ಖರ್ಚು ಮಾಡಬೇಕಾಗುತ್ತದೆ. ಕೂಲಿ ಕಾರ್ಮಿಕರು ಸಿಗುತ್ತಿಲ್ಲ. ಸಿಕ್ಕರೂ 500 ರೂ. ಕೂಲಿ ಕೊಡಬೇಕು. ಹಾಗಾಗಿ ರೈತ ಸಂಕಷ್ಟಕ್ಕೆ ಸಿಲುಕಿದ್ದಾನೆ. ಫ್ಯಾಕ್ಟರಿ ನಿರ್ವಹಣೆ ಮಾಡುತ್ತಿರುವ ಆಡಳಿತ ಮಂಡಳಿ, ಕಂಪನಿ ನಡೆಸುವ ಮಾಲೀಕರು ನಮಗೆ ನೇರ ಸಂಪರ್ಕಕ್ಕೆ ಸಿಗುತ್ತಿಲ್ಲ. ಫ್ಯಾಕ್ಟರಿ ನೋಡಿಕೊಳ್ಳುತ್ತಿರುವ ಮ್ಯಾನೇಜ್‌ಮೆಂಟ್ ರೈತರನ್ನು ತುಚ್ಛವಾಗಿ ಕಾಣುತ್ತಿದೆ. ಹಾಗಾಗಿ ಈ ಭಾಗದ ಶಾಸಕರು ಆಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಮಧ್ಯೆ ಪ್ರವೇಶಿಸಿ ರೈತರಿಗೆ ನ್ಯಾಯ ದೊರಕಿಸಿ, ರೈತರ ಬೆಳೆಗೆ ಉತ್ತಮ ಬೆಲೆ ಸಿಗುವಂತೆ ಕ್ರಮ ವಹಿಸಬೇಕು. ಫ್ಯಾಕ್ಟರಿಯವರು ಇಲ್ಲಸಲ್ಲದ ಷರತ್ತು ಹಾಕುವುದನ್ನು ನಿಲ್ಲಿಸಿ ತಾಲೂಕಿನ ರೈತರಿಂದಲೇ ಹೂ ಖರೀದಿಸಬೇಕು. ಇಲ್ಲದಿದ್ದಲ್ಲಿ ಹೂ ಬೆಳೆಗಾರರ ಸಂಘವು ಜಿಲ್ಲೆಯಾದ್ಯಂತ ಉಗ್ರ ಪ್ರತಿಭಟನೆ ಹಮ್ಮಿಕೊಳ್ಳಲಿದೆ ಎಂದು ಎಚ್ಚರಿಸಿದರು.

> ತಾಲೂಕಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಚಿವ ಹೆಚ್.ಸಿ.ಮಹದೇವಪ್ಪರಂತಹ ಘಟಾನುಘಟಿ ನಾಯಕರು ಇದ್ದರೂ ರೈತರ ಕಷ್ಟ ಬಗೆಹರಿಸಲಾಗಿಲ್ಲ. ಫ್ಯಾಕ್ಟರಿಯವರು ರೈತರಿಗೆ ನಿರಂತರವಾಗಿ ಅನ್ಯಾಯ ಮಾಡುತ್ತಾ ಬಂದಿದ್ದು, ಕೂಡಲೇ ಹಾಕಿರುವ ಷರತ್ತನ್ನು ಹಿಂಪಡೆದು ಸ್ಥಳೀಯ ಬೆಳೆಗಾರರಿಂದ ಹೂ ಖರೀದಿ ಮಾಡಬೇಕು.
> –ಶಿವರಾಮು, ಸುಗಂಧರಾಜ ಹೂ ಬೆಳೆಗಾರ.

ಪ್ರತಿಭಟನೆಯಲ್ಲಿ ಸುಗಂಧರಾಜ ಹೂ ಬೆಳೆಗಾರರ ಸಂಘದ ಅಧ್ಯಕ್ಷ ಬಸಪ್ಪ, ರೇವಣ್ಣ, ಮುರುಡೇಶ್, ಈಶಣ್ಣ, ಲಿಂಗರಾಜು, ಕುಮಾರ್, ಸಿದ್ದಣ್ಣ, ಪುಟ್ಟಸ್ವಾಮಿ, ಮಹದೇವಸ್ವಾಮಿ, ಮಹದೇವಣ್ಣ, ಚಿಕ್ಕನಂಜಣ್ಣ ಭಾಗಿಯಾಗಿದ್ದರು.

ಕೆಎಸ್‌ಆರ್‌ಟಿಸಿ ಬಸ್‌ಗಳ ನಡುವೆ ಮುಖಾಮುಖಿ ಡಿಕ್ಕಿ

37ಕ್ಕೂ ಹೆಚ್ಚು ಪ್ರಯಾಣಿಕರಿಗೆ ಗಾಯ



ಘಟನೆಯಲ್ಲಿ ಜಖಂಗೊಂಡ ಸಾರಿಗೆ ಬಸ್‌ಗಳನ್ನು ಕಾಣಬಹುದು

ನಂಜನಗೂಡು, ಮೇ 20– ಕೆಎಸ್ಆರ್‌ಟಿಸಿ ಬಸ್‌ಗಳ ನಡುವೆ ಮುಖಾಮುಖಿ ಡಿಕ್ಕಿ ಸಂಭವಿಸಿ 37ಕ್ಕೂ ಹೆಚ್ಚು ಪ್ರಯಾಣಿಕರು ಗಾಯಗೊಂಡಿರುವ ಘಟನೆ ತಾಲೂಕಿನ ಚಾಮರಾಜನಗರ ಮುಖ್ಯರಸ್ತೆಯಲ್ಲಿರುವ ಗೋಳೂರು ಬಳಿ ನಡೆದಿದೆ.

ಮಂಗಳವಾರ ಬೆಳಗ್ಗೆ ಕೊಯಮತ್ತೂರಿನಿಂದ ಮೈಸೂರಿಗೆ ತೆರಳುತ್ತಿದ್ದ ಕೆಎಸ್ಆರ್‌ಟಿಸಿ ಬಸ್ (ಕೆಎ.06, ಎಫ್.1307) ಹಾಗೂ ನಂಜನಗೂಡಿನಿಂದ ಚಾಮರಾಜನಗರಕ್ಕೆ ತೆರಳುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್ (ಕೆಎ.10, ಎಫ್.0266) ನಡುವೆ ಗೋಳೂರು ಸಮೀಪದ ವಿದ್ಯಾಪೀಠದ ಬಳಿ ಮುಖಾಮುಖಿ ಡಿಕ್ಕಿ ಸಂಭವಿಸಿದೆ. ಇದರಿಂದಾಗಿ ಕೊಯಮತ್ತೂರು ಕಡೆಯಿಂದ ಬರುತ್ತಿದ್ದ ಬಸ್‌ನ ಮುಂಭಾಗ ಸಂಪೂರ್ಣ ಜಖಂಗೊಂಡಿದ್ದರೆ, ಚಾಮರಾಜನಗರಕ್ಕೆ ತೆರಳುತ್ತಿದ್ದ ಬಸ್ ಮುಂಭಾಗ ಸಹ ನಜ್ಜುಗುಜ್ಜಾಗಿದೆ. ಇನ್ನು ಅಪಘಾತದ ರಭಸಕ್ಕೆ ಎರಡೂ ವಾಹನಗಳ ಚಾಲಕರಿಗೆ ಗಂಭೀರ ಗಾಯಗಳಾಗಿದ್ದು, ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ 37ಕ್ಕೂ ಹೆಚ್ಚು ಮಂದಿಗೆ ಗಾಯಗಳಾಗಿವೆ. ಎಲ್ಲರನ್ನೂ ನಂಜನಗೂಡಿನ ಸರ್ಕಾರಿ ಆಸ್ಪತ್ರೆ ಮತ್ತು ಮೈಸೂರಿನ ಆಸ್ಪತ್ರೆಗಳಲ್ಲಿ ಚಿಕಿತ್ಸೆಗಾಗಿ ದಾಖಲಿಸಲಾಗಿದೆ.

ವಿಷಯ ತಿಳಿದು ಸ್ಥಳಕ್ಕಾಗಮಿಸಿದ ನಂಜನಗೂಡು ಸಂಚಾರ ಠಾಣೆ ಪೊಲೀಸರು ತುರ್ತು ವಾಹನದ ಮೂಲಕ ಗಾಯಾಳುಗಳನ್ನು ಆಸ್ಪತ್ರೆಗೆ ಸಾಗಿಸಲು ನೆರವಾದರು. ಗಾಯಾಳುಗಳಿಗೆ ನಂಜನಗೂಡಿನ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ಕೊಡಿಸಿ ಗಂಭೀರವಾಗಿ ಗಾಯಗೊಂಡವರನ್ನು ಮೈಸೂರಿನ ಕೆ.ಆರ್.ಆಸ್ಪತ್ರೆಗೆ ಕಳುಹಿಸಲಾಯಿತು.

ಸಂಚಾರ ಠಾಣೆ ನಿರೀಕ್ಷಕ ಸಿದ್ಧರಾಜು ಭೇಟಿ ನೀಡಿ ಸ್ಥಳ ಮಹಜರು ನಡೆಸಿ ಅಪಘಾತಕ್ಕೀಡಾಗಿರುವ ವಾಹನಗಳನ್ನು ವಶಕ್ಕೆ ಪಡೆದರು. ನಂಜನಗೂಡು ಸಂಚಾರ ಠಾಣೆಯಲ್ಲಿ ದೂರು ದಾಖಲಾಗಿದೆ.

ಪಿಎಚ್.ಡಿ ಪದವಿ



ಮೈಸೂರು: ಡಾ.ಅಶ್ವತ್ಥನಾರಾಯಣರ ಮಾರ್ಗ ದರ್ಶನದಲ್ಲಿ ಕೆ.ಎ. ಸೈಯದ್ ಬರ್ಕತ್ ಇತಿಹಾಸ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾ ಪ್ರಬಂಧವನ್ನು ಮೈಸೂರು ವಿವಿ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ

ಅಂಬೇಡ್ಕರ್ ಭವನ ಕಾಮಗಾರಿಗೆ ಗುದ್ದಲಿ ಪೂಜೆ



ಅಂಬೇಡ್ಕರ್ ಭವನ ಕಾಮಗಾರಿಗೆ ಶಾಸಕ ಅನಿಲ್ ಗುದ್ದಲಿ ಪೂಜೆ ನೆರವೇರಿಸಿದರು.

ಸರಗೂರು, ಮೇ 20– ನಾನು ಶಾಸಕನಾಗಲು ಡಾ.ಬಿ.ಆರ್.ಅಂಬೇಡ್ಕರ್ ಅವರ ಸಂವಿಧಾನವೇ ಕಾರಣ. ಸಂವಿಧಾನ ಬಲಿಷ್ಠವಾಗಿದ್ದು, ಅದರ ಅಡಿ ನಾವು ಕಾನೂನಾತ್ಮಕವಾಗಿ ನಡೆಯುತ್ತಿದ್ದೇವೆ ಎಂದು ಶಾಸಕ ಅನಿಲ್ ತಿಳಿಸಿದರು.

ತಾಲೂಕಿನ ಬಿದರಹಳ್ಳಿಯಲ್ಲಿ ನಡೆದ ಜನಸಂಪರ್ಕ ಸಭೆ ಹಾಗೂ ಡಾ.ಬಿ.ಆರ್. ಅಂಬೇಡ್ಕರ್ ಭವನ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಬಿದರಹಳ್ಳಿ ಗ್ರಾಮದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಭವನ ನಿರ್ಮಾಣಕ್ಕೆ 75 ಲಕ್ಷ ರೂ. ಅನುದಾನ ನೀಡಲಾಗಿದೆ. ಇದುವರೆಗೆ ಗ್ರಾಮದ ಅಭಿವೃದ್ಧಿಗೆ 1.50 ಕೋಟಿ ರೂ. ನೀಡಲಾಗಿದೆ. ಗ್ರಾಮದಲ್ಲಿ ಕಾಂಕ್ರೀಟ್ ರಸ್ತೆ, ಶಾಲಾ ಕಟ್ಟಡ ನಿರ್ಮಾಣ, ಶನೇಶ್ವರಸ್ವಾಮಿ ದೇವಸ್ಥಾನಕ್ಕೂ ಅನುದಾನ ನೀಡಿದ್ದೇನೆ. ರಾಜ್ಯದಲ್ಲಿ ನಮ್ಮದೇ ಸರ್ಕಾರ ಇರುವುದರಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಮಾಡಿ ಕೋಟೆ, ಸರಗೂರು ತಾಲೂಕಿನ ಎಲ್ಲಾ ಗ್ರಾಮಗಳ ಅಭಿವೃದ್ಧಿಗೆ ಹೆಚ್ಚಿನ ಅನುದಾನ ತರಲಾಗುವುದು. ನಮ್ಮ ತಂದೆ ಚಿಕ್ಕಮಾದು ಅವರನ್ನು ಶಾಸಕರಾಗಿ ಆಶೀರ್ವದಿಸಿದ್ದೀರಿ. ಅವರ ಮರಣದ ನಂತರ ನನ್ನನ್ನು 2ನೇ ಬಾರಿಗೆ 35 ಸಾವಿರಕ್ಕೂ ಹೆಚ್ಚು ಮತಗಳನ್ನು ನೀಡಿ ಶಾಸಕನನ್ನಾಗಿ ಮಾಡಿದ್ದೀರಿ. ನಾನು ಯಾವುದೇ ರಾಜಕೀಯ ಮಾಡದೇ ತಾಲೂಕಿನ ಅಭಿವೃದ್ಧಿಗಾಗಿ ತಮ್ಮ ಸೇವಕನಂತೆ ಶ್ರಮಿಸುತ್ತೇನೆ. ಜನಸಂಪರ್ಕ ಸಭೆಯಲ್ಲಿ ಆಯಾ ಇಲಾಖಾಧಿಕಾರಿಗಳು ಜನಸಾಮಾನ್ಯರ ಹಾಗೂ ರೈತರ ಸಮಸ್ಯೆಗೆ ಸ್ಪಂದಿಸಿ ಸೌಲಭ್ಯ ಕಲ್ಪಿಸಬೇಕು. ನಿತ್ಯ ಜನರು ಕಚೇರಿಗಳಿಗೆ ಅಲೆಯುವುದು ಬೇಡ. ನಾನು ಗ್ರಾಮಗಳ ಅಭಿವೃದ್ಧಿಗೆ ಹೆಚ್ಚಿನ ಗಮನ ಹರಿಸುತ್ತಿದ್ದು, ನಿಮ್ಮ ಸಹಕಾರ ಸದಾ ನಮಗೆ ಅಗತ್ಯವಾಗಿದ್ದು, ಗ್ರಾಮದ ಮುಖಂಡರ ಮನವಿಯಂತೆ ಸಾಗುವಳಿ ರಸ್ತೆ, ಸೇತುವೆ ಸೇರಿದಂತೆ ಇನ್ನಿತರ ಕೆಲಸಗಳನ್ನು ಮಾಡಿ ಕೊಡುವುದಾಗಿ ತಿಳಿಸಿದರು.

ಯೂತ್ ಕಾಂಗ್ರೆಸ್ ಅಧ್ಯಕ್ಷ ಶಿವರಾಜು ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸರಗೂರು ಹಾಗೂ ಕೋಟೆ ತಾಲೂಕಿನ ವಿವಿಧ ನಿಗಮಗಳಿಗೆ ಸಾಕಷ್ಟು ಅನುದಾನ ನೀಡಿ ಜನಸಾಮಾನ್ಯರ ಕಲ್ಯಾಣಕ್ಕಾಗಿ ಶ್ರಮಿಸುತ್ತಿದ್ದಾರೆ. ಶಾಸಕ ಅನಿಲ್ ಎರಡೂ ತಾಲೂಕಿಗಾಗಿ ವಿಶೇಷ ಅನುದಾನ ತರಲು ಪ್ರಾಮಾಣಿಕವಾಗಿ ದುಡಿಯುತ್ತಿದ್ದು, ಇದರಿಂದಾಗಿ ಗ್ರಾಮಗಳು ಅಭಿವೃದ್ಧಿ ಹೊಂದುತ್ತಿವೆ. ಬಡವರ ಹಸಿವು ನೀಗಿಸುವ ಉದ್ದೇಶದಿಂದ ಸರಗೂರು ಪಟ್ಟಣದಲ್ಲಿ ಇಂದಿರಾ ಕ್ಯಾಟೀನ್ ಕಾಮಗಾರಿ ಪೂರ್ಣಗೊಂಡಿದ್ದು, ಶಾಸಕರು ಉದ್ಘಾಟಿಸಲಿದ್ದಾರೆ ಎಂದರು.

ಇದೇ ವೇಳೆ ವಿವಿಧ ಗ್ರಾಮಗಳ ಮುಖ್ಯಸ್ಥರು ತಮ್ಮ ಗ್ರಾಮಗಳಿಗೆ ಬೇಕಾದ ಸೌಲಭ್ಯಗಳನ್ನು ಕಲ್ಪಿಸುವಂತೆ ಸಭೆಯಲ್ಲಿ ಮನವಿ ಮಾಡಿದರು. ಜನಸಂಪರ್ಕ ಸಭೆಯಲ್ಲಿ ತಹಸೀಲ್ದಾರ್ ಮೋಹನ ಕುಮಾರಿ, ಇಓ ಪ್ರೇಮ್‌ಕುಮಾರ್, ಸಿಪಿಐ ಪ್ರಸನ್ನಕುಮಾರ್, ಸರ್ವೇ ನಾಗರಾಜು, ಎಇಇ ನಾಗೇಶ್, ಮೈಮುಲ್ ನಿರ್ದೇಶಕ ಕೆ.ಈರೇಗೌಡ, ಜಿಪಂ ಮಾಜಿ ಸದಸ್ಯ ಪಿ.ರವಿ, ಕುರುಬ ಸಮಾಜದ ಜಿಲ್ಲಾಧ್ಯಕ್ಷ ಶಿವಪ್ಪ ಕೋಟೆ, ಸೌಮ್ಯ, ಗ್ರಾಪಂ ಅಧ್ಯಕ್ಷೆ ನಾಗರತ್ನ, ಉಪಾಧ್ಯಕ್ಷ ವಿಜಯ್ ಕುಮಾರ್ ಹಾಗೂ ಸದಸ್ಯರು, ಗ್ರಾಮದ ಯಜಮಾನರು, ಮುಖಂಡರು, ವಿವಿಧ ಇಲಾಖಾಧಿಕಾರಿಗಳು ಸೇರಿ ದಂತೆ ಗ್ರಾಮಸ್ಥರು, ಯುವಕರು ಹಾಜರಿದ್ದರು.

ವಿವಿಧ ಗ್ರಾಮಗಳಲ್ಲಿ ಗ್ರಾಮದೇವತೆ ಹಬ್ಬ, ರಥೋತ್ಸವ



ಕೊಣಸೂರು, ಆವರ್ತಿ, ಮೇಲೂರು ಗ್ರಾಮಗಳಲ್ಲಿ ಗ್ರಾಮದೇವತೆ ಹಬ್ಬ ನಡೆಯಿತು.

ಬೆಟ್ಟದಪುರ, ಮೇ 20– ಪಿರಿಯಾಪಟ್ಟಣ ತಾಲೂಕಿನ ಆವರ್ತಿ, ಮೇಲೂರು, ಕೊಣಸೂರು ಗ್ರಾಮದಲ್ಲಿ ಗ್ರಾಮ ದೇವತೆ ಹಬ್ಬ ಮತ್ತು ರಥೋತ್ಸವ ಅದ್ಧೂರಿಯಾಗಿ ನಡೆಯಿತು.

ಆವರ್ತಿ ಗ್ರಾಮದಲ್ಲಿ ಬಸವೇಶ್ವರರ ಉತ್ಸವ ಹಾಗೂ ಬಣ್ಣದ ಓಕುಳಿ ವಿಜೃಂಭಣೆಯಿಂದ ನಡೆಯಿತು. ಗ್ರಾಮದ ಪ್ರತಿ ರಸ್ತೆಗಳಲ್ಲಿ ಬಣ್ಣದ ಓಕುಳಿ ಹಾಗೂ ದೇವರ ಉತ್ಸವ ನಡೆಸಲಾಯಿತು. ಅಲ್ಲದೇ ಗ್ರಾಮದ ಮಧ್ಯ ಭಾಗದಲ್ಲಿರುವ ದೇವರ ಕುರ್ಜಿಗೆ ವಿಶೇಷ ಅಲಂಕಾರ, ವಿದ್ಯುತ್ ಹಾಗೂ ಹೂವಿನ ಅಲಂಕಾರ ಮಾಡಿ ಎಲ್ಲರೂ ಒಟ್ಟಾಗಿ ಹಬ್ಬ ಆಚರಿಸಿ ಸಂಭ್ರಮಿಸಿದರು.

ಮೇಲೂರು ಗ್ರಾಮದಲ್ಲಿ ಬಸವೇಶ್ವರ ಹಾಗೂ ಆಂಜನೇಯಸ್ವಾಮಿ ರಥೋತ್ಸವ ಅದ್ಧೂರಿಯಾಗಿ ನಡೆಯಿತು. ಕೊಣಸೂರು ಗ್ರಾಮದಲ್ಲೂ ಸಹ ದೇವರ ಉತ್ಸವ, ಬಣ್ಣದ ಓಕುಳಿ, ದೇವರ ಮೆರವಣಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ನಡೆಸಲಾಯಿತು. ನಂತರ ಗ್ರಾಮಸ್ಥರು ಒಟ್ಟಾಗಿ ಸೇರಿ ಗ್ರಾಮದ ದೇವಾಲಯದ ಮುಂಭಾಗ ಜಾನಪದ ವಾದ್ಯ, ಗ್ರಾಮೀಣ ತಮಟೆ ಸದ್ದಿಗೆ ಗ್ರಾಮಸ್ಥರು ಜಾನಪದ ನೃತ್ಯ ಮಾಡಿ ಸಂತಸಪಟ್ಟರು.

ಮುಂಗಾರು ಆರಂಭದಲ್ಲಿ ರೈತರು ಸಮೃದ್ಧಿ ವ್ಯವಸಾಯಕ್ಕಾಗಿ ಹಾಗೂ ಮಳೆ ಬರುವಿಕೆಗಾಗಿ ಪ್ರತಿ ಗ್ರಾಮಗಳಲ್ಲಿ ಗ್ರಾಮದೇವತೆ ಹಬ್ಬ ಹಾಗೂ ಓಕುಳಿ ಆಚರಿಸುವುದು ವಾಡಿಕೆ.

ಮಾದಿಗರ ಕಾಲೋನಿಯಲ್ಲಿ ಕಳಪೆ ಒಳಚರಂಡಿ ಕಾಮಗಾರಿ

ಬಯಲು ಶೌಚಾಲಯಕ್ಕೆ ಮೊರೆ ಹೋಗುತ್ತಿರುವ ನಿವಾಸಿಗಳು



ತಿ.ನರಸೀಪುರ, ಮೇ 20– ಬನ್ನೂರು ಪಟ್ಟಣದ ಮಾದಿಗರ ಕಾಲೋನಿ ಒಳಚರಂಡಿ ಕಾಮಗಾರಿ ಅತ್ಯಂತ ಕಳಪೆಯಿಂದ ಕೂಡಿದ್ದು, ಹೊಲಸು ನೀರು ಟಾಯ್ಲೆಟ್ ಛೇಂಬರ್ ತುಂಬಿ ಮನೆಯೊಳಗೆ ಹರಿಯುವ ಪರಿಸ್ಥಿತಿ ನಿರ್ಮಾಣವಾಗಿದೆ.

ಇದರಿಂದಾಗಿ ಬನ್ನೂರಿನ ವಾರ್ಡ್ ನಂ.18 ಮತ್ತು 2ರಲ್ಲಿ ವಾಸವಾಗಿರುವ ನಿವಾಸಿಗಳು ಹೆಂಗಸರು, ಮಕ್ಕಳೆನ್ನದೆ ಮನೆಯಲ್ಲಿ ಶೌಚಾಲಯ ಬಳಸಲಾಗದೆ ಬಯಲು ಶೌಚಾಲಯ ಅವಲಂಬಿಸ ಬೇಕಾಗಿದ್ದು, ಈ ಕಳಪೆ ಕಾಮಗಾರಿಗೆ ಕರ್ನಾಟಕ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಅಧಿಕಾರಿಗಳೇ ಕಾರಣವೆಂದು ನಿವಾಸಿಗಳು ಆಪಾದಿಸಿದ್ದಾರೆ.


ಅದರಲ್ಲೂ ವಾರ್ಡ್‌ನ ತುಂಬು ಗರ್ಭಿಣಿ ಮಹಿಳೆಯರು ಚೆಂಬು ಹಿಡಿದು ಬಹಳ ಕಷ್ಟಪಟ್ಟು ಬಯಲು ಶೌಚಾಲಯಕ್ಕೆ ಹೋಗುತ್ತಿರುವುದು ನೋವಿನ ಸಂಗತಿಯಾಗಿದೆ ಎಂದು ನಿವಾಸಿಗಳು 'ಮೈಸೂರು ಮಿತ್ರ'ನಿಗೆ ಕಂಬನಿ ಮಿಡಿಯುತ್ತಾ ತಿಳಿಸಿದರು.

ಇದರೊಂದಿಗೆ ನಮ್ಮ ಮಾದಿಗರ ಕಾಲೋನಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಕೂಡ ಇದ್ದು, ನಿವಾಸಿಗಳು ಬರಗಾಲದ ಪರಿಸ್ಥಿತಿಯಂತೆ ಬದುಕುವಂತಾಗಿದೆ. ಬನ್ನೂರು ಪುರಸಭೆ ಸಾಮಾನ್ಯ ಸಭೆಯಲ್ಲೂ ಒಳಚರಂಡಿ ಕಳಪೆ ಕಾಮಗಾರಿ ಮತ್ತು ಕುಡಿಯುವ ನೀರಿನ ಸಮಸ್ಯೆ ಕುರಿತು ಚರ್ಚಿಸಿದರೂ ಇದುವರೆವಿಗೂ ಯಾವುದೇ ಪ್ರಯೋಜನವಾಗಿಲ್ಲ. ನಮ್ಮ ಮಾದಿಗರ ಬಡಾವಣೆ ಮತ್ತು ಅಲ್ಲಿನ ನಿವಾಸಿಗಳಿಗೆ ಸಮರ್ಪಕ ಮೂಲ ಸೌಕರ್ಯ ಕಲ್ಪಿಸದೆ ಕಡೆಗಣಿಸಲಾಗುತ್ತಿದೆ ಎಂದು ನಿವಾಸಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪುರಸಭೆ ಮುಖ್ಯಾಧಿಕಾರಿ ಮತ್ತು ಅಧ್ಯಕ್ಷರ ಗಮನಕ್ಕೆ ತಂದರೂ ಪ್ರಯೋಜನವಾಗಿಲ್ಲ. ಕೂಡಲೇ ಮಾದಿಗರ ಬಡಾವಣೆಯ ಒಳಚರಂಡಿ ಮತ್ತು ನೀರಿನ ಸಮಸ್ಯೆ ಸೇರಿದಂತೆ ಎಲ್ಲಾ ಮೂಲ ಸೌಕರ್ಯಗಳ ಭವಣೆ ಬಗ್ಗೆ ಗಮನ ಹರಿಸದಿದ್ದರೆ, ನಿವಾಸಿಗಳು ಉಗ್ರ ಸ್ವರೂಪದ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

ದೀನ ದಲಿತರ ಆಶ್ರಯದಾತ ಡಿ.ದೇವರಾಜ ಅರಸು

ಸಹಕಾರ ಸಚಿವ ಕೆ.ಎನ್.ರಾಜಣ್ಣ ಬಣ್ಣನೆ



ಸಹಕಾರ ಸಚಿವ ಕೆ.ಎನ್.ರಾಜಣ್ಣ ಅವರನ್ನು ಸನ್ಮಾನಿಸಲಾಯಿತು.

ಹುಣಸೂರು, ಮೇ 20– ಭೂ ಮಾಲೀಕರ ದಬ್ಬಾಳಿಕೆಯಿಂದ ನಲುಗಿದ್ದ ಕೂಲಿ ಕಾರ್ಮಿಕರು, ದೀನ ದಲಿತರಿಗೆ ಭೂಮಿ ಕೊಟ್ಟು ಸಮಾಜದಲ್ಲಿ ಅಲಕ್ಷ್ಯಕ್ಕೆ ತುತ್ತಾಗಿದ್ದ ತಳ ಸಮುದಾಯಗಳಿಗೆ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಆಶ್ರಯದಾತರಾಗಿದ್ದರು ಎಂದು ಸಹಕಾರ ಸಚಿವ ಕೆ.ಎನ್.ರಾಜಣ್ಣ ಬಣ್ಣಿಸಿದರು.

ತಾಲೂಕಿನ ಅರಸು ಕಲ್ಲಹಳ್ಳಿಯಲ್ಲಿರುವ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ ಸಮಾಧಿಗೆ ಮಾಜಿ ಶಾಸಕ ಹೆಚ್.ಪಿ.ಮಂಜುನಾಥ್ ಹಾಗೂ ತುಮಕೂರಿನ ತಮ್ಮ ಅಪಾರ ಬೆಂಬಲಿಗರೊಂದಿಗೆ ಭೇಟಿ ನೀಡಿ ಪುಷ್ಪಾರ್ಚನೆ ಮಾಡಿ ಪೂಜೆ ಸಲ್ಲಿಸಿ ಮಾತನಾಡಿದ ಅವರು, ಮೇ 21ರಂದು ತಮ್ಮ 75ನೇ ವರ್ಷದ ಹುಟ್ಟುಹಬ್ಬದ ಅಮೃತ ಮಹೋತ್ಸವವನ್ನು ತಮ್ಮ ಅಭಿಮಾನಿಗಳು, ತುಮಕೂರಿನ 29 ವಿವಿಧ ಸಮುದಾಯ ಸಂಘಟನೆಗಳ ಒಕ್ಕೂಟ ಹಾಗೂ ಕಾರ್ಯಕರ್ತರು ತುಮ ಕೂರಿನಲ್ಲಿ ಆಚರಿಸುತ್ತಿದ್ದು, ಈ ಹಿನ್ನೆಲೆಯಲ್ಲಿ ನಾನು ಹಿಂದುಳಿದ ವರ್ಗಗಳ ನೇತಾರ ಡಿ.ದೇವರಾಜ ಅರಸರ ಅನುಯಾಯಿಯಾಗಿದ್ದು, ಅವರ ತತ್ವ ಸಿದ್ಧಾಂತಗಳ ಪ್ರೇರಕನಾಗಿ ಅವರು ಹಾಕಿಕೊಟ್ಟ ಮಾರ್ಗದಲ್ಲಿ ರಾಜಕೀಯವಾಗಿ ನಡೆಯುತ್ತಿದ್ದೇನೆ. ನನ್ನ ಯಾವುದೇ ರಾಜಕೀಯ ಹಾಗೂ ಶುಭ ಕಾರ್ಯಗಳು ನಡೆಯುವ ಮುನ್ನ ಡಿ.ದೇವರಾಜ ಅರಸರ ಸಮಾಧಿಗೆ ಬಂದು ಪೂಜೆ ಸಲ್ಲಿಸುವ ಸಂಪ್ರದಾಯವಿಟ್ಟುಕೊಂಡಿದ್ದೇನೆ ಎಂದರು.

ಇದೇ ವೇಳೆ ಮಾಜಿ ಶಾಸಕ ಹೆಚ್.ಪಿ. ಮಂಜುನಾಥ್ ಹಾಗೂ ಕಲ್ಲಹಳ್ಳಿ ಗ್ರಾಮಸ್ಥರು ಸಚಿವ ರಾಜಣ್ಣ ಅವರನ್ನು ಸನ್ಮಾನಿಸಿದರು. ನಂತರ ಸಚಿವ ರಾಜಣ್ಣ ಕಲ್ಲಹಳ್ಳಿ ಗ್ರಾಮದಲ್ಲಿರುವ ಡಿ.ದೇವರಾಜ ಅರಸರ ಮನೆಯನ್ನು ವೀಕ್ಷಣೆ ಮಾಡಿ ಪಕ್ಕದಲ್ಲಿರುವ ಜೈನ ಬಸದಿಗೆ ಭೇಟಿ ನೀಡಿ ಪೂಜೆ ಸಲ್ಲಿಸಿದರು.


ಈ ವೇಳೆ ಹುಣಸೂರು ನಗರಾಭಿವೃದ್ಧಿ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಹೆಚ್.ಪಿ.ಅಮರ್‌ನಾಥ್, ಹಿರಿಯ ಸಹಕಾರಿ ತೇಜಸ್ ವಿ.ಗೌಡ, ಕಾಂಗ್ರೆಸ್ ಕಾರ್ಯಾಧ್ಯಕ್ಷ ಪುಟ್ಟರಾಜು, ಮಾಜಿ ಅಧ್ಯಕ್ಷ ಬಿಳಿಕೆರೆ ಬಸವರಾಜ್, ತಾಲೂಕು ಗ್ಯಾರಂಟಿ ಯೋಜನೆ ಸಮಿತಿ ಅಧ್ಯಕ್ಷ ಕಲ್ಕುಣಿಕೆ ರಾಘು, ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸದಸ್ಯ ನೇರಳಕುಪ್ಪೆ ಮಹದೇವ್, ಅಕ್ರಮ ಸಕ್ರಮ ಸಮಿತಿ ಸದಸ್ಯ ಕುಮಾರ್, ಮಾಜಿ ಸದಸ್ಯ ಚಿಕ್ಕಸ್ವಾಮಿ, ಕಲ್ಲಹಳ್ಳಿ ಗ್ರಾಪಂ ಅಧ್ಯಕ್ಷ ಜಗದೀಶ್, ಮುಖಂಡರಾದ ಕೆಂಪನಾಯಕ, ಭೋಗಪ್ಪ, ಶಿವಣ್ಣ, ಪ್ರಭಾಕರ್, ರಾಜು, ದರ್ಶನ್, ಪೈಜಾಲ್, ಕೌಶಿಕ್, ನೇತ್ರಾ ವತಿ, ಮಣಿಯಮ್ಮ ಸೇರಿದಂತೆ ಇತರರಿದ್ದರು.

ವಿದ್ಯಾರ್ಥಿಗಳಿಗೆ ಐಐಟಿ/ಜೆಇಇ ತರಬೇತಿ



ಹೆಚ್.ಡಿ.ಕೋಟೆ, ಮೇ 20– ತಾಲೂಕಿನ ಸೊಳ್ಳೆಪುರ ಗ್ರಾಮದ ಏಕಲವ್ಯ ಮಾದರಿ ವಸತಿ ಶಾಲೆ ಮತ್ತು ಕಾಲೇಜಿನ 2025ನೇ ಸಾಲಿನ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಾದ ಪ್ರೀತಂ ಪಿ.ಎಸ್. ಬಿನ್ ಸ್ವಾಮಿನಾಯಕ ಪೂನಹಳ್ಳಿ, ಕೌಶಲ್ಯ ಬಿನ್ ನಿಂಗರಾಜು ಕುನ್ನಪಟ್ಟಣ, ಪುನೀತ್ ಬಿನ್ ಸಿದ್ದನಾಯಕ ಹಾಡ್ಯ, ಕೌಶಿಕ್ ಬಿನ್ ಸ್ವಾಮಿನಾಯಕ ಪುನಾಹಳ್ಳಿ ಇವರು ಐಐಟಿ/ಜೆಇಇ (IIT/JEE advance)ಗೆ ಆಯ್ಕೆಯಾಗಿದ್ದು, ಬುಡಕಟ್ಟು ವಿದ್ಯಾರ್ಥಿಗಳ ರಾಷ್ಟ್ರೀಯ ಶಿಕ್ಷಣ ಸಂಘ ಬುಡಕಟ್ಟು ವ್ಯವಹಾರಗಳ ಸಚಿವಾಲಯದ ಅಡಿ ದೆಹಲಿಯಲ್ಲಿ ಆಫ್‌ಲೈನ್ ತರಬೇತಿ ನೀಡಲಾಗಿದ್ದು, ರಾಷ್ಟ್ರಪತಿಗಳಿಂದ ಗೌರವ ಪಡೆದಿರುತ್ತಾರೆ ಎಂದು ಪ್ರಾಂಶುಪಾಲ ರಾಕೇಶ್ ಚಂದ್ರವರ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಸ್ತೆ ಡಾಂಬರೀಕರಣ, ಸಸ್ಯಕಾಶಿ ಪುನರ್ ನಿರ್ಮಾಣಕ್ಕೆ ಚಾಲನೆ



ಅಭಿವೃದ್ಧಿ ಕಾಮಗಾರಿಗೆ ಶಾಸಕ ದರ್ಶನ್ ಚಾಲನೆ ನೀಡಿದರು

ನಂಜನಗೂಡು, ಮೇ 20– ಸುಮಾರು 58 ಲಕ್ಷ ರೂ. ವೆಚ್ಚದಲ್ಲಿ ಸಸ್ಯಕಾಶಿ ಪುನರ್ ನಿರ್ಮಾಣ ಹಾಗೂ 2 ಕೋಟಿ ರೂ. ವೆಚ್ಚದಲ್ಲಿ ನಂಜನಗೂಡು–ಹುಲ್ಲಹಳ್ಳಿ ರಸ್ತೆ ಮರು ಡಾಂಬರೀಕರಣ ಕಾಮಗಾರಿಗೆ ಚಾಲನೆ ನೀಡಲಾಗಿದೆ ಎಂದು ಶಾಸಕ ದರ್ಶನ್ ತಿಳಿಸಿದರು.

ನಗರದ ಪ್ರವಾಸಿ ಮಂದಿರದ ಬಳಿ ಕಾಮಗಾರಿಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ನಂಜನಗೂಡಿನ ಪ್ರವಾಸಿ ಮಂದಿರದ ಬಳಿ ಊಟಿಯ ಬೊಟಾನಿಕಲ್ ಗಾರ್ಡನ್ ಮಾದರಿ ಸಸ್ಯಕಾಶಿ ನಿರ್ಮಾಣ ಮಾಡಬೇಕು ಎಂಬುದು ದಿ.ವಿ.ಶ್ರೀನಿವಾಸ್ ಪ್ರಸಾದ್ ಅವರ ಕನಸಾಗಿತ್ತು. ಅವರು 3 ಕೋಟಿ ರೂ. ವೆಚ್ಚದಲ್ಲಿ ಸಸ್ಯಕಾಶಿ ಅಭಿವೃದ್ಧಿ ಕಾಮಗಾರಿ ಕೈಗೊಂಡಿದ್ದರು. ಆದರೆ ಸರಿಯಾದ ನಿರ್ವಹಣೆ ಇಲ್ಲದೆ ಜನರ ಬಳಕೆಗೆ ಬರುವ ಮುನ್ನವೇ ಗಿಡಗಳು ಹಾಳಾದವು. ಹೀಗಾಗಿ ಈ ಸಸ್ಯಕಾಶಿ ಅಭಿವೃದ್ಧಿಪಡಿಸಿ ನಂಜನಗೂಡಿನ ನಾಗರಿಕರು ತಮ್ಮ ಕುಟುಂಬದ ಜೊತೆ ಸಂತೋಷದಿಂದ ಕಾಲ ಕಳೆಯಲು ಉತ್ತಮ ವಾತಾವರಣ ನಿರ್ಮಿಸಬೇಕು ಎಂಬ ಉದ್ದೇಶದಿಂದ ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರ ಮನವೊಲಿಸಿ 58 ಲಕ್ಷ ರೂ. ಅನುದಾನ ಮಂಜೂರು ಮಾಡಿಸಿ ಸಸ್ಯಕಾಶಿ ಪುನರ್ ನಿರ್ಮಾಣ ಮತ್ತು ನಿರ್ವಹಣೆ ಮಾಡುವ ಕಾಮಗಾರಿಗೆ ಚಾಲನೆ ನೀಡಲಾಗಿದೆ. ಇದು ಶೀಘ್ರ ಮುಕ್ತಾಯಗೊಂಡು ನಂಜನಗೂಡಿನ ಜನರಿಗೆ ಬಳಕೆಗೆ ಸಿಗಲಿದೆ. ಜೊತೆಗೆ ಪ್ರವಾಸಿ ಮಂದಿರದ ಬಳಿ ಇರುವ 18 ಎಕರೆ ಜಾಗದಲ್ಲಿ ಉತ್ತಮ ಕ್ರೀಡಾಂಗಣ ನಿರ್ಮಿಸಲು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಹಂಬಲ ಹೊಂದಿದ್ದಾರೆ. ಈ ನಿಟ್ಟಿನಲ್ಲಿ ಜಿಲ್ಲಾ ಉಸ್ತುವಾರಿ ಸಚಿವರೊಂದಿಗೆ ಕೈಜೋಡಿಸಿ ಉತ್ತಮ ಕ್ರೀಡಾಂಗಣ ನಿರ್ಮಿಸಲು ಶ್ರಮಿಸಲಾಗುವುದು. ಉಳಿದ ಜಾಗದಲ್ಲಿ ಹೆಚ್ಚಿನ ಅನುದಾನ ತಂದು ಬೊಟಾನಿಕಲ್ ಗಾರ್ಡನ್ ಮಾದರಿ ಉದ್ಯಾನವನ ನಿರ್ಮಿಸಿ ನಂಜನಗೂಡನ್ನು ಪ್ರವಾಸಿ ಕೇಂದ್ರವನ್ನಾಗಿ ರೂಪಿಸಲಾಗುವುದು ಎಂದರು.

ನಂಜನಗೂಡಿನಿಂದ ಹುಲ್ಲಹಳ್ಳಿಗೆ ಹೋಗುವ ಮುಖ್ಯರಸ್ತೆ ದೇಬೂರು ಗ್ರಾಮದವರೆಗೆ ಗುಂಡಿ ಬಿದ್ದು ಸಂಪೂರ್ಣ ಹಾಳಾಗಿದ್ದು, ವಾಹನ ಸಂಚಾರಕ್ಕೆ ತೀವ್ರ ತೊಂದರೆಯಾಗಿತ್ತು. ಹೀಗಾಗಿ ರಸ್ತೆಯ ಮರು ಡಾಂಬರೀಕರಣ ಕಾಮಗಾರಿಗೆ 2 ಕೋಟಿ ವೆಚ್ಚದಲ್ಲಿ ಚಾಲನೆ ನೀಡಲಾಗಿದೆ. ಸುಮಾರು 2.40 ಕಿಮೀವರೆಗೆ ರಸ್ತೆ ಮರು ಡಾಂಬರೀಕರಣಗೊಂಡು ಸಾರ್ವಜನಿಕರಿಗೆ ಅನುಕೂಲವಾಗಲಿದೆ ಎಂದರು.

ಈ ವೇಳೆ ಮಾಜಿ ಶಾಸಕ ಕೇಶವ ಮೂರ್ತಿ, ನಗರಸಭಾಧ್ಯಕ್ಷ ಶ್ರೀಕಂಠಸ್ವಾಮಿ, ಉಪಾಧ್ಯಕ್ಷೆ ರಿಯಾನಬಾನು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹೇಶ್, ಸಿ.ಎಂ.ಶಂಕರ್, ಶ್ರೀಕಂಠ ನಾಯಕ, ನಗರಸಭಾ ಸದಸ್ಯರಾದ ಎಸ್.ಪಿ. ಮಹೇಶ್, ಪ್ರದೀಪ್, ಗಾಯತ್ರಿ, ವಿಜಯ ಲಕ್ಷ್ಮಿ, ಮೀನಾಕ್ಷಿ, ಕೆ.ಎಂ.ಬಸವರಾಜು, ರವಿ, ಕಾಂಗ್ರೆಸ್ ಹಿಂದುಳಿದ ವರ್ಗದ ರಾಜ್ಯ ಪ್ರಧಾನ ಕಾರ್ಯದರ್ಶಿ ನಾಗರಾಜು, ಯುವ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಚಂದನ್‌ಗೌಡ, ಮುಖಂಡರಾದ ಪರಶಿವಮೂರ್ತಿ, ಸತೀಶ್, ಪದ್ಮಪಾಣಿ, ಗೋವಿಂದರಾಜು, ಅಬ್ದುಲ್ ಖಾದರ್, ಹಾಡ್ಯ ಜಯರಾಮ, ಗ್ರಾಪಂ ಅಧ್ಯಕ್ಷ ಹರೀಶ್, ಲೋಕೋ ಪಯೋಗಿ ಇಲಾಖೆ ಎಇಇ ಬಸವರಾಜು, ಎಇ ಮಾರ್ಕಂಡಯ್ಯ ಸೇರಿದಂತೆ ಹಲವರಿದ್ದರು.

ವೈ.ಕೆ.ನವೀನ್ ನಿಧನ



ಬನ್ನೂರು, ಮೇ 20– ಯಾಚೇನಹಳ್ಳಿ ಗ್ರಾಮದ ರೈಸ್‌ಮಿಲ್ ಕುಳ್ಳೇಗೌಡರ ಪುತ್ರ, ತುರಗನೂರು ಗ್ರಾಪಂ ಮಾಜಿ ಉಪಾಧ್ಯಕ್ಷ ವೈ.ಕೆ.ನವೀನ್(50) ಮಂಗಳವಾರ ನಿಧನರಾದರು. ಮೃತರು ಪತ್ನಿ ಸುನೀತಾ, ಪುತ್ರಿ ಪೂರ್ವಿಕಾ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಬುಧವಾರ ಬೆಳಗ್ಗೆ 11 ಗಂಟೆಗೆ ಸ್ವಗ್ರಾಮದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಐಪಿಎಲ್ ಹಂಗಾಮ

ಗೆಲುವಿನೊಂದಿಗೆ ಆರ್‌ಆರ್ ಟೂರ್ನಿಗೆ ವಿದಾಯ



ನವದೆಹಲಿ, ಮೇ 20– ವೈಭವ್ ಸೂರ್ಯವಂಶಿ ಅವರ ಆಕರ್ಷಕ ಅರ್ಧಶತಕದ ನೆರವಿನಿಂದ ರಾಜಸ್ಥಾನ್ ರಾಯಲ್ಸ್ ಚೆನ್ನೈ ಸೂಪರ ಕಿಂಗ್ಸ್ ವಿರುದ್ಧ 6 ವಿಕೆಟ್‌ಗಳ ಜಯ ಸಾಧಿಸಿದೆ.

ಈ ಗೆಲುವಿನೊಂದಿಗೆ ಸಂಜು ಸ್ಯಾಮ್ಸನ್ ನಾಯಕತ್ವದ ರಾಜಸ್ಥಾನ ರಾಯಲ್ಸ್ ಆಡಿರುವ 14 ಪಂದ್ಯಗಳ ಪೈಕಿ 4 ರಲ್ಲಿ ಗೆಲುವು, 10 ರಲ್ಲಿ ಸೋಲು ಅನುಭವಿಸಿ 8 ಅಂಕಗಳೊಂದಿಗೆ ಅಂಕಪಟ್ಟಿಯಲ್ಲಿ 9ನೇ ಸ್ಥಾನ ಪಡೆದು ಪ್ರಸಕ್ತ ಸಾಲಿನ ಐಪಿಎಲ್ ಟೂರ್ನಿಗೆ ವಿದಾಯ ಹೇಳಿದೆ. ಉಳಿದಂತೆ ಸಿಎಸ್‌ಕೆ 13 ಪಂದ್ಯಗಳಲ್ಲಿ 3ರಲ್ಲಿ ಗೆಲುವು, 10 ರಲ್ಲಿ ಸೋಲು ಅನುಭವಿಸಿ ಕೊನೆ ಸ್ಥಾನ ಅಲಂಕರಿಸಿದೆ.

ಇಲ್ಲಿನ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಚೆನ್ನೈ ಸೂಪರ್ ಕಿಂಗ್ಸ್ ನಿಗದಿತ 20 ಓವರ್‌ಗಳಲ್ಲಿ 8 ವಿಕೆಟ್ ನಷ್ಟಕ್ಕೆ 187 ರನ್ ಗಳಿಸಿತ್ತು. ಸ್ಪರ್ಧಾತ್ಮಕ ಮೊತ್ತದ ಗುರಿ ಬೆನ್ನಟ್ಟಿದ ರಾಜಸ್ಥಾನ 17.1 ಓವರ್‌ಗಳಲ್ಲಿ 4 ವಿಕೆಟ್ ನಷ್ಟಕ್ಕೆ 188 ರನ್ ಗಳಿಸುವ ಮೂಲಕ ಇನ್ನೂ 17 ಎಸೆತಗಳು ಬಾಕಿ ಇರುವಂತೆಯೇ ಜಯದ ನಗೆ ಬೀರಿತು.

ತಂಡದ ಪರ ಆರಂಭದಲ್ಲಿ ಬಿರುಸಿನ ಬ್ಯಾಟಿಂಗ್ ಮಾಡಿದ ಯಶಸ್ವಿ ಜೈಸ್ವಾಲ್ 19 ಎಸೆತಗಳಲ್ಲಿ 2 ಸಿಕ್ಸರ್, 5 ಬೌಂಡರಿ ಒಳಗೊಂಡ 36 ರನ್ ಗಳಿಸಿ ಬಹುಬೇಗ ನಿರ್ಗಮಿಸಿದರು. ನಂತರ 2ನೇ ವಿಕೆಟ್‌ಗೆ ಜೊತೆಯಾದ ವೈಭವ್ ಸೂರ್ಯವಂಶಿ ಹಾಗೂ ನಾಯಕ ಸಂಜು ಸ್ಯಾಮ್ಸನ್ 98 ರನ್ ಜೊತೆಯಾಟವಾಡಿ ತಂಡಕ್ಕೆ ಆಸರೆಯಾದರು. ಈ ವೇಳೆ 21 ಎಸೆತಗಳಲ್ಲಿ 3 ಬೌಂಡರಿ, 2 ಸಿಕ್ಸರ್ ಒಳಗೊಂಡ 41 ರನ್ ಗಳಿಸಿ ಸಂಜು ಸ್ಯಾಮ್ಸನ್ ವಿಕೆಟ್ ಒಪ್ಪಿಸಿದರು. ಮತ್ತೊಂದೆಡೆ ಅಬ್ಬರಿಸಿದ ವೈಭವ್ ಸೂರ್ಯವಂಶಿ 33 ಎಸೆತಗಳಲ್ಲಿ ತಲಾ 4 ಸಿಕ್ಸರ್, ಬೌಂಡರಿ ಒಳಗೊಂಡ 57ರನ್ ಗಳಿಸಿ ನಿರ್ಗಮಿಸಿದರು. ಉಳಿದಂತೆ ಧ್ರುವ್ ಜುರೆಲ್ 31, ರಿಯಾನ್ ಪರಾಗ್ 3, ಶಿಮ್ರಾನ್ ಹೆಟ್ಮೆಯರ್ 12 ರನ್ ಗಳಿಸಿದರು. ಚೆನ್ನೈ ಪರ ರವಿಚಂದ್ರನ್ ಅಶ್ವಿನ್ 2, ಅನ್ಶುಲ್ ಕಾಂಬೋಜ್, ನೂರ್ ಅಹ್ಮದ್ ತಲಾ ಒಂದೊಂದು ವಿಕೆಟ್ ಪಡೆದರು.

ಇದಕ್ಕು ಮುನ್ನಾ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಚೆನ್ನೈ ಸೂಪರ್ ಕಿಂಗ್ಸ್ ಪರ ಆಯುಷ್ ಮಾತ್ರೆ 43, ಡೆವೊನ್ ಕಾನ್ವೆ 10, ರವಿಚಂದ್ರನ್ ಅಶ್ವಿನ್ 13 ರನ್, ಡೆವಾಲ್ಡ್ ಬ್ರೆವಿಸ್ 42, ಶಿವಂ ದುಬೆ 39, ಎಂಎಸ್ ಧೋನಿ 16 ರನ್ ಗಳಿಸಿದರು. ರಾಜಸ್ಥಾನ ಪರ ಬೌಲಿಂಗ್ ಮಾಡಿದ ಯುದ್ವೀರ್ ಸಿಂಗ್ ಹಾಗೂ ಆಕಾಶ್ ಮಧ್ವಾಲ್ ತಲಾ 3, ತುಷಾರ್ ಸಿಂಗ್, ವನಿಂದು ಹಸರಂಗ ತಲಾ ಒಂದೊಂದು ವಿಕೆಟ್ ಪಡೆದುಕೊಂಡರು. ಆಕಾಶ್ ಮಧ್ವಾಲ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ತಂಡದ ಅಂಕಪಟ್ಟಿ ವಿವರ

ತಂಡ	ಪಂದ್ಯಗಳು	ಗೆಲುವು	ಸೋಲು	ಡ್ರಾ	ಅಂಕ
ಗುಜರಾತ್	12	9	3	0	18
ಬೆಂಗಳೂರು	12	8	3	1	17
ಪಂಜಾಬ್	12	8	3	1	17
ಮುಂಬೈ	12	7	5	0	14
ಡೆಲ್ಲಿ	12	6	5	1	13
ಕೊಲ್ಕತ್ತಾ	13	5	6	2	12
ಲಕ್ನೋ	12	5	7	0	10
ಹೈದರಾಬಾದ್	12	4	7	1	9
ರಾಜಸ್ಥಾನ್	14	4	10	0	8
ಚೆನ್ನೈ	13	3	10	0	6

ಇಂದಿನ ಪಂದ್ಯ

ಮುಂಬೈ ಇಂಡಿಯನ್ಸ್
V/S
ಡೆಲ್ಲಿ ಕ್ಯಾಪಿಟಲ್ಸ್

ಸಮಯ: ಸಂಜೆ 7.30

ಸ್ಥಳ : ವಾಂಖೆಡೆ ಕ್ರೀಡಾಂಗಣ, ಮುಂಬೈ

ಅಹಮದಾಬಾದ್‌ನಲ್ಲಿ ಐಪಿಎಲ್ ಫೈನಲ್; ಆರ್‌ಸಿಬಿ–ಎಸ್‌ಆರ್‌ಎಚ್ ಪಂದ್ಯವೂ ಸ್ಥಳಾಂತರ

ನವದೆಹಲಿ, ಮೇ 20– ಈ ಬಾರಿಯ ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್) ಫೈನಲ್ ಪಂದ್ಯವನ್ನು ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಸಲು ಬಿಸಿಸಿಐ ನಿರ್ಧರಿಸಿದೆ. ಕ್ವಾಲಿಫೈಯರ್–2 ಪಂದ್ಯಕ್ಕೂ ಅಹಮದಾಬಾದ್ ಆತಿಥ್ಯ ವಹಿಸಲಿದೆ.



ಕ್ವಾಲಿಫೈಯರ್–1 ಮತ್ತು ಎಲಿಮಿನೇಟರ್ ಪಂದ್ಯಗಳು ಮುಲ್ಲನಪುರ ಕ್ರೀಡಾಂಗಣದಲ್ಲಿ ಮೇ 29 ಮತ್ತು 30ರಂದು ನಡೆಯಲಿದೆ. ಜೂನ್ 3ಕ್ಕೆ ಫೈನಲ್ ಪಂದ್ಯ ನಡೆಯಲಿದೆ.

ಮಳೆಯ ಕಾರಣಕ್ಕೆ ಮೇ 23ರಂದು ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಬೇಕಿದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು(ಆರ್‌ಸಿಬಿ) ಮತ್ತು ಸನ್‌ರೈಸರ್ಸ್ ಹೈದರಾಬಾದ್(ಎಸ್‌ಆರ್‌ಎಚ್) ನಡುವಿನ ಪಂದ್ಯವನ್ನು ಲಖನೌಗೆ ಸ್ಥಳಾಂತರಿಸಲಾಗಿದೆ. ಮಳೆಯಿಂದಾಗಿ ಮೇ 17ರಂದು ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಿಗದಿಯಾಗಿದ್ದ ಕೆಕೆಆರ್–ಆರ್‌ಸಿಬಿ ನಡುವಿನ ಪಂದ್ಯವೂ ರದ್ದಾಗಿತ್ತು.

ಹಿಂದಿನ ವೇಳಾಪಟ್ಟಿ ಪ್ರಕಾರ, ಕ್ವಾಲಿಫೈಯರ್–1 ಮತ್ತು ಎಲಿಮಿನೇಟರ್ ಪಂದ್ಯಗಳು ಹೈದರಾಬಾದ್‌ನಲ್ಲಿ, ಕ್ವಾಲಿಫೈಯರ್–2, ಫೈನಲ್ ಪಂದ್ಯ ಕೋಲ್ಕತ್ತದಲ್ಲಿ ನಡೆಸಲು ನಿರ್ಧರಿಸಲಾಗಿತ್ತು. ಭಾರತ–ಪಾಕಿಸ್ತಾನದ ನಡುವಿನ ಸಂಘರ್ಷದಿಂದ ಪಂದ್ಯಗಳು ಮುಂದೂಡಲ್ಪಟ್ಟಿದ್ದರಿಂದ ವೇಳಾಪಟ್ಟಿಯಲ್ಲಿ ಪರಿಷ್ಕರಣೆಯಾಗಿದೆ.

'ಹವಾಮಾನ ಪರಿಸ್ಥಿತಿಗಳನ್ನು ಗಮನದಲ್ಲಿಟ್ಟುಕೊಂಡು ಐಪಿಎಲ್ ಆಡಳಿತ ಮಂಡಳಿಯು ಪ್ಲೇಆಫ್ ಪಂದ್ಯಗಳಿಗೆ ಹೊಸ ಸ್ಥಳಗಳನ್ನು ನಿಗದಿಪಡಿಸಿದೆ' ಎಂದು ಬಿಸಿಸಿಐ ಹೇಳಿಕೆಯಲ್ಲಿ ತಿಳಿಸಿದೆ.

ಮೈಸೂರು ವಿವಿಯಲ್ಲಿ ಸಂಶೋಧನಾ ಮಾರ್ಗದರ್ಶಕರ ಕೊರತೆ

ಮೈಸೂರು ವಿವಿ ಸಂಶೋಧನಾ ವಿದ್ಯಾರ್ಥಿಗಳ ಸಂಘಟನೆಯಿಂದ ಅಹೋರಾತ್ರಿ ಧರಣಿ

ಮೈಸೂರು, ಮೇ20(ಜಿಎ)– ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಸಂಶೋಧನಾ ಮಾರ್ಗದರ್ಶಕರ ಕೊರತೆಯಿದ್ದು, ಹೊಸದಾಗಿ ಪಿಎಚ್.ಡಿ ಪ್ರವೇಶಾತಿ ಪಡೆಯುವ ವಿದ್ಯಾರ್ಥಿಗಳಿಗೆ ತೊಡಕಾಗಿದೆ ಎಂದು ಆರೋಪಿಸಿ ಮೈಸೂರು ವಿಶ್ವವಿದ್ಯಾನಿಲಯ ಸಂಶೋಧನಾ ವಿದ್ಯಾರ್ಥಿಗಳ ಸಂಘಟನೆಯ ವತಿಯಿಂದ ಕ್ರಾಫರ್ಡ್ ಹಾಲ್ ಮುಂಭಾಗ ಮಂಗಳವಾರದಿಂದ ಅಹೋರಾತ್ರಿ ಧರಣಿ ನಡೆಸಲಾಗುತ್ತಿದೆ.



ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಹೊಸದಾಗಿ ಪಿಎಚ್.ಡಿ ಪ್ರವೇಶಾತಿ ಪಡೆಯುವ ವಿದ್ಯಾರ್ಥಿಗಳಿಗೆ ತೊಡಕಾಗಿದೆ ಎಂದು ಆರೋಪಿಸಿ ಮೈಸೂರು ವಿಶ್ವವಿದ್ಯಾನಿಲಯ ಸಂಶೋಧನಾ ವಿದ್ಯಾರ್ಥಿಗಳ ಸಂಘಟನೆಯ ವತಿಯಿಂದ ಕ್ರಾಫರ್ಡ್ ಹಾಲ್ ಮುಂಭಾಗ ಅಹೋರಾತ್ರಿ ಧರಣಿ ನಡೆಸಲಾಗುತ್ತಿದೆ.

ಪ್ರಾಧ್ಯಾಪಕರ ಕೊರತೆಯಿಂದ ಪಿಹೆಚ್.ಡಿ, ಕೆ–ಸೆಟ್, ನೀಟ್, ಜೆಆರ್‌ಎ– ಉತ್ತೀರ್ಣರಾದ ಅಭ್ಯರ್ಥಿಗಳಿಗೆ ವಿಶ್ವವಿದ್ಯಾನಿಲಯದಲ್ಲಿ ಪಿಹೆಚ್.ಡಿ ಮಾಡಲು ಅವಕಾಶ ಇಲ್ಲದಂತಾಗಿದೆ. ಆದ್ದರಿಂದ ಈಗಿರುವ ಕಾಯಂ ಪ್ರಾಧ್ಯಾಪಕರ ಬಳಿಯೇ ಮಾರ್ಗದರ್ಶನ ಪಡೆಯಲು ಅವಕಾಶ ಕೊಡಬೇಕು. ಪಿಹೆಚ್.ಡಿ ಅಭ್ಯರ್ಥಿಗಳ ಹಿತದೃಷ್ಟಿಯಿಂದ ಹೆಚ್ಚುವರಿ ಸೀಟುಗಳನ್ನು ನೀಡಿ ಸಂಶೋಧನೆ ಮಾಡಲು ಅವಕಾಶ ನೀಡಬೇಕು ಎಂದು ಆಗ್ರಹಿಸಿದ್ದಾರೆ.

ಸಂಶೋಧನಾ ಆಕಾಂಕ್ಷಿಗಳ ಬೇಡಿಕೆಗಳು: ಪಿಹೆಚ್.ಡಿ ಮಾರ್ಗದರ್ಶನಕ್ಕೆ ಹೆಚ್ಚುವರಿ ದಾಖಲಾತಿ ಕೊಡಬೇಕು. ವಿಶ್ವವಿದ್ಯಾನಿಲಯದಲ್ಲಿ ಸಾಮಾಜಿಕ ವಿಜ್ಞಾನದಲ್ಲಿ ಪಿಹೆಚ್.ಡಿ ಮಾರ್ಗದರ್ಶಕರ ಕೊರತೆ ಇರುವುದರಿಂದ ಕೇಂದ್ರದ ಯುಜಿಸಿ ಮಾರ್ಗಸೂಚಿಯ ಪ್ರಕಾರ ಇತರೆ ವಿಶ್ವವಿದ್ಯಾನಿಲಯಗಳ ಸಾಮಾಜಿಕ ಅಧ್ಯಯನ ಒಳಗೊಳ್ಳುವಿಕೆ ಅಧ್ಯಯನ ಕೇಂದ್ರದ ಪ್ರಾಧ್ಯಾಪಕರುಗಳಿಗೆ ನೀಡಿರುವಂತೆ ಇಲ್ಲಿಯೂ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

ಇದರಿಂದ ವಿಶ್ವವಿದ್ಯಾನಿಲಯಕ್ಕೆ ಯಾವುದೇ ಆರ್ಥಿಕ ಹೊಣೆಗಾರಿಕೆ ಇರುವುದಿಲ್ಲ ಮತ್ತು ಶೈಕ್ಷಣಿಕ ಪ್ರಗತಿಯ ದೃಷ್ಟಿಯಿಂದ ಸಹ ಪ್ರಾಧ್ಯಾಪಕರಿಗೆ ಸಂಶೋಧನಾ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಲು ಅವಕಾಶ ನೀಡಬೇಕು. ಪ್ರಾಧ್ಯಾಪಕರಾಗಿದ್ದು ಮಾರ್ಗದರ್ಶನ ಪಡೆಯದೆ ಇರುವ ಪ್ರಾಧ್ಯಾಪಕರಿಗೆ ಮಾರ್ಗದರ್ಶನ ಮಾಡುವುದಕ್ಕೆ ಸಲಹೆ ನೀಡಬೇಕು ಎಂದು ಒತ್ತಾಯಿಸಿದರು.


ಧರಣಿಯಲ್ಲಿ ಮಾಜಿ ಮೇಯರ್ ಪುರುಷೋತ್ತಮ್, ಸಂಶೋಧನಾ ಸಂಘದ ಅಧ್ಯಕ್ಷ ಶಿವಶಂಕರ್, ವಿಶ್ವ ಪ್ರಸಾದ್, ಉಪಾಧ್ಯಕ್ಷ ಮುರಳಿ ಮಹೇಶ್, ರೋಹನ್, ರೋಜಾ ಇನ್ನಿತರರು ಪಾಲ್ಗೊಂಡಿದ್ದರು.

ರಾಜ್ಯ ವಕೀಲರ ಪರಿಷತ್ ಅಧ್ಯಕ್ಷರಿಗೆ ಲಾಗೈಡ್ ವತಿಯಿಂದ ಗೌರವ ಸಮರ್ಪಣೆ



ಮೈಸೂರಿಗೆ ಆಗಮಿಸಿದ್ದ ಕರ್ನಾಟಕ ರಾಜ್ಯ ವಕೀಲರ ಪರಿಷತ್ ಅಧ್ಯಕ್ಷರಾದ ಮಿಟ್ಟಲ್ ಕೋಡ್ ಸಿದ್ದಲಿಂಗಪ್ಪ ಶೇಖರಪ್ಪ ಅವರನ್ನು ಮೈಸೂರಿನ ಏರ್‌ಲೈನ್ಸ್ ಹೋಟೆಲ್‌ನಲ್ಲಿ ಲಾಗೈಡ್ ಬಳಗದಿಂದ ಆತ್ಮೀಯವಾಗಿ ಸನ್ಮಾನಿಸಲಾಯಿತು. ಈ ವೇಳೆ ಲಾಗೈಡ್ ಕನ್ನಡ ಕಾನೂನು ಮಾಸಪತ್ರಿಕೆ ಗೌರವ ಸಂಪಾದಕರೂ ಆದ ಹಿರಿಯ ವಕೀಲ ಎಚ್.ಎನ್.ವೆಂಕಟೇಶ್, ರಾಜ್ಯ ವಕೀಲರ ಪರಿಷತ್ ಮಾಜಿ ಅಧ್ಯಕ್ಷ ಸಿಎಂ ಜಗದೀಶ್, ಮೈಸೂರು ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಸ್.ಲೋಕೇಶ್, ಶಾರದ ವಿಲಾಸ ಕಾನೂನು ಕಾಲೇಜು ಪ್ರಾಂಶುಪಾಲ ಮಹೇಶ್, ವಕೀಲರಾದ ಗಂಗಾಧರ್, ಸುಲೋಚನ, ರಾಜೀವ್, ಪ್ರಸನ್ನಕುಮಾರ್, ತಮ್ಮಯ್ಯ, ಶೇಷಗಿರಿರಾವ್, ಶಿವಕುಮಾರ್, ನಾಗೇಂದ್ರಪ್ಪ ಇನ್ನಿತರರು ಉಪಸ್ಥಿತರಿದ್ದರು.

ಲಿವರ್ ತಪಾಸಣಾ ಶಿಬಿರ



ಮೈಸೂರು, ಮೇ 20– ಮೈಸೂರಿನ ಲಲಿತಾದ್ರಿಪುರ ರಸ್ತೆಯಲ್ಲಿರುವ ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆಯಲ್ಲಿ ಮೇ 21 ರಿಂದ 31 ರವರೆಗೆ ಲಿವರ್ ಕಾಯಿಲೆಗೆ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ಮೊ. 7353295220, ದೂ. 0821–2548231 ಸಂಪರ್ಕಿಸಬಹುದು.

ಮತ್ತೆ ಕಲುಷಿತಗೊಂಡ ಹೆಬ್ಬಾಳು ಕೆರೆ ನೀರು

ನಿರಂತರವಾಗಿ ಕೆರೆ ಒಡಲು ಸೇರುತ್ತಿರುವ ಒಳಚರಂಡಿ ನೀರು





ಮೈಸೂರು, ಮೇ 20(ಆರ್‌ಕೆ)– ಇನ್‌ಫೋಸಿಸ್ ಪ್ರತಿಷ್ಠಾನದ ಅಧ್ಯಕ್ಷೆ ಡಾ. ಸುಧಾಮೂರ್ತಿ ಅವರು ಕೋಟ್ಯಾಂತರ ರೂ. ಖರ್ಚು ಮಾಡಿ ಪುನರುಜ್ಜೀವನಗೊಳಿಸಿದ್ದ ಮೈಸೂರಿನ ಹೆಬ್ಬಾಳು ಕೆರೆ ನೀರು, ಮತ್ತೆ ಮಲಿನಗೊಂಡು ದುರ್ವಾಸನೆ ಬೀರುತ್ತಿದೆ.

ಮಂಚೇಗೌಡನಕೊಪ್ಪಲು ಸುತ್ತಮುತ್ತ ವಸತಿ ಬಡಾವಣೆಯ ಮಲಿನ ನೀರು ತೆರೆದ ಚರಂಡಿ (ಮಳೆ ನೀರು ಚರಂಡಿ) ಮೂಲಕ ಕೆರೆ ಸೇರುತ್ತಿರುವುದು ಹಾಗೂ ಸುತ್ತಲಿನ ಕೆಲ ಕೈಗಾರಿಕೆಗಳ ರಾಸಾಯನಿಕ ತ್ಯಾಜ್ಯವನ್ನು ಬಿಡುತ್ತಿರುವುದು ಹೆಬ್ಬಾಳು ಕೆರೆ ನೀರು ಕಲುಷಿತಗೊಳ್ಳಲು ಕಾರಣ ಎಂದು ಅಲ್ಲಿನ ವಾಯುವಿಹಾರಿಗಳು ದೂರಿದ್ದಾರೆ.

ಇತ್ತೀಚೆಗಷ್ಟೇ ನೀರಿನಲ್ಲಿ ಪಾಚಿ ಬೆಳೆದು ಇಡೀ ಕೆರೆ ಆವರಿಸಿದ್ದರಿಂದ ಅಲ್ಲಿನ ಪರಿಸರ ಹಾನಿಯಾಗಿತ್ತು. ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದರಲ್ಲದೇ 'ಮೈಸೂರು ಮಿತ್ರ' ಇದರ ಬಗ್ಗೆ ಸಚಿತ್ರ ವರದಿ ಮಾಡಿ ಬೆಳಕು ಚೆಲ್ಲಿತ್ತು.

ಅದರಿಂದ ಎಚ್ಚೆತ್ತ ಹೂಟಗಳ್ಳಿ ನಗರಸಭೆ ಆಯುಕ್ತ ಚಂದ್ರಶೇಖರ್, ಸುಮಾರು 15 ದಿನಗಳ ಕಾಲ ಸ್ವಚ್ಛಗೊಳಿಸಿ, ಪ್ಲಾಸ್ಟಿಕ್, ಇನ್ನಿತರ ವಸ್ತುಗಳು ಕೆರೆ ತಲುಪದಂತೆ ವ್ಯವಸ್ಥೆ ಮಾಡಿದ್ದರು. ಆದರೆ ಈಗ ತ್ಯಾಜ್ಯ ನೀರು, ಕಸ, ಪ್ಲಾಸ್ಟಿಕ್ ಪದಾರ್ಥಗಳು ಮತ್ತೆ ಶೇಖರಣೆಯಾಗಿ ಕೆರೆಯಲ್ಲಿ ನೀರೇ ಕಾಣದಂತೆ ಆವರಿಸಿಕೊಂಡಿದೆ.

ಪರಿಣಾಮ ಕೆರೆ ನೀರು ದುರ್ವಾಸನೆ ಬೀರುತ್ತಿದ್ದು, ಅಲ್ಲಿನ ಜಲಚರಗಳಿಗೂ ತೊಂದರೆಯಾಗಿರುವುದಲ್ಲದೆ, ವಾಯುವಿಹಾರಿಗಳು ಮೂಗು ಮುಚ್ಚಿಕೊಂಡು ವಿಹರಿಸುವ ಪರಿಸ್ಥಿತಿ ಉಂಟಾಗಿದೆ.

ಈ ಸಂಬಂಧ 'ಮೈಸೂರು ಮಿತ್ರ'ನಿಗೆ ಪ್ರತಿಕ್ರಿಯೆ ನೀಡಿರುವ ಹೂಟಗಳ್ಳಿ ನಗರಸಭೆ ಆಯುಕ್ತ ಚಂದ್ರಶೇಖರ್, ನಾವು ಆಗಿಂದಾಗ್ಗೆ ಸ್ವಚ್ಛಗೊಳಿಸುತ್ತಿದ್ದರೂ, ವಸತಿ ಬಡಾವಣೆಗಳ ತ್ಯಾಜ್ಯ ನೀರನ್ನು ಯುಜಿಡಿಗೆ ಸಂಪರ್ಕ ಕಲ್ಪಿಸಿ ಬಿಡುವ ಬದಲು ಮಳೆ ನೀರು ಚರಂಡಿಗೆ ಬಿಡುತ್ತಿರುವುದೇ ಹೆಬ್ಬಾಳು ಕೆರೆ ನೀರು ಕಲುಷಿತಗೊಳ್ಳಲು ಪ್ರಮುಖ ಕಾರಣ ಎಂದರು.

ಈ ಸಮಸ್ಯೆಗೆ ಶಾಶ್ವತ ಪರಿಹಾರ ಎಂದರೆ, ಪ್ರತೀ ಮನೆಯ ಯುಜಿಡಿ ನೀರನ್ನು ಒಳಚರಂಡಿಗೆ ಬಿಡುವುದು ಅಥವಾ ಡ್ರೈನೇಜ್ ಪಕ್ಕದಲ್ಲಿರುವ ಮನೆಗಳನ್ನು ತೆರವುಗೊಳಿಸಿ ಅವರಿಗೆ ಪರ್ಯಾಯ ವ್ಯವಸ್ಥೆ ಮಾಡುವುದೇ ಆಗಿದೆ ಎಂದ ಅವರು, ಈಗಲೂ ನಾವೇ ಕೆರೆಯನ್ನು ಸ್ವಚ್ಛಗೊಳಿಸುತ್ತೇವೆ. ಆದರೆ, ಮಲಿನ ನೀರು ಕೆರೆ ಸೇರದಂತೆ ಕಟ್ಟುನಿಟ್ಟಿನ ಕ್ರಮ ಜರುಗಿಸಬೇಕಾಗಿದೆ ಎಂದು ಆಯುಕ್ತರು ತಿಳಿಸಿದರು.

ಇದೀಗ ಮಳೆ ಸುರಿಯುತ್ತಿರುವುದರಿಂದ ಕೆರೆಯಲ್ಲಿ ನೀರು ತುಂಬಿ ಹರಿಯುತ್ತಿದೆ. ಅದನ್ನು ನಿರಂತರವಾಗಿ ನಿರ್ವಹಣೆ ಮಾಡಬೇಕಾಗಿದೆ. ಆ ಕುರಿತು ಜಿಲ್ಲಾಧಿಕಾರಿಗಳೊಂದಿಗೆ ಚರ್ಚಿಸಿ ಅವರ ಸಲಹೆಯಂತೆ ಕ್ರಮ ವಹಿಸುತ್ತೇವೆ ಎಂದು ಚಂದ್ರಶೇಖರ್ ತಿಳಿಸಿದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಮಾಮನ್ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಮಿಷನ್ ಇಂಪಾಸಿಬಲ್ (ಇಂ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಹಿಟ್ (ಹಿಂ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ಡೀ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಟಕೀಲಾ (ಕ)	4 ಪ್ರದರ್ಶನಗಳು
ರಾಜಕಮಲ್	
ಡೆವಿಲ್ಸ್ ಡಬಲ್ ನೆಕ್ಸ್ಟ್ ಲೆವಲ್ (ತ)	4 ಪ್ರದರ್ಶನಗಳು
ಸಂಗಂ	
ರೆಟ್ರೋ (ತ)	4 ಪ್ರದರ್ಶನಗಳು
ಲಿಡೋ	
ಯುದ್ಧಕಾಂಡ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಭಗೀರಥ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ರೆಟ್ರೋ (ತ): ಬೆ.9.40ಕ್ಕೆ, ಮ.1ಕ್ಕೆ, ರಾ.7ಕ್ಕೆ, ಥಂಡರ್‌ಬೋಲ್ಟ್ಸ್ (3ಡಿ)(ಇಂ): ಸಂ.4.20ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 2	ಥಂಡರ್‌ಬೋಲ್ಟ್ಸ್ (3ಡಿ)(ಇಂ): ಬೆ.10.25ಕ್ಕೆ, ಯುದ್ಧಕಾಂಡ 2 (ಕ): ಮ.1.05ಕ್ಕೆ, ಸಂ.4.05ಕ್ಕೆ, ತುಡಾರಂ (ಮ): ರಾ.7ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 3	ಹಿಟ್ ದಿ ಥರ್ಡ್ ಕೇಸ್ (ತೆ): ಬೆ.10ಕ್ಕೆ, ಮ.3.55ಕ್ಕೆ, ರಾ.7.05ಕ್ಕೆ, ರಾ.10.15ಕ್ಕೆ, ಟೂರಿಸ್ಟ್ ಫ್ಯಾಮಿಲಿ (ತ): ಮ.1.10ಕ್ಕೆ.
ಸ್ಕ್ರೀನ್ 4	ಪಪ್ಪಿ (ಕ): ಬೆ.10.30ಕ್ಕೆ, ರೈಡ್ 2 (ಹಿಂ): ಮ.1ಕ್ಕೆ, ರಾ.7.25ಕ್ಕೆ, ರಾ.10.25ಕ್ಕೆ, ರೆಟ್ರೋ (ತ): ಸಂ.4.05ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ಪ್ರೀತಿಯ ಹುಚ್ಚ (ಕ): ಬೆ.11ಕ್ಕೆ, ರಿಕ್ಷಾ ಚಾಲಕ (ಕ): ಮ.1.35ಕ್ಕೆ, ಕೋರ (ಕ): ಸಂ.6.35ಕ್ಕೆ, ಖದೀಮ (ಕ): ಸಂ.6.35ಕ್ಕೆ, ಟೆನ್ ಅವರ್ಸ್ (ತ): ರಾ.9.15ಕ್ಕೆ.
ಸ್ಕ್ರೀನ್ 2	ಯುದ್ಧಕಾಂಡ 2 (ಕ): ಮ.1ಕ್ಕೆ, ಸಂ.6.35ಕ್ಕೆ, ಒಡೆಲ್ಲಾ (ತೆ): ಮ.3.45ಕ್ಕೆ, ರಾ.9.20ಕ್ಕೆ.
ಸ್ಕ್ರೀನ್ 3	ವೀರ ಚಂದ್ರಹಾಸ (ಕ): ಮ.1ಕ್ಕೆ, ಮ.3.55ಕ್ಕೆ, ಗುಡ್ ಬ್ಯಾಡ್ ಅಗ್ಲಿ (ತ): ಸಂ.6.50ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಯುದ್ಧಕಾಂಡ 2 (ಕ): ಬೆ.10.50ಕ್ಕೆ, ವಾಮನ (ಕ): ಮ.1.35ಕ್ಕೆ, ಸಂ.4.10ಕ್ಕೆ, ಅರ್ಜುನ್ s/o ವೈಜಯಂತಿ (ತೆ): ಸಂ.6.45ಕ್ಕೆ, ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಮೇ ಅಂತ್ಯದೊಳಗೆ ಸೇನಾಪಡೆ ಹಿಂಪಡೆಯಲು ಪಾಕಿಸ್ತಾನ, ಭಾರತ ಒಪ್ಪಿಗೆ: ಭದ್ರತಾ ಅಧಿಕಾರಿ

ನವದೆಹಲಿ, ಮೇ 20– ಇತ್ತೀಚಿನ ಸೇನಾ ಸಂಘರ್ಷದ ಸಂದರ್ಭದಲ್ಲಿ ನಿಯೋಜಿಸಲಾಗಿದ್ದ ಸೇನಾಪಡೆಯನ್ನು ಮೇ ಅಂತ್ಯದೊಳಗೆ ಹಿಂಪಡೆಯಲು ಪಾಕಿಸ್ತಾನ ಮತ್ತು ಭಾರತ ಒಪ್ಪಿಕೊಂಡಿವೆ ಎಂದು ಪಾಕಿಸ್ತಾನದ ಹಿರಿಯ ಭದ್ರತಾ ಅಧಿಕಾರಿಯೊಬ್ಬರು ಮಂಗಳವಾರ ತಿಳಿಸಿದ್ದಾರೆ.

ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಗೆ ಪ್ರತೀಕಾರವಾಗಿ ಭಾರತ ನಡೆಸಿದ ಆಪರೇಷನ್ ಸಿಂಧೂರ ಕಾರ್ಯಾಚರಣೆ ಹಿನ್ನೆಲೆಯಲ್ಲಿ ನಾಲ್ಕು ದಿನ ಭಾರತ ಮತ್ತು ಪಾಕಿಸ್ತಾನ ನಡುವೆ ಸೇನಾ ಸಂಘರ್ಷ ನಡೆದಿತ್ತು. ಇದರಲ್ಲಿ 70ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದು, ಉಗ್ರರಿಗೆ ಪಾಕಿಸ್ತಾನ ಬೆಂಬಲ ನೀಡುತ್ತಿದೆ ಎಂದು ಭಾರತ ಆರೋಪಿಸಿತ್ತು. ಆದರೆ, ಈ ಆರೋಪವನ್ನು ಪಾಕಿಸ್ತಾನ ನಿರಾಕರಿಸುತ್ತಿದೆ.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅನಿರೀಕ್ಷಿತವಾಗಿ ಕದನ ವಿರಾಮವನ್ನು ಘೋಷಿಸಿದ ನಂತರ ಉಭಯ ರಾಷ್ಟ್ರಗಳ ಸೇನಾ ಕಾರ್ಯಾಚರಣೆ ದಿಢೀರನೆ ರದ್ದಾಗಿತ್ತು. ಮೇ ಅಂತ್ಯದೊಳಗೆ ಸಂಘರ್ಷದ ಸ್ಥಳಗಳಲ್ಲಿ ನಿಯೋಜಿಸಲಾಗಿದ್ದ ಸೇನಾಪಡೆಯನ್ನು ಹಿಂಪಡೆಯಲಾಗುವುದು ಎಂದು ಹಿರಿಯ ಭದ್ರತಾ ಅಧಿಕಾರಿಯೊಬ್ಬರು ಸುದ್ದಿಸಂಸ್ಥೆಗೆ ತಿಳಿಸಿದ್ದಾರೆ.

ಕಾಶ್ಮೀರದ ಗಡಿ ನಿಯಂತ್ರಣ ರೇಖೆಯಲ್ಲಿ ನಿಯೋಜಿಸಲಾದ ಹೆಚ್ಚುವರಿ ಪಡೆಗಳು ಮತ್ತು ಶಸ್ತ್ರಾಸ್ತ್ರಗಳನ್ನು ಹಂತಹಂತವಾಗಿ ಹಿಂಪಡೆಯಲು ಎರಡೂ ದೇಶಗಳು ಒಪ್ಪಿಕೊಂಡಿವೆ ಎಂದು ಅವರು ಹೇಳಿದ್ದಾರೆ.

ಗಡಿ ಸುತ್ತಮುತ್ತಲಿನ ಪ್ರದೇಶಗಳಿಂದ ಸೇನೆ ನಿಯೋಜನೆ ಕಡಿತಕ್ಕೆ ಕೂಡಲೇ ಕ್ರಮ ಕೈಗೊಳ್ಳಲು ಉಭಯ ರಾಷ್ಟ್ರಗಳು ಒಪ್ಪಿಕೊಂಡಿರುವುದಾಗಿ ಕಳೆದ ವಾರ ಭಾರತೀಯ ಸೇನೆ ಹೇಳಿದ ಬೆನ್ನಲ್ಲೇ ಇದೀಗ ಪಾಕಿಸ್ತಾನವೂ ಇದೇ ರೀತಿ ಹೇಳಿದೆ.

ಈ ಎಲ್ಲಾ ಕ್ರಮಗಳನ್ನು ಆರಂಭದಲ್ಲಿ 10 ದಿನಗಳಲ್ಲಿ ಪೂರ್ಣಗೊಳಿಸಲು ಯೋಜಿಸಲಾಗಿತ್ತು. ಆದರೆ ಕೆಲವೊಂದು ಸಣ್ಣ ಸಮಸ್ಯೆಗಳು ವಿಳಂಬಕ್ಕೆ ಕಾರಣವಾಗಿದೆ ಎಂದು ಪಾಕ್ ಅಧಿಕಾರಿ ತಿಳಿಸಿದ್ದಾರೆ.

ಐಟಿಐ ಕೋರ್ಸ್ ಬಗ್ಗೆ ಇಂದು ಫೋನ್–ಇನ್ ಕಾರ್ಯಕ್ರಮ

ಮೈಸೂರು, ಮೇ20–ಐಟಿಐ ಕೋರ್ಸ್ ಮತ್ತು ಅದರ ಅನುಕೂಲತೆಗಳು ಕುರಿತು ಮೇ 21ರಂದು ಬೆಳಗ್ಗೆ 11.30ರಿಂದ 12.30ರವರೆಗೆ ರಾಜ್ಯ ಪ್ರಶಸ್ತಿ ಪುರಸ್ಕೃತ, ಎನ್‌ಎಸ್‌ಎಸ್ ಅಧಿಕಾರಿಗಳಾದ ಹೆಚ್.ಡಿ.ಕೋಟೆ ಸರ್ಕಾರಿ ಐಟಿಐ ಕಾಲೇಜಿನ ತರಬೇತಿ ಅಧಿಕಾರಿ ರವಿಶಂಕರ್ ಜೊತೆ ನೇರ ಸಂದರ್ಶನ ಫೋನ್–ಇನ್ ಕಾರ್ಯಕ್ರಮವನ್ನು ಮೈಸೂರಿನ ಜೆಎಸ್‌ಎಸ್ ರೇಡಿಯೋ 91.2ಎಫ್‌ಎಂ ಸಮುದಾಯ ಬಾನುಲಿ ಕೇಂದ್ರವು ಆಯೋಜಿಸಲಾಗಿದೆ. ವಿದ್ಯಾರ್ಥಿಗಳು ಹಾಗೂ ಪೋಷಕರು ಎಸ್‌ಎಸ್‌ಎಲ್‌ಸಿ ನಂತರ ಇರುವ ಐಟಿಐ ಕೋರ್ಸ್‌ಗಳನ್ನು ಮತ್ತು ಅದರ ಅನುಕೂಲತೆಗಳು ಕುರಿತು ಯಾವುದೇ ಪ್ರಶ್ನೆಗಳು ಇದ್ದಲ್ಲಿ ಅಥವಾ ಸಲಹೆಗಳಿಗಾಗಿ ಕರೆ ಮಾಡಬಹುದು. 8296725912, 0821–2546563 ಸಂಪರ್ಕಿಸಿ ಪ್ರಶ್ನೆ ಕೇಳಬಹುದು. ಜೆಎಸ್‌ಎಸ್ ರೇಡಿಯೋವನ್ನು ಪ್ಲೇಸ್ಟೋರ್‌ನಲ್ಲಿ ಲಭ್ಯವಿರುವ ಆ್ಯಪ್ ಮೂಲಕವೂ ವಿಶ್ವದ ಯಾವುದೇ ಮೂಲೆಯಲ್ಲಾದರು ಆಲಿಸಬಹುದು ಎಂದು ಪ್ರಕಟಣೆ ತಿಳಿಸಿದೆ.


ಹುಟ್ಟುಹಬ್ಬದ
ಶ್ರೀ ಎಲ್.ಚೌಡಪ್ಪನವರಿಗೆ
ಶುಭಾಶಯಗಳು
ಶುಭಕೋರುವವರು ಎಲ್.ನಾಗೇಂದ್ರ ಸ್ನೇಹ ಬಳಗ